ಸುದ್ದಿಗಳ ಹೊನಲು
ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಸಂಪುಟ: 21, ಸಂಚಿಕೆ: 233, ಪುಟಗಳು: 8, ಶನಿವಾರ, 1 ಜೂನ್ 2024 RNI NO. KARKAN/2002/08054
epaper: www.sanjemugilu.com
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ






# ದಶಪ್ರಮತಿ ಮುದ್ರಣಾಲಯ
dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com

We Undertake Printing of Newspapers | Tabloids | Magazines



### ಸುಭಾಷಿತ

ಯಾರು ಬದಲಾಗಲು ಇಚ್ಛಿಸುವುದಿಲ್ಲವೋ ಅಂತಹವರನ್ನು ಅವರ ಪಾಡಿಗೆ ಬಿಟ್ಟುಬಿಡಿ. ಅವರು ನಿದ್ರೆ ಮಾಡಿಕೊಂಡೇ ಇರಲಿ.

। ರೂಮಿ

### ಪಂಚಾಂಗ

(ಶನಿವಾರ 1, ಜೂನ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು
- ವೈಶಾಖ ಮಾಸ , ಕೃಷ್ಣ ಪಕ್ಷ,
- ನವಮಿ / ಉಪರಿ ದಶಮಿ,
- ಶನಿವಾರ, ಉತ್ತರಪದ ನಕ್ಷತ್ರ
- ರಾಹುಕಾಲ 09:08 ರಿಂದ 10:44
- ಗುಳಿಕಕಾಲ 05:57 ರಿಂದ 07:32
- ಯಮಗಂಡಕಾಲ 01:56 ರಿಂದ 03:32

## ಸಂಕ್ಷಿಪ್ತ ಸುದ್ದಿ

## ಯಾವುದೇ ಶತ್ರು, ಭೈರವಿ ಯಾಗ, ಪ್ರಾಣಿ ಬಲಿ ನಡೆದಿಲ್ಲ

**ಮಂಗಳೂರು:** ಕೇರಳದ ರಾಜರಾಜೇಶ್ವರಿ ದೇವಾಲಯ ಆವರಣದಲ್ಲಿ ನನ್ನ, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ನಮ್ಮ ಸರ್ಕಾರದ ವಿರುದ್ಧ ಶತ್ರು ಭೈರವಿ ಯಾಗ ನಡೆಯುತ್ತಿದೆ ಎಂದು ಹೇಳಿಕೆ ನೀಡಿದ್ದ ಡಿಕೆ ಶಿವಕುಮಾರ್ ಹೇಳಿದ್ದರು. ಈ ಕುರಿತು ತನಿಖೆ ನಡೆಸಿದ ಕೇರಳ ಸರ್ಕಾರ ತಳಿಪರಂ ರಾಜರಾಜೇಶ್ವರಂ ಹಾಗೂ ಕಣ್ಣೂರು ಸುತ್ತಮುತ್ತ ಪ್ರದೇಶದಲ್ಲಿ ಯಾವುದೇ ರೀತಿಯ ಶತ್ರುಭೈರವಿ ಯಾಗ, ಪ್ರಾಣಿ ಬಲಿ ನಡೆದಿಲ್ಲವೆಂದು ಸ್ಪಷ್ಟನೆ ನೀಡಿದೆ. ಈ ಮೂಲಕ ಡಿಸಿಎಂ ಡಿಕೆ ಶಿವಕುಮಾರ್ ಅವರಿಗೆ ಹಿನ್ನಡೆಯಾಗಿದೆ.



ಈ ಸಂಬಂಧ ಕೇರಳ ಸರ್ಕಾರ ಗುಪ್ತಚರ ಹಾಗೂ ಪೊಲೀಸ್ ಇಲಾಖೆ ಮೂಲಕ ಕಣ್ಣೂರು, ತಳಿಪರಂಬ ಭಾಗದಲ್ಲಿ ವಿಶೇಷ ತನಿಖೆ ನಡೆಸಿದೆ. ಸಮಗ್ರ ತನಿಖೆ ನಡೆಸಿದ ತನಿಖಾ ದಳ ಕೇರಳದ ಡಿಜಿಪಿ ಅವರಿಗೆ ವರದಿ ಸಲ್ಲಿದೆ. ವರದಿಯಲ್ಲಿ ಯಾವುದೇ ಶತ್ರು, ಭೈರವಿ ಯಾಗ, ಪ್ರಾಣಿ ಬಲಿ ಯಾಗ ನಡೆದಿಲ್ಲ ಎಂದು ಉಲ್ಲೇಖಿಸಲಾಗಿದೆ.

## ಪೋರ್ಶೆ ಕಾರು ಅಪಘಾತ ಕೇಸ್ ಆರೋಪಿ ಅಪ್ರಾಪ್ತನ ತಾಯಿ ಬಂಧನ



**ಮುಂಬೈ:** ಪೋರ್ಶೆ ಕಾರು ಡಿಕ್ಕಿ ಹೊಡೆದು ಇಬ್ಬರು ಟೆಕ್ಕಿಗಳು ಮೃತಪಟ್ಟ ಪ್ರಕರಣಕ್ಕೆ ಮತ್ತೊಂದು ತಿರುವು ಸಿಕ್ಕಿದೆ. ಕಾರು ಚಲಾಯಿಸಿದ್ದ ಆರೋಪಿ ಅಪ್ರಾಪ್ತನ ತಾಯಿಯನ್ನು ಪುಣೆ ಪೊಲೀಸರು ಬಂಧಿಸಿದ್ದಾರೆ. ಅಪಘಾತ ಸಂಭವಿಸಿದಾಗ ತನ್ನ ಮಗ ಕುಡಿದಿರಲಿಲ್ಲ ಎಂದು ಸಾಬೀತುಪಡಿಸಲು ತಾಯಿ ತನ್ನ ರಕ್ತದ ಮಾದರಿಯನ್ನು ಪುಟ 2

### ಶಾಲೆ ಆರಂಭದ ನಡುವೆ ಬಿಬಿಎಂಪಿ ಶಾಲೆಗಳಲ್ಲಿ ಶಿಕ್ಷಕರ ಕೊರತೆ

# ಶಿಕ್ಷಣದ ಗುಣಮಟ್ಟ ಕುಸಿಯೋ ಆತಂಕ

**ಬೆಂಗಳೂರು:** ಬಿಬಿಎಂಪಿ ಶಾಲೆಗಳಲ್ಲಿ ತರಗತಿಗಳು ಶುರುವಾದ್ರೂ ಇನ್ನೂ ಶಿಕ್ಷಕರ ನೇಮಕಾತಿ ಆಗಿಲ್ಲ. ಸೆಕ್ಯುರಿಟಿ ಏಜೆನ್ಸಿ ಮೂಲಕ ಶಿಕ್ಷಕರ ನೇಮಕಕ್ಕೆ ವಿರೋಧ ಬಂದ ಬಳಿಕ ಟೆಂಡರ್ ರದ್ದುಮಾಡಿರೋ ಪಾಲಿಕೆ, ಇದೀಗ ಖಆಒಐ ಮೂಲಕ ಶಿಕ್ಷಕರ ನೇಮಕಕ್ಕೆ ಮುಂದಾಗಿದೆ. ಇದೆಲ್ಲದರ ಮಧ್ಯೆ ಮಕ್ಕಳು ಪಾಠ ಕೇಳೋಕೆ ಶಾಲೆಗೆ ಬಂದ್ರೂ, ಪಾಠ ಮಾಡೋದಕ್ಕೆ ಶಿಕ್ಷಕರ ಕೊರತೆ ಇರೋದರಿಂದ ಪಾಠ-ಪ್ರವಚನಕ್ಕೆ ಅಡ್ಡಿಯಾಗ್ತಿದೆ ಅನ್ನೋ ಆರೋಪ ಕೇಳಿಬರ್ತಿದೆ.

**ತರಗತಿ ಶುರುವಾದ್ರೂ, ಪಾಲಿಕೆ ಶಾಲೆಗಳಿಗಿಲ್ಲ ಶಿಕ್ಷಕರ ನೇಮಕ:** ರಾಜ್ಯ ಸರ್ಕಾರದ ಯಡವಟ್ಟಿಗೆ ಬಿಬಿಎಂಪಿ ಶಾಲೆಗಳಲ್ಲಿ ಶಿಕ್ಷಕರ ಕೊರತೆಯಿಂದ ಮಕ್ಕಳಿಗೆ ಶಿಕ್ಷಣ ಸಿಗದೆ ಪರದಾಡೋ ಪರಿಸ್ಥಿತಿ



ಎದುರಾಗಿದೆ. ಕಳೆದ ಮೂರು ದಿನಗಳ ಹಿಂದಷ್ಟೇ ಬಿಬಿಎಂಪಿ ಶಾಲಾ ಶಿಕ್ಷಕರ ನೇಮಕ್ಕೆ ಸೆಕ್ಯುರಿಟಿ ಏಜೆನ್ಸಿಗೆ ಜವಾಬ್ದಾರಿ ನೀಡಿದ್ದು ಭಾರೀ ಚರ್ಚೆಗೆ ಗ್ರಾಸವಾಗಿತ್ತು. ಪುಟ 2

### 19 ಕೆಜಿ ವಾಣಿಜ್ಯ ಬಳಕೆಯ ಸಿಲಿಂಡರ್

# ಬೆಲೆ 69.50 ರೂ. ಇಳಿಕೆ

**ನವದೆಹಲಿ:** ತೈಲ ಮಾರುಕಟ್ಟೆ ಕಂಪನಿಗಳು ಜೂನ್ 1 ರಿಂದ ತಕ್ಷಣದಿಂದಲೇ ಜಾರಿಗೆ ಬರುವಂತೆ ವಾಣಿಜ್ಯ ಎಲ್‌ಪಿಜಿ ಗ್ಯಾಸ್ ಸಿಲಿಂಡರ್ ಬೆಲೆಯನ್ನು 69.50 ರೂ. ಕಡಿತಗೊಳಿಸಿವೆ.

ಇದರೊಂದಿಗೆ ದೆಹಲಿಯಲ್ಲಿ 19 ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ನ ಚಿಲ್ಲರೆ ಮಾರಾಟ ಬೆಲೆ 1,676 ರಷ್ಟಿದೆ. ದೇಶಾದ್ಯಂತ ಮೆಟ್ರೋ ನಗರಗಳಿಗೂ ಇದು ಅನ್ವಯವಾಗಿದೆ.

ಮುಂಬೈನಲ್ಲಿ ಕೂಡ 69.50 ರೂ. ಇಳಿಕೆಯಾಗಿದ್ದು, ಪರಿಷ್ಕೃತ ಬೆಲೆಯನ್ನು 1,629 ಕ್ಕೆ ನಿಗದಿಪಡಿಸಲಾಗಿದೆ. ಚೆನ್ನೈನಲ್ಲಿ ಬೆಲೆ 1,841.50 ರಷ್ಟಿದ್ದರೆ, ಕೋಲ್ಕತ್ತಾದಲ್ಲಿ ಬೆಲೆ ಕಡಿತದ ನಂತರ 1,789.50 ರೂ. ಆಗಿದೆ.

ಮಾರ್ಚ್ 1 ರಂದು 19 ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ಗಳ ದರವನ್ನು 19 ರೂ. ಇಳಿಕೆಯಾಗಿತ್ತು.



ಏಪ್ರಿಲ್‌ನಲ್ಲಿ 19 ಕೆಜಿ ವಾಣಿಜ್ಯ ಸಿಲಿಂಡರ್‌ಗಳು ಮತ್ತು 5 ಕೆಜಿ ಎಫ್‌ಟಿಎಲ್ (ಫ್ರೀ ಟ್ರೇಡ್ ಎಲ್‌ಪಿಜಿ) ಸಿಲಿಂಡರ್‌ಗಳ ಬೆಲೆಯನ್ನು ಕ್ರಮವಾಗಿ 30.50 ರೂ. ಮತ್ತು 7.50 ರೂ. ರಷ್ಟು ಕಡಿತಗೊಳಿಸಲಾಗಿತ್ತು. ಪುಟ 2

### ಸಂತ್ರಸ್ತೆ ಅಪಹರಣ ಪ್ರಕರಣ; ನಿರೀಕ್ಷಣಾ ಜಾಮೀನು ಅರ್ಜಿ ವಜಾ

# ಭವಾನಿ ರೇವಣ್ಣಗೆ ಬಂಧನ ಭೀತಿ

**ಹಾಸನ:** ಸಂತ್ರಸ್ತೆ ಅಪಹರಣ ಪ್ರಕರಣಕ್ಕೆ ಸಂಬಂಧಿಸಿದಂತೆ ನಿರೀಕ್ಷಣಾ ಜಾಮೀನು ಅರ್ಜಿ ವಜಾಗೊಂಡಿದ್ದು, ಭವಾನಿ ರೇವಣ್ಣ ಬಂಧನ ಸಾಧ್ಯತೆ ಇದೆ.

ಬಂಧನ ಭೀತಿಯಿಂದ ತಲೆಮರೆಸಿಕೊಂಡಿರುವ ಭವಾನಿ ರೇವಣ್ಣ ಅವರಿಗಾಗಿ ಎಸ್‌ಐಟಿ ಅಧಿಕಾರಿಗಳು ಹುಡುಕಾಟ ನಡೆಸುತ್ತಿದ್ದಾರೆ. ನಿರೀಕ್ಷಣಾ ಜಾಮೀನು ರದ್ದಾದ ಹಿನ್ನೆಲೆಯಲ್ಲಿ ಯಾವುದೇ ಕ್ಷಣದಲ್ಲಾದರೂ ರೇವಣ್ಣ ಪತ್ನಿ ಭವಾನಿ ಅವರನ್ನು ಬಂಧಿಸುವ ಸಾಧ್ಯತೆಯಿದೆ.

ಬಂಧನ ಭೀತಿ ನಡುವೆ ಇಂದು ಎದುರು ಹಾಜರಾಗ್ತಾರಾ ಭವಾನಿ ಎಂಬುದು ಕುತೂಹಲ ಮೂಡಿಸಿದೆ. ಇಂದು ಭವಾನಿ ರೇವಣ್ಣ ವಿಚಾರಣೆಗಾಗಿ ಹೊಳೆನರಸೀಪುರಕ್ಕೆ ಎಸ್‌ಐಟಿ ತಂಡ ಆಗಮಿಸಲಿದೆ.



ಭವಾನಿ ರೇವಣ್ಣ ಮೇ 15 ರಂದು ಎಸ್ ಐಟಿಗೆ ಲಿಖಿತ ಪತ್ರ ನೀಡಿದ್ದರು. ಕಿಡ್ನ್ಯಾಪ್ ಆರೋಪ ಪ್ರಕರಣದಲ್ಲಿ ತಮ್ಮ ತನಿಖೆ ಅವಶ್ಯಕತೆ ಇದ್ದರೆ ತಾವು ಹೊಳೆನರಸೀಪುರದ ಚೆನ್ನಾಂಬಿಕಾ ನಿವಾಸದಲ್ಲಿ ಇರುವುದಾಗಿ ಹೇಳಿದ್ದರು.

ಭವಾನಿ ಅವರ ಪತ್ರವನ್ನೇ ಉಲ್ಲೇಖಿಸಿ ಎಸ್ ಐಟಿ ಶುಕ್ರವಾರ ಮತ್ತೊಂದು ನೋಟಿಸ್ ನೀಡಿದೆ. ಪ್ರಕರಣ ಸಂಬಂಧ ತಮ್ಮ ವಿಚಾರಣೆ ಅಗತ್ಯ ಇದೆ. ಹಾಗಾಗಿ ಜೂ.1 ರಂದು ವಿಚಾರಣೆಗೆ ಬರುವುದಾಗಿ ತಿಳಿಸಿತ್ತು. ಇಂದು ಮಹಿಳಾ ಅಧಿಕಾರಿಗಳ ಜೊತೆ ಹೊಳೆನರಸೀಪುರದ ಚೆನ್ನಾಂಬಿಕಾ ನಿವಾಸಕ್ಕೆ ವಿಚಾರಣೆಗೆ ಆಗಮಿಸುವ ಬಗ್ಗೆ ನೋಟಿಸ್‌ನಲ್ಲಿ ತಿಳಿಸಿತ್ತು. ಬೆಳಗ್ಗೆ 10 ರಿಂದ ಸಂಜೆ 5 ಗಂಟೆ ನಡುವೆ ನೀವು ತಿಳಿಸಿದ ವಿಳಾಸಕ್ಕೆ ಬರುತ್ತೇವೆ. ಈ ಸಮಯದಲ್ಲಿ ನೀವು ಖುದ್ದು ಹಾಜರಿರಬೇಕು ಎಂದು ಎಸ್‌ಐಟಿ ಸೂಚಿಸಿತ್ತು. ಎಸ್‌ಐಟಿ ಮುಂದೆ ಹಾಜರಾದರೆ ಬಹುತೇಕ ಬಂಧನ ಖಚಿತ ಎನ್ನಲಾಗುತ್ತಿದೆ. ಪುಟ 2

## ನಾನು ಆರೋಗ್ಯವಾಗಿದ್ದೇನೆ

**ದಾವಣಗೆರೆ:** ನಾನು ಆರೋಗ್ಯವಾಗಿದ್ದೇನೆ ಎಂದು ದಾವಣಗೆರೆ ದಕ್ಷಿಣ ಕ್ಷೇತ್ರದ ಕಾಂಗ್ರೆಸ್ ಹಿರಿಯ ಶಾಸಕ ಡಾ.ಶಾಮನೂರು ಶಿವಶಂಕರಪ್ಪ ಸಂದೇಶ ರವಾನಿಸಿದ್ದಾರೆ.

94 ವರ್ಷದ ಶಾಸಕ ಶಾಮನೂರು ಶಿವಶಂಕರಪ್ಪ ಅವರಿಗೆ ಶುಕ್ರವಾರ ಆರೋಗ್ಯದಲ್ಲಿ ಏರುಪೇರು ಉಂಟಾಗಿತ್ತು. ಕಫದ ಸಮಸ್ಯೆ ಉಂಟಾದ ಹಿನ್ನೆಲೆ ಶಾಮನೂರು ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಇದೀಗ ಕುಟುಂಬಸ್ಥರ ಜೊತೆ ನಗುನಗುತ್ತಾ ನಾನು ಆರೋಗ್ಯವಾಗಿದ್ದೇನೆ ಎಂದು ದಾವಣಗೆರೆ ಜನರಿಗೆ ಶಾಮನೂರು ಶಿವಶಂಕರಪ್ಪ ತಿಳಿಸಿದ್ದಾರೆ.



### ದುಬಾರಿ ಬೈಕ್ ಕದ್ದು ತಮಿಳುನಾಡಲ್ಲಿ ಮಾರಾಟ

# ನಾಲ್ವರ ಬಂಧನ

**ಬೆಂಗಳೂರು:** ದುಶ್ಚಟಗಳಿಗೆ ಸುಲಭವಾಗಿ ಹಣ ಹೊಂದಿಸಲು ನಗರದ ವಿವಿಧೆಡೆ ದುಬಾರಿ ಮೌಲ್ಯದ ದ್ವಿಚಕ್ರ ವಾಹನಗಳನ್ನು ಕಳವು ಮಾಡಿದ್ದ ತಮಿಳುನಾಡು ಮೂಲದ ನಾಲ್ವರು ಆರೋಪಿಗಳನ್ನು ಪರಪ್ಪನ ಅಗ್ರಹಾರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ತಮಿಳುನಾಡು ಹೊಸೂರಿನ ಅಮೃತನಗರ ನಿವಾಸಿ ರವಿಚಂದ್ರ ಅಲಿಯಾಸ್ ಕುಂಟ(21), ತಿರುಪತ್ತೂರು ಜಿಲ್ಲೆ ಮೊದನೂರು ನಿವಾಸಿ ಮೋಹನ್ ಕುಮಾರ್ ಅಲಿಯಾಸ್ ಬುಲೆಟ್ (29), ಬೆಂಗಳೂರಿನ ನಾಗನಾಥಪುರ ನಿವಾಸಿ ಗೋವಿಂದರಾಜು ಅಲಿಯಾಸ್ ಶಿವ(19) ಮತ್ತು ಗೋವಿಂದಶೆಟ್ಟಿ ಪಾಳ್ಯದ



ಅಮೃತ್ ಕುಮಾರ್ (26) ಬಂಧಿತರು. ಆರೋಪಿಗಳಿಂದ 45 ಲಕ್ಷರು.ಮೌಲ್ಯದ 31 ದ್ವಿಚಕ್ರ ವಾಹನಗಳು, 10 ಗ್ರಾಂ ತೂಕದ ಚಿನ್ನದ ಸರ ಹಾಗೂ 1 ಕಾರು ಜಪ್ತಿ ಮಾಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**ಆರೋಪಿಗಳಿಗೆ ಅಪರಾಧ ಹಿನ್ನೆಲೆ:** ಬಂಧಿತ ಆರೋಪಿಗಳ ಪೈಕಿ ಮೋಹನ್ ಕುಮಾರ್ ವಿರುದ್ಧ ಈ ಹಿಂದೆ ಹೊಸೂರು ಠಾಣೆಯಲ್ಲಿ ರಾಬರಿ ಪ್ರಕರಣ ಹಾಗೂ ಮತ್ತೊಬ್ಬ ಆರೋಪಿ ಅಮೃತ್ ಕುಮಾರ್‌ವಿರುದ್ಧ ಕೃಷ್ಣಗಿರಿ ಜಿಲ್ಲೆಯ ಠಾಣೆಯೊಂದರಲ್ಲಿ ಪೋಕ್ಸೋ ಪ್ರಕರಣ ದಾಖ ಲಾಗಿದೆ. ಇಬ್ಬರೂ ಬಂಧನಕ್ಕೆ ಒಳಗಾಗಿ ಜಾಮೀನಿನ ಮೇಲೆ ಬಿಡುಗಡೆಯಾಗಿದ್ದಾರೆ. ಉಳಿದ ಇಬ್ಬರು ಆರೋಪಿಗಳು ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗಿರುವ ಸಾಧ್ಯತೆ ಯಿದ್ದು, ಪರಿಶೀಲಿಸಲಾಗುತ್ತಿದೆ. ನಾಲ್ವರು ಆರೋಪಿಗಳು ತಮಿಳುನಾಡು ಮೂಲದವರಾಗಿದ್ದು, ಪರಸ್ಪರ ಸ್ನೇಹಿತರಾಗಿದ್ದಾರೆ. ಪುಟ 2

### ನಾನು ಸಿಂಗಲ್, ಗೆಳತಿಯನ್ನು ಹುಡುಕಲು ಸಹಾಯ ಮಾಡಿ

# ಪೊಲೀಸರನ್ನು ಕೇಳಿದ ಯುವಕ

**ದೆಹಲಿ:** ಸಿಂಗಲ್ಸ್ ಹುಡುಗರ ಸಂಖ್ಯೆ ಹೆಚ್ಚಾಗಿದೆ. ಇವರದ್ದು ದಿನಕ್ಕೊಂದು ಗೋಳು, ಇಲ್ಲೊಬ್ಬ ವ್ಯಕ್ತಿ ತನಗೊಂದು ಗೆಳತಿಯನ್ನು ಹುಡುಕಲು ಸಹಾಯ ಮಾಡುವಂತೆ ದೆಹಲಿ ಪೊಲೀಸರಿಗೆ ಕೇಳಿಕೊಂಡಿದ್ದಾರೆ. ಈ ಬಗ್ಗೆ ದೆಹಲಿ ಪೊಲೀಸರು ತಮಾಷೆಯಾಗಿ ಎಕ್ಸ್ ನಲ್ಲಿ ಫೋಟೋವೊಂದನ್ನು ಹಂಚಿಕೊಂಡಿದ್ದಾರೆ. ದೆಹಲಿ ಪೊಲೀಸರು ವಿಶ್ವ ತಂಬಾಕು ರಹಿತ ದಿನದ ಸಂದರ್ಭದಲ್ಲಿ ಈ ಬಗ್ಗೆ ಪೋಸ್ಟ್ ನ್ನು ಹಂಚಿಕೊಂಡಿದ್ದಾರೆ. ಇದೀಗ ಈ ಪೋಸ್ಟ್ ಎಕ್ಸ್‌ನಲ್ಲಿ ಭಾರೀ ವೈರಲ್ ಆಗಿದೆ. ಎಲ್ಲರೂ ಕೂಡ ಈ ಬಗ್ಗೆ ತಮಾಷೆಯಾಗಿ ಕಮೆಂಟ್ ಮಾಡಿದ್ದಾರೆ.

ಈ ಪೋಸ್ಟ್‌ನಲ್ಲಿ ನನಗೆ ಒಂದು ಗೆಳತಿಯನ್ನು ಹುಡುಕಲು ಸಹಾಯ ಮಾಡುವಂತೆ ದೆಹಲಿ ಪೊಲೀಸರನ್ನು



ಕೇಳಿಕೊಂಡಿದ್ದಾನೆ. ಇನ್ನು ಈ ಪೋಸ್ಟ್ ನಲ್ಲಿ ಯುವಕ ಸಿಂಗಲ್ ಎಂದು ಬರೆಯುವ ಬದಲು ಸಿಗ್ನಲ್ ಎಂದು ಬರೆದುಕೊಂಡಿದ್ದಾನೆ. ಇದನ್ನು ಪೊಲೀಸರು ತುಂಬಾ ತಮಾಷೆಯಾಗಿ ತೆಗೆದುಕೊಂಡಿದ್ದಾರೆ. ಜತೆಗೆ ಆ ಯುವಕ ಇದು ನ್ಯಾಯವಲ್ಲ ನನಗೆ ಗೆಳತಿಯನ್ನು ಹುಡುಕಲು ನೀವು ನನಗೆ ಸಹಾಯ ಮಾಡಬೇಕು ಎಂದು ಕೇಳಿಕೊಂಡಿದ್ದಾನೆ.

ಇತನ ಮನವಿಗೆ ಪ್ರತಿಕ್ರಿಯಿಸಿದ ದೆಹಲಿ ಪೊಲೀಸರು, ಸರ್, ಆಕೆಯನ್ನು ಹುಡುಕಲು ನಾವು ನಿಮಗೆ ಸಹಾಯ ಮಾಡಬಹುದು ಅದು ಯಾವಾಗ ಆಕೆ ಕಾಣೆಯಾದಾಗ, ನೀವು ಸಿಗ್ನಲ್ ಆಗಿದ್ದರೆ, ಪುಟ 2

### ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿ

# 74,915 ಸಂಚಾರಿ ನಿಯಮ ಉಲ್ಲಂಘನೆ

**ಬೆಂಗಳೂರು:** ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿ ಸಂಚಾರಕ್ಕೆ ಮುಕ್ತವಾದ ದಿನದಿಂದಲೂ ಒಂದಲ್ಲ ಒಂದು ವಿಚಾರವಾಗಿ ಸುದ್ದಿಯಲ್ಲಿದೆ. ಪ್ರಾರಂಭದಲ್ಲಿ ದಿನಗಳಲ್ಲಿ ಈ ಹೆದ್ದಾರಿಯಲ್ಲಿ ಹೆಚ್ಚು ರಸ್ತೆ ಅಪಘಾತ ಸಂಭವಿಸುತ್ತಿದ್ದವು. ಹೆದ್ದಾರಿಯಲ್ಲಿ ಸಂಚಾರಿ ನಿಯಮ ಉಲ್ಲಂಘನೆ ಪ್ರಕರಣಗಳು ದಾಖಲಾಗುತ್ತಿದ್ದು, ಇದನ್ನು ತಡೆಗಟ್ಟಲು ವಿನೂತನ ತಂತ್ರಜ್ಞಾನ ಒಳಗೊಂಡಿರುವ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಇದನ್ನೂ ಮೀರಿ ಕಳೆದ 28 ದಿನಗಳಲ್ಲಿ ಎಷ್ಟು ನಿಯಮ ಉಲ್ಲಂಘಟನೆ ಪ್ರಕರಣಗಳು ದಾಖಲಾಗಿವೆ.

ಬೆಂಗಳೂರು-ಮೈಸೂರು ಹೆದ್ದಾರಿಯಲ್ಲಿ ಪ್ರತಿ ಗಂಟೆಗೆ 100ಕ್ಕೂ ಹೆಚ್ಚು ಸಂಚಾರ ನಿಯಮ ಉಲ್ಲಂಘನೆಗಳು ದಾಖಲಾಗುತ್ತಿವೆ. ಕಳೆದ 28 ದಿನಗಳಲ್ಲಿ ಒಟ್ಟು 74,915 ಸಂಚಾರ ಉಲ್ಲಂಘನೆ ಪ್ರಕರಣಗಳು ವರದಿಯಾಗಿವೆ. 118 ಕಿ.ಮೀ ಉದ್ದದ ಎರಡೂ ಬದಿಗಳಲ್ಲಿ ಅಳವಡಿಸಲಾಗಿರುವ 22 ಕ್ಯಾಮೆರಾಗಳು ಸಂಚಾರಿ ನಿಯಮ ಉಲ್ಲಂಘನೆ ದೃಶ್ಯಗಳನ್ನು ಸೆರೆ ಹಿಡಿದಿವೆ.

**ಸಂಚಾರಿ ನಿಯಮ ಉಲ್ಲಂಘಟನೆ ವಿವರ:** ಸೀಟ್ ಬೆಲ್ಟ್ ಧರಿಸದ ಚಾಲಕರು ಮತ್ತು ಸಹ ಪ್ರಯಾಣಿಕರು ಅತಿ ಹೆಚ್ಚು ಉಲ್ಲಂಘನೆಯಾಗಿದ್ದು, 57,057 ಪ್ರಕರಣಗಳು ದಾಖಲಾಗಿವೆ. ನಂತರ 10,945 ಅತಿವೇಗದ ಪ್ರಕರಣಗಳು, 6,046 ಲೇನ್ ಉಲ್ಲಂಘನೆ ಪ್ರಕರಣಗಳು ಮತ್ತು 494 ಪ್ರಕರಣಗಳು ಚಾಲನೆ



ಮಾಡುವಾಗ ಮೊಬೈಲ್ ಫೋನ್ ಬಳಸಿದ ಪ್ರಕರಣಗಳಾಗಿವೆ.

ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಅಪಘಾತ ಹೆಚ್ಚಾಗುತ್ತಿದ್ದರಿಂದ, ಸಂಚಾರ ಉಲ್ಲಂಘನೆಗಳನ್ನು ತಡೆಯಲು, ಪೊಲೀಸರು AI ಆಧಾರಿತ ಸ್ವಯಂಚಾಲಿತ ನಂಬರ್ ಪ್ಲೇಟ್ ರೆಕಗ್ನಿಷನ್ ಕ್ಯಾಮೆರಾಗಳನ್ನು ಪ್ರತಿ ದಿಕ್ಕಿನಲ್ಲಿ ಆರು ಸ್ಥಳಗಳಲ್ಲಿ ಅಳವಡಿಸಿದ್ದಾರೆ. ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಪ್ರತಿ ದಿಕ್ಕಿನಲ್ಲಿಯೂ ಐದು ಇತರ ಸ್ಥಳಗಳಲ್ಲಿ ವೀಡಿಯೊ ಕ್ಯಾಮೆರಾಗಳನ್ನು ಅವಳವಡಿಸಿದೆ. ಮತ್ತು 100 ಕಿಮೀ ವೇಗದ ಮಿತಿಯನ್ನು ನಿಗದಿಪಡಿಸಿದೆ. ಒಂದು ವೇಳೆ ಸಂಚಾರಿ ನಿಯಮ ಉಲ್ಲಂಘಿಸಿದರೆ ಈ ಹೆಚ್ಚಿನ ರೆಸಲ್ಯೂಶನ್ ಕ್ಯಾಮೆರಾಗಳು ದೃಶ್ಯವನ್ನು ಸೆರೆಹಿಡಿಯುತ್ತವೆ.

ಕ್ಯಾಮೆರಾಗಳಿದ್ದರೂ ಹೆದ್ದಾರಿಯಲ್ಲಿ ಸಂಚರಿಸುವವರು ನಿಯಮ ಉಲ್ಲಂಘಿಸಿ ವೇಗದ ಮಿತಿಯನ್ನು ಮೀರಿ ವಾಹನ ಚಾಲನೆ ಮಾಡುತ್ತಿದ್ದು, ಅಪಘಾತಗಳಿಗೆ ಕಾರಣವಾಗುತ್ತಿದೆ.

ಸಂಚಾರ ಮತ್ತು ರಸ್ತೆ ಸುರಕ್ಷತೆ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಅಲೋಕ್ ಕುಮಾರ್ ಮಾತನಾಡಿ, ಕೇವಲ 28 ದಿನಗಳಲ್ಲಿ 74,000 ಕ್ಕೂ ಹೆಚ್ಚು ಅಪರಾಧಗಳು ದಾಖಲಾಗಿವೆ. ಇದು ರಸ್ತೆ ಸುರಕ್ಷತೆಯ ಬಗ್ಗೆ ಜನರ ನಿರ್ಲಕ್ಷ್ಯವನ್ನು ತೋರಿಸುತ್ತದೆ ಎಂದು ಹೇಳಿದರು.

ಚಾಲಕರು ಸೀಟ್ ಬೆಲ್ಟ್ ಧರಿಸದಿರುವುದು, ಅತಿವೇಗ ಮತ್ತು ಲೇನ್ ಉಲ್ಲಂಘನೆ ಪ್ರಕರಣಗಳು ಅತಿ ಹೆಚ್ಚಾಗಿವೆ. ಕೆಎಸ್‌ಆರ್‌ಟಿಸಿ ಮತ್ತು ಖಾಸಗಿ ಬಸ್‌ಗಳು ಸೇರಿದಂತೆ ಭಾರೀ ಸರಕು ವಾಹನಗಳು ಸಂಚಾರ ಉಲ್ಲಂಘಟನೆ ಪಟ್ಟಿಯಲ್ಲಿ ನಂತರದ ಸ್ಥಾನದಲ್ಲಿವೆ. ನಿಯಮ ಉಲ್ಲಂಘಿಸಿದ ಎಲ್ಲ ವಾಹನ ಸವಾರರಿಗೂ ನೋಟಿಸ್ ಜಾರಿ ಮಾಡಲಾಗುವುದು ಎಂದು ಹೇಳಿದರು.

ಯಾರೆಲ್ಲ ಸಂಚಾರ ನಿಯಮ ಉಲ್ಲಂಘಿಸಿದ್ದಾರೆ ಅವರ ಫೋನ್‌ಗಳಿಗೆ ಅಧಿಸೂಚನೆಗಳನ್ನು ಕಳುಹಿಸಲಾಗುವುದು. ಇದು ಉಲ್ಲಂಘನೆಗಳ ಬಗ್ಗೆ ಅವರಿಗೆ ಅರಿವು ಮೂಡಿಸುತ್ತದೆ. ಉಲ್ಲಂಘಿಸುವವರ ವಾಹನಗಳು ಟೋಲ್‌ಗಳಲ್ಲಿ ನಿರ್ಗಮಿಸಿದಾಗ ಅವರ ಫಾಸ್ಟ್‌ಟ್ಯಾಗ್ ಖಾತೆಯ ಮೂಲಕ ದಂಡವನ್ನು ತಕ್ಷಣವೇ ಕಡಿತಗೊಳಿಸಬೇಕು. ''ಈ ಕಾರ್ಯವಿಧಾನವು ಹೆದ್ದಾರಿಗಳಲ್ಲಿ ಸಂಚಾರ ನಿಯಮ ಉಲ್ಲಂಘನೆಯನ್ನು ಕಡಿಮೆ ಮಾಡಬಹುದು'' ಎಂದು ಅಭಿಪ್ರಾಯಪಟ್ಟಿದ್ದಾರೆ.

### ಜೂನ್ 12 ರವರೆಗೆ HSRP ಅಳವಡಿಸಲು ಅವಕಾಶ

# ಹೈಕೋರ್ಟ್ ಸೂಚನೆ

**ಬೆಂಗಳೂರು:** ರಾಜ್ಯ ಸಾರಿಗೆ ಇಲಾಖೆ ಏಪ್ರಿಲ್ 2019ಕ್ಕಿಂತ ಮೊದಲು ನೋಂದಣಿಯಾದ ವಾಹನಗಳು ಹೆಚ್ ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಕೆ ಮಾಡಿಕೊಳ್ಳಬೇಕು ಎಂದು ಆದೇಶ ಹೊರಡಿಸಿದೆ. ಇಂದು ಮಧ್ಯರಾತ್ರಿ 12 ರವರೆಗೆ ಗಡುವು ನೀಡಲಾಗಿತ್ತು, ಆದರೆ ಎರಡ್ಮೂರು ಬಾರಿ ಗಡುವು ವಿಸ್ತರಣೆ ಮಾಡಿದರೂ ಸಹ ನಂಬರ್ ಪ್ಲೇಟ್ ಅಳವಡಿಕೆ ಕಡಿಮೆ ಪ್ರಮಾಣದಲ್ಲಿ ಆಗಿದೆ. ರಾಜ್ಯದ 2 ಕೋಟಿ ವಾಹನಗಳ ಪೈಕಿ ಇಲ್ಲಿಯವರೆಗೆ ಕೇವಲ 41 ಲಕ್ಷ ವಾಹನಗಳು ಮಾತ್ರ ಹೆಚ್‌ಎಸ್‌ಆರ್ಪಿ ನಂಬರ್ ಪ್ಲೇಟ್ ಗಳನ್ನು ಅಳವಡಿಕೊಳ್ಳಲು ಮುಂದಾಗಿದ್ದಾರೆ.

ಈಗಾಗಲೇ ಹೈಕೋರ್ಟ್ ಜೂನ್ 12 ರವರೆಗೆ ಹೆಚ್ ಎಸ್‌ಆರ್ಪಿ ಅಳವಡಿಸದ ವಾಹನ ಮಾಲೀಕರ ವಿರುದ್ಧ ಕ್ರಮ ಕೈಗೊಳ್ಳುವಂತಿಲ್ಲ 12 ರ ವರೆಗೆ ಅವಕಾಶ ನೀಡಬೇಕೆಂದು ಸೂಚನೆ ನೀಡಿದೆ. ಹೈಕೋರ್ಟ್ ಕೊಟ್ಟ ಗಡುವು ಮುಗಿದ ನಂತರವೂ



ಅಳವಡಿಸಿಕೊಂಡಿಲ್ಲ ಎಂದರೆ ಮೊದಲ ಬಾರಿ 500 ರುಪಾಯಿ ಎರಡನೇ ಬಾರಿ 1 ಸಾವಿರ ಮೂರನೇ ಬಾರಿ ಗಾಡಿ ಸೀಜ್ ಮಾಡ್ತಿವಿ ಎಂದು ರಾಜ್ಯ ಸಾರಿಗೆ ಇಲಾಖೆ ಅಡಿಷನಲ್ ಕಮೀಷನರ್ ಮಲ್ಲಿಕಾರ್ಜುನ್ ಎಚ್ಚರಿಕೆ ನೀಡಿದ್ದಾರೆ.

ಇನ್ನೂ ಈಗಾಗಲೇ ಹೆಚ್‌ಎಸ್‌ಆರ್ಪಿ ನಂಬರ್ ಪ್ಲೇಟ್ ಅಳವಡಿಸಲು ಕೊನೆಯ ದಿನಾಂಕ ಹತ್ತಿರವಾಗ್ತಿದಂತೆ ವಾಹನ ಮಾಲೀಕರು ಮುಗಿಬಿದ್ದು ಆನ್ಲೈನ್ ಮೂಲಕ ಹೆಚ್‌ಎಸ್‌ಆರ್ಪಿ ನಂಬರ್ ಪ್ಲೇಟ್ ಬುಕ್ಕಿಂಗ್ ಮಾಡಲು ಮುಂದಾಗ್ತಿದ್ದಾರೆ. ಇದರಿಂದ ಸಾಕಷ್ಟು ನಕಲಿ ಕಂಪನಿಗಳು ಹುಟ್ಟಿಕೊಂಡಿದ್ದು ಅಸಲಿ ನಕಲಿ ಗೊತ್ತಾಗದೆ ವಾಹನ ಮಾಲೀಕರು ನಕಲಿ ಕಂಪನಿಗಳಲ್ಲಿ ಹಣ ಹಾಕಿ ಹಣ ಕಳೆದುಕೊಳ್ಳುತ್ತಿದ್ದಾರೆ. ಈ ಬಗ್ಗೆ ಸಾಕಷ್ಟು ದೂರುಗಳು ಬಂದ ಹಿನ್ನೆಲೆಯಲ್ಲಿ ಆರ್‌ಟಿಓ ಅಧಿಕಾರಿಗಳು ತನಿಖೆ ಮಾಡಿ ಫ್ಯೂಜನ್ ಅನ್ನೋ ನಕಲಿ ಕಂಪನಿ ವಿರುದ್ಧ ಹನುಮಂತನಗರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ. ಪುಟ 2

## ವೆಗಾ ಸಿಟಿ ಮಾಲ್ ಮೇಲಿಂದ ಬಿದ್ದು ವ್ಯಕ್ತಿ ಆತ್ಮಹತ್ಯೆ

**ಬೆಂಗಳೂರು:** ಬನ್ನೇರುಘಟ್ಟ ರಸ್ತೆಯಲ್ಲಿರುವ ವೆಗಾ ಸಿಟಿ ಮಾಲ್ ಮೇಲಿಂದ ಬಿದ್ದು ವ್ಯಕ್ತಿಯೊಬ್ಬ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಶುಕ್ರವಾರ ಮಧ್ಯಾಹ್ನ ಮೂರು ಗಂಟೆ ಸುಮಾರಿಗೆ ಘಟನೆ ನಡೆದಿದೆ. ಮಾಲ್‌ನ 4ನೇ ಮಹಡಿಯಿಂದ ಜಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಕೂಡಲೇ ಅಲ್ಲಿದ್ದ ಸ್ಥಳೀಯರು ಆತನನ್ನು ಆಸ್ಪತ್ರೆಗೆ ಸೇರಿಸಲು ಮುಂದಾಗಿದ್ದಾರೆ. ಆದರೆ ನಾಲ್ಕನೇ ಮಹಡಿಯಿಂದ ಬಿದ್ದ ರಭಸಕ್ಕೆ ತಲೆಗೆ ಗಂಭೀರ ಪೆಟ್ಟಾಗಿತ್ತು. ತೀವ್ರ ರಕ್ತಸ್ರಾವವಾಗಿ ವ್ಯಕ್ತಿ ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಮೃತನ ಗುರುತು ಪತ್ತೆಯಾಗಿಲ್ಲ. ಘಟನಾ ಸ್ಥಳಕ್ಕೆ ಮೈಕೋ ಲೇಔಟ್ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಆತ್ಮಹತ್ಯೆಗೆ ನಿಖರ ಕಾರಣ ತಿಳಿದು ಬಂದಿಲ್ಲ. ಈ ಸಂಬಂಧ ಪ್ರಕರಣ ದಾಖಲಾಗಿದ್ದು ಪೊಲೀಸರು ತನಿಖೆಯನ್ನು ಕೈಗೊಂಡಿದ್ದಾರೆ. ಮಾಲ್‌ಗೆ ಇವನೊಬ್ಬನೇ ಬಂದಿದ್ದನ್ನಾ ಅಥವಾ ಈತನೊಟ್ಟಿಗೆ ಬೇರೆಯಾರಾದರೂ ಇದ್ದರಾ ಎಂಬುದರ ಕುರಿತು ಸಿಸಿ ಟಿವಿ ಪರಿಶೀಲನೆ ಮಾಡಲಾಗುತ್ತಿದೆ.

## ನೀರಿನಲ್ಲಿ ಕೊಚ್ಚಿ ಹೋದ ಪಿಕಪ್

**ಮಂಗಳೂರು:** ಭಾರೀ ಮಳೆಯಿಂದಾಗಿ ಸೇತುವೆ ದಾಟುತ್ತಿದ್ದ ಸಂದರ್ಭದಲ್ಲಿ ಪಿಕಪ್ ವಾಹನವೊಂದು ನೀರಿನಲ್ಲಿ ಕೊಚ್ಚಿ ಹೋದ ಘಟನೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಡೆದಿದೆ. ಹೌದು. ಪಶ್ಚಿಮ ಘಟ್ಟ ಪ್ರದೇಶದಲ್ಲಿ ಭಾರೀ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಸುಬ್ರಹ್ಮಣ್ಯ ಹಾಗೂ ಸುಳ್ಯ ಪರಿಸರದಲ್ಲಿ ಹೊಳೆ, ಹಳ್ಳ-ಕೊಳ್ಳಗಳಲ್ಲಿ ನೀರು ತುಂಬಿ ಹರಿಯುತ್ತಿದೆ. ಸುಬ್ರಹ್ಮಣ್ಯ ಸಮೀಪದ ಕಲ್ಮಕಾರಿನ ನದಿಯಲ್ಲಿ ನೀರಿನ ಪ್ರಮಾಣ ಹೆಚ್ಚಳವಾಗಿದೆ. ಕಲ್ಮಕಾರು ಹೊಳೆಗೆ ನಿರ್ಮಿಸಲಾದ ಸೇತುವೆಯ ಮೇಲೆ ತೆಂಗಿನಕಾಯಿ ಲೋಡ್ ಮಾಡಿಕೊಂಡು ಪಿಕಪ್ ವಾಹನವೊಂದು ಚಲಿಸುತ್ತಿತ್ತು. ಈ ವೇಳೆ ಹೊಳೆಯಲ್ಲಿ ಏಕಾಏಕಿ ನೀರಿನ ರಭಸ ಹೆಚ್ಚಾಗಿದ್ದು, ಸೇತುವೆ ದಾಟುತ್ತಿದ್ದ ಪಿಕಪ್ ವಾಹನ ನೀರು ಪಾಲಾಗಿದೆ. ಕೂಡಲೇ ಸಾರ್ವಜನಿಕರು ವಾಹನ ಚಾಲಕನನ್ನು ರಕ್ಷಣೆ ಮಾಡಿದ್ದಾರೆ. ಕಳೆದ ಎರಡು ವರ್ಷಗಳಿಂದ ಪ್ರವಾಹದಿಂದಾಗಿ ಕಲ್ಮಕಾರು ಪ್ರದೇಶದಲ್ಲಿ ಸಾಕಷ್ಟು ಹಾನಿ ಸಂಭವಿಸಿತ್ತು.

## ಮನೆಯ ಛಾವಣಿ ಕುಸಿದು ಮಕ್ಕಳಿಬ್ಬರು ದಾರುಣ ಸಾವು!

**ಬಾಗಲಕೋಟೆ:** ಮನೆಯ ಮೇಲ್ಛಾವಣಿ ಕುಸಿದು ಆಟವಾಡುತ್ತಿದ್ದ ಇಬ್ಬರು ಮಕ್ಕಳು ದಾರುಣವಾಗಿ ಮೃತಪಟ್ಟ ಘಟನೆ ಬಾಗಲಕೋಟೆ ಜಿಲ್ಲೆಯ ಕಂದಗಲ್ ಗ್ರಾಮದಲ್ಲಿ ನಡೆದಿದೆ. ಗೀತಾ ಈಶ್ವರಯ್ಯ ಆದಾಪೂರಮಠ (12), ರುದ್ರಯ್ಯ ಈಶ್ವರಯ್ಯ ಆದಾಪೂರಮಠ (10) ಮೃತ ದುರ್ದೈವಿಗಳು. ಮನೆ ತುಂಬಾ ಹಳೆಯದಾಗಿದೆ. ಶಾಲೆಗೆ ರಜೆ ಇದ್ದುದರಿಂದ ಮನೆಯಲ್ಲಿದ್ದ ಮಕ್ಕಳು ನಿನ್ನೆ ಮನೆಯಲ್ಲಿ ಆಟವಾಡುವಾಗ ಏಕಾಏಕಿ ಕುಸಿದುಬಿದ್ದ ಮೇಲ್ಛಾವಣಿ. ತಪ್ಪಿಸಿಕೊಳ್ಳಲಾಗದೆ ಮಣ್ಣಿನಡಿ ಬಿದ್ದ ಮಕ್ಕಳು. ಮನೆ ಬೀಳುತ್ತಿದ್ದ ಓಡಿಬಂದ ಪೋಷಕರು ಸ್ಥಳೀಯರು. ಆದರೆ ಮಕ್ಕಳ ಮಣ್ಣಿನಡಿ ಸಿಲುಕಿ ಹೊರಬರಲಾಗದೇ ಮೃತಪಟ್ಟಿವೆ. ಗ್ರಾಮಸ್ಥರು ಮಣ್ಣಿನಡಿ ಸಿಲುಕಿದ ಮಕ್ಕಳನ್ನು ಹೊರತೆಗೆದು ಇಳಕಲ್ ಆಸ್ಪತ್ರೆಗೆ ಮಕ್ಕಳ ಶವ ರವಾನಿಸಲಾಗಿದರು. ಸ್ಥಳದಲ್ಲಿ ಕುಟುಂಬಸ್ಥರ ಆಕ್ರಂದನ ಮುಗಿಲುಮುಟ್ಟಿದೆ. ನಾಳೆಯಿಂದ ಶಾಲೆಗೆ ಹೋಗಬೇಕಿದ್ದ ಮಕ್ಕಳು. ಘಟನೆ ಮಾಹಿತಿ ತಿಳಿದು ಇಳಕಲ್ ಗ್ರಾಮೀಣ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಇಳಕಲ್ ಸರ್ಕಾರಿ ಆಸ್ಪತ್ರೆಗೆ ಶಾಸಕ ವಿಜಯಾನಂದ ಕಾಶೆಪ್ಪನವರ ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. ಇಳಕಲ್ ಗ್ರಾಮೀಣ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಸ್ಪಾ ಹೆಸರಿನಲ್ಲಿ ವೇಶ್ಯಾವಾಟಿಕೆ ದಂಧೆ



**ಬೆಂಗಳೂರು:** ವೇಶ್ಯಾವಾಟಿಕೆ ದಂಧೆ ನಡೆಸುತ್ತಿದ್ದ ಸ್ಪಾ ಮೇಲೆ ದಾಳಿ ಮಾಡಿರುವ ಇಂದಿರಾನಗರ ಠಾಣೆ ಪೊಲೀಸರು, ಸ್ಪಾ ಮ್ಯಾನೇಜರ್‌ನನ್ನು ಬಂಧಿಸಿ ಹೊರರಾಜ್ಯದ ಇಬ್ಬರು ಮಹಿಳೆಯರನ್ನು ರಕ್ಷಿಸಿದ್ದಾರೆ. ಸ್ಪಾ ಮ್ಯಾನೇಜರ್‌ಮಣಿ ಬಂಧಿತ. ಸ್ಪಾ ಮಾಲೀಕ ಉಪ್ಪೇನ್ ರಾಟಿ ಎಂಬಾತ ತಲೆಮ ರೆಸಿಕೊಂಡಿದ್ದು, ಆತನ ಬಂಧನಕ್ಕೆ ಶೋಧ ಕಾರ್ಯ ಮುಂದುವರೆದಿದೆ. ದೊಮ್ಮಲೂರು 2ನೇ ಹಂತದ ಸ್ಪಾವೊಂದರಲ್ಲಿ ಹೊರರಾಜ್ಯದ ಮಹಿಳೆಯರನ್ನು ಇರಿಸಿಕೊಂಡು ವೇಶ್ಯಾವಾಟಿಕೆ ದಂಧೆ ನಡೆಸುತ್ತಿರುವ ಬಗ್ಗೆ ದೊರೆತ ಖಚಿತ ಮಾಹಿತಿ ಮೇರೆಗೆ ಮೇ 29ರಂದು ಪೊಲೀಸರು ಸ್ಪಾ ಮೇಲೆ ದಾಳಿ ಮಾಡಿದ್ದಾರೆ. ವೇಶ್ಯಾವಾಟಿಕೆಯಲ್ಲಿ ತೊಡಗಿದ್ದ ಉತ್ತರ ಪ್ರದೇಶ ಮತ್ತು ನಾಗಲ್ಯಾಂಡ್ ಮೂಲದ ಇಬ್ಬರು ಮಹಿಳೆಯರನ್ನು ರಕ್ಷಿಸಲಾಗಿದೆ. ಸ್ಪಾನಲ್ಲಿ ಕ್ರಾಸ್ ಮಸಾಜ್, ಬಾಡಿ ಟು ಬಾಡಿ ಮಸಾಜ್, ಹ್ಯಾಪಿ ಎಂಡಿಂಗ್ ಇತ್ಯಾದಿ ಸೇವೆಗಳ ಹೆಸರಿನಲ್ಲಿ ಗ್ರಾಹಕರನ್ನು ಬರಮಾಡಿಕೊಂಡು ಬಳಿಕ ಲೈಂಗಿಕ ಕ್ರಿಯೆಗೆ ಪುಸಲಾಯಿಸಿ ಅಕ್ರಮವಾಗಿ ಹಣ ಸಂಪಾದಿಸುತ್ತಿದ್ದಾಗಿ ಸ್ಪಾ ಮ್ಯಾನೇಜರ್ ಮಣಿ ವಿಚಾರಣೆ ವೇಳೆ ಹೇಳಿಕೆ ನೀಡಿದ್ದಾನೆ. ಸದ್ಯಕ್ಕೆ ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಈ ಸಂಬಂಧ ಇಂದಿರಾನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರೆದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# 94 ಕೋಟಿ ಹಗರಣ: ಸಿಬಿಐಗೆ ದೂರು ನೀಡಿ ಮೂವರ ಅಮಾನತು

**ಬೆಂಗಳೂರು:** ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಖಾತೆಯಲ್ಲಿ ಅವ್ಯವಹಾರ ನಡೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಯೂನಿಯನ್ ಬ್ಯಾಂಕ್ ತನ್ನ ಮೂವರು ಸಿಬ್ಬಂದಿಯನ್ನು ಅಮಾನತುಗೊಳಿಸಿದೆ.

ಈ ಸಂಬಂಧ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿದ ಬ್ಯಾಂಕ್, ಖಾತೆಗಳಲ್ಲಿನ ವಂಚನೆಯ ವಹಿವಾಟಿನ ಬಗ್ಗೆ ಬ್ಯಾಂಕ್ ಅರಿವು ಹೊಂದಿದೆ. ಅಕ್ರಮಗಳು ಬೆಳಕಿಗೆ ಬಂದಾಗ ಬ್ಯಾಂಕ್ ತಕ್ಷಣವೇ ಪ್ರಶ್ನಾರ್ಹ ವಹಿವಾಟುಗಳನ್ನು ವಂಚನೆ ಎಂದು ಘೋಷಿಸಿದೆ. ಸಂಪೂರ್ಣ ತನಿಖೆ ಮತ್ತು ಅಪರಾಧಿಗಳ ಪತ್ತೆಗಾಗಿ ಮೇ 30 ರಂದು ಕೇಂದ್ರೀಯ ತನಿಖಾ ದಳಕ್ಕೆ ದೂರು ನೀಡಿದ್ದೇವೆ. ಮುಂದಿನ ವಿಚಾರಣೆಗಾಗಿ ಮೂವರು ಅಧಿಕಾರಿಗಳನ್ನು ಅಮಾನತುಗೊಳಿಸಲಾಗಿದೆ ಎಂದು ತಿಳಿಸಿದೆ.

ಈ ಸಮಸ್ಯೆಯನ್ನು ನ್ಯಾಯಯುತವಾಗಿ ಮತ್ತು ತ್ವರಿತವಾಗಿ ಪರಿಹರಿಸಲು ನಾವು ಅಧಿಕಾರಿಗಳಿಗೆ ಸಂಪೂರ್ಣ ಸಹಕಾರ ನೀಡುತ್ತೇವೆ ಮತ್ತು ಅಂತಹ ಘಟನೆಗಳನ್ನು ತಡೆಯಲು ನಾವು ಎಲ್ಲಾ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುತ್ತಿದ್ದೇವೆ ಎಂದು ಹೇಳಿದೆ.

**ಏನಿದು ಪ್ರಕರಣ?:** ವಾಲ್ಮೀಕಿ ನಿಗಮದ ಅಧೀಕ್ಷಕ ಚಂದ್ರಶೇಖರನ್ ಮೂವರ ಹೆಸರನ್ನು ಉಲ್ಲೇಖಿಸಿ ಆತ್ಮಹತ್ಯೆ ಮಾಡಿಕೊಂಡಿದ್ದರು. ಬ್ಯಾಂಕ್‌ನಿಂದ 94 ಕೋಟಿ ರೂ. ಅಕ್ರಮವಾಗಿ ವರ್ಗಾವಣೆಯಾಗಿದೆ. ಹಣ ವರ್ಗಾವಣೆಯಾದ ಬಗ್ಗೆ ಯಾವುದೇ ಮೇಲ್, ಮೆಸೇಜ್ ಬಂದಿಲ್ಲ. ಬ್ಯಾಂಕ್ ಸಿಬ್ಬಂದಿಯಿಂದಲೇ ನಕಲಿ ದಾಖಲೆ ಸೃಷ್ಟಿಸಿ ವಂಚನೆ ಎಸಗಿದ್ದಾರೆ ಎಂದು ಆರೋಪಿಸಿ ನಿಗಮದ ಪ್ರಧಾನ ವ್ಯವಸ್ಥಾಪಕ ರಾಜಶೇಖರ್ ಅವರು ದೂರು ನೀಡಿದ್ದರು. ದೂರಿನ ಆಧಾರದ ಮೇಲೆ ಬ್ಯಾಂಕ್‌ನ 6 ಮಂದಿ ಸಿಬ್ಬಂದಿ ವಿರುದ್ಧ ಹೈಗ್ರೌಂಡ್ಸ್ ಠಾಣೆಯಲ್ಲಿ ಎಫ್ ಐಆರ್ ದಾಖಲಾಗಿತ್ತು.

# ಕಾಂಗ್ರೆಸ್ 15-17 ಸ್ಥಾನದಲ್ಲಿ ಗೆಲುವು ನಿಶ್ಚಿತ



**ಮಧುಗಿರಿ:** ರಾಜ್ಯದಲ್ಲಿ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ 15 ರಿಂದ 17 ಸ್ಥಾನಗಳಲ್ಲಿ ಗೆಲುವು ಸಾಧಿಸಲಿದೆ ಎಂದು ಸಹಕಾರ ಸಚಿವ ಕೆ.ಎನ್.ರಾಜಣ್ಣ ತಿಳಿಸಿದರು.

ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರ ಅಧಿಕಾರದ ಚುಕ್ಕಾಣಿ ಹಿಡಿದ ನಂತರ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳು ಬಡವರ ,ದೀನ ದಲಿತರ, ಎಲ್ಲ ವರ್ಗದ ಹಾಗೂ ಕೂಲಿಕಾರ್ಮಿಕರ ಮನೆ ಬಾಗಿಲಿಗೆ ತಲುಪಿವೆ. ಈ ಯೋಜನೆಗಳು ಬಡವರ ಬದುಕಿಗೆ ವರದಾನವಾಗಿವೆ. ಈ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳಿಗೆ ಮಹಿಳೆಯರು ಅತ್ಯಧಿಕ ಮತ ಹಾಕಿರುವುದರಿಂದ ಈ ಸಲ ನಮ್ಮ ಪಕ್ಷದ ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ ಎಂದರು.

ರಾಜ್ಯದ ಮೊದಲ ಹಂತದ ಲೋಕಸಭಾ ಚುನಾವಣೆಯಲ್ಲಿ 8 ಸ್ಥಾನ ಹಾಗೂ ಎರಡನೇ ಹಂತದಲ್ಲಿ 9 ಸ್ಥಾನಗಳನ್ನು ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳು ಗೆಲುವು ಸಾಧಿಸುವ ವಿಶ್ವಾಸ ನನಗಿದೆ ಎಂದರು. ಜಿಪಂ ಮಾಜಿ ಅಧ್ಯಕ್ಷ ಜಿ.ಜೆ.ರಾಜಣ್ಣ, ಪುರಸಭೆ ಮಾಜಿ ಅಧ್ಯಕ್ಷ ಎಂ.ಕೆ.ನಂಜುಂಡರಾಜು, ಎನ್.ಗಂಗಣ್ಣ, ಸದಸ್ಯರಾದ ಎಂ.ವಿ.ಮಂಜುನಾಥ್ ಆಚಾರ್, ಶ್ರೀಧರ್, ಆಲೀಮ್, ಮಾಜಿ ಸದಸ್ಯರಾದ ಉಮೇಶ್, ಸಾಧಿಕ್, ನಿವೃತ್ತ ಪ್ರಾಂಶುಪಾಲ ಡಿ.ಎಸ್.ಮುನೀಂದ್ರಕುಮಾರ್, ಮುಖಂಡರಾದ ತಿಮ್ಮಣ್ಣ, ಆನಂದಕೃಷ್ಣ, ಬಾಬಪಕ್ರುದ್ದೀನ್, ನಬೀಲ್‌ಕೆ.ಪಾಳ್ಯ ಇದ್ದರು.

# ರಾಜ್ಯದಲ್ಲಿದೆ ಜಿಹಾದಿ ಸರ್ಕಾರ




**ಬೆಂಗಳೂರು:** ರಾಜ್ಯದಲ್ಲಿ ಜಿಹಾದಿ ಸರ್ಕಾರ ಅಧಿಕಾರದಲ್ಲಿ ಇದೆ ಎಂಬುದು ಮತ್ತೊಮ್ಮೆ ಸಾಬೀತಾಗಿದೆ. ಚನ್ನಗಿರಿಯಲ್ಲಿ ಪೊಲೀಸ್ ಠಾಣೆಯ ಮೇಲೆ ದಾಳಿ ನಡೆಸಿದವರಿಗೆ ಕ್ಲೀನ್ ಚಿಟ್ ಕೊಟ್ಟ ಬೆನ್ನಲ್ಲೇ ಮಂಗಳೂರಿನ ಪಂಪ್ ವೆಲ್ ವೃತ್ತದ ಬಳಿ ರಸ್ತೆಯಲ್ಲಿ ನಮಾಜ್ ನಡೆಸಿದ ಪ್ರಕರಣಕ್ಕೆ ರಾಜ್ಯ ಸರ್ಕಾರ ಒತ್ತಾಯಪೂರ್ವಕವಾಗಿ ಬಿ ರಿಪೋರ್ಟ್ ಸಲ್ಲಿಸಿದೆ ಎಂದು ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ಸುನಿಲ ಕುಮಾರ್ ಹೇಳಿದರು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿರುವ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಅಪರಾಧ ಕೃತ್ಯ ಅಥವಾ ಕಾನೂನು ಬಾಹಿರ ವರ್ತನೆ ನಡೆಸುವುದು ತಪ್ಪಲ್ಲ ! ಆದರೆ ಕಾನೂನು ಉಲ್ಲಂಘನೆಯಾಗಿದೆ ಎಂದು ಹೇಳುವುದು ತಪ್ಪು ಎಂದರು.

ಪಂಪ್ ವೆಲ್ ಪ್ರಕರಣದಲ್ಲೂ ಹಾಗೇ ಆಗಿದೆ. ರಸ್ತೆಯಲ್ಲಿ ನಮಾಜ್ ಮಾಡಿ ಸಮಾಜದ ಸ್ವಾಸ್ಥ್ಯ ಹಾಗೂ ಸಾರ್ವಜನಿಕ ಅನಾನುಕೂಲತೆ ಸೃಷ್ಟಿಸಿದವರನ್ನು ಬಂಧಿಸುವುದು ಬಿಟ್ಟು, ಪ್ರಕರಣವನ್ನು ಬೆಳಕಿಗೆ ತಂದ ಶರಣ್ ಪಂಪ್ ವೆಲ್ ವಿರುದ್ಧ ಕ್ರಮ ತೆಗೆದುಕೊಳ್ಳಲು ಸರ್ಕಾರ ಮುಂದಾಗಿದೆ. ಮಾತ್ರವಲ್ಲ ಪ್ರಕರಣ ದಾಖಲಿಸಿಕೊಂಡ ಪೊಲೀಸ್ ಅಧಿಕಾರಿಯನ್ನು ಕಡ್ಡಾಯ ರಜೆಯ ಮೇಲೆ ಕಳುಹಿಸಿದೆ ಎಂದು ವಾಗ್ದಾಳಿ ಮಾಡಿದರು. ಒಂದು ಸಮುದಾಯದ ಓಲೈಕೆಗಾಗಿ ಇಡಿ ರಾಜ್ಯದ ಹಿತ ಕಡೆಗಣಿಸಲಾಗುತ್ತಿದೆ ಎಂದರೆ ಅದು ಜಿಹಾದಿ ಸರ್ಕಾರದಿಂದ ಮಾತ್ರ ಸಾಧ್ಯ. ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಈಗ ನಡೆಸುತ್ತಿರುವುದು ಸರ್ಕಾರವಲ್ಲ, ತಾಲೀಬಾನ್ ಗಿರಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

# ಕೆಆರ್‌ಐಡಿಎಲ್‌ನಿಂದ ಬಿಲ್ ಬಾಕಿ: ಗುತ್ತಿಗೆದಾರ ನೇಣಿಗೆ ಶರಣು

**ದಾವಣಗೆರೆ:** ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತನಿಂದ 2023-24ನೇ ಸಾಲಿನ ಬಾಕಿ ಬಿಲ್ ಪಾವತಿಯಾಗದ ಹಿನ್ನೆಲೆಯಲ್ಲಿ ಮನನೊಂದ ಸಂತೇಬೆನ್ನೂರಿನ ಗುತ್ತಿಗೆದಾರ ಪಿ.ಎಸ್ ಗೌಡರ್ (48) ಡೆತ್‌ನೋಟ್ ಬರೆದಿಟ್ಟು ನೇಣುಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಗುತ್ತಿಗೆದಾರ ಪಿ.ಎಸ್ ಗೌಡರ್ ಚನ್ನಗಿರಿ ತಾಲೂಕಿನ ಸಂತೇಬೆನ್ನೂರಿನಲ್ಲಿ ವಾಸಿಸುತ್ತಿದ್ದರು. ಸಂತೇಬೆನ್ನೂರಿನ ಕೃಷಿ ಇಲಾಖೆ ಆವರಣದಲ್ಲಿ 2023-24ರಲ್ಲಿ ನಡೆದ ಕಾಮಗಾರಿಗೆ ಸಂಬಂಧಿಸಿದ ಹಣ ಬಿಡುಗಡೆ ಮಾಡದೆ ಕೆಆರ್‌ಡಿಎಲ್ ಅಧಿಕಾರಿಗಳು ಸತಾಯಿಸುತ್ತಿದ್ದರು. ಅಲ್ಲದೆ ಇವರ ಇಬ್ಬರು ಸಹೋದರರು ಹಣಕಾಸು ವಿಚಾರವಾಗಿ ಮೋಸಮಾಡಿದ್ದಾರೆ ಎಂದು ಆರೋಪಿಸಿದ್ದಾರೆ.



ಅಧಿಕಾರಿಗಳ ಧೋರಣೆ ಮತ್ತು ಸಹೋದರರ ವರ್ತನೆಯಿಂದ ಬೇಸತ್ತು ತಮ್ಮ ಮನೆಯಲ್ಲಿ ಮೇ26 ರಂದು ಡೆತ್‌ನೋಟ್ ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಕೆಆರ್‌ಐಡಿಎಲ್ ದೊಡ್ಡ ಮೊತ್ತದ ಪರಿಹಾರ ನೀಡಬೇಕೆಂದು ಡೆತ್ ನೋಟ್‌ನಲ್ಲಿ ಬರೆದಿದ್ದಾರೆ.

ಪಿಎಸ್ ಗೌಡರ್ ಪತ್ನಿ ವಸಂತ ಕುಮಾರಿಯವರಿಂದ ಸಂತೇಬೆನ್ನೂರು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಈ ಬಗ್ಗೆ ಸಂತೇಬೆನ್ನೂರಿನ ಪೊಲೀಸ್ ಠಾಣೆಯಲ್ಲಿ 306 ಅಡಿಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆಯುತ್ತಿದೆ.

ಪ್ರಕರಣ ಸಂಬಂಧ ದಾವಣಗೆರೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ ಮಾತನಾಡಿ, ಆತ್ಮಹತ್ಯೆ ಮಾಡಿಕೊಂಡ ವ್ಯಕ್ತಿಯ ಸಹೋದರರಾದ ಶ್ರೀನಿವಾಸ ಹಾಗೂ ನಾಗರಾಜ್ ಅವರ ಬಗ್ಗೆ ಬರೆದಿದ್ದಾರೆ. ಜೊತೆಗೆ ಇವರು ಗುತ್ತಿಗೆದಾರ ಸಹ ಆಗಿದ್ದ ಇವರಿಗೆ ಹಣ ಬರಬೇಕಿತ್ತು. ಸಹೋದರ ತೊಂದರೆ ಹಾಗೂ ಬರಬೇಕಾದ ಒಟ್ಟು ಎಂಬತ್ತು ಲಕ್ಷ ಹಣ ಬರಬೇಕಿತ್ತು. ಈ ಎಲ್ಲ ಕಾರಣಕ್ಕಾಗಿ ಆತ್ಮಹತ್ಯೆ ಮಾಡಿಕೊಂಡಿದ್ದಾಗಿ ಡೆತ್ ನೋಟ್ ನಲ್ಲಿ ಬರೆದಿದ್ದಾರೆ. ಇದೇ ಕಾರಣಕ್ಕೆ ಸಂಬಂಧಿಸಿ ಪಿಎಸ್ ಗೌಡರ ಸಹೋದರರಾದ ನಾಗರಾಜ್, ಶ್ರೀನಿವಾಸ ಹಾಗೂ ಕೆಆರ್‌ಐಡಿಎಲ್ ಸೇರಿಸಿ ಸಂತೆ ಬೆನ್ನೂರ ಪೊಲೀಸ ಠಾಣೆಯಲ್ಲಿ ಐಪಿಸಿ ಕಲಂ 306 ಅನ್ವಯ ಕೇಸ್ ಬುಕ್ ಮಾಡಲಾಗಿದೆ ಎಂದು ಹೇಳಿದರು.

# ನಾಗೇಂದ್ರ ರಾಜಿನಾಮೆಗೆ ಸಿಎಂ ಸೂಚನೆ



**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ಮೊದಲ ವಿಕೆಟ್ ಪತನವಾಗಿದೆ. ವಾಲ್ಮೀಕಿ ಅಭಿವೃದ್ಧಿ ನಿಮಗದ ಹಗರಣದಲ್ಲಿ ಪರಿಶಿಷ್ಠ ಪಂಗಡಗಳ ಕಲ್ಯಾಣ ಸಚಿವ ಬಿ.ನಾಗೇಂದ್ರ, ಅವರ ಹೆಸರು ಕೇಳಿಬಂದಿದೆ. ಈ ಹಿನ್ನೆಲೆಯಲ್ಲಿ ಸಚಿವ ಸ್ಥಾನಕ್ಕೆ ರಾಜಿನಾಮೆ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಿ. ನಾಗೇಂದ್ರ, ಅವರಿಗೆ ಸೂಚಿಸಿದ್ದಾರೆ.

ಹಗರಣ ಸಂಬಂಧ ನಿನ್ನೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸಭೆ ನಡೆಸಿದ್ದರು. ಸಭೆಯಲ್ಲಿ ಸಚಿವ ಬಿ. ನಾಗೇಂದ್ರ, ರಾಜೀನಾಮೆ ಬಗ್ಗೆ ಚರ್ಚೆ ನಡೆಯಿತು. ಸಭೆಯಲ್ಲಿ ಸರ್ಕಾರಕ್ಕೆ ಮುಖಭಂಗವಾಬಾರದು ಹೀಗಾಗಿ ಬಿ.ನಾಗೇಂದ್ರ, ರಾಜಿನಾಮೆ ನೀಡುವುದು ಒಳಿತು. ತನಿಖೆ ಪೂರ್ಣವಾದ ಬಳಿಕ ಮತ್ತೆ ಸಂಪುಟಕ್ಕೆ ಸೇರ್ಪಡೆ ಮಾಡಿಕೊಳ್ಳುವುದಾಗಿ ತೀರ್ಮಾನ ಕೈಗೊಂಡರು. ಸಭೆ ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಿ. ನಾಗೇಂದ್ರ, ಅವರಿಗೆ, ಖುದ್ದು ತಾವೇ ಹೇಳಿಕೆ ನೀಡಿ ರಾಜೀನಾಮೆ ನೀಡುವಂತೆ ಸೂಚನೆ ನೀಡಿದ್ದಾರೆ.

ಬಿ. ನಾಗೇಂದ್ರ, ಅವರು ರಾಜಿನಾಮೆ ನೀಡಬೇಕೆಂದು ಪ್ರತಿಪಕ್ಷ ಬಿಜೆಪಿ ಸರ್ಕಾರದ ಮೇಲೆ ಒತ್ತಡ ಹೇರಿತ್ತು. ಈ ಹಿನ್ನೆಲೆ ಸರ್ಕಾರದ ಮೇಲೆ ಒತ್ತಡ ಸೃಷ್ಠಿಯಾಗಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಿ. ನಾಗೇಂದ್ರ, ಅವರಿಗೆ ರಾಜಿನಾಮೆ ನೀಡುವಂತೆ ಸೂಚನೆ ನೀಡಿದ್ದಾರೆ.

### ಗರ್ಭಪಾತ ದಂಧೆಗೆ ಮಹಿಳೆ ಬಲಿ ಪ್ರಕರಣ

# ಮೃತ ಮಹಿಳೆಯ ತಂದೆ, ತಾಯಿ ಅರೆಸ್ಟ

**ಬಾಗಲಕೋಟೆ:** ಜಿಲ್ಲೆಯ ರಬಕವಿ-ಬನಹಟ್ಟಿ ತಾಲೂಕಿನ ಮಹಾಲಿಂಗಪುರದಲ್ಲಿ ಗರ್ಭಪಾತ ದಂಧೆಗೆ ಮಹಿಳೆ ಬಲಿಯಾದ ಪ್ರಕರಣಕ್ಕೆ ಸಂಬಂಧಿಸಿ ಮೃತ ಮಹಿಳೆ ಸೋನಾಲಿ ತಂದೆ, ತಾಯಿಯನ್ನು ಪೊಲೀಸರು ಬಂಧಿಸಿದ್ದಾರೆ. ಮಗಳ ಗರ್ಭಪಾತಕ್ಕೆ ಪ್ರೇರೇಪಣೆ ಆರೋಪದ ಮೇರೆಗೆ ಸೋನಾಲಿ ತಂದೆ ಸಂಜಯ್ ಗೌಳಿ ಮತ್ತು ತಾಯಿ ಸಂಗೀತಾ ಗೌಳಿಯನ್ನು ಮಹಾಲಿಂಗಪುರ ಠಾಣೆಯ ಪೊಲೀಸರು ಬಂಧಿಸಿದ್ದಾರೆ.

**ಗರ್ಭಪಾತಕ್ಕೆ ಕಾರಣರಾದ ಆರೋಪಿ ಕೂಡ ಅರೆಸ್ಟ್:** ಇನ್ನು ಗರ್ಭಪಾತ, ಭ್ರೂಣಹತ್ಯೆಗೆ ಕಾರಣಳಾದ ಆರೋಪಿ ಕವಿತಾ ಬಾದನ್ನವರ ಅರೆಸ್ಟ್ ಮಾಡಲಾಗಿದೆ. ಈಕೆ ಖಾಸಗಿ ಆಸ್ಪತ್ರೆಯಲ್ಲಿ ಆಯಾ ಆಗಿ ಕೆಲಸ ಮಾಡುತ್ತಿದ್ದಳು. ಆದರೆ ಈಗ ಗರ್ಭಪಾತ ದಂಧೆ ಮಾಡಿ ಮಹಿಳೆ ಬಲಿ ಪಡೆದು ಜೈಲು ಸೇರಿದ್ದಾಳೆ. ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ ಅವರು ಬಾಗಲಕೋಟೆ ಜಿಲ್ಲೆಯ ಮಹಾಲಿಂಗಪುರ ಪಟ್ಟಣದಲ್ಲಿರುವ ಆರೋಪಿ ಕವಿತಾ ಮನೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ರು. ಪರಿಶೀಲನೆ ವೇಳೆ, ಕವಿತಾ ಮನೆಯಲ್ಲಿನ ವೈದ್ಯಕೀಯ ಪರಿಕರಗಳು, ಬೆಡ್, ಹ್ಯಾಂಡ್ ಗ್ಲೌಜ್, ಮೆಡಿಷಿನ್ಸ್ ಎಲ್ಲವನ್ನು ಪರಿಶೀಲನೆ ಮಾಡಿದ್ರು. ಈ ವೇಳೆ ಕುಟುಂಬ ಕಲ್ಯಾಣ ಅಧಿಕಾರಿ ಡಿ ಬಿ ಪಟ್ಟಣಶೆಟ್ಟಿ ವಿರುದ್ಧ ಗರಂ ಆದ ಆಯೋಗದ ಸದಸ್ಯ ಶಶಿಧರ ಕೋಸಂಬೆ, ನಿಮ್ಮ ಕರ್ತವ್ಯ ನಿರ್ಲಕ್ಷ್ಯದಿಂದಲೇ ಈ ರೀತಿಯ ದುರ್ಘಟನೆ ಆಗಿದೆ ಎಂದು ಗದರಿದ್ರು.

ಪೊಲೀಸ್ ಅಧಿಕಾರಿಗಳಿಗೆ ತನಿಖೆಗೆ ಎಲ್ಲ ರೀತಿಯ ಸಹಕಾರ ನೀಡುವಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಸೂಚನೆ ನೀಡಿದ್ರು. ನಿಷ್ಪಕ್ಷಪಾತ ತನಿಖೆ ಮಾಡುವಂತೆ ಪೊಲೀಸರಿಗೆ ಮನವಿಮಾಡಿದ್ರು. ಪ್ರಕರಣದ ಕುರಿತು ಮಾತನಾಡಿದ ಕೋಸಂಬೆ, ಇದು ನಾಗರಿಕ ತಲೆ ತಗ್ಗಿಸುವ ಘಟನೆ. ಆರೋಪಿ ಕವಿತಾ ಬಗ್ಗೆ ಗಮನಹರಿಸದೇ ಇರೋದು ಮೇಲ್ನೋಟಕ್ಕೆ ಅಧಿಕಾರಿಗಳ ನಿರ್ಲಕ್ಷ್ಯ ಎದ್ದು ಕಾಣ್ತಿದೆ. ಈ ಬಗ್ಗೆ ನಾವು ಸರ್ಕಾರಕ್ಕೆ ವರದಿ ಕಳಿಸುತ್ತೇವೆ. ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದಿಂದ ಪ್ರತ್ಯೇಕ ದೂರು ದಾಖಲಿಸ್ತೇವೆ. ಎಲ್ಲ ರೀತಿಯ ತನಿಖೆಗೆ ಸೂಚಿಸುತ್ತೇವೆ ಎಂದ್ರು. ಕವಿತಾ ಬಳಿ ಸ್ಕ್ಯಾನಿಂಗ್ ಮಷೀನ್ ಹೇಗೆ ಬಂತು ಎಂಬ ಬಗ್ಗೆ ನಿಷ್ಪಕ್ಷಪಾತ ತನಿಖೆ ಆಗಬೇಕಿದೆ, ಗೋಕಾಕ್ ಮೂಲದ ಯಾವುದೋ ಒಂದು ಆಸ್ಪತ್ರೆಯ ಹೆಸರಲ್ಲಿ ಅವರ ಬಳಿ ಸ್ಕ್ಯಾನಿಂಗ್ ಮಷೀನ್ ಇದೆ. ಅದನ್ನೂ ಪೊಲೀಸರು ತನಿಖೆ ಮಾಡ್ತಿದ್ದಾರೆ. ಈ ಪ್ರಕರಣದಲ್ಲಿ ಯಾರ್ಯಾರೂ ಭಾಗಿಯಾಗಿದ್ದಾರೆ ಎಂಬ ಬಗ್ಗೆ ತನಿಖೆಗೆ ಒಳಪಡಿಸಲಾಗುವುದು ಎಂದರು.

# ಲಾರಿಗೆ ಮಿನಿ ಗೂಡ್ಸ್ ವಾಹನ ಡಿಕ್ಕಿ: ಇಬ್ಬರು ದುರ್ಮರಣ



**ಚಿತ್ರದುರ್ಗ:** ಲಾರಿಗೆ ಮಿನಿ ಗೂಡ್ಸ್ ವಾಹನ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿದ ಘಟನೆ ಚಿತ್ರದುರ್ಗ ಜಿಲ್ಲೆಯ ಹಿರಿಯೂರು ಪಟ್ಟಣದ ಬಳಿ ನಡೆದಿದೆ.ಅಪಘಾತದ ಪರಿಣಾಮ ಮಿನಿಗೂಡ್ಸ್ ವಾಹನದಲ್ಲಿದ್ದ ಇಬ್ಬರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಚಳ್ಳಕೆರೆ ತಾಲೂಕಿನ ಹುಲಿಕುಂಟೆ ಗ್ರಾಮದ ರಮೇಶ್ (55), ಬೆಳಗೆರೆ ಗ್ರಾಮದ ಶಿವಲಿಂಗಪ್ಪ (65) ಘಟನೆಯಲ್ಲಿ ಸಾವನ್ನಪ್ಪಿದ್ದಾರೆ. ಚಳ್ಳಕೆರೆಯಿಂದ ಹಿರಿಯೂರು ಕುರಿ ಮಾರುಕಟ್ಟೆಗೆ ತೆರಳುತ್ತಿದ್ದ ಸಂದರ್ಭ ರಾಷ್ಟ್ರೀಯ ಹೆದ್ದಾರಿ 150ಎರಲ್ಲಿ ಲಾರಿಗೆ ಹಿಂಬದಿಯಿಂದ ಗೂಡ್ಸ್ ವಾಹನ ಡಿಕ್ಕಿಯಾಗಿದೆ. ಘಟನಾ ಸ್ಥಳಕ್ಕೆ ಹಿರಿಯೂರು ಠಾಣೆ ಸಿಪಿಐ ಕಾಳಿಕೃಷ್ಣ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಕುರಿತು ಹಿರಿಯೂರು ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನೋಟಿಸ್

**ಬೆಂಗಳೂರು:** ಲೈಂಗಿಕ ಕಿರುಕುಳ, ಅತ್ಯಾಚಾರ ಮತ್ತು ಮನೆಕೆಲಸದಾಕೆಯನ್ನು ಅಪಹರಿಸಿದ ಆರೋಪ ಸಂಬಂಧ ತಮ್ಮ ವಿರುದ್ಧ ದಾಖಲಾಗಿರುವ ಎರಡು ಪ್ರತ್ಯೇಕ ಎಫ್‌ಐಆರ್ ಗಳನ್ನು ರದ್ದುಪಡಿಸುವಂತೆ ಕೋರಿ ಮಾಜಿ ಸಚಿವ ಹಾಗೂ ಪ್ರಕರಣದ ಮೊದಲ ಆರೋಪಿಯಾದ ಎಚ್.ಡಿ. ರೇವಣ್ಣ ಸಲ್ಲಿಸಿರುವ ಅರ್ಜಿ ಸಂಬಂಧ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನೋಟಿಸ್ ಜಾರಿಗೊಳಿಸಿದೆ. ಪ್ರಕರಣ ಸಂಬಂಧ ಮೈಸೂರು ಜಿಲ್ಲೆಯ ಕೆ.ಆರ್. ನಗರ ಮತ್ತು ಹಾಸನದ ಹೊಳೆನರಸೀಪುರ ಪೊಲೀಸ್ ಠಾಣೆಗಳಲ್ಲಿ ತಮ್ಮ ವಿರುದ್ಧ ದಾಖಲಾಗಿರುವ ಎರಡು ಪ್ರತ್ಯೇಕ ಎಫ್‌ಐಆರ್‌ಗಳನ್ನು ರದ್ದುಪಡಿಸಬೇಕು ಎಂದು ಎಚ್.ಡಿ. ರೇವಣ್ಣ ಸಲ್ಲಿಸಿರುವ ಅರ್ಜಿಗಳು, ನ್ಯಾಯಮೂರ್ತಿ ಕೃಷ್ಣ ಎಸ್. ದೀಕ್ಷಿತ್ ಅವರ ನ್ಯಾಯಪೀಠದ ಮುಂದೆ ವಿಚಾರಣೆಗೆ ಬಂದಿದ್ದವು.

ಅರ್ಜಿ ಸಂಬಂಧ ಕೆಲ ಕಾಲ ವಾದ ಆಲಿಸಿದ ನ್ಯಾಯಪೀಠ, ಪ್ರಕರಣದ ತನಿಖೆ ನಡೆಸುತ್ತಿರುವ ಎಸ್‌ಐಟಿಗೆ (ಸರ್ಕಾರ) ನೋಟಿಸ್ ಜಾರಿಗೊಳಿಸಿ ವಿಚಾರಣೆಯನ್ನು ಸೋಮವಾರಕ್ಕೆ (ಜೂ.3) ಮುಂದೂಡಿತು.

ವಿಚಾರಣೆ ವೇಳೆ ರೇವಣ್ಣ ಪರ ಹಿರಿಯ ವಕೀಲ ಸಿ.ವಿ. ನಾಗೇಶ್, ಮಹಿಳೆಯ ಅಪಹರಣ ಪ್ರಕರಣದಲ್ಲಿ ಅರ್ಜಿದಾರ ರೇವಣ್ಣ ಅವರ ಪಾತ್ರ ಇಲ್ಲ. ಅಪಹರಣ ಪ್ರಕರಣದಲ್ಲಿ ಬೆದರಿಕೆ ಹಾಗೂ ಬೇಡಿಕೆ ಇರಬೇಕಾಗುತ್ತದೆ. ಈ ಪ್ರಕರಣದಲ್ಲಿ ಅಂತಹ ಯಾವುದೇ ಬೆದರಿಕೆ ಹಾಗೂ ಬೇಡಿಕೆ ಇಲ್ಲ. ಹೀಗಾಗಿ ಎಫ್‌ಐಆರ್ ದಾಖಲಿಸಿರುವುದೇ ಕಾನೂನು ಬಾಹಿರ ಎಂದು ವಾದಿಸಿದರು.

ಪ್ರಕರಣದಲ್ಲಿ ಅಪಹರಣಕ್ಕೆ ಒಳಗಾಗಿದ್ದಾರೆ ಎನ್ನಲಾದ ಮಹಿಳೆಯು ರೇವಣ್ಣ ಅವರ ಮನೆಯಲ್ಲಿ ಹಲವು ವರ್ಷ ಕೆಲಸ ಮಾಡುತ್ತಿದ್ದರು. ಕರೆದರೆ ಸಾಕು ಅವರೇ ಬರುವಂತಹವರು. ಅಂತಹವರನ್ನು ಅಪಹರಣ ಮಾಡುವ ಅಗತ್ಯೇನು ಇಲ್ಲ. ದೂರಿನಲ್ಲಿ ಹೇಳಿರುವಂತೆ ಸತೀಶ್ ಬಾಬಣ್ಣ ಅವರು ಮಹಿಳೆಯನ್ನು ಕರೆದೊಯ್ದಿದ್ದಾರೆ ಎನ್ನಲಾಗಿದೆ. ಆದರೆ, ಸತೀಶ್ ಬಾಬಣ್ಣಗೆ ಮಹಿಳೆಯನ್ನು ಕರೆತರುವಂತೆ ರೇವಣ್ಣ ಅವರು ಯಾವುದೇ ಸೂಚನೆ ನೀಡಿಲ್ಲ. ಸೂಚನೆ ನೀಡಿದ್ದಾರೆ ಎನ್ನುವ ಬಗ್ಗೆ ಯಾವುದೇ ದಾಖಲೆ ಇಲ್ಲ. ಸಂತ್ರಸ್ತೆಯನ್ನು ಅರ್ಜಿದಾರರ ವಶದಲ್ಲಿಯೂ ಇಟ್ಟುಕೊಂಡಿಲ್ಲ. ದೂರಿನಲ್ಲಿ ಮಾಡಿರುವ ಎಲ್ಲಾ ಆರೋಪಗಳು ಸುಳ್ಳು. ಹೀಗಾಗಿ, ಎಫ್‌ಐಆರ್ ರದ್ದುಪಡಿಸಬೇಕು ರದ್ದುಗೊಳಿಸಬೇಕು ಎಂದು ಕೋರಿದರು.

ಅಲ್ಲದೆ, ಪ್ರಕರಣದಲ್ಲಿ ಅಪ್ಪ, ಅಮ್ಮ ಮತ್ತು ಮಗನನ್ನು ವಶದಲ್ಲಿಟ್ಟುಕೊಳ್ಳಲು ಎಸ್ ಐಟಿ ಬಯಸಿದೆ. ಆರೋಪಿ ಪ್ರಜ್ವಲ್ ತಾನೇ ಹಾಜರಾಗುತ್ತೇನೆ ಎಂದು ತಿಳಿಸಿದ್ದರೂ, ವಿಮಾನ ನಿಲ್ದಾಣದಲ್ಲಿ ಪೊಲೀಸರನ್ನು ಜಮಾಯಿಸಿ ಡ್ರಾಮಾ ಸೃಷ್ಟಿಸಲಾಗಿದೆ ಎಂದು ಸಿ.ವಿ. ನಾಗೇಶ್ ಹೇಳಿದರು. ಅಂತಿಮವಾಗಿ ಎಸ್‌ಐಟಿಗೆ ಮತ್ತು ದೂರುದಾರರಿಗೆ ನೋಟಿಸ್ ಜಾರಿ ಮಾಡಿದ ನ್ಯಾಯಪೀಠ, ವಿಚಾರಣೆಯನ್ನು ಸೋಮವಾರಕ್ಕೆ ಮುಂದೂಡಿತು.

## ಗುಣಮಟ್ಟ ಕುಸಿಯೋ ಆತಂಕ

ಇದಾದ ಬಳಿಕ ಟೆಂಡರ್ ರದ್ದು ಮಾಡಿದ್ರೂ, ಸದ್ಯ ಇನ್ನೂ ಶಿಕ್ಷಕರ ನೇಮಕವಾಗಿಲ್ಲ. ಇತ್ತ ತರಗತಿಗಳು ಶುರುವಾದ್ರೂ, ಶಿಕ್ಷಕರ ನೇಮಕವಾಗದೇ ಇರೋದು ಮಕ್ಕಳ ಶಿಕ್ಷಣದ ಮೇಲೆ ಪರಿಣಾಮ ಬೀರ್ತಿದೆ ಅನ್ನೋ ಆರೋಪ ಕೇಳಿಬರ್ತಿದೆ.ಸದ್ಯ, ಬಿಬಿಎಂಪಿ ವ್ಯಾಪ್ತಿಯಲ್ಲಿ ಸುಮಾರು 20 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದಾರೆ. ಈ ಮಕ್ಕಳಿಗೆ ಪಾಠ ಮಾಡೋದಕ್ಕೆ ಅಂತಾ ಪಾಲಿಕೆಯಲ್ಲಿ 150 ಕಾಯಂ ಶಿಕ್ಷಕರು ಮಾತ್ರ ಇದ್ದಾರೆ, ಉಳಿದ 700ಕ್ಕೂ ಹೆಚ್ಚು ಗುತ್ತಿಗೆ ಶಿಕ್ಷಕರು ಗುತ್ತಿಗೆ ಆಧಾರದ ಮೇಲೆ ಸೇವೆ ನೀಡ್ತಿದ್ರು, ಆದ್ರೆ ಗುತ್ತಿಗೆ ರದ್ದಾಗಿರೋದರಿಂದ ಶಿಕ್ಷಕರ ಕೊರತೆ ಎದುರಾಗಿದೆ.

ಇತ್ತ ಏಜೆನ್ಸಿ ರದ್ದು ಮಾಡಿದ ಬಳಿಕ ಖಆಒಆ ಮೂಲಕ ಶಿಕ್ಷಕರನ್ನ ನೇಮಿಸೋಕೆ ಸರ್ಕಾರ ಸಮಿತಿ ರಚನೆ ಮಾಡಿದೆ, ಈ ಸಮಿತಿ ಎಲ್ಲವನ್ನ ಪರಿಶೀಲಿಸಿ ಜೂನ್ 10ರೊಳಗೆ ಗುತ್ತಿಗೆ ಆಧಾರದಲ್ಲಿ ಶಿಕ್ಷಕರನ್ನ ನೇಮಿಸಬೇಕಿದೆ, ಆದ್ರೆ, ಈಗಾಗಲೇ ತರಗತಿಗಳು ಶುರುವಾಗಿದ್ದು, ಶಿಕ್ಷಕರ ನೇಮಕ ಆಗೋ ತನಕ ಮಕ್ಕಳು ಪಾಠ-ಪ್ರವಚನವಿಲ್ಲದೇ ಕಾಯೋ ಅನಿವಾರ್ಯತೆ ಎದುರಾಗಿದೆ.

## ಬೆಲೆ 69.50 ರೂ. ಇಳಿಕೆ

ಇಂಡಿಯನ್ ಆಯಿಲ್ ಕಾರ್ಪೊರೇಷನ್ (ಐಒಸಿ), ಭಾರತ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ (ಬಿಪಿಸಿಎಲ್) ಮತ್ತು ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ (ಎಚ್‌ಪಿಸಿಎಲ್) ಪ್ರತಿ ತಿಂಗಳ 1 ರಂದು ಅಡುಗೆ ಅನಿಲ ಬೆಲೆಗಳನ್ನು ಪರಿಷ್ಕರಿಸುತ್ತವೆ. ಬೆಲೆ ಇಳಿಕೆಯ ಹಿಂದಿನ ನಿಖರವಾದ ಕಾರಣಗಳನ್ನು ಬಹಿರಂಗಪಡಿಸಲಾಗಿಲ್ಲವಾದರೂ, ಅಂತರರಾಷ್ಟ್ರೀಯ ತೈಲ ಬೆಲೆಗಳಲ್ಲಿನ ಬದಲಾವಣೆಗಳು, ತೆರಿಗೆ ನೀತಿಗಳಲ್ಲಿನ ಬದಲಾವಣೆಗಳು ಮತ್ತು ಪೂರೈಕೆ-ಬೇಡಿಕೆ ಯಂತಹ ವಿವಿಧ ಅಂಶಗಳನ್ನು ಆಧಾರವಾಗಿಟ್ಟುಕೊಂಡು ಬೆಲೆ ಪರಿಷ್ಕರಿಸಲಾಗುತ್ತದೆ.

## ಭವಾನಿ ರೇವಣ್ಣಗೆ ಬಂಧನ ಭೀತಿ

ಎಸ್‌ಐಟಿ ಅಧಿಕಾರಿಗಳ ಪ್ರಶ್ನೆಗಳಿಗೆ ಪ್ರಜ್ವಲ್ ಉತ್ತರ ನೀಡದೇ ಅಸಹಕಾರ: ಮಹಿಳೆಯ ಅತ್ಯಾಚಾರ ಪ್ರಕರಣದಲ್ಲಿ ಬಂಧಿತನಾಗಿರುವ ಪ್ರಜ್ವಲ್ ರೇವಣ್ಣ ಅಪ್ಪನ ಹಾದಿಯಲ್ಲೇ ನಡೆದಿದ್ದಾರೆ. ಎಸ್‌ಐಟಿ ಕಚೇರಿಯಲ್ಲಿ ಎರಡನೇ ದಿನ ವಿಚಾರಣೆ ಎದುರಿಸಿರುವ ಪ್ರಜ್ವಲ್ ರೇವಣ್ಣ ಅಧಿಕಾರಿಗಳ ಯಾವುದೇ ಪ್ರಶ್ನೆಗೂ ಸೂಕ್ತ ಉತ್ತರ ನೀಡದೇ ಅಸಹಕಾರ ತೋರಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ.

ಪ್ರಕರಣ ಸಂಬಂಧ ಪ್ರಜ್ವಲ್ ರೇವಣ್ಣ ಅಧಿಕಾರಿಗಳಿಗೆ ಯಾವುದೇ ಸೂಕ್ತ ಉತ್ತರ ನೀಡಿಲ್ಲ ಎಂದು ಮೂಲಗಳು ತಿಳಿಸಿವೆ. ಇದು ರಾಜಕೀಯ ಪಿತೂರಿ. ಸುಖಾಸುಮ್ಮನೆ ನನ್ನನ್ನು ಪ್ರಕರಣದಲ್ಲಿ ಸಿಲುಕಿಸಲಾಗಿದೆ. ನಿಮ್ಮ ಕೆಲಸ ನೀವು ಮಾಡಿ. ನಾನೇನು ಹೇಳಲ್ಲ ಎಂದಿದ್ದಾರೆ ಎಂಬ ಮಾಹಿತಿ ಲಭ್ಯ ವಾಗಿದೆ.

ಎಸ್‌ಐಟಿ ಪ್ರಶ್ನೆಗಳಿಗೆ ಪ್ರಜ್ವಲ್ ನಮ್ಮ ಲಾಯರ್‌ನ ಕೇಳಬೇಕು ಎಂದು ಹೇಳಿದ್ದಾರೆ ಎನ್ನಲಾಗಿದೆ. ಶುಕ್ರವಾರ ಇಡೀ ದಿನದ ವಿಚಾರಣೆಯಲ್ಲಿ ಪ್ರಜ್ವಲ್ ಯಾವುದೇ ಪ್ರಶ್ನೆಗಳಿಗೆ ಉತ್ತರ ನೀಡಿಲ್ಲ. ತನಿಖಾಧಿಕಾರಿ ಎಷ್ಟೇ ಪ್ರಶ್ನೆ ಮಾಡಿದರೂ ನಮ್ಮ ಲಾಯರ್ ಕೇಳಬೇಕು ಎಂದು ಹೇಳಿದ್ದಾರೆ. ನನಗೂ ಪ್ರಕರಣಕ್ಕೂ ಸಂಬಂಧವಿಲ್ಲ. ನೀವು ಏನೇ ಪ್ರಶ್ನೆ ಕೇಳಿದರೂ ನಮ್ಮ ಲಾಯರ್ ಬಳಿ ಮಾತನಾಡಿ ಹೇಳುತ್ತೇನೆ. ಏನೇ ಉತ್ತರ ಕೊಡುವುದಿದ್ದರೂ ಲಾಯರ್ ಬಳಿ ಮಾತನಾಡಿ ಆ ನಂತರ ಉತ್ತರಿಸುತ್ತೇನೆ ಎಂದಿದ್ದಾರೆ ಎನ್ನಲಾಗಿದೆ.

ಮೊದಲನೇ ಪುಟದಿಂದ...

ಪ್ರಜ್ವಲ್ ರೇವಣ್ಣನನ್ನು ಶುಕ್ರವಾರ ಕೋರ್ಟ್ ಮುಂದೆ ಹಾಜರುಪಡಿಸಿದ್ದ ಎಸ್‌ಐಟಿ ಅಧಿಕಾರಿಗಳು ಆರು ದಿನಗಳ ಕಾಲ ಕಸ್ಟಡಿಗೆ ಪಡೆದಿದ್ದಾರೆ. ರಾತ್ರಿ 9 ಗಂಟೆ ತನಕ ವಿಚಾರಣೆ ನಡೆಸಿದ ಅಧಿಕಾರಿಗಳು, ನಂತರ ಊಟ ನೀಡಿದರು. ರಾತ್ರಿ 11:30 ತನಕ ಕೂತಿದ್ದ ಪ್ರಜ್ವಲ್ ನಂತರ ನಿದ್ದೆಗೆ ಜಾರಿದ್ದಾರೆ ಎನ್ನಲಾಗಿದೆ. ಇಂದು ಕೂಡ ವಿಚಾರಣೆ ನಡೆಸಲಿರುವ ಅಧಿಕಾರಿಗಳು ಭಾನುವಾರ ಅಥವಾ ಸೋಮವಾರ ಸ್ಥಳ ಮಹಜರು ಪ್ರಕ್ರಿಯೆಗೆ ಹಾಸನದ ಹೊಳೆನರಸೀಪುರಕ್ಕೆ ಕರೆದುಕೊಂಡು ಹೋಗುವ ಸಾಧ್ಯತೆ ಇದೆ.

## ಹೈಕೋರ್ಟ್ ಸೂಚನೆ

ಈ ಬಗ್ಗೆ ಮಾತಾನಾಡಿದ ಟ್ರಾಫಿಕ್ ಎಕ್ಸ್‌ಪರ್ಟ್ ಶ್ರೀ ಹರಿ ಎರಡ್ಮೂರು ಬಾರಿ ಅವಕಾಶ ಕೊಟ್ಟರು ನಮ್ಮ ಜನರು ಯಾಕೆ ಅಳವಡಿಸಿಕೊಳ್ಳಲು ಮುಂದಾಗಿಲ್ಲ ಅಂತ ಗೊತ್ತಾಗ್ತಿಲ್ಲ ಅಳವಡಿಸದ ವಾಹನ ಮಾಲೀಕರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು. ಒಟ್ನಲ್ಲಿ ರಾಜ್ಯ ಸಾರಿಗೆ ಇಲಾಖೆ ಏನೋ ಬೈಕ್ ಕಳ್ಳತನವನ್ನು ತಡೆಗಟ್ಟಲು ಎಲ್ಲಾ ಹಳೆಯ ವಾಹನಗಳಿಗೂ ಹೆಚ್ ಎಸ್‌ಆರ್ಪಿ ಕಡ್ಡಾಯಗೊಳಿಸಿದೆ. ಆದರೆ ಎರಡ್ಮೂರು ಸಲ ಗಡುವು ನೀಡಿದ್ರು, ಇಲ್ಲಿಯವರೆಗೆ ಕೇವಲ 41 ಲಕ್ಷ ವಾಹನ ಮಾಲೀಕರು ಮಾತ್ರ ಹಾಕಿಸಿಕೊಂಡಿದ್ದಾರೆ. ಜೂನ್ 12 ರೊಳಗಾದ್ರು, ಮಿಕ್ಕವರು ಹಾಕಿಸಿಕೊಳ್ತಾರ ಎಂದು ಕಾದು ನೋಡಬೇಕಿದೆ.

## ಪೊಲೀಸರನ್ನು ಕೇಳಿದ ಯುವಕ

ನೀವು ಹಸಿರು ಬಣ್ಣದಲ್ಲಿರುತ್ತೀರಿ, ಕೆಂಪು ಬಣ್ಣ ಅಲ್ಲ ಎಂದು ಹೇಳಿದ್ದಾರೆ. ವಿಶ್ವ ತಂಬಾಕು ರಹಿತ ದಿನದ ಸಂದರ್ಭದಲ್ಲಿ ಎಕ್ಸ್ ನಲ್ಲಿ ದೆಹಲಿ ಪೊಲೀಸರು ಆ ಯುವಕನ ಪೋಸ್ಟ್ ಜತೆಗೆ ಎರಡು ನಗುತ್ತಿರುವ ಎಮೋಟಿಕಾನ್ ಜತೆಗೆ ನೀವು ತಂಬಾಕು ಸೇವಿಸಿದಾಗ ಎಂದು ಬರೆದುಕೊಂಡಿದ್ದಾರೆ. ಈ ಚಿತ್ರ ''ತಂಬಾಕು ನಿಮ್ಮನ್ನು ಕೊಲ್ಲುವುದು ಮಾತ್ರವಲ್ಲ, ನಿಮ್ಮ ನಗುವನ್ನೂ ಸಹ ಕೊಲ್ಲುತ್ತದೆ ಎಂಬ ಅರ್ಥದಲ್ಲಿ ದೆಹಲಿ ಪೊಲೀಸರು ನೀಡಿದ್ದಾರೆ.

ಇದರ ಜತೆಗೆ ಪೊಲೀಸರು ತನ್ನ ಎಕ್ಸ್ ಖಾತೆಯಲ್ಲಿ ಅಮೆಜಾನ್ ಪ್ರೈಮ್ ವೀಡಿಯೊ ಸರಣಿಯ ದೃಶ್ಯವನ್ನು ಹಂಚಿಕೊಂಡಿದ್ದಾರೆ. ಮದ್ಯಪಾನ ಮಾಡಿ ವಾಹನ ಚಲಾಯಿಸಬೇಡಿ ಎಂಬುದನ್ನು ಈ ವಿಡಿಯೋ ಹೇಳುತ್ತದೆ.

## ನಾಲ್ವರ ಬಂಧನ

ನಾಲ್ವರು ತಮಿಳುನಾಡಿನಿಂದ ನಗರಕ್ಕೆ ಬಂದು ಸಣ್ಣಪುಟ್ಟ ಕೆಲಸ ಮಾಡಿಕೊಂಡಿದ್ದರು. ಈ ಪೈಕಿ ಮೋಹನ್ ಕುಮಾರ್ ಮತ್ತು ಅಮೃತ್ ಕುಮಾರ್ ತಮಿಳುನಾಡಿನಲ್ಲಿ ಅಪರಾಧ ಪ್ರಕರಣಗಳಲ್ಲಿ ಪಾಲ್ಗೊಂಡು ಬಂಧನಕ್ಕೆ ಒಳಗಾಗಿ ಜಾಮೀನಿನ ಮೇಲೆ ಬಿಡುಗಡೆಯಾಗಿದ್ದರು. ದುಶ್ಚಟಗಳ ದಾಸರಾಗಿರುವ ಆರೋಪಿಗಳು ಸುಲಭವಾಗಿ ಹಣ ಗಳಿಸುವ ಉದ್ದೇಶದಿಂದ ಅಪರಾಧ ಕೃತ್ಯಗಳನ್ನು ಮುಂದುವರೆಸಿದ್ದರು ಚಕ್ರ ವಾಹನಗಳ ಕಳ್ಳತನ, ಸುಲಿಗೆ ಸೇರಿದಂತೆ ಎಂಬುದು ವಿಚಾರಣೆಯಲ್ಲಿ ತಿಳಿದು ಬಂದಿದೆ.

**ಆರೋಪಿಗಳಿಂದ ಮೋಜು ಮಸ್ತಿ:** ರೋಪಿಗಳು ತಮಿಳುನಾಡಿನಿಂದ ಬಾಡಿಗೆ ಕಾರಿನಲ್ಲಿ ಬೆಂಗಳೂರಿಗೆ ಬರುತ್ತಿದ್ದರು. ಬಳಿಕ ಒಬ್ಬೊಬ್ಬರು ಒಂದೊಂದು ಪ್ರದೇಶದಲ್ಲಿ ಇಳಿದುಕೊಂಡು ಮನೆ ಎದುರು, ಪಾರ್ಕಿಂಗ್ ಸ್ಥಳಗಳಲ್ಲಿ ನಿಲುಗಡೆ ಮಾಡಿದ ದುಬಾರಿ ದ್ವಿಚಕ್ರ ವಾಹನಗಳನ್ನು ಗುರಿಯಾಗಿಸಿ ಹ್ಯಾಂಡಲ್ ಲಾಕ್ ಮುರಿದು ಕಳವು ಮಾಡಿಕೊಂಡು ತಮಿಳುನಾಡಿಗೆ ಪರಾರಿಯಾಗುತ್ತಿದ್ದರು. ಬಳಿಕ ತಮಿಳುನಾಡಿನ ವೇಲೂರು ಗುಡಿಯಾತ್ತಂ, ಮಾದನೂರು, ವಡ್ಡರೆಡ್ಡಿಪಾಳ್ಯ, ಸೇಂಗೋಡ್ರಂ ಸೇರಿದಂತೆ ಸುತ್ತಮುತ್ತಲ ಹಳ್ಳಿಗಳಲ್ಲಿ ಪರಿಚಿತರಿಗೆ ಕಡಿಮೆ ಬೆಲೆಗೆ ಮಾರಾಟ ಮಾಡಿ ಹಣ ಪಡೆಯುತ್ತಿದ್ದರು. ಬಳಿಕ ಹಣವನ್ನು ಹಂಚಿಕೊಂಡು ಮೋಜು-ಮಸ್ತಿ ಮಾಡಿ ವ್ಯಯಿಸುತ್ತಿದ್ದರು. ಹಣ ಖಾಲಿಯಾದ ಬಳಿಕ ಮತ್ತೆ ನಗರಕ್ಕೆ ಬಂದು ಕಳವು ಮಾಡಿ ಪರಾರಿಯಾಗುತ್ತಿದ್ದರು.

ಆರೋಪಿಗಳು ನೀಡಿದ ಮಾಹಿತಿ ಮೇರೆಗೆ ತಮಿಳುನಾಡಿನ ಸ್ಥಳೀಯ ಪೊಲೀಸರ ಸಹಕಾರ ಪಡೆದು 31 ದ್ವಿಚಕ್ರ ವಾಹನಗಳನ್ನು ಜಪ್ತಿ ಮಾಡಲಾಗಿದೆ. ಆರೋಪಿಗಳ ಬಂಧನದಿಂದ ಹೆಬ್ಬಗೋಡಿ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದ ಚಿನ್ನದ ಸರ ಸುಲಿಗೆ ಪ್ರಕರಣ ಪತ್ತೆಯಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಬಂಧನ

ಬದಲಾಯಿಸಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಅಪ್ರಾಪ್ತನ ರಕ್ತದ ಮಾದರಿ ಬದಲಿಗೆ ಆತನ ತಾಯಿಯ ರಕ್ತದ ಮಾದರಿಯನ್ನು ಪರೀಕ್ಷೆ ವೇಳೆ ಬದಲಾಯಿಸಲಾಗಿತ್ತು ಎಂದು ತನಿಖೆಯಿಂದ ತಿಳಿದುಬಂದಿದೆ ಎಂದು ಪೊಲೀಸ್ ಆಯುಕ್ತ ಅಮಿತೇಶ್ ಕುಮಾರ್ ಹೇಳಿದ್ದಾರೆ.

ಮೇ 19 ರಂದು ಪುಣೆಯ ಕಲ್ಯಾಣಿ ನಗರದಲ್ಲಿ ಅಪ್ರಾಪ್ತ ಪಾನಮತ್ತರಾಗಿ ಪೋರ್ಶೆ ಕಾರು ಚಲಾಯಿಸಿದ ಕಾರಣ ದ್ವಿಚಕ್ರ ವಾಹನಕ್ಕೆ ಡಿಕ್ಕಿಯಾಗಿ ಇಬ್ಬರು ಟೆಕ್ಕಿಗಳು ಸಾವನ್ನಪ್ಪಿದ್ದರು. ಅಪ್ರಾಪ್ತನ ಕುಟುಂಬದ ಚಾಲಕನನ್ನು ಅಪಹರಿಸಿ ತಾನೇ ತಪ್ಪು ಒಪ್ಪಿಕೊಳ್ಳುವಂತೆ ಆಮಿಷ ಒಡ್ಡಲಾಗಿತ್ತು. ಈ ಆರೋಪದಲ್ಲಿ ಈಗಾಗಲೇ ಬಾಲಕನ ತಂದೆ ಮತ್ತು ತಾತನನ್ನು ಪೊಲೀಸರು ಬಂಧಿಸಿದ್ದಾರೆ.

ಅಪರಾಧವನ್ನು ಮುಚ್ಚಿಡಲು ಪ್ರಭಾವಿ ಕುಟುಂಬ ನಡೆಸಿದ ಪ್ರಯತ್ನಗಳು ತನಿಖೆಯಿಂದ ತಿಳಿದುಬಂದಿದೆ. ಸರ್ಕಾರಿ ಸ್ವಾಮ್ಯದ ಸಸೂನ್ ಆಸ್ಪತ್ರೆಯಲ್ಲಿ ಅಪ್ರಾಪ್ತನ ವೈದ್ಯಕೀಯ ಪರೀಕ್ಷೆಯಲ್ಲೂ ಅಕ್ರಮಗಳು ನಡೆದಿವೆ.

### ಸಮಾಜ ಕಲ್ಯಾಣಾಧಿಕಾರಿ ಎನ್.ಬಿ.ಚಂದ್ರಶೇಖರ್ ಅಭಿಮತ

# ವೃತ್ತಿಯಲ್ಲಿ ಸಾರ್ಥಕತೆ ಮೆರೆದರೆ ನೆಮ್ಮದಿಯಿಂದಿರಲು ಸಾಧ್ಯ

**ಪಿರಿಯಾಪಟ್ಟಣ:** ವಿದ್ಯಾರ್ಥಿನಿಲಯಗಳು ಪಾಠ ಶಾಲೆಗಳಿದ್ದಂತೆ ನಿಲಯಪಾಲಕರು ಪೋಷಕರಷ್ಟೇ ಮಕ್ಕಳಲ್ಲಿನ ಪ್ರತಿಭೆಗಳನ್ನು ಗುರುತಿಸುವ, ಸಂಶೋಧಿಸುವ, ಅರಳಿಸುವ, ಪುರಸ್ಕರಿಸುವ, ಉತ್ತೇಜಿಸುವ ಶಕ್ತಿಯನ್ನು ಹೊಂದಿರುತ್ತಾರೆ ಎಂದು ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿ ಎನ್.ಬಿ.ಚಂದ್ರಶೇಖರ್ ತಿಳಿಸಿದರು.

ಪಟ್ಟಣದ ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯ ಸೇರಿದಂತೆ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯದಲ್ಲಿ ಸುದೀರ್ಘ 34 ವರ್ಷಗಳ ಕಾಲ ಶಿಕ್ಷಕರಾಗಿ, ನಿಲಯಪಾಲಕರಾಗಿ ಸೇವೆ ಸಲ್ಲಿಸಿ ಇತ್ತೀಚೆಗೆ ನಿವೃತ್ತರಾದ ಹೆಚ್.ರಾಜಯ್ಯ ರವರಿಗಾಗಿ ಏರ್ಪಡಿಸಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ಮಾತನಾಡಿದರು.

ಹುಟ್ಟು ಮತ್ತು ಸಾವು ಜೀವನದ ಅವಿಭಾಜ್ಯ ಅಂಗ. ಹುಟ್ಟಿದ ಪ್ರತಿಯೊಬ್ಬರು ಸಾಯಲೇ ಬೇಕು, ಆದರೆ ಹುಟ್ಟು ಮತ್ತು ಸಾವಿನ ನಡುವೆ ಸಮಾಜದಲ್ಲಿ ಇತರರಿಗೆ ಮಾದರಿಯಾಗಿ ಬದುಕುವುದು ತುಂಬ ಕಷ್ಟ, ಅಂತಹ ಕಷ್ಟದ ಹಾದಿಯಲ್ಲಿ ಬದುಕಿ ಹಿರಿಯರು ಮತ್ತು ಕಿರಿಯರು ಸೇರಿದಂತೆ ಎಲ್ಲರಿಂದಲೂ ಸಂಸ್ಕಾರಯುತ ವ್ಯಕ್ತಿ ಎಂದು ಬದುಕಿದವರಲ್ಲಿ ಸೀಗೂರು ರಾಜಯ್ಯ ರವರ ವ್ಯಕ್ತಿತ್ವ ಸಮಾಜಕ್ಕೆ ಮಾದರಿಯಾಗಿದೆ. ಯಾವುದೇ ನೌಕರರಿಗೆ



ತಮ್ಮ ಸೇವಾ ಅವಧಿಯಲ್ಲಿ ಮಾಡುವ ಕೆಲಸಗಳು ಅವರಿಗೆ ಗೌರವವನ್ನು ಹೆಚ್ಚಿಸುವಂತಿರಬೇಕು. ಅಂತಹ ಗೌರವ ಸಂಪಾದನೆಯಲ್ಲಿ ರಾಜಯ್ಯ ರವರು ಹೆಮ್ಮೆ ಪಡುವಂತಿದ್ದಾರೆ, ಅವರು ಬಡತನದಲ್ಲಿ ಹುಟ್ಟಿ ಕೃಷಿಕರಾಗಿ, ನಂತರ ನೌಕರರಾಗಿ ಸಮಾಜಸೇವಕರಾಗಿ ಗುರುತಿಸಿಕೊಂಡು ಸಮಾಜದಲ್ಲಿನ ಅನೇಕ ಅಸಹಾಯಕರಿಗೆ, ಅವಕಾಶ ವಂಚಿತ ವಿದ್ಯಾರ್ಥಿಗಳಿಗೆ ಆರ್ಥಿಕ ಸಹಾಯ ಮತ್ತು ಮಾನಸಿಕ ಸ್ಥೈರ್ಯ ತುಂಬುವ ಕೆಲಸ ಮಾಡಿದ್ದಾರೆ, ಇವರ ಶಿಷ್ಯಕೋಟಿ ಸಾಗರದಷ್ಟಿದ್ದು ಸರ್ಕಾರದಲ್ಲಿ ಗುರುತರವಾದ ಹುದ್ದೆಗಳನ್ನು ಅಲಂಕರಿಸುವ ಮುಲಕ ಸಮಾಜದ ಕಣ್ಣುಗಳಾಗಿರುವುದು ಹೆಮ್ಮೆಯ ಸಂಗತಿ, ಇಷ್ಟು ದೊಡ್ಡ ಅನುಭವವುಳ್ಳವರು ನಿವೃತ್ತಿಯಾಗಿರುವುದು ವೃತ್ತಿಗೆ ಒರತು ಪ್ರವೃತ್ತಿಗಲ್ಲ ಎಂದು ಭಾವಿಸಿ ಸಮಾಜಸೇವೆಯಲ್ಲಿ ತಮ್ಮನ್ನು ಹೆಚ್ಚಾಗಿ ತೊಡಗಿಸಿಕೊಳ್ಳುವ ಮೂಲಕ ನೊಂದವರಿಗೆ ಆಶ್ರಯವಾಗಬೇಕು ಎಂದರು.

ನಿಲಯಪಾಲಕ ಮೋಹನ್ ಕುಮಾರ್ ಮಾತನಾಡಿ ವ್ಯಕ್ತಿಗೆ ನಿವೃತ್ತಿ ಎನ್ನುವುದು ಮನಸ್ಥಿತಿ. ಕೆಲವರು ನೌಕರಿಯಲ್ಲಿದ್ದೆ ನಿವೃತ್ತಿಯಾಗುತ್ತಾರೆ. ಮನಾಸಿಕವಾಗಿ ನಿವೃತ್ತ ರಾಗುತ್ತಾರೆ. ಇನ್ನು ಕೆಲವು ನಿವೃತ್ತ ನೌಕರರು ಇತರರಿಗೆ ಮಾರ್ಗದರ್ಶನ ಮಾಡುತ್ತಾರೆ. ಈಗಲೂ ಕ್ರಿಯಾಶೀಲರಾಗಿದ್ದಾರೆ. ಮಾನಸಿಕವಾಗಿ ನಿವೃತ್ತರಾಗದವರು ಜೀವನದಲ್ಲಿ ಎಂದೂ ನಿವೃತ್ತ ರಾಗುವುದಿಲ್ಲ. ಸಮಾಜದ ಅಭಿವೃದ್ಧಿಗೆ ನಿವೃತ್ತ ನೌಕರರು ಕೊಡುಗೆ ನೀಡಬಹುದು. ಮನಸ್ಸಿಗೆ ಸಂತೋಷ ಕೊಡುವ ಕೆಲಸ ಮಾಡಲು ಅವಕಾಶವಿದೆ ಈ ನಿಟ್ಟಿನಲ್ಲಿ ರಾಜಯ್ಯ ರವರು ಚಿಂತಿಸಿ ಆಶ್ರಯ ನೀಡುವ ಆಲದಮರವಾಗಬೇಕು ಎಂದರು.

ನಿವೃತ್ತಿಹೊಂದಿದ ನಿಲಯಪಾಲಕ ಹೆಚ್.ರಾಜಯ್ಯ ಮಾತನಾಡಿ ನಾನು ಬಡತನದಲ್ಲಿ ಬೆಳೆದ ರೈತನ ಮಗ, ಅನಿವಾರ್ಯವಾಗಿ ನೌಕರರನಾಗುವ ಸಂದರ್ಭ ಒದಗಿ ಬಂತು, ನನ್ನ ವೃತ್ತಿ ಜೀವನದಲ್ಲಿ ವಿದ್ಯಾರ್ಥಿಗಳಿಂದ ಗಳಿಸಿರುವ ಪ್ರೀತಿ ನನ್ನಲ್ಲಿ ಹಜರಾಮರವಾಗಿರುತ್ತದೆ. ಬೀಳ್ಕೊಡುಗೆ ಎಂಬುದು ಒಂದು ವೃತ್ತಿಯಿಂದ ಸಿಗುವ ತಾತ್ಕಾಲಿಕ ಬಿಡುಗಡೆ ಅಷ್ಟೇ, ನನ್ನ ಸೇವಾ ಅವಧಿಯಲ್ಲಿ ವಿದ್ಯಾರ್ಥಿಗಳಿಂದ ಸಹಪಾಠಿಗಳಿಂದ ಹಲವು ವಿಚಾರಗಳನ್ನು ಕಲಿತು ಅದನ್ನು ಜೀವನದಲ್ಲಿ ಅಳವಡಿಸಿಕೊಂಡಿದ್ದೇನೆ ಅದನ್ನು ಎಂದಿಗೂ ಮರೆಯುವುದಿಲ್ಲ ಎಂದು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ನಿಲಯಪಾಲಕ ಮಹಾದೇವ್, ಸೇರಿದಂತೆ ಅನೇಕ ವಿದ್ಯಾರ್ಥಿಗಳು ರಾಜಯ್ಯ ರವರ ಬಗ್ಗೆ ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆ ವ್ಯವಸ್ಥಾಪಕಿ ದಮಯಂತಿ, ನಿಲಯ ಮೇಲ್ವಿಚಾರಕರಾದ ಬಿ.ಟಿ.ಮಹದೇವ್, ಪತ್ರಕರ್ತ ಎನ್.ಪಿ.ಹರೀಶ್ ಸೇರಿದಂತೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಸರ್ಕಾರಿ ಶಾಲೆಗಳು ಮಕ್ಕಳ ಆಕರ್ಷಣೀಯ ಕೇಂದ್ರಗಳಾಗಬೇಕು

**ತಿಪಟೂರು:** ತಾಲೂಕಿನ ಕಿಬ್ಬನಹಳ್ಳಿ ಹೋಬಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಕರಡಾಳು ಸಂತೆ ಮೈದಾನ ಶಾಲೆಯಲ್ಲಿ ಇಂದು ಶಾಲಾ ಪ್ರಾರಂಭೋತ್ಸವವನ್ನು ಏರ್ಪಡಿಸಲಾಗಿತ್ತು. ಈ ಸಂದರ್ಭದಲ್ಲಿ ಮಾತನಾಡಿದ ಶಾಲೆಯ ಮುಖ್ಯ ಶಿಕ್ಷಕರು ಹಾಗೂ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಘಟಕದ ಪ್ರಧಾನ ಕಾರ್ಯದರ್ಶಿ ಟಿ. ಕೆ ಪಟ್ಟಾಭಿರಾಮು ಸರ್ಕಾರವು ಸರ್ಕಾರಿ ಶಾಲೆಗಳ ಬಲವರ್ಧನೆಗೆ ಮತ್ತು ಗುಣಾತ್ಮಕ ಶಿಕ್ಷಣ ದೊರೆಯುವಂತಾಗಲು ಹಲವಾರು ಯೋಜನೆಗಳನ್ನು ಹಮ್ಮಿಕೊಂಡಿದ್ದು ಈ ಯೋಜನೆಗಳ ಸದುಪಯೋಗ ಪಡೆದುಕೊಂಡು ಮಕ್ಕಳು ಉತ್ತಮ ವ್ಯಾಸಂಗ ಮಾಡಿ ಅತ್ಯುತ್ತಮ ಪ್ರಜೆಗಳಾಗಿ ಮೂಡಿ ಬರಬೇಕು ಎಂದು ತಿಳಿಸಿದರು. ಹಾಗೂ ಸರ್ಕಾರಿ ಶಾಲೆಗಳು ಮಕ್ಕಳ ಆಕ?ಣೀಯ ಕೇಂದ್ರಗಳಾಗಬೇಕೆಂದು ತಿಳಿಸಿದರು. ಶಾಲೆಯ ಆವರಣವನ್ನು ಸ್ವಚ್ಛಗೊಳಿಸಿ ತಳಿರು ತೋರಣಗಳಿಂದ ಅಲಂಕರಿಸಲಾಗಿತ್ತು ಶಾಲೆಗೆ ಬರುವ ಎಲ್ಲಾ ಮಕ್ಕಳಿಗೂ ಎಸ್.ಡಿ.ಎಮ್.ಸಿ ಅಧ್ಯಕ್ಷ ಕೆ.ಎಲ್ ಗೋಪಿ ಹೂಗುಚ್ಛ ನೀಡಿ ಮಕ್ಕಳನ್ನು ಸ್ವಾಗತಿಸಿ ಪ್ರೀತಿಯಿಂದ ಬರಮಾಡಿಕೊಂಡರು. ಇಂದೇ ಮಕ್ಕಳಿಗೆ ಎರಡು ಜೊತೆ ಉಚಿತ ಸಮವಸ್ತ್ರ ಉಚಿತ ಪಠ್ಯ ಪುಸ್ತಕ ವಿತರಿಸಲಾಯಿತು. ಈ ಸಂದರ್ಭದಲ್ಲಿ ಶಾಲೆಯ ಹಿರಿಯ ವಿದ್ಯಾರ್ಥಿ ರಂಗನಾಥ್ ಗ್ರಾಮಸ್ಥರಾದ ಟೈಲರ್ ಶಿವಶಂಕ್ರಣ್ಣ ಎಸ್.ಡಿ.ಎಮ್.ಸಿ ಉಪಾಧ್ಯಕ್ಷೆ ಭಾಗ್ಯ ಉಪಸ್ಥಿತರಿದ್ದರು.



## ವ್ಯಕ್ತಿ ಪತ್ತೆಗೆ ಮನವಿ

**ರಾಮನಗರ;** ರಾಮನಗರ ಟೌನಿನ ಯಾರಬ್‌ನಗರದ ನಿವಾಸಿ ಮಹಮದ್ ಮಾಜ್ (22 ವರ್ಷ) ಕಾಣೆಯಾಗಿದ್ದಾರೆ ಎಂದು ಪೊಲೀಸ್ ಠಾಣೆಗೆ ದೂರು ದಾಖಲಾಗಿದೆ. ಚಹರೆಯ ವಿವರ:- 5.2 ಅಡಿ ಎತ್ತರ, ದುಂಡುಮುಖ, ಸಾಧಾರಣ ಮೈಕಟ್ಟು, ಗೋಧಿ ಮೈಬಣ್ಣ ಇವರು ಕಾಣೆಯಾಗುವಾಗ ಅರ್ಧ ತೋಳಿನ ಆಕಾಶ ಬಣ್ಣದ ಟೀ ಶರ್ಟ್ ಹಾಗೂ ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿರುತ್ತಾರೆ. ಇವರು ಕಂಡು ಬಂದರೆ ಆರಕ್ಷಕ ಉಪ ನಿರೀಕ್ಷಕರು, ರಾಮನಗರ ಪುರ ಪೊಲೀಸ್ ಠಾಣೆ, ರಾಮನಗರ ಜಿಲ್ಲೆ ಇವರನ್ನು ಸಂಪರ್ಕಿಸುವಂತೆ ಕೋರಲಾಗಿದೆ

### ರೈತ ಸಂಘದ ( ಮೂಲ ಸಂಘಟನೆ) ಕಾರ್ಯಕರ್ತರ ಒತ್ತಾಯ

# ಮುಂಗಾರು ಬೆಳೆಗೆ ನೀರು ಹರಿಸಿ

**ಪಾಂಡವಪುರ:** ವಿಶ್ವೇಶ್ವರಯ್ಯ ನಾಲಾ ಆಧುನೀಕರಣ ಕಾಮಗಾರಿಯು ಕಳಪೆಯಿಂದ ಎಂಬ ಆರೋಪದ ಹಿನ್ನೆಲೆಯಲ್ಲಿ ರೈತ ಸಂಘದ ( ಮೂಲ ಸಂಘಟನೆ) ಕಾರ್ಯಕರ್ತರು ಪಾಂಡವಪುರ ಬಳಿ ವಿಶ್ವೇಶ್ವರಯ್ಯ ನಾಲಾ ಆಧುನೀಕರಣ ಕಾಮಗಾರಿಯನ್ನು ವೀಕ್ಷಿಸಿ, ಶೀಘ್ರ ಕಾಮಗಾರಿ ಪೂರ್ಣಗೊಳಿಸಿ ಮುಂಗಾರು ಬೆಳೆಗೆ ತಕ್ಷಣ ನಾಲೆಗಳಿಗೆ ನೀರು ಹರಿಸುವಂತೆ ಸರ್ಕಾರವನ್ನು ಒತ್ತಾಯಿಸಿದರು.

ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಂಜೇಶ್ ಗೌಡ ನೇತೃತ್ವದಲ್ಲಿ ಪಾಂಡವಪುರಕ್ಕೆ ಬಂದ ಮದ್ದೂರು, ಮಳವಳ್ಳಿ, ಮಂಡ್ಯ ಹಾಗೂ ಶ್ರೀರಂಗಪಟ್ಟಣ ತಾಲೂಕುಗಳ ರೈತ ಸಂಘದ ನಿಯೋಗವು ಪಟ್ಟಣದ ಹಾರೋಹಳ್ಳಿ ಮತ್ತು ತಾಲೂಕಿನ ಎಲೆಕೆರೆ ಹ್ಯಾಂಡ್ಪೋಸ್ಟ್ ಬಳಿ ನಾಲಾ ಆಧುನೀಕರಣ ಕಾಮಗಾರಿಯನ್ನು ಪರಿಶೀಲಿಸಿ, ಕಾಮಗಾರಿ ಗುಣಮಟ್ಟದಿಂದ ಕೂಡಿರದೇ ಕಳಪೆ ಕಾಮಗಾರಿಯಿಂದ ಕೂಡಿದೆ ಎಂದು ಆಕ್ರೋಶವ್ಯಕ್ತಪಡಿಸಿದರು.

ಈ ವೇಳೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಂಜೇಶ್ ಗೌಡ ಸುದ್ದಿಗಾರರೊಂದಿಗೆ ಮಾತನಾಡಿ, ಜೂನ್ ಮಾಹೆಯಲ್ಲಿ ಮುಂಗಾರು ಪ್ರವೇಶ ಮಾಡುವುದರಿಂದ ರೈತರು ಕೃಷಿ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಅನುಕೂಲವಾಗುವ ದೃಷ್ಟಿಯಿಂದ ವಿಶ್ವೇಶ್ವರಯ್ಯ

ನಾಲಾ ಆಧುನೀಕರಣ ಕಾಮಗಾರಿಯನ್ನು ಸ್ಥಗಿತಗೊಳಿಸಿ, ನಾಲೆಯಲ್ಲಿ ಶೇಖರಣೆಗೊಂಡಿರುವ ಮಣ್ಣನ್ನು ತೆರವುಗೊಳಿಸಿ ನಾಲೆಗೆ ಕಟ್ಟುಪದ್ದತಿಯಲ್ಲಿ ನೀರು ಹರಿಸುವ ಮೂಲಕ ರೈತರು ಬೆಳೆ ಬೆಳೆಯಲು ಅನುವು ಮಾಡಿಕೊಡಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರನ್ನು ಆಗ್ರಹಿಸಿದರು.

ನಾಲೆ ಆಧುನೀಕರಣ ಕಾಮಗಾರಿಯು 43 ಕಿ.ಮೀ. ಉದ್ದದಷ್ಟು ನಡೆಯಬೇಕಿದ್ದು, ಈಗ 20 ಕಿ.ಮೀ. ಮಾತ್ರ ಕಾಮಗಾರಿ ಮುಗಿದಿದೆ. ಇನ್ನು ಉಳಿದ 23 ಕಿ.ಮೀ.ಕಾಮಗಾರಿಯು ಮುಗಿಯಬೇಕಿದ್ದರೆ ಕನಿಷ್ಠ 20?30 ದಿನಗಳಾದರೂ ಬೇಕಾಗಿದೆ. ಹೀಗಾದರೆ ರೈತರು ಮುಂಗಾರು ಬೆಳೆ ಬೆಳೆಯಲು ಕಷ್ಟವಾಗುತ್ತದೆ. ಕಳೆದ ಬಾರಿ ರೈತರು ಕೇವಲ ಮುಂಗಾರು ಬೆಳೆಯಲು ಸಾಧ್ಯವಾಗಿ, ಹಿಂಗಾರು ಬೆಳೆಗಳು ಒಣಗಿಹೋಗಿ ರೈತರು ಕಷ್ಟ ನಷ್ಟ ಅನುಭವಿಸಬೇಕಾಗಿ ಬಂತು. ಈಗಾಗಲೇ ತೆಂಗು, ಅಡಿಕೆ



### ಆಹೋರಾತ್ರಿ ಚಳವಳಿ ಎಚ್ಚರಿಕೆ

**ನಾಲಾ ಆಧುನೀಕರಣ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಿ ನಾಲೆಗೆ ನೀರು ಹರಿಸದಿದ್ದರೆ ನೀರಾವರಿ ಇಲಾಖೆಯ ಕಚೇರಿ ಎದುರು ಆಹೋರಾತ್ರಿ ಮಲಗುವ ಚಳವಳಿ ನಡೆಸಲಾಗುವುದು ಎಂದು ರೈತ ಸಂಘದ ಮುಖಂಡ ಕೆ.ಜಿ.ಉಮೇಶ್ ಎಚ್ಚರಿಸಿದರು. ನಿಯೋಗದಲ್ಲಿ ಜಿಲ್ಲಾ ಖಜಾಂಚಿ ಪ್ರಭುಲಿಂಗು, ಮುಖಂಡರಾದ, ತೇಜಸ್, ಚಿಕ್ಕಮರೀಗೌಡ, ಬೋರಲಿಂಗೇಗೌಡ, ರಾಮಲಿಂಗೇಗೌಡ, ನಂಜುಂಡಯ್ಯ ಕೀಳಘಟ್ಟ, ದೀವಿಪುರ ಬಸವರಾಜು, ದಸಂಸ ಮುಖಂಡ ಮೋಹನ ಮುಂಡಗದೊರೆ ಇತರರು ಇದ್ದರು.**

ಬೆಳೆಗಳು ನಾಶವಾಗಿವೆ ಎಂದು ಬೇಸರವ್ಯಕ್ತಪಡಿಸಿದರು.

ನಾಲೆ ಆಧುನೀಕರಣವು ನಾಲೆಯ ಕೊನೆಯ ಭಾಗದ ಮದ್ದೂರು, ಮಳವಳ್ಳಿ ಭಾಗಗಳಿಗೂ ಸಮರ್ಪಕವಾಗಿ ನೀರು ಕೊಡಬೇಕೆನ್ನುವ ಉದ್ದೇಶದಿಂದ ಪ್ರಾರಂಭವಾಗಿದೆ. ಹಲವು ಭಾಗಗಳಲ್ಲಿ ನಾಲಾ ಕಾಮಗಾರಿಯನ್ನು ವೀಕ್ಷಿಸಿದ್ದೇವೆ. ಆದರೆ ಕಾಮಗಾರಿಯು ಗುಣಮಟ್ಟದಿಂದ ಕೂಡಿಲ್ಲ ಎಂಬುದು ಮೇಲ್ನೋಟಕ್ಕೆ

ಕಂಡುಬರುತ್ತಿದೆ. ಜಿಲ್ಲಾಡಳಿತವು ಈ ಬಗ್ಗೆ ಗಮನಹರಿಸಿ ಕಾಮಗಾರಿ ಗುಣಮಟ್ಟ ಕಾಪಾಡಿಕೊಂಡು ತ್ವರಿತವಾಗಿ ಕಾಮಗಾರಿಯನ್ನು ಪೂರ್ಣಗೊಳಿಸಬೇಕು ಎಂದು ಒತ್ತಾಯಿಸಿದರು.

ರೈತ ಸಂಘದ ಮಾಧ್ಯಮ ಕಾರ್ಯದರ್ಶಿ ಸೊ.ಸಿ.ಪ್ರಕಾಶ್ ಮಾತನಾಡಿ, ಈಗ ವಾರದಿಂದ ಬಿದ್ದಿರುವ ಸಾಧಾರಣೆ ಮಳೆಗೆ ನಾಲಾ ಕಾಮಗಾರಿಯಲ್ಲಿ ಬಳಸಿರುವ ಸ್ಲ್ಯಾಬ್ಗಳು ಕಿತ್ತುಹೋಗುತ್ತಿವೆ. ಇಂತಹ ಸ್ಥಿತಿಯಲ್ಲಿ ಮುಂಗಾರು ಪ್ರಾರಂಭವಾಗಿ ನಾಲೆಗಳಲ್ಲಿ ನೀರು ರಭಸವಾಗಿ ಹರಿದು ಬಂದರೆ ನಾಲೆಗಳಲ್ಲಿ ಬಿರುಕು ಬಿಡುವ ಸಂಭವವಿದೆ. ಹೀಗಿರುವಾಗ ಕಾಮಗಾರಿಯನ್ನು ಗುಣಮಟ್ಟದಿಂದ ಪೂರ್ಣಗೊಳಿಸುವ ಬಗೆ ಹೇಗೆ ಎಂಬುದನ್ನು ಸರ್ಕಾರ ಯೋಚಿಸಿ ಕ್ರಮವಹಿಸಬೇಕಿದೆ ಎಂದು ಹೇಳಿದರು.

# ಹೈಕೋರ್ಟ್ ನ್ಯಾಯಾಮೂರ್ತಿ ರಾಜೇಂದ್ರ ಬಾದಾಮಿಕರ್‌ಗೆ ಬೀಳ್ಕೊಡುಗೆ

**ಬೆಂಗಳೂರು:** ನಿವೃತ್ತಿಯ ನಂತರವೂ ನ್ಯಾಯಮೂರ್ತಿಗಳಾದ ರಾಜೇಂದ್ರ ಬಾದಾಮಿಕರ್ ತಮ್ಮ ಸಲಹೆ ಸೂಚನೆಗಳಿಂದ ಸದಾ ನಿಮ್ಮೊಟ್ಟಿಗೆ ಇರುತ್ತಾರೆ ಎಂದು ಕರ್ನಾಟಕದ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳಾದ ನಿಲಯ್ ವಿಪಿನ್ಚಂದ್ರ ಅಂಜಾರಿಯಾ ತಿಳಿಸಿದರು.

ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಹಮ್ಮಿಕೊಳ್ಳಲಾಗಿದ್ದ ನ್ಯಾಯಮೂರ್ತಿ ರಾಜೇಂದ್ರ ಬಾದಾಮಿಕರ್ ಅವರ ಬೀಳ್ಕೊಡುಗೆ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

1962ರಲ್ಲಿ ಹುಬ್ಬಳ್ಳಿಯಲ್ಲಿ ಜನಿಸಿದ ರಾಜೇಂದ್ರ ಬಾದಾಮಿಕರ್ ಅವರು ತಮ್ಮ ಬಾಲ್ಯದ ವಿದ್ಯಾಭ್ಯಾಸವನ್ನು ಬಾಗಲಕೋಟೆ, ಹುಬ್ಬಳ್ಳಿಯಲ್ಲಿ ಪಡೆದರು. ಕಾನೂನು ಪದವಿಯನ್ನು ಜೆಎಸ್‌ಎಸ್ ಸಕ್ರಿ ಲಾ ಕಾಲೇಜು ಹುಬ್ಬಳ್ಳಿಯಲ್ಲಿ ಪಡೆದು 3ನೇ ರ್ಯಾಂಕ್ ಗಳಿಸಿದರು.

ನಂತರ 15-07-1987ರಲ್ಲಿ ಕರ್ನಾಟಕ ರಾಜ್ಯ ವಕೀಲರ ಪರಿಷತ್ನಲ್ಲಿ ನೋಂದಾಯಿಸಿ ಹಿರಿಯ ನ್ಯಾಯವಾದಿ ಶ್ರೀಕಾಂತ್ ಎಸ್ ಪಾಟೀಲ್ ಅವರ ಕಚೇರಿಯಲ್ಲಿ ವೃತ್ತಿ ಆರಂಭಿಸಿದರು. ಸಿವಿಲ್, ಕ್ರಿಮಿನಲ್ ವಿಭಾಗಗಳಲ್ಲಿ ಸೇವೆ ಸಲ್ಲಿಸಿದರು. 1993 ರಲ್ಲಿ ನ್ಯಾಯಾಧೀಶರಾಗಿ ಚಿಕ್ಕೋಡಿಯಲ್ಲಿ ಸೇವೆ ಸಲ್ಲಿಸಿ ನಂತರ 2002 ರಲ್ಲಿ ಸಿವಿಲ್ ನ್ಯಾಯಾಧೀಶರಾಗಿ ಹಾವೇರಿಯಲ್ಲಿ ಸೇವೆ ಸಲ್ಲಿಸಿದರು.

ಬೆಂಗಳೂರಿಗೆ ವರ್ಗಾವಣೆಗೊಂಡ ನಂತರ ಕಾನೂನು ಸೇವಾ ಪ್ರಾಧಿಕಾರಕ್ಕೆ ಉಪಕಾರ್ಯದರ್ಶಿಯಾಗಿ ಕರ್ತವ್ಯ



ನಿರ್ವಹಿಸಿ, ಸದಸ್ಯ ಕಾರ್ಯದರ್ಶಿಯಾಗಿ 2009 ರವರೆಗೂ ಸೇವೆ ಸಲ್ಲಿಸಿದರು. ತಮ್ಮ ಕಾರ್ಯಕ್ಷಮತೆ, ಪರಿಶ್ರಮದಿಂದ ನ್ಯಾಯಾಧೀಶ ರಾಜೇಂದ್ರ, ಬಾದಾಮಿಕರ್ ಅವರು ಜಿಲ್ಲಾ ನ್ಯಾಯಾಧೀಶರಾಗಿ ಪದೋನ್ನತಿ ಹೊಂದಿ, ಬೆಂಗಳೂರು, ಬೆಳಗಾವಿ, ಮೈಸೂರು ಜಿಲ್ಲೆಗಳಲ್ಲಿ ಕೆಲಸ ನಿರ್ವಹಿಸಿದರು. ಕೋಲಾರ ಮತ್ತು ತುಮಕೂರು ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾಗಿ ಸೇವೆ ಸಲ್ಲಿಸಿ, ಆನಂತರ ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಾಂಗ ವಿಭಾಗದ ರಿಜಿಸ್ಟ್ರಾರ್ ಹಾಗೂ ರಿಜಿಸ್ಟ್ರಾರ್ ಜನರಲ್ ಆಗಿಯೂ ತಮ್ಮ ಕರ್ತವ್ಯ ನಿರ್ವಹಿಸಿದರು.

ಅವರ ಉತ್ತಮ ಸೇವೆ ಪರಿಗಣಿಸಿ ನ್ಯಾಯಾಲಯವು 2021 ರಲ್ಲಿ ಕರ್ನಾಟಕ ಉಚ್ಚ ನ್ಯಾಯಲಯದ ಹೆಚ್ಚುವರಿ ನ್ಯಾಯಾಧೀಶರಾಗಿ ನೇಮಕ ಮಾಡಲಾಗಿದ್ದು ನಂತರ 2022 ರಲ್ಲಿ ಖಾಯಂ ನ್ಯಾಯಾಧೀಶರಾದರು. ಅವರು ತಮ್ಮ ಸೇವಾವಧಿಯಲ್ಲಿ ನೀಡಿದ ತೀರ್ಪುಗಳು ಇಂದಿಗೂ ಗಮನಾರ್ಹ ಎಂದರು.

ನಂತರ ಮಾತನಾಡಿದ ನ್ಯಾಯಮೂರ್ತಿ ರಾಜೇಂದ್ರ ಬಾದಾಮಿಕರ್ ಅವರು, ಸತ್ಯಮೇವ ಜಯತೆ ಹಾದಿಯಲ್ಲಿ ಸಾವಿರಾರು ಪ್ರಕರಣಗಳನ್ನು ನಡೆಸಿ, ಯಶಸ್ವಿಯಾಗಿದ್ದೇನೆ. ಯುವ ವಕೀಲರು ಹೆಚ್ಚು ಪ್ರಾಮಾಣಿಕ, ತ್ವರಿತ ಹಾಗೂ ನಿಷ್ಠೆಯಿಂದ ನಿರ್ವಹಿಸಬೇಕೆಂದರು. ತಮ್ಮ ವೃತ್ತಿ ಜೀವನದಲ್ಲಿ ಸಹಕರಿಸಿದ ಹಿರಿಯರಿಂದ ಕಿರಿಯವರೆಗೆ ವಂದನೆ ಸಮರ್ಪಿಸಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ವಕೀಲರ ಪರಿಷತ್ತಿನ ಅಧ್ಯಕ್ಷರಾದ ವಿಶಾಲ್ ರಘು ಸೇರಿದಂತೆ, ಹಿರಿಯ ನ್ಯಾಯಧೀಶರು, ವಕೀಲರು ಹಾಗೂ ರಾಜೇಂದ್ರ ಬಾದಾಮಿಕರ್ ಕುಟುಂಬದ ಸದಸ್ಯರು ಉಪಸ್ಥಿತರಿದ್ದರು.

## ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಆದೇಶ

**ರಾಮನಗರ:** 23-ಬೆಂಗಳೂರು ಗ್ರಾಮಾಂತರ ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಮತ ಎಣಿಕೆ ಕಾರ್ಯ ನಿಮಿತ್ತ ಭಾರತೀಯ ದಂಡ ಪ್ರಕ್ರಿಯೆ ಸಂಹಿತೆ 1973ರ ಕಲಂ 144 ರಲ್ಲಿನ ಪ್ರದತ್ತವಾದ ಅಧಿಕಾರದ ಮೇರೆಗೆ ರಾಮನಗರ ಜಿಲ್ಲೆಯಾದ್ಯಂತ ಜೂನ್ 4ರ ಬೆಳಿಗ್ಗೆ 12 ಗಂಟೆಯಿಂದ ಜೂನ್ 5ರ ಬೆಳಿಗ್ಗೆ 6 ಗಂಟೆಯವರೆಗೆ ಷರತ್ತುಗಳನ್ನು ವಿಧಿಸಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಡಾ. ಅವಿನಾಶ್ ಮೆನನ್ ರಾಜೇಂದ್ರನ್ ಅವರು ನಿಷೇದಾಜ್ಞೆ ಹೊರಡಿಸಿದ್ದಾರೆ. ಈ ಅವಧಿಯಲ್ಲಿ 5ಕ್ಕಿಂತ ಹೆಚ್ಚು ಜನರ ಗುಂಪು ಕೂಡಿ ಓಡಾಡುವುದನ್ನು ನಿಷೇಧಿಸಿದೆ. ಈ ನಿಷೇದಾಜ್ಞೆ ಇರುವ ಕಾರಣ ಪಟಾಕಿ, ಸಿಡಿಮದ್ದು ಹಾಗೂ ಇತರೆ ಸ್ಪೋಟಕಗಳನ್ನು ಉಪಯೋಗಿಸುವಂತಿಲ್ಲ. ಈ ಅವಧಿಯಲ್ಲಿ ಜೀವಕ್ಕೆ ಹಾನಿಯನ್ನುಂಟು ಮಾಡುವ ಮಾರಕಾಸ್ತ್ರಗಳನ್ನು ಹಿಡಿದುಕೊಂಡು ಓಡಾಡುವುದನ್ನು ನಿಷೇಧಿಸಿದೆ. ಕ್ಷಾರಪದಾರ್ಥ ಇಲ್ಲವೆ ಸ್ಪೋಟಕ ವಸ್ತುಗಳು, ಯಾವುದೇ ದಾಹಕ ವಸ್ತುಗಳು ಇತ್ಯಾದಿಗಳನ್ನು ಜೊತೆಗಿಟ್ಟುಕೊಂಡು ಹೋಗುವುದನ್ನು ಹಾಗೂ ಶೇಖರಿಸುವುದನ್ನು ನಿಷೇಧಿಸಲಾಗಿದೆ. ಈ ಅವಧಿಯಲ್ಲಿ ಯಾವುದೇ ಸಭೆ ಸಮಾರಂಭ ಅಥವಾ ಮೆರವಣಿಗೆಗಳನ್ನು ನಡೆಸುವುದನ್ನು ನಿಷೇಧಿಸಿದೆ. ಈ ಆದೇಶವು ಶವ ಸಂಸ್ಕಾರ, ಮದುವೆ ಹಾಗೂ ಧಾರ್ಮಿಕ ಸಭೆ ಸಮಾರಂಭಗಳಿಗೆ ಅನ್ವಯಿಸುವುದಿಲ್ಲ ಎಂದು ಆದೇಶದಲ್ಲಿ ತಿಳಿಸಿದ್ದಾರೆ.

## ಸಹಾಯವಾಣಿ ಸ್ಥಾಪನೆ

**ರಾಮನಗರ:** ಕರ್ನಾಟಕ ವಿಧಾನ ಪರಿಷತ್ತಿನ ಬೆಂಗಳೂರು ಪದವೀಧರರ ಕ್ಷೇತ್ರ, ಹಾಗೂ ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದ ದ್ವೈವಾರ್ಷಿಕ ಚುನಾವಣೆ 2024ರ ಸಂಬಂಧ ಚುನಾವಣಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಮತದಾರರಿಗೆ ಅನುಕೂಲವಾಗುವಂತೆ ಚುನಾವಣಾಧಿಕಾರಿಗಳು, ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರ ಕಚೇರಿ, ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ಸಹಾಯಕ ಚುನಾವಣಾಧಿಕಾರಿಗಳ ಕಚೇರಿಗಳಲ್ಲಿ ಸಹಾಯವಾಣಿಯನ್ನು ಸ್ಥಾಪಿಸಲಾಗಿದೆ. ಚುನಾವಣಾಧಿಕಾರಿಗಳ ಕಚೇರಿಯ ಸಹಾಯವಾಣಿ ಸಂಖ್ಯೆ: 080-22109665, ಬೆಂಗಳೂರು ಗ್ರಾಮಾಂತರ ಪದವೀಧರರ ಕ್ಷೇತ್ರದ ವ್ಯಾಪ್ತಿಯ ಸಹಾಯವಾಣಿ ಸಂಖ್ಯೆ: 080-29002025 ಹಾಗೂ ರಾಮನಗರ ಪದವೀಧರರ ಕ್ಷೇತ್ರದ ಸಹಾಯವಾಣಿ ಸಂಖ್ಯೆ: 080-27275946 ಆಗಿದೆ ಎಂದು ಪ್ರಾದೇಶಿಕ ಆಯುಕ್ತರು ಹಾಗೂ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದಾಖಲಾತಿ ಪ್ರಾರಂಭ

**ರಾಮನಗರ:** ರಾಮನಗರ ತಾಲ್ಲೂಕು ವ್ಯಾಪ್ತಿಯ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕ/ಬಾಲಕಿಯರು, ಸರ್ಕಾರಿ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿ ನಿಲಯಗಳು ಹಾಗೂ ಸರ್ಕಾರಿ ವಾಲ್ಮೀಕಿ ಆಶ್ರಮ ಶಾಲೆಗಳಿಗೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗದ ವಿದ್ಯಾರ್ತಿಗಳಿಗೆ ದಾಖಲು ಮಾಡಲು ದಾಖಲಾತಿ ಪ್ರಾರಂಭವಾಗಿದೆ. ದಾಖಲಾತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ರಾಮನಗರ ತಾಲ್ಲೂಕು. ಈ ಕಚೇರಿಯನ್ನು ಸಂಪರ್ಕಿಸುವಂತೆ ರಾಮನಗರ ತಾಲ್ಲೂಕಿನ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಚಾರ ನಿಯಮ ಉಲ್ಲಂಘಿಸಿದ್ದಲ್ಲಿ ದಂಡ

**ಮಂಡ್ಯ:** ಮಂಡ್ಯ ಜಿಲ್ಲಾ ಪೊಲೀಸ್ ವ್ಯಾಪ್ತಿಯಲ್ಲಿ ಬರುವ ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿ-275 ರ 5 ಸ್ಥಳಗಳಲ್ಲಿ ಖಿಙಖ ರೆಡಾರ್ ಕ್ಯಾಮರಗಳನ್ನು ಅಳವಡಿಸಲಾಗಿದ್ದು, ಇವುಗಳ ಮೂಲಕ ಸಂಚಾರ ನಿಯಮ ಉಲ್ಲಂಘನೆ ಮಾಡಲಾದ ವಾಹನಗಳನ್ನು ಗುರುತಿಸಿ ದಂಡ ವಿಧಿಸಲಾಗುವುದು. ಸಂಚಾರಿ ನಿಯಮಗಳ ಉಲ್ಲಂಘನೆ ಕುರಿತಂತೆ ದಾಖಲಾಗುವ ಪ್ರಕರಣಗಳನ್ನು ತಕ್ಷಣವೇ ಸದರಿ ವಾಹನದ ನೋಂದಾಯಿತ ಮೊಬೈಲ್ ಸಂಖ್ಯೆಗೆ ಎಸ್ ಎಂ ಎಸ್ ಮೂಲಕ ಮಾಹಿತಿ ರವಾನೆಯಾಗಲಿದ್ದು, ವಾಹನಗಳ ಮಾಲೀಕರು ಹಾಗೂ ಚಾಲಕರು ಜೂನ್ 1 ರಿಂದ ಸ್ಥಳ ದಂಡ ಪಾವತಿ ಹಾಗೂ https://payfine.mchallan.com:7271 ರ ವೆಬ್ ಸೈಟ್ ಮೂಲಕ ದಂಡ ಪಾವತಿ ಮಾಡಬಹುದಾಗಿರುತ್ತದೆ. ಆದ್ದರಿಂದ ಸಾರ್ವಜನಿಕರು ಸಂಚಾರಿ ನಿಯಮಗಳನ್ನು ಉಲ್ಲಂಘಿಸದೆ, ನಿಯಮ ಪಾಲಿಸಬೇಕೆಂದು ತಿಳಿಸಿದೆ.

## ಕಾಣೆಯಾದವರ ಪತ್ತೆಗಾಗಿ

**ಮಂಡ್ಯ:** ಶ್ರೀರಂಗಪಟ್ಟಣ ತಾಲ್ಲೂಕು ಬಲ್ಲೇನಹಳ್ಳಿ ಗ್ರಾಮದ ಕುಮಾರ ಆರ್ (65), ಎಂಬುವವರು ಕಾಣೆಯಾಗಿದ್ದಾರೆ ಎಂದು ಶ್ರೀರಂಗಪಟ್ಟಣ ಟೌನ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿರುತ್ತದೆ. ಕಾಣೆಯಾದ ವ್ಯಕ್ತಿಯು 6.4 ಅಡಿ ಎತ್ತರ ಎಣ್ಣೆಗೆಂಪು ಮೈ ಬಣ್ಣ, ಸಾಧಾರಣ ಮೈಕಟ್ಟು, ಮೂಗಿನ ಮೇಲೆ ಹಳೆ ಗಾಯಕ್ಕೆ ಹೋಲಿಕೆ ಹಾಕಿರುವ ಗುರುತು ಇರುತ್ತದೆ. ಇವರ ಸುಳಿವು ಸಿಕ್ಕಲ್ಲಿ ದೂ.ಸಂ: 08232-22488, 9480804800 ನ್ನು ಸಂಪರ್ಕಿಸಬಹುದು ಎಂದು ಶ್ರೀರಂಗಪಟ್ಟಣ ಟೌನ್ ಪೊಲೀಸ್ ಠಾಣೆ ಸಬ್ ಇನ್ಸ್‌ಪೆಕ್ಟರ್ ಅವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಸದಸ್ಯರ ಆಯ್ಕೆಗೆ ಅರ್ಜಿ ಆಹ್ವಾನ

**ರಾಮನಗರ:** ಮ್ಯಾನ್ಯುಯಲ್ ಸ್ಕಾವೆಂರ್ಸ್ಗ ಳ ನೇಮಕಾತಿ ನಿಷೇಧ ಮತ್ತು ಅವರ ಪುನರ್ವಸತಿ ಅಧಿನಿಯಮ 2013ರ ಸೆಕ್ಷನ್-24ರಡಿ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಮ್ಯಾಜಿಸ್ಟ್ರೇಟರ್ ರವರ ಅಧ್ಯಕ್ಷತೆಯಲ್ಲಿ ಸಾಮಾಜಿಕ ಕಾರ್ಯಕರ್ತರುಗಳ ನಾಮನಿರ್ದೇಶನ ಮತ್ತು ಜಿಲ್ಲಾ ಮಟ್ಟದ ಜಾಗೃತಿ ಮತ್ತು ಮೇಲ್ವಿಚಾರಣಾ ಸಮಿತಿ ಸಭೆಗೆ ಶಾಶ್ವತ ಆಹ್ವಾನಿತರುಗಳ ನಾಮನಿರ್ದೇಶನಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯಲ್ಲಿ ಪೂರ್ಣ ವಿವರವನ್ನು ನಮೂದಿಸಿ, ಪೂರಕ ದಾಖಲೆಗಳ ಸಹಿತ ಜೂನ್ 17 ರೊಳಗೆ ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ರಾಮನಗರ ಜಿಲ್ಲೆ, 2ನೇ ಮಹಡಿ, ಪಂಚಾಯತ್ ಭವನ, ಬಿ.ಎಂ. ರಸ್ತೆ, ರಾಮನಗರ ಇವರಿಗೆ ಸಲ್ಲಿಸುವಂತೆ ತಿಳಿಸಿದೆ. ಹೆಚ್ಚಿನ ಮಾಹಿತಿಗೆ ಜಂಟಿ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ರಾಮನಗರ ಜಿಲ್ಲೆ ಈ ಕಚೇರಿಯನ್ನು ಸಂಪರ್ಕಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವರುಣ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಯತೀಂದ್ರ ಸಿದ್ರಾಮಯ್ಯ ವಿಶ್ವಾಸ

# ಕಾಂಗ್ರೆಸ್‌ನ ಮರಿತಿಬ್ಬೆಗೌಡ್ರ ಗೆಲುವು ನಿಶ್ಚಿತ

**ತಾಂಡವಪುರ:** ಜೂನ್ ಮೂರರಂದು ನಡೆಯಲಿರುವ ದಕ್ಷಿಣ ಶಿಕ್ಷಕರ ಕ್ಷೇತ್ರದಿಂದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧೆ ಮಾಡಿರುವ ಮರಿ ತಿಬ್ಬೆಗೌಡರ ಗೆಲುವು ನಿಶ್ಚಿತ ಎಂದು ವರುಣ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕರು ಹಾಗೂ ಆಶ್ರಯ ಸಮಿತಿಯ ಅಧ್ಯಕ್ಷರಾದ ಡಾಕ್ಟರ್ ಯತೀಂದ್ರ ಸಿದ್ರಾಮಯ್ಯನವರು ವಿಶ್ವಾಸ ವ್ಯಕ್ತಪಡಿಸಿದರು

ಅವರು ಮೈಸೂರು ಜಿಲ್ಲೆ ನಂಜನಗೂಡು ತಾಲೂಕು ವರುಣ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ತಾಂಡವಪುರ ಮಲ್ಲುಪುರ ದಾಸನೂರು ಕಾರ್ಯ ಎಸ್ ಹೊಸಕೋಟೆ ತಗಡೂರು ಸುತ್ತೂರು ಗ್ರಾಮಗಳ ಪ್ರೌಢಶಾಲೆಯ ಶಿಕ್ಷಕ ಮತದಾರರನ್ನು ಭೇಟಿ ಮಾಡಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪರ ಮತಯಾಚನೆ ಮಾಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಡಾಕ್ಟರ್ ಯತಿಂದ್ರ ಸಿದ್ರಾಮಯ್ಯನವರು ಮರಿತಿಬ್ಬೆಗೌಡರು ಮೂರು ಬಾರಿ ಗೆಲುವನ್ನು ಸಾಧಿಸಿ ಈ ಕ್ಷೇತ್ರದಲ್ಲಿ ಅನುಭವ ಹೊಂದಿದ್ದಾರೆ ಶಿಕ್ಷಕರ ಕಷ್ಟ ಸುಖಗಳ ಬಗ್ಗೆ ಅವರಿಗೆ ಅರಿವಿದ್ದು ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಅವರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಹಲವಾರು ಬಾರಿ ಸರ್ಕಾರದ ಗಮನಕ್ಕೆ ತಂದು ಶಿಕ್ಷಕರ ಸಮಸ್ಯೆಗಳನ್ನು ಬಗೆಹರಿಸಿದ್ದಾರೆ ಆದ್ದರಿಂದ ಈ ಬಾರಿಯ ದಕ್ಷಿಣ ಶಿಕ್ಷಕರ ಕ್ಷೇತ್ರದಿಂದ ಮರಿತಿಬ್ಬೆಗೌಡರ ಗೆಲ್ಲಿಸಿ ಮತ್ತೊಮ್ಮೆ ತಮ್ಮ ಸೇವೆ ಮಾಡಲು ಅವಕಾಶ



ಮಾಡಿಕೊಳ್ಳಬೇಕೆಂದು ಶಿಕ್ಷಕ ಮತದಾರರಲ್ಲಿ ಡಾಕ್ಟರ್ ಯತೀಂದ್ರ ಸಿದ್ರಾಮಯ್ಯನವರು ಮನವಿ ಮಾಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷರಾದ ಬಿ ಎಂ ರಾಮು ವಾಲ್ಮೀಕಿ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಎಸ್ ಸಿ ಬಸವರಾಜು ತಗಡೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಂಗಸ್ವಾಮಿ ವರುಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಮೇಶ್ ಮುದ್ದೇಗೌಡ ಜಿಲ್ಲಾ ಪಂಚಾಯತಿ ಮಾಜಿ ಸದಸ್ಯ ರೇವಮ್ಮ ಮಾದೇಗೌಡ ತಾಲೂಕು ಗ್ರಾಮ ಪಂಚಾಯತಿ ಮಾಜಿ ಉಪಾಧ್ಯಕ್ಷರಾದ ಬಿ ಪಿ ಮಹದೇವ್ ಯಬ್ಯಾ ರಾಜಣ್ಣ ಗ್ರಾಮ ಪಂಚಾಯಿತಿ ಅಧ್ಯಕ್ಷ ನಾಗಮ್ಮ ಪಂಚಾಯಿತಿ ಸದಸ್ಯರಾದ ಎನ್ ಚಂದ್ರು ಪ್ರಭುಸ್ವಾಮಿ ಶ್ರೀಕಂಠ ಸ್ವಾಮಿ ಎಂ ದಕ್ಷಿಣ ಮೂರ್ತಿ ಮೈಸೂರು ಜಿಲ್ಲಾ ಹಿರಿಯ ಕಾಂಗ್ರೆಸ್ ಮುಖಂಡ ಸ ಕಳ್ಳಿ ಬಸವರಾಜು ದಾಸನೂರು ಪದ್ಮನಾಭ ಮಲ್ಲುಪುರ ಪ್ರಕಾಶ್ ತಗಡೂರು ಆರ್ ಮಹದೇವು ಸುತ್ತೂರು ಸೋಮಣ್ಣ ರವಿ ಗುರುಪಾದು ಜಗದೀಶ್ ಶಿವರಾಮು ಹೊಸಕೋಟೆ ರಮೇಶ್ ಅರ್ಕೇಶ್ ಅಣ್ಣಯ್ಯ ಬಿದರಗೂಡು ಮಾದೇವಸ್ವಾಮಿ ಬೀರಪ್ಪ ಧರ್ಮ ನಟರಾಜು ಶಾಲಾ ಅಭಿವೃದ್ಧಿ ಸಮಿತಿಯ ಅಧ್ಯಕ್ಷ ಎಸ್ ರವಿ ಅಹಲ್ಯ ಪ್ರಭು ಹಾಜರಿದ್ದರು.

### ಬೆಂಗಳೂರು ಪದವೀಧರರ ಕ್ಷೇತ್ರ, ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದ ದ್ವೈವಾರ್ಷಿಕ ಚುನಾವಣೆ

# ಮತದಾರರಿಗೆ ಸಹಾಯವಾಣಿ

**ಬೆಂಗಳೂರು:** ಭಾರತ ಚುನಾವಣಾ ಆಯೋಗವು ಕರ್ನಾಟಕ ವಿಧಾನ ಪರಿಷತ್ತಿನ ಬೆಂಗಳೂರು ಪದವೀಧರರ ಕ್ಷೇತ್ರ ಹಾಗೂ ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದ ದ್ವೈವಾರ್ಷಿಕ ಚುನಾವಣೆ-2024ರ ಸಂಬಂಧ ಜೂನ್ 3 ರಂದು ಮತದಾನ ನಡೆಯಲಿದೆ. ಬೆಂಗಳೂರು ಪದವೀಧರರ ಕ್ಷೇತ್ರದ ವ್ಯಾಪ್ತಿಗೆ ಬೃಹತ್ ಬೆಂಗಳೂರು ಮಹಾನಗರಪಾಲಿಕೆ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಗಳು ಹಾಗೂ ಕರ್ನಾಟಕ ಆಕ್ನೇಯ ಶಿಕ್ಷಕರ ಕ್ಷೇತ್ರದ ವ್ಯಾಪ್ತಿಗೆ ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ ಮತ್ತು ದಾವಣಗೆರೆ (ಹರಿಹರ, ದಾವಣಗೆರೆ ಮತ್ತು ಜಗಳೂರು ತಾಲ್ಲೂಕುಗಳು ಮಾತ್ರ) ಜಿಲ್ಲೆಗಳು ಒಳಪಡುತ್ತವೆ.

ಚುನಾವಣಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಮತದಾರರಿಗೆ ಅನುಕೂಲವಾಗುವಂತೆ ಚುನಾವಣಾಧಿಕಾರಿಗಳು ಹಾಗೂ ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರ ಕಛೇರಿಯಲ್ಲಿ ಮತ್ತು ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ಸಹಾಯಕ ಚುನಾವಣಾಧಿಕಾರಿಗಳ ಕಛೇರಿಗಳಲ್ಲಿ ಸಹಾಯವಾಣಿಯನ್ನು ಸ್ಥಾಪಿಸಲಾಗಿರುತ್ತದೆ.

ಚುನಾವಣಾಧಿಕಾರಿಗಳ ಕಛೇರಿಯ ಸಹಾಯವಾಣಿ ಸಂಖ್ಯೆ: 080-22109665, ಬೆಂಗಳೂರು ಪದವೀಧರ ಕ್ಷೇತ್ರದ ಜಿಲ್ಲಾಧಿಕಾರಿಗಳು / ಸಹಾಯಕ ಚುನಾವಣಾಧಿಕಾರಿಗಳ ಕಛೇರಿ ಸಹಾಯವಾಣಿ ಬೆಂಗಳೂರು ನಗರ ಜಿಲ್ಲೆ - 080-22211106, ಬಿ.ಬಿ.ಎಂ.ಪಿ. ಪೂರ್ವ (ಉತ್ತರ) -9480685702, ಬಿ.ಬಿ.ಎಂ.ಪಿ. ದಕ್ಷಿಣ ? 080-26566362, ಬಿ.ಬಿ.ಎಂ.ಪಿ. ಕೇಂದ್ರ 1950, ಬೆಂಗಳೂರು ಗ್ರಾಮಾಂತರ -080-29002025, ರಾಮನಗರ 080-27275946 ಹಾಗೂ ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರ ವ್ಯಾಪ್ತಿಯ ಜಿಲ್ಲಾಧಿಕಾರಿಗಳು / ಸಹಾಯಕ ಚುನಾವಣಾಧಿಕಾರಿಗಳ ಕಛೇರಿ ಸಹಾಯವಾಣಿ ವಿವರ ದಾವಣಗೆರೆ 1800-4250380, ಚಿತ್ರದುರ್ಗ 08194-1950, ತುಮಕೂರು 08162-273595, ಚಿಕ್ಕಬಳ್ಳಾಪುರ 08156-277071 ಮತ್ತು ಕೋಲಾರ 08152-243507. ಚುನಾವಣೆಗೆ ಸಂಬಂಧಿಸಿದಂತೆ ಪ್ರಜಾ ಪ್ರತಿನಿಧಿ ಕಾಯ್ದೆ, 1951ರ ಸೆಕ್ಷನ್ 135(ಸಿ) ರಡಿಯಲ್ಲಿ ಭಾರತ ಚುನಾವಣಾ ದಿನಾಂಕ: 26-12-2016 ರ ಪತ್ರದಲ್ಲಿನ ಕ್ರಮ ಸಂಖ್ಯೆ: 03ರ ಅಂಶ (ಫಿಖಗಿ)ರಲ್ಲಿನ ನಿರ್ದೇಶನಗಳಂತೆ, ಮತದಾನ ಅಂತ್ಯಗೊಳ್ಳುವ 48 ಗಂಟೆಗಳ ಪೂರ್ವದಿಂದ ಜೂನ್ 1 ರ ಅಪರಾಹ್ನ 4 ಗಂಟೆಯಿಂದ ಮತದಾನದ ಪ್ರಕ್ರಿಯೆ ಮುಕ್ತಾಯಗೊಳ್ಳುವವರೆಗೂ ಸಹ ಚುನಾವಣಾ ಕ್ಷೇತ್ರದ ವ್ಯಾಪ್ತಿಯಲ್ಲಿ ಶುಷ್ಕ ದಿನವನ್ನು ಘೋಷಿಸಲಾಗಿರುತ್ತದೆ. ಈ ಅವಧಿಯಲ್ಲಿ ಮದ್ಯ ಮಾರಾಟವನ್ನು ನಿ??ಧಿಸಲಾಗಿದ್ದು, ಎಲ್ಲಾ ಮದ್ಯದ ಅಂಗಡಿಗಳನ್ನು ಮುಚ್ಚಲು ಆದೇಶಿಸಲಾಗಿದೆ. ಚುನಾವಣಾ ನಿಯಮಾವಳಿಗಳ ಅನ್ವಯ ಮತದಾನ ಅಂತ್ಯಗೊಳ್ಳುವ 48 ಗಂಟೆಗಳ ಪೂರ್ವದಲ್ಲಿ ಜೂನ್ 1 ರ ಅಪರಾಹ್ನ 4-00 ಗಂಟೆಗೆ ಚುನಾವಣಾ ಬಹಿರಂಗ ಪ್ರಚಾರ ಅಂತ್ಯಗೊಳ್ಳಲಿದ್ದು, ನಂತರದಲ್ಲಿ ಯಾವುದೇ ರಾಜಕೀಯ ಪಕ್ಷಗಳು ಅಥವಾ ಅಭ್ಯರ್ಥಿಗಳು ಬಹಿರಂಗ ಪ್ರಚಾರ ಕೈಗೊಳ್ಳುವುದನ್ನು ನಿಷೇಧಿಸಿದೆ ಎಂದು ಚುನಾವಣಾಧಿಕಾರಿ ಹಾಗೂ ಪ್ರಾದೇಶಿಕ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲೋಕಸಭಾ ಚುನಾವಣೆಯ ಮತ ಎಣಿಕೆ ಹಿನ್ನೆಲೆ ನಿಷೇಧಾಜ್ಞೆ ಜಾರಿ

**ಮೈಸೂರು:** ಜೂ.04 ರಂದು ಲೋಕಸಭೆ ಚುನಾವಣೆಯ ಮತಎಣಿಕೆ ಕಾರ್ಯವು ಮೈಸೂರು ನಗರದ ಪಡುವಾರಹಳ್ಳಿಯ ವಾಲ್ಮೀಕಿ ರಸ್ತೆ ಜಂಕ್ಷನ್ನ ಮಹಾರಾಣಿ ಕಾಲೇಜಿನಲ್ಲಿ ನಡೆಯಲಿದ್ದು, ಕಾರ್ಯವು ಸುಗಮವಾಗಿ ನಡೆಯಲು ಹಾಗೂ ಮೈಸೂರು ನಗರದಾದ್ಯಂತ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಹಾಗೂ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಮುಂಜಾಗ್ರತಾ ಕ್ರಮವಾಗಿ ಜೂ.03 ರ ಮಧ್ಯರಾತ್ರಿ 12 ಗಂಟೆಯಿಂದ ಜೂ.05 ರ ಬೆಳಗ್ಗೆ 06 ಗಂಟೆಯವರೆಗೆ ಮೈಸೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿ ಕಲಂ 144 ರನ್ವಯ ನಿಷೇಧಾಜ್ಞೆಯನ್ನು ಹೊರಡಿಸಲಾಗಿರುತ್ತದೆ.

ಈ ದಿನಗಂಳದು ಚುನಾಯಿತ ಅಭ್ಯರ್ಥಿಗಳ ವಿಜಯೋತ್ಸವ ಮೆರವಣಿಗೆ, ಸಾರ್ವಜನಿಕ ಸ್ಥಳಗಳಲ್ಲಿ ಹಾಗೂ ವಾಸದ ಮನೆಗಳ ಮುಂದೆ ಪಟಾಕಿಗಳನ್ನು ಸಿಡಿಸುವುದು, ಮತ ಎಣಿಕೆ ಕೇಂದ್ರದಲ್ಲಿ ಅನಧಿಕೃತ ವ್ಯಕ್ತಿಗಳ ಪ್ರವೇಶ ಹಾಗೂ ಮತ ಎಣಿಕೆ ಕೇಂದ್ರದ 200 ಮೀಟರ್ ವ್ಯಾಪ್ತಿ ಪ್ರದೇಶದ ಸುತ್ತಲೂ ಐದು ಮಂದಿಗಿಂತ ಹೆಚ್ಚು ಜನ ಗುಂಪುಗೂಡುವುದು, ಸಭೆ ಸಮಾರಂಭಗಳನ್ನು ನಡೆಸುವುದು, ಯಾವುದೇ ವ್ಯಕ್ತಿ ತನ್ನೊಂದಿಗೆ ಸ್ಫೋಟಕ ವಸ್ತು ಮತ್ತು ಇನ್ನಿತರ ಮಾರಕಾಸ್ತ್ರಗಳನ್ನು ಒಯುವುದು, ಯಾವುದೇ ಮೆರವಣಿಗೆ ನಡೆಸುವುದು ಹಾಗೂ ಪ್ರಚೋದನಾಕಾರಿ ಭಾಷಣ ಮಾಡುವುದು, ಧ್ವನಿವರ್ಧಕ, ಡಿ.ಜೆ. ಉಪಯೋಗಿಸುವುದು ಮತ್ತು ಬೈಕ್ ರ್ಯಾಲಿ ನಡೆಸುವುದನ್ನು ನಿಷೇಧಿಸಲಾಗಿದ್ದು, ಈ ಆದೇಶವು ಮದುವೆ ಸಮಾರಂಭಗಳಿಗೆ, ಧಾರ್ಮಿಕ ಮತ್ತು ಶವಸಂಸ್ಕಾರಗಳಿಗೆ ಹಾಗೂ ಶಾಲಾ-ಕಾಲೇಜು ಪರೀಕ್ಷೆಗೆ ತೆರಳುವವರಿಗೆ ಅನ್ವಯಿಸುವುದಿಲ್ಲ ಎಂದು ಮೈಸೂರು ನಗರ ಪೊಲೀಸ್ ಆಯುಕ್ತರಾದ ರಮೇಶ್.ಬಿ ತಿಳಿಸಿದ್ದಾರೆ.

## ನಾಳೆ ಮೈಸೂರಿನ ಹಲವೆಡೆ ವಿದ್ಯುತ್ ವ್ಯತ್ಯಯ

**ಮೈಸೂರು:** ಜೂ.02 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5:30 ಗಂಟೆಯವರೆಗೆ ಕಡಕೊಳ ವಿದ್ಯುತ್ ಸ್ವೀಕರಣಾ ಕೇಂದ್ರ ಮತ್ತು ಎಫ್.ಟಿ.ಎಸ್ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ಕ.ವಿ.ಪ್ರ.ನಿ.ನಿ. ವತಿಯಿಂದ 1ನೇ ತ್ರೈಮಾಸಿಕ ಅವಧಿಯ ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿದ್ದು, ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಕಡಕೊಳ ವಿ.ವಿ ಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯವಾಗಲಿರುವ ಮುಖ್ಯ ಪ್ರದೇಶಗಳು: ಕಡಕೊಳ, ಬ್ಯಾತಹಳ್ಳಿ, ದಡದಹಳ್ಳಿ, ಸಿಂಧುವಳ್ಳಿ, ದೊಡ್ಡಕಾನ್ಯ, ಚಿಕ್ಕಕಾನ್ಯ, ಕೂಡನಹಳ್ಳಿ, ಕೋಚನಹಳ್ಳಿ, ಮರಸೆ, ಮಾಕನಹುಂಡಿ, ಕೆ.ಐ.ಎ.ಡಿ.ಬಿ ಇಂಡಸ್ಟ್ರಿಯಲ್ ಏರಿಯಾ, ವಿಮಾನ ನಿಲ್ದಾಣ, ಬಿರೇಗೌಡನಹುಂಡಿ, ಕೆ.ಎಂ. ಹುಂಡಿ, ಬಿ.ಜಿ. ಹುಂಡಿ, ಕೆ.ಎನ್. ಹುಂಡಿ, ಆಯರಹಳ್ಳಿ, ಕಿರಾಳು, ದೂರ, ಮುರುಡಗಳ್ಳಿ, ತಳೂರು, ಡಿ. ಕಾಟೂರು, ಟಿ.ವಿ.ಎಸ್. ಫ್ಯಾಕ್ಟರಿ ಹಾಗೂ ಸುತ್ತ-ಮುತ್ತಲಿನ ಪ್ರದೇಶಗಳು. ಎಫ್.ಟಿ.ಎಸ್ ವಿ.ವಿ ಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯವಾಗಲಿರುವ ಮುಖ್ಯ ಪ್ರದೇಶಗಳು: ಸುಭಾಷ್ನಗರ, ಕೆಸರೆ 1ನೇ, 2ನೇ ಹಾಗೂ 3ನೇ ಹಂತ, ನ.ರಾ ಮೊಹಲ್ಲಾ, ಗಾಂಧಿನಗರ, ಮೊಹಮ್ಮದ್ ಸೇಠ್ ಬ್ಲಾಕ್, ವೀರನಗೆರೆ, ಉದಯಗಿರಿ, ಬನ್ನಿಮಂಟಪ, ನೆಲ್ಸನ್ ಮಂಡೇಲಾ ರಸ್ತೆ, ಎಲ್.ಐ.ಸಿ, ಹೈವೆ ವೃತ್ತ, ತಿಲಕ್ನಗರ, ಉಮ್ಮರ್ ಖಾಯಂ ರಸ್ತೆ, ನ್ಯೂ ಸಯ್ಯಾಜಿ ರಾವ್ ರಸ್ತೆ, ರಾಜೇಂದ್ರನಗರ, ಮೇದರ್ ಬ್ಲಾಕ್, ಬಂಬೂ ಬಜಾರ್, ಲಯನ್ಸ್ ಕ್ಲಬ್, ಫರೂಕೀ ಡೆಂಟಲ್ ಕಾಲೇಜು, ಜೈಲ್ ವಸತಿ ಗೃಹ, ಐ.ಟಿ.ಐ ಕಾಲೇಜು, ಭಾವನಾ ಮಾರ್ಬಲ್ ರಸ್ತೆ, 'ಎ' ಬಡಾವಣೆ, ಬಿ.ಬಿ ಕೇರಿ, ಬಿ.ಟಿ ಮಿಲ್ ರಸ್ತೆ, ಈದ್ಗ ಮೈದಾನ, ಕಬೀರ್ ಮಠ, ಆನೆಗುಂದಿ ರಸ್ತೆ, ಹನುಮಂತನಗರ, ಕೆ.ಎಸ್.ಆರ್.ಟಿ.ಸಿ, ಎಸ್.ಎಸ್ ನಗರ, ಕಾವೇರಿ ನಗರ, ಸಿದ್ದಿಖಿ ನಗರ, ಬನ್ನಿಮಂಟಪ 'ಸಿ' ಬಡಾವಣೆ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಹಾಗೂ ಕೈಗಾರಿಕೋದ್ಯಮಿಗಳು ಸಹಕರಿಸಬೇಕೆಂದು ನ.ರಾ. ಮೊಹಲ್ಲಾ ವಿಭಾಗದ ಕಾರ್ಯ ಮತ್ತು ಪಾಲನೆಯ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ತಿಳಿಸಿದ್ದಾರೆ.

## ಮೈಸೂರು ಮೃಗಾಲಯದಿಂದ ಭಾರತದ ಆನೆಯ ದತ್ತು ಸ್ವೀಕಾರ

**ಮೈಸೂರು:** ಬೆಂಗಳೂರಿನ ಕಾಂತಿ ಸ್ವೀಟ್ಸ್ ಪ್ರೈವೇಟ್ ಲಿಮಿಟೆಡ್ ಅವರು ರೂ.3,00,000 ಗಳನ್ನು ಪಾವತಿಸಿ ಮೈಸೂರು ಮೃಗಾಲಯದಿಂದ ''ಭಾರತದ ಆನೆ'' ಯನ್ನು ದಿ:01-06-2024 ರಿಂದ ದಿ:31-05-2025 ರವರೆಗೆ ಒಂದು ವರ್ಷದ ಅವಧಿಗೆ ದತ್ತು ಸ್ವೀಕಾರವನ್ನು ನವೀಕರಿಸಿರುತ್ತಾರೆ ಎಂದು ಶ್ರೀ ಚಾಮರಾಜೇಂದ್ರ ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದಾಕ್ ಆದಾಲತ್

**ಕೋಲಾರ:** ಹಿರಿಯ ಅಂಚೆ ಅಧೀಕ್ಷಕರ ಕಛೇರಿ ಕೋಲಾರ ವಿಭಾಗ ಇಲ್ಲಿ ಜೂನ್ 06ರಂದು ಬೆಳಿಗ್ಗೆ 11.00 ಗಂಟೆಗೆ ದಾಕ್ ಅದಾಲತ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ವ್ಯಾಪ್ತಿಯ ಸಾರ್ವಜನಿಕರು ಅಂಚೆ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸೌಲಭ್ಯಗಳು, ಉಳಿತಾಯ ಬ್ಯಾಂಕಿಂಗ್ ಸೌಲಭ್ಯಗಳಿಗೆ ಸಂಬಂಧಿಸಿದಂತೆ ಕುಂದುಕೊರತೆಗಳು ಹಾಗೂ ಸಲಹೆಗಳು ಇದ್ದರೆ ಜೂನ್ 05 ರೊಳಗೆ ಹಿರಿಯ ಅಂಚೆ ಅಧೀಕ್ಷಕರು ಕೋಲಾರ ವಿಭಾಗ-563101 ಇಲ್ಲಿಗೆ ತಲಪುವಂತೆ ಕಳುಹಿಸಬೇಕು. ಅಲ್ಲದೇ ಜೂನ್ 06 ರಂದು ಬೆಳಿಗ್ಗೆ 11.00 ಗಂಟೆ ನಡೆಯುವ ದಾಕ್ ಅದಾಲತ್‌ನಲ್ಲಿ ಖುದ್ದಾಗಿ ಭೇಟಿ ನೀಡಿ ಸಲ್ಲಿಸಬಹುದಾಗಿದೆ.

## ಮಕ್ಕಳನ್ನು ದಾಖಲಿಸದಿರಿ

**ಕೋಲಾರ,:** ಜಿಲ್ಲಾ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಮಕ್ಕಳ ಪಾಲನಾ ಸಂಸ್ಥೆಗಳು ಬಾಲನ್ಯಾಯ ಕಾಯ್ದೆ 2015ರಡಿ ನೋಂದಣಿ ಮತ್ತು ನವೀಕರಣ ಆಗದೇ ಇರುವ ಸಂಸ್ಥೆಗಳಲ್ಲಿ ಯಾವುದೇ ಮಗುವನ್ನು ದಾಖಲಿಸಬಾರದು ಎಂದು ಸಂಘ-ಸಂಸ್ಥೆಗಳು ಹಾಗೂ ಸಾರ್ವಜನಿಕರಿಗೆ ತಿಳಿಯಪಡಿಸುತ್ತಾ ಮತ್ತು ಬಾಲನ್ಯಾಯ ಕಾಯ್ದೆ 2015ರಡಿ ನೋಂದಣಿ ಮತ್ತು ನವೀಕರಣ ಆಗದೇ ಇರುವ ಸಂಸ್ಥೆಗಳು ಕಂಡು ಬಂದರೆ ಅವರ ವಿರುದ್ಧ ಬಾಲನ್ಯಾಯ ಕಾಯ್ದೆ 2015ರ ಸೆಕ್ಷನ್ 33, 34, 41, 42 ಮತ್ತು 75 ರಡಿ ಕಾನೂನು ಕ್ರಮ ಜರುಗಿಸಲಾಗುವುದು.

# ಚುನಾವಣೆಯಲ್ಲಿ ದಕ್ಷತೆಯಿಂದ ಕಾರ್ಯನಿರ್ವಹಿಸಿದ ಪೊಲೀಸರಿಗೆ ಪ್ರಶಂಸೆ

**ಕೋಲಾರ:** ಲೋಕಸಭಾ ಚುನಾವಣೆಯಲ್ಲಿ ದಕ್ಷತೆಯಿಂದ ಕಾರ್ಯನಿರ್ವಹಿಸಿದ ಪೊಲೀಸ್ ಸಿಬ್ಬಂದಿಗೆ ಮಾನ್ಯ ಜಿಲ್ಲಾಧಿಕಾರಿಗಳು ಪ್ರಶಂಸಾ ಪತ್ರಗಳನ್ನು ವಿತರಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

ಇಂದು ಲೋಕಸಭಾ ಚುನಾವಣೆ ಮತ ಎಣಿಕೆ ಕುರಿತು ಪೊಲೀಸ್ ಸಿಬ್ಬಂದಿಗೆ ಸಲಹೆ ಸೂಚನೆ ನೀಡುವ ಸಲುವಾಗಿ ಏರ್ಪಡಿಸಲಾಗಿದ್ದ ವಿಶೇಷ ಪೊಲೀಸ್ ಕವಾಯತಿನಲ್ಲಿ ಕಾಮಂಡರ್ ರವಿ ನೇತೃತ್ವದಲ್ಲಿ ಒಟ್ಟು 13 ಪ್ಲಾಟ್ಯೂನ್ ಹಾಗೂ ಪೊಲೀಸ್ ವಾದ್ಯ ವೃಂದದವರಿಂದ ಗೌರವ ವಂದನೆ ಸ್ವೀಕಾರ ಮಾಡಿ ಅವರು ಪೊಲೀಸ್ ಸಿಬ್ಬಂದಿ ಉದ್ದೇಶಿಸಿ ಮಾತನಾಡುತ್ತಿದ್ದರು.

ಜಿಲ್ಲೆಯ ವರಿಷ್ಠಾಧಿಕಾರಿಗಳು ಜಿಲ್ಲಾಡಳಿತ ಮತ್ತು ಪೊಲೀಸ್ ಸಮನ್ವಯ ಕಾಯ್ದುಕೊಂಡು ಜಿಲ್ಲೆಯ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವುದು ಅವರ ಗುಣ. ಅಂತೆಯೇ ಅವರು ಪೊಲೀಸ್ ಸಿಬ್ಬಂದಿಗಳಿಗೆ ಮೂಲಭೂತ ಸೌಲಭ್ಯ ಒದಗಿಸುವಲ್ಲಿ ಸಿದ್ದಹಸ್ತರು ಶಿಸ್ತಿಗೆ ಹೆಸರುವಾಸಿ ಎಂದರು. ಅವರ ಅವಧಿಯಲ್ಲಿ ಠಾಣೆಗಳಿಗೂ ಸಹ ಅತ್ಯುತ್ತಮ ಮೂಲಸೌಕರ್ಯಗಳನ್ನು ಒದಗಿಸಲು ಶ್ರಮಿಸಿದ್ದಾರೆ ಪ್ರತಿಫಲವಾಗಿ ನಿಮ್ಮಿಂದ ಪ್ರಾಮಾಣಿಕ ಹಾಗೂ ದಕ್ಷತೆಯ ಸೇವೆ ಅಪೇಕ್ಷಿಸುತ್ತಿದ್ದಾರೆ. ಅವರ ನಿರೀಕ್ಷೆಗಳನ್ನು ಹುಸಿಗೊಳಿಸದೇ ಆ ಮೂಲಕ ನಿಮ್ಮ ಇಲಾಖೆಗೆ ಹಾಗೂ ಜಿಲ್ಲೆಗೆ ಕೀರ್ತಿ ತರಬೇಕು ಎಂದು ತಿಳಿಸಿದರು.



ಜಿಲ್ಲಾಡಳಿತದಿಂದ ಕರೆ ನೀಡಿದರು ಪ್ರತಿ ಬಾರಿಯೂ ಪರಿಣಾಮಕಾರಿಯಾಗಿ ಹಾಗೂ ತ್ವರಿತವಾಗಿ ಸ್ಪಂದಿಸುವ ಪೊಲೀಸರ ಗುಣವನ್ನು ಶ್ಲಾಘಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಎಂ.ನಾರಾಯಣ ಅವರು ಮಾತನಾಡಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಚುನಾವಣೆಯನ್ನು ಸುಸೂತ್ರವಾಗಿ ನಡೆಸಿಕೊಟ್ಟಿದ್ದಾಕ್ಕಾಗಿ ಕೋಲಾರ ಪೊಲೀಸ್ ಸಿಬ್ಬಂದಿಗೆ ವಿಶೇಷ ಧನ್ಯವಾದಗಳು ತಿಳಿಸಿದರು. ಜಿಲ್ಲೆಯಲ್ಲಿ ಅಪರಾಧ ಪ್ರಕರಣಗಳು ಗಣನೀಯವಾಗಿ ಕಡಿಮೆಯಾಗುತ್ತಿರುವುದು ತಮ್ಮೆಲ್ಲರ ಕಾರ್ಯಕ್ಷಮತೆಯನ್ನು ತೋರಿಸುತ್ತದೆ. ಕಳೆದ ಕೆಲವು ತಿಂಗಳುಗಳಲ್ಲಿ ಕ್ರಿಕೆಟ್ ಬೆಟ್ಟಿಂಗ್, ಮರಳು ದಂಧೆ ಇತರೆ ಮಾಫಿಯಾದಂತಹ ಚಟುವಟಿಕೆಗಳನ್ನು ಯಶಸ್ವಿಯಾಗಿ ಹತ್ತಿಕ್ಕಲಾಗಿದೆ. ಘೋರ ಅಪರಾಧ ಪ್ರಕರಣಗಳನ್ನು ಶೀಘ್ರವಾಗಿ ಪರಿಹರಿಸುವಲ್ಲಿ ಯಶಸ್ವಿಯಾಗಿರುವುದಕ್ಕಾಗಿ ಶ್ಲಾಘನೆ ವ್ಯಕ್ತಪಡಿಸಿದರು. ಅದೇ ರೀತಿ ಮುಂಬರುವ ಚುನಾವಣಾ ಎಣಿಕೆ ಕಾರ್ಯದಲ್ಲಿಯೂ ಸಹ ಜಿಲ್ಲಾ ಆಡಳಿತಕ್ಕೆ ಸಹಕಾರ ನೀಡಬೇಕು. 1ನೇ ಜೂನ್ ರಂದು ಮತ ಎಣಿಕ ಕೇಂದ್ರದಲ್ಲಿ ಪೂರ್ವಭ್ಯಾಸ ಏರ್ಪಡಿಸಲಾಗಿದೆ. ಅಲ್ಲಿ ನೀಡುವ ಮಾರ್ಗದರ್ಶನ ಮತ್ತು ಸೂಚನೆಯಂತೆ ಕರ್ತವ್ಯ ನಿರ್ವಹಿಸಬೇಕು. ಈಗಾಗಲೇ ಚುನಾವಣಾ ಗೌರವಧನವನ್ನು ಮುಂಗಡವಾಗಿ ಪಾವತಿಸಲಾಗಿದೆ. ಎಂದರು.

ಜಿಲ್ಲೆಯ ಎಲ್ಲಾ ಸಿಬ್ಬಂದಿಗಳಿಗೆ ವೈದ್ಯಕೀಯ ತಪಾಸಣೆ ಮಾಡಿಸಲಾಗಿದೆ. 26 ಠಾಣೆಗಳಿಗೆ ಮಹಿಳಾ ಸ್ನೇಹಿ ವಾಹನಗಳನ್ನು ಕೊಡಮಾಡಲಾಗಿದೆ. ಜಿಲ್ಲೆಯ ಹೆಮ್ಮೆಯ ಕೋಲಾರಮ್ಮಪಡೆಗೆ ಹೊಸ ವಾಹನಗಳನ್ನು ಖರೀದಿಸಿ ವಿತರಿಸಲಾಗಿದೆ. ಶೀಘ್ರದಲ್ಲಿ ಉದ್ಘಾಟನೆಗೆ ಸಿದ್ಧಗೊಂಡಿರುವ ಪೊಲೀಸ್ ವಸತಿನಿಲಯಗಳನ್ನು ಆರಂಭಿಸಲಾಗುತ್ತದೆ. ಪೊಲೀಸ್ ಕಂಪ್ಯೂಟರ್ ತರಬೇತಿ ಕೇಂದ್ರ ಸ್ಥಾಪಿಸಲಾಗುವುದು ಎಂದರು.

ಮಹಿಳಾ ಸುರಕ್ಷತೆ, ಮಾಧಕದ್ರವ್ಯಗಳ ಸರಬರಾಜು, ಜೂಜು ಇತ್ಯಾದಿಗಳ ಕುರಿತು ನಿಗಾ ವಹಿಸಬೇಕು. ಇಲಾಖೆಯ ಘನತೆಗೆ ಧಕ್ಕೆ ತರದಂತೆ ದೇವರು ಮೆಚ್ಚುವಂತೆ ಕೆಲಸ ಮಾಡಿ ಎಂದು ಹಿತನುಡಿಗಳನ್ನು ಹೇಳಿದರು.

ಕಾರ್ಯಕ್ರಮದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ರವಿಶಂಕರ್ ಜಿಲ್ಲೆಯ 40 ಪೊಲೀಸ್ ಅಧಿಕಾರಿಗಳು, 360 ಪೊಲೀಸ್ ಸಿಬ್ಬಂದಿ ಸೇರಿದಂತೆ ಮತ್ತಿತರರು ಹಾಜರಿದ್ದರು.

# ಮತ ಎಣಿಕೆ ಅಚ್ಚುಕಟ್ಟಾಗಿರಲಿ

## ನೈಋತ್ಯ ಶಿಕ್ಷಕರ ಕ್ಷೇತ್ರದ ಚುನಾವಣಾಧಿಕಾರಿ ಡಾ ಜೆ.ಸಿ. ಪ್ರಕಾಶ್ ಸೂಚನೆ

**ಮೈಸೂರು:** ಮುಂಬರುವ ಕರ್ನಾಟಕ ವಿಧಾನ ಪರಿಷತ್ ಚುನಾವಣೆಯ ಮತ ಎಣಿಕೆ ಕಾರ್ಯವನ್ನು ಬಹಳ ಖುಷಿಯಿಂದ ಅಚ್ಚುಕಟ್ಟಾಗಿ ನಿರ್ವಹಿಸಿ ಯಶಸ್ವಿಗೊಳಿಸಬೇಕು ಎಂದು ಕರ್ನಾಟಕ ದಕ್ಷಿಣ ಶಿಕ್ಷಕರ ಕ್ಷೇತ್ರ, ನೈಋತ್ಯ ಪದವೀಧರರ ಕ್ಷೇತ್ರ ಹಾಗೂ ನೈಋತ್ಯ ಶಿಕ್ಷಕರ ಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಪ್ರಾದೇಶಿಕ ಆಯುಕ್ತರಾದ ಡಾ ಜೆ.ಸಿ. ಪ್ರಕಾಶ್ ಅವರು ಮತ ಎಣಿಕೆ ತರಬೇತಿಯಲ್ಲಿ ತಿಳಿಸಿದರು.



ಪ್ರಾದೇಶಿಕ ಆಯುಕ್ತರ ಕಚೇರಿಯ ಚಾಮುಂಡೇಶ್ವರಿ ಸಭಾಂಗಣದಲ್ಲಿ ನಡೆದ ಕರ್ನಾಟಕ ವಿಧಾನ ಪರಿಷತ್ ಚುನಾವಣೆಯ ಕರ್ನಾಟಕ ದಕ್ಷಿಣ ಶಿಕ್ಷಕರ ಕ್ಷೇತ್ರ, ನೈರುತ್ಯ ಶಿಕ್ಷಕರ ಕ್ಷೇತ್ರ ಹಾಗೂ ನೈರುತ್ಯ ಪದವೀಧರರ ಕ್ಷೇತ್ರದ ಮತ ಎಣಿಕೆ ಸಿಬ್ಬಂದಿಗೆ ಮತ ಎಣಿಕೆ ತರಬೇತಿಯನ್ನು ಕುರಿತು ಅವರು ಮಾತನಾಡಿದರು.

ಕರ್ನಾಟಕ ನೈಋತ್ಯ ಪದವೀಧರರ ಕ್ಷೇತ್ರದ ಒಟ್ಟು 14, ನೈಋತ್ಯ ಶಿಕ್ಷಕರ ಕ್ಷೇತ್ರದ ಒಟ್ಟು 14 ಹಾಗೂ ದಕ್ಷಿಣ ಶಿಕ್ಷಕರ ಕ್ಷೇತ್ರಗಳಾದ ಮೈಸೂರು, ಚಾಮರಾಜನಗರ, ಹಾಸನ ಮತ್ತು ಮಂಡ್ಯದ ಒಟ್ಟು 14 ಕೌಂಟಿಂಗ್ ಟೇಬಲ್ ಗಳಲ್ಲಿ ಮತ ಎಣಿಕೆ ಕಾರ್ಯ ನಡೆಯಲಿದ್ದು, ಮತ ಎಣಿಕೆ ಕಾರ್ಯದಲ್ಲಿ ಪ್ರತಿಯೊಬ್ಬರೂ ಸಹ ಪಾಲ್ಗೊಂಡು ಎಣಿಕೆ ಕಾರ್ಯವನ್ನು ಪೂರ್ಣಗೊಳಿಸಬೇಕು ಎಂದರು.

ಇದು ಬ್ಯಾಲೆಟ್ ಪೇಪರ್ ಮತದಾನ ಪ್ರಕ್ರಿಯೆ ಆಗಿದ್ದು, ಅದರ ವ್ಯಾಲಿಡ್ ಮತ್ತು ಇನ್ ವ್ಯಾಲಿಡ್ ಮತಪತ್ರದ ಬಗ್ಗೆ ಮಾಹಿತಿ ನೀಡಿದರು. ಬ್ಯಾಲೆಟ್ ಪೇಪರ್ ಗಳನ್ನು ಯಾವ ರೀತಿ ತೆರೆಯಬೇಕು, ಯಾವುದು ವ್ಯಾಲಿಡ್, ಯಾವುದು ವ್ಯಾಲಿಡ್ ಅಲ್ಲ ಎಂಬುದನ್ನು ಯಾವ ರೀತಿ ಗುರುತಿಸಬೇಕು. ಸಂಖ್ಯೆಗಳನ್ನು ಯಾವ ರೀತಿ ಕೊಡಬೇಕು. ಯಾವುದನ್ನು ರಿಜೆಕ್ಷನ್ ಮಾಡಬೇಕು ಎಂಬುದರ ಬಗ್ಗೆ ಮಾಹಿತಿ ನೀಡುತ್ತಾ ಯಾವುದುದಾದರೂ ಗೊಂದಲದ ಪರಿಸ್ಥಿತಿ ಬಂದಲ್ಲಿ ಆರ್.ಓ ಗಮನಕ್ಕೆ ತರಬೇಕು ಎಂದು ಮತ ಎಣಿಕೆ ತರಬೇತುದಾರರಿಗೆ ಸಲಹೆ ನೀಡಿದರು.

ಮತ ಎಣಿಕೆ ಸಿಬ್ಬಂದಿಗಳು ಮತ ಎಣಿಕೆಯ ದಿನ ಬೆಳಿಗ್ಗೆ 7 ಗಂಟೆಗೆ ಹಾಜರಿರಬೇಕು. ಇದು ಬಹಳ ಸುಲಭದ ಕೆಲಸವಾಗಿದ್ದು, ಮತ ಪತ್ರ ಎಣಿಕೆ ಮಾಡಿ 25 ಬ್ಯಾಲೆಟ್ ಪೇಪರ್ ಗಳ ಒಂದು ಬಂಡಲ್ ಮಾಡಿ, ಅದಲ್ಲಿ ಮೊದಲ ಆದ್ಯತೆಯ ಬ್ಯಾಲೆಟ್ ಪೇಪರ್ಗಳನ್ನು ಬೇರ್ಪಡಿಸಿ ಕೊಡಬೇಕು ಎಂದು ತಿಳಿಸಿದರು.

ಪ್ರಾದೇಶಿಕ ಕಚೇರಿಯ ಸಹಾಯಕ ಚುನಾವಣಾಧಿಕಾರಿಗಳಾದ ಕವಿತಾ ರಾಜಾರಾಂ ಅವರು ಮಾತನಾಡಿ, ಚುನಾವಣೆಯ ದಿನ ಬೆಳಗ್ಗೆ 8 ಗಂಟೆಗೆ ಮತ ಎಣಿಕೆ ಪ್ರಕ್ರಿಯೆ ಪ್ರಾರಂಭವಾಗಲಿದ್ದು, ಕಡ್ಡಾಯವಾಗಿ ನಿಮ್ಮ ಐಡಿ ಕಾರ್ಡ್ ಗಳನ್ನು ಧರಿಸಿ ಕಾರ್ಯ ನಿರ್ವಹಿಸಬೇಕು ಎಂದರು.

ಮತಗಟ್ಟೆಯ ಕ್ಷೇತ್ರಗಳ ಬಳಿ ಕೌಂಟಿಂಗ್ ಸೂಪರ್ವೈಸರ್, ಕೌಂಟಿಂಗ್ ಅಸಿಸ್ಟೆಂಟ್, ಕೌಂಟಿಂಗ್ ಏಜೆಂಟ್ಸ್ ಗಳಿಗೆ ಮಾತ್ರ ಪ್ರವೇಶ ನೀಡಬೇಕು. ತರಬೇತುದಾರರು ಮತಗಟ್ಟೆ ಒಳಗೆ ಮೊಬೈಲ್ ನ್ನು ತೆಗೆದುಕೊಂಡು ಹೋಗುವಂತಿಲ್ಲ ಹಾಗೂ ಚುನಾವಣಾಧಿಕಾರಿಗಳ ಸಲಹೆ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಸೂಚಿಸಿದರು. ಈ ಸಂದರ್ಭದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಸೇರಿದಂತೆ ಇತರೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

### ವಿಧಾನ ಪರಿಷತ್ ಚುನಾವಣೆ: ನಿಷೇಧಾಜ್ಞೆ ಜಾರಿ

**ಕರ್ನಾಟಕ ವಿಧಾನ ಪರಿಷತ್ತಿನ ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆ ಸಂಬಂಧ ಜೂ.03 ರಂದು ಮತದಾನ ಕಾರ್ಯ ಮತ್ತು ಜೂ.06 ರಂದು ಮತ ಎಣಿಕೆ ಕಾರ್ಯ ನಡೆಯಲಿದ್ದು, ಮತದಾನ ಹಾಗೂ ಮತಎಣಿಕೆ ಕಾರ್ಯವು ಸುಗಮವಾಗಿ ನಡೆಯಲು ಹಾಗೂ ಮೈಸೂರು ನಗರದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಮುಂಜಾಗ್ರತಾ ಕ್ರಮವಾಗಿ ಜೂ.03 ರ ಬೆಳಿಗ್ಗೆ 05 ಗಂಟೆಯಿಂದ ಮಧ್ಯರಾತ್ರಿ 12 ಗಂಟೆಯವರೆಗೆ ಮತ್ತು ಜೂ.06 ಮತ ಎಣಿಕೆ ದಿನದಂದು ಬೆಳಿಗೆ 06 ಗಂಟೆಯಿಂದ ಜೂ.07 ರ ಬೆಳಿಗ್ಗೆ 05 ಗಂಟೆಯವರೆಗೆ ಕಲಂ 144ರ ರೀತ್ಯ ನಿಷೇಧಾಜ್ಞೆಯನ್ನು ಜಾರಿ ಮಾಡಲಾಗಿದೆ. ಈ ದಿನಗಂಳದು ಚುನಾಯಿತ ಅಭ್ಯರ್ಥಿಗಳ ವಿಜಯೋತ್ಸವ ಮೆರವಣಿಗೆ, ಸಾರ್ವಜನಿಕ ಸ್ಥಳಗಳಲ್ಲಿ ಹಾಗೂ ವಾಸದ ಮನೆಗಳ ಮುಂದೆ ಪಟಾಕಿಗಳನ್ನು ಸಿಡಿಸುವುದು, ಮತ ಎಣಿಕೆ ಕೇಂದ್ರದಲ್ಲಿ ಅನಧಿಕೃತ ವ್ಯಕ್ತಿಗಳ ಪ್ರವೇಶ ಹಾಗೂ ಮತ ಎಣಿಕೆ ಕೇಂದ್ರದ 200 ಮೀಟರ್ ವ್ಯಾಪ್ತಿ ಪ್ರದೇಶದ ಸುತ್ತಲೂ ಐದು ಮಂದಿಗಿಂತ ಹೆಚ್ಚು ಜನ ಗುಂಪುಗೂಡುವುದು, ಸಭೆ ಸಮಾರಂಭಗಳನ್ನು ನಡೆಸುವುದು, ಯಾವುದೇ ವ್ಯಕ್ತಿ ತನ್ನೊಂದಿಗೆ ಸ್ಫೋಟಕ ವಸ್ತು ಮತ್ತು ಇನ್ನಿತರ ಮಾರಕಾಸ್ತ್ರಗಳನ್ನು ಒಯುವುದು, ಯಾವುದೇ ಮೆರವಣಿಗೆ ನಡೆಸುವುದು ಹಾಗೂ ಪ್ರಚೋದನಾಕಾರಿ ಭಾಷಣ ಮಾಡುವುದು, ಧ್ವನಿವರ್ಧಕ, ಡಿ.ಜೆ. ಉಪಯೋಗಿಸುವುದು ಮತ್ತು ಬೈಕ್ ರ್ಯಾಲಿ ನಡೆಸುವುದನ್ನು ನಿಷೇಧಿಸಲಾಗಿದ್ದು, ಈ ಆದೇಶವು ಮದುವೆ ಸಮಾರಂಭಗಳಿಗೆ, ಧಾರ್ಮಿಕ ಮತ್ತು ಶವಸಂಸ್ಕಾರಗಳಿಗೆ ಹಾಗೂ ಶಾಲಾ-ಕಾಲೇಜು ಪರೀಕ್ಷೆಗೆ ತೆರಳುವವರಿಗೆ ಅನ್ವಯಿಸುವುದಿಲ್ಲ ಎಂದು ಮೈಸೂರು ನಗರ ಪೊಲೀಸ್ ಆಯುಕ್ತರಾದ ರಮೇಶ್.ಬಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

# ತಂಬಾಕು ರಹಿತ ದಿನಾಚರಣೆ ಜನ ಜಾಗೃತಿ ಜಾಥಾ

**ಕೋಲಾರ:** ವಿಶ್ವ ತಂಬಾಕು ರಹಿತ ದಿನಾಚರಣೆ ಅಂಗವಾಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಘಟಕ, ಸಿ.ಬೈರೇಗೌಡ ತಾಂತ್ರಿಕ ಮಹಾವಿದ್ಯಾಲಯ ವಕೀಲರ ಸಂಘ ಹಾಗೂ ವಿವಿಧ ಕಾಲೇಜುಗಳ ಸಹಯೋಗದಲ್ಲಿ ವಿಶ್ವ ತಂಬಾಕು ರಹಿತ ದಿನಾಚರಣೆ ಜಾಥಾ ನಡೆಯಿತು. ನಗರದ ಎಸ್.ಎನ್.ಆರ್ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಸಿರು ನಿಶಾನೆ ತೋರಿಸುವ ಮೂಲಕ ಉದ್ಘಾಟಿಸಿದರು.

ಮೆರವಣಿಗೆಯಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಸುನಿಲ್.ಎಸ್.ಹೊಸಮನಿ, ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ|| ಎಂ.ಜಗದೀಶ್, ಶುಶ್ರೂಶಕ ತರಬೇತಿ ಸಂಸ್ಥೆಯ ವಿದ್ಯಾರ್ಥಿಗಳು ಪಾಲ್ಗೊಂಡು ತಂಬಾಕು ಉದ್ಯಮದ ಹಸ್ತಕ್ಷೇಪದಿಂದ ಮಕ್ಕಳನ್ನು ರಕ್ಷಿಸಿ, ಜೀವನ ಆಯ್ದುಕೊಳ್ಳಿ ತಂಬಾಕನ್ನಲ್ಲ, ತಂಬಾಕು ಸೇವನೆ ಇಡಿ ಮಾನವ ಕುಲಕ್ಕೆ ಮಾರಕ, ತಂಬಾಕು ಸೇವನೆ ಕ್ಯಾನ್ಸರ್ ಗೆ ರಹದಾರಿ ಎಂಬ ಘೋಷಣ ಫಲಕಗಳನ್ನು ಹಿಡಿದು ಜಾಥಾ ನಡೆಸಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು.

ಜಾಥಾದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಚಾರಣಿ ಎಂ.ಎ, ಜಿಲ್ಲಾ ಕಾರ್ಯಕ್ರಮ ಅಧಿಕಾರಿ ಎನ್.ಓ.ಎಚ್.ಪಿಯಾದ ಡಾ. ಚಂದ್ರಶೇಖರ್ ವಿ., ವಕೀಲರ ಸಂಘದ ಜಿಲ್ಲಾ ಅಧ್ಯಕ್ಷ ಮುನೇಗೌಡ, ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಎ.ವಿ.ನಾರಾಯಣಸ್ವಾಮಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಎಂ. ಪ್ರೇಮ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.



## ಕೋಲಾರದ ಹಲವೆಡೆ ವಿದ್ಯುತ್ ವ್ಯತ್ಯಯ

**ಕೋಲಾರ:** ಬೆವಿಕಂ, ಕೋಲಾರ ಗ್ರಾಮೀಣ ಉಪವಿಭಾಗದ ಹೋಳೂರು ಶಾಖೆಗೆ ಸಂಬಂಧಿಸಿದ ಎಫ್-1 ಮುದುವಾಡಿ ಅಗ್ರಿ ಫೀಡರ್, ಎಫ್-2 ಬೆಳ್ಳಂಬುರಿ ಎನ್.ಜೆ.ವೈ, ಎಫ್-3 ದೊಡ್ಡಕುರುಬರಹಳಿ, ಎಫ್-6 ಯಡಹಳ್ಳಿ ಎನ್.ಜೆ.ವೈ, ಎಫ್-7 ನುಕ್ಕನಹಳ್ಳಿ ಅಗ್ರಿ ಫೀಡರ್ ಮತ್ತು ಎಫ್-8 ಅಣ್ಣಿಹಳಿ ಅಗ್ರಿ ಫೀಡರ್ ಮಾರ್ಗದ ಮಾರ್ಗ ಮುಕ್ತತೆ ಬೇಕಾಗಿರುತ್ತದೆ. ಮಲ್ಲಸಂದ್ರ, ಬೆಳ್ಳಂಬುರಿ, ಗಂಗಟ್ಟ, ಅಣ್ಣಿಹಳ್ಳಿ, ನಾಯಕರಹಳ್ಳಿ, ತೊಂಡಾಳ, ಗೂಲಿಗಾನಹಳ್ಳಿ ದೊಡ್ಡಕುರುಬರಹಳ್ಳಿ, ಚಿಕ್ಕಕುರುಬರಹಳ್ಳಿ, ಕೊಂಡೇನಹಳ್ಳಿ, ಹರಳೀಮರದಹೊಸಹಳ್ಳಿ, ಚಿಲಪನಹಳ್ಳಿ, ಮುದುವಾಡಿ, ಮುದುವಾಡಿಹೊಸಹಳ್ಳಿ ಮತ್ತು ಸುತ್ತಮುತ್ತಲಿನ ಗ್ರಾಮದಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಹಾಗೂ ವೇಮಗಲ್ ಶಾಖೆಯ ಕೈಗಾರಿಕಾ ಪ್ರದೇಶದ ಟಾಟಾ ಕಂಪನಿಯ ಕೇಬಲ್ ದುರಸ್ಥಿ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಕೈಗಾರಿಕಾ ಪ್ರದೇಶದ ಎಫ್-15 ಟಾಟಾ ಫೀಡರ್, ಎಫ್-16 ಕೆ.ಐ.ಎ.ಡಿ.ಬಿ ಫೀಡರ್, ಎಫ್-05, ಶಿವಂ ಫೀಡರ್ ಮತ್ತು ಎಫ್-14 ಜಿ.ಎಸ್.ಕೆ ಫೀಡರ್ ಈ ಎಲ್ಲಾ ಫೀಡರ್‌ಗಳ ವಿದ್ಯುತ್ ಅಡಚಣೆ ಇರುವುದರಿಂದ ಕೈಗಾರಿಕಾ ಪ್ರದೇಶಗಳಲ್ಲಿ ಜೂನ್ 02ರ ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೂ ವಿದ್ಯುತ್ ವ್ಯತ್ಯಯವಾಗಲಿದೆ.

# ಯುವ ಪೀಳಿಗೆ ತಂಬಾಕು ವ್ಯಸನಿಯಾಗುವುದು ಬೇಡ

**ಕೆ.ಆರ್.ನಗರ:** ಯುವ ಪೀಳಿಗೆ ತಂಬಾಕು ಆಗಿಯುವುದು ಬೇಡ, ಹೋಗೆ ಬೀಡೋದು ಬೇಡ ಇಂದೇ ತಂಬಾಕು ತ್ಯಜಿಸಿ ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಡಿ.ನಟರಾಜು ಹೇಳಿದರು.

ಪಟ್ಟಣದ ಬ್ರೈಟ್ ಪಿಯು ಕಾಲೇಜಿನಲ್ಲಿ ತಾಲ್ಲೂಕು ಆರೋಗ್ಯ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ವಿಶ್ವ ತಂಬಾಕು ರಹಿತ ದಿನಾಚರಣೆ ಕಾರ್ಯಕ್ರಮದಲ್ಲಿ ನೆರದಿದ್ದ ವಿದ್ಯಾರ್ಥಿ ಸಮೂಹಕ್ಕೆ ಸಂದೇಶದ ಮೂಲಕ ತಿಳಿಸಿದರು.

ವಿಶ್ವ ತಂಬಾಕು ರಹಿತ ದಿನವನ್ನು, ತಂಬಾಕು ಸೇವನೆಯ ಹಾನಿಕಾರಕ ಪರಿಣಾಮಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲು ಮತ್ತು ತಂಬಾಕು ಸೇವನೆಯನ್ನು ಕಡಿಮೆ ಮಾಡಲು ವಿಶ್ವ ಆರೋಗ್ಯ ಸಂಸ್ಥೆಯ ನೇತೃತವದಲ್ಲಿ ಈ ದಿನವನ್ನು ಜಾಗತಿಕ ಮಟ್ಟದಲ್ಲಿ ಆಚರಣೆ ಮಾಡಲಾಗುತ್ತಿದೆ.

ಧೂಮಪಾನ ಮತ್ತು ಹೊಗೆ ರಹಿತ ತಂಬಾಕು ಉತ್ಪನ್ನಗಳು ಸೇರಿದಂತೆ ತಂಬಾಕು ಸೇವನೆಯಿಂದ ಉಂಟಾಗುವ ಆರೋಗ್ಯದ ಅಪಾಯಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಮತ್ತು ಶಿಕ್ಷಣ ನೀಡುವುದು ವಿಶ್ವ ತಂಬಾಕು ವಿರೋಧಿ ದಿನದ ಉದ್ದೇಶವಾಗಿದೆ. ತಂಬಾಕು ಬಳಕೆಯ ವಿರುದ್ಧ ಕ್ರಮ ಕೈಗೊಳ್ಳಲು ಸರ್ಕಾರ, ಸಂಸ್ಥೆಗಳು ಆದೇಶ ನೀಡಿದೆ ಎಂದರು.

ತಂಬಾಕು ಮತ್ತು ಅದರ ಉತ್ಪನ್ನದ ಸೇವನೆಯಿಂದ ಉಂಟಾಗುವ ಅಪಾಯ ಮತ್ತು ಕುಟುಂಬ, ಸಮಾಜ ಮತ್ತು ಪರಿಸರದ ಮೇಲೆ ಅದರ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಪಟ್ಟಣ ಸೇರಿದಂತೆ ಕೆ.ಆರ್.ನಗರ ಮತ್ತು ಸಾಲಿಗ್ರಾಮ ಆವಳಿ ಮೂಡಿಸಲಾಗುತ್ತಿದೆ ಎಂದರಲ್ಲದೇ ಬಾರ್, ಕಿರಾಣಿ ಅಂಗಡಿಗಳಲ್ಲಿ ತಂಬಾಕು ವಸ್ತು ಹಾಗೂ ಗುಟ್ಕಾ ಮಾರಾಟಕ್ಕೆ ಕಡಿವಾಣ ಹಾಕಲು ಕ್ರಮ ವಹಿಸಲಾಗಿದೆ ಎಂದರು.

ವಿಶ್ವ ತಂಬಾಕು ರಹಿತ ದಿನಾಚರಣೆ ಕಾರ್ಯಕ್ರಮವನ್ನು ಪಟ್ಟಣದ ಪ್ರಧಾನ ಸಿವಿಲ್ ನ್ಯಾಯದೀಶರಾದ ಚಂದನ್. ಎಸ್. ಉದ್ಘಾಟಿಸಿದರು. ಹಿರಿಯ ನ್ಯಾಯಾಧೀಶರಾದ ಕುಮಾರಿ ಆಶ್ರೀನಾ ಮಕ್ಕಳ ಜವಬ್ದಾರಿ ಬಗ್ಗೆ ಮಾತನಾಡಿದರು.

ಅ ವಕೀಲರು.ರಾಮಚಂದ್ರ, ಬ್ರೈಟ್ ಪಿಯು ಕಾಲೇಜಿನ ಅಧ್ಯಕ್ಷ ಕೆ. ಅನುರಾದ,, ಪ್ರಾಂಶುಪಾಲ ಸಂತೋಷ್ ಕುಮಾರ್, ಆಡಳಿತಾಧಿಕಾರಿ ಮೇನಕ ತಾ.ಆರೋಗ್ಯ ಶಿಕ್ಷಣಾಧಿಕಾರಿ ಸಿ.ಎಂ.ರೇಖಾ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಮಹೇಶ್, ಹಾಗೂ ಕಾಲೇಜಿನ ಎಲ್ಲ ಉಪನ್ಯಾಕರು ಇದ್ದರು.



### ಕೋಲಾರ ಜಿಲ್ಲಾಧಿಕಾರಿ ಅಕ್ರಂ ಪಾಷ ಆದೇಶ

# ಮತ ಎಣಿಕೆ ಕೇಂದ್ರದ ಸುತ್ತ ಪ್ರತಿಬಂಧಕಾಜ್ಞೆ ಜಾರಿ

**ಕೋಲಾರ:** ಕೋಲಾರ ಲೋಕಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ ಲೋಕಸಭಾ ಸಾರ್ವತ್ರಿಕ ಚುನಾವಣೆ ಏಪ್ರಿಲ್ 26 ರಂದು ಜರುಗಿದ್ದು, ಜೂ.4 ರಂದು ಮತ ಎಣಿಕೆ ಜರುಗುವ ಹಿನ್ನೆಲೆಯಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ವ್ಯಾಪ್ತಿಯ 100 ಮೀಟರ್ ವ್ಯಾಪ್ತಿಯ ಸುತ್ತಮುತ್ತಲಿನ ಪ್ರದೇಶದಲ್ಲಿ ಪ್ರತಿಬಂಧಕಾಜ್ಞೆ ಜಾರಿಗೊಳಿಸಿ, ಜಿಲ್ಲಾ ದಂಡಾಧಿಕಾರಿ ಆಗಿರುವ ಜಿಲ್ಲಾಧಿಕಾರಿ ಅಕ್ರಂ ಪಾಷ ಅವರು ಆದೇಶಿಸಿದ್ದಾರೆ.



ಜೂನ್ 4 ರಂದು ಮತ ಎಣಿಕೆ ಇರುವುದರಿಂದ ನಗರದ ಪ್ರಥಮ ದರ್ಜೆ ಕಾಲೇಜು ಮತ ಎಣಿಕೆ ಕೇಂದ್ರದ ವ್ಯಾಪ್ತಿಯ 100 ಮೀಟರ್ ಸುತ್ತಮುತ್ತಲಿನ ಪ್ರದೇಶದಲ್ಲಿ ಜೂನ್ 3ರ ಸಂಜೆ 6.00 ಗಂಟೆಯಿಂದ ಜೂನ್ 4ರ ಸಂಜೆ 6 ಗಂಟೆಯವರೆಗೆ ಹಾಗೂ 04-06-2024ರ ಬೆಳಗ್ಗೆ 6.00 ಗಂಟೆಯಿಂದ 05-06-2024ರ ಸಂಜೆ 6.00 ಗಂಟೆಯವರೆಗೆ ಸಿ.ಆರ್.ಪಿ.ಸಿ 1973 ರ ಕಲಂ 144 ಮತ್ತು ಕರ್ನಾಟಕ ಪೊಲೀಸ್ ಕಾಯ್ದೆ 1963 ರ ಕಲಂ 35 ರಡಿ ಪ್ರತಿಬಂಧಕಾಜ್ಞೆಯನ್ನು ಜಾರಿ ಮಾಡಿ, ಜಿಲ್ಲಾ ದಂಡಾಧಿಕಾರಿಗಳಾಗಿರುವ ಜಿಲ್ಲಾಧಿಕಾರಿ ಅಕ್ರಂ ಪಾಷ ಅವರು ಆದೇಶಿಸಿದ್ದಾರೆ.

ಮತ ಎಣಿಕೆಯ ದಿನದಂದು ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆಯಾಗಿ ಮತ್ತು ಮತದಾನದ ಪ್ರಾವಿತ್ರ್ಯತೆಯನ್ನು ಕಾಪಾಡುವ ಹಿತದೃಷ್ಟಿಯಿಂದ ಸಿ.ಆರ್.ಪಿ.ಸಿ 1973 ರ ಕಲಂ 144 ಮತ್ತು ಕರ್ನಾಟಕ



ಪೊಲೀಸ್ ಕಾಯ್ದೆ 1963 ರ ಕಲಂ 35 ರ ಮೇರೆಗೆ ಪ್ರತಿಬಂಧಕಾಜ್ಞೆ ವಿಧಿಸಲಾಗಿದೆ, ಈ ಅವಧಿಯಲ್ಲಿ ಪ್ರತಿಬಂಧಕಾಜ್ಞೆ ಜಾರಿಯಿರುವ ಪ್ರದೇಶದಲ್ಲಿ ಮೆರವಣಿಗೆ ಅಥವಾ ಐದಕ್ಕಿಂತ ಹೆಚ್ಚು ಜನರು ಗುಂಪು ಸೇರುವುದನ್ನು ನಿಷೇಧಿಸಲಾಗಿದೆ. ಶಸ್ತ್ರ ಬಡಿಗೆ, ಭರ್ಜಿ, ಖಡ್ಗ, ಗಧೆ, ಬಂದೂಕು, ಚೂರಿ, ಲಾಠಿ, ದೊಣ್ಣೆ, ಚಾಕು ಅಥವಾ ದೇಹಕ್ಕೆ ಅಪಾಯ ಮಾಡತಕ್ಕ ಯಾವುದೇ ಮಾರಕಾಸ್ತ್ರಗಳನ್ನು ತೆಗೆದುಕೊಂಡು ಹೋಗುವುದನ್ನು ನಿಷೇಧಿಸಲಾಗಿದೆ. ಕಲ್ಲುಗಳನ್ನು ಇಲ್ಲವೇ ಸ್ಫೋಟಕ ವಸ್ತುಗಳನ್ನು ಇತರ ಯಾವುದೇ ಅಂತಹ ವಸ್ತುಗಳನ್ನು ನಿಷೇಧಿತ ಸ್ಥಳಕ್ಕೆ ತೆಗೆದುಕೊಂಡು ಹೋಗುವುದನ್ನು ಹಾಗೂ ಸಂಗ್ರಹ ಮಾಡುವುದನ್ನು ನಿಷೇಧಿಸಲಾಗಿದೆ.

ಕಲ್ಲುಗಳನ್ನು ಎಸೆಯುವ ಸಾಧನಗಳನ್ನು ಅಥವಾ ಅಂತಹ ಪರಿಕರಗಳನ್ನು ತೆಗೆದುಕೊಂಡು ಹೋಗುವುದನ್ನು ನಿಷೇಧಿಸಲಾಗಿದೆ. ಮತ ಎಣಿಕೆ ಕೇಂದ್ರದ ಸುತ್ತ 100ಮೀ ವ್ಯಾಪ್ತಿಯಲ್ಲಿ ಬಹಿರಂಗವಾಗಿ ಘೋಷಣೆ ಮಾಡುವುದು, ಪದ ಹಾಡುವುದು, ವಾದ್ಯ ಬಾರಿಸುವುದು, ವ್ಯಾಕ್ಯಾನ ಕೊಡುವುದು, ಸನ್ನೆ ಅಥವಾ ನಕಲಿ ಪ್ರರ್ದಶನವನ್ನು ಹಾಗೂ ಸಾರ್ವಜನಿಕ ಸಭ್ಯತೆ ಅಥವಾ ನೀತಿಯನ್ನು ಆಕ್ರಮಿಸಬಹುದಾದ ಕೃತ್ಯಗಳನ್ನು ನಿರ್ಭಧಿಸಲಾಗಿದೆ. ಸಾರ್ವಜನಿಕವಾಗಿ ಯಾವುದೇ ವ್ಯಕ್ತಿ ಪ್ರಚೋದನಾತ್ಮಕ ಹಾಗೂ ಉದ್ರೇಕಕಾರಿ ಹಾಡುಗಳು, ಕೂಗಾಡುವುದು ಹಾಗೂ ವ್ಯಕ್ತಿಗಳ ತೇಜೋವಧೆ ಮಾಡುವಂತಹ ಚಿತ್ರಗಳು, ಚಿಹ್ನೆಗಳು, ಪ್ರತಿಕೃತಿಗಳು, ಮುಂತಾದವುಗಳನ್ನು ಪ್ರದರ್ಶಿಸುವುದಾಗಲಿ ಹಾಗೂ ಸಾರ್ವಜನಿಕರ ಗಾಂಭೀರ್ಯ ಹಾಗೂ ನೈತಿಕತೆಗೆ ಭಂಗ ತರುವಂತಹ ಅಥವಾ ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ತರುವಂತಹ ಯಾವುದೇ ಕೃತ್ಯಗಳಲ್ಲಿ ತೊಡಗಿರುವುದನ್ನು ನಿರ್ಭಂಧಿಸಲಾಗಿದೆ. ಯಾವುದೇ ವ್ಯಕ್ತಿ ಸಾರ್ವಜನಿಕವಾಗಿ ಮೇಲೆ ವಿವರಿಸಿದ ಮಾರಕಾಸ್ತ್ರಗಳು, ಸ್ಫೋಟಕ ವಸ್ತುಗಳು, ವಿನಾಷಕಾರಿ ವಸ್ತುಗಳು ಹಾಗೂ ಇತರ ಆಕ್ಷೇಪಾರ್ಹ ವಸ್ತುಗಳನ್ನು ಹೊಂದಿದ್ದು, ಕಂಡುಬಂದ ಕೂಡಲೇ ಅವುಗಳನ್ನು ವಶಪಡಿಸಿಕೊಳ್ಳಲು ಯಾವುದೇ ಪೊಲೀಸ್ ಅಧಿಕಾರಿಗಳಿಗೆ ಅಧಿಕಾರವಿರುತ್ತದೆ. ಅಂತಹ ಮಾರಕಾಸ್ತ್ರಗಳನ್ನು ಸರ್ಕಾರಕ್ಕೆ ಮುಟ್ಟುಗೋಲು ಮಾಡಿಕೊಳ್ಳಲಾಗುವುದು. ಅಲ್ಲದೇ ಸಂಬಂಧಿಸಿದ ವ್ಯಕ್ತಿಗಳ ಮೇಲೆ ಕಾನೂನು ರೀತ್ಯ ಕ್ರಮ ಜರುಗಿಸಲಾಗುವುದು. ಈ ಮೇಲಿನ ಆದೇಶವನ್ನು ಉಲ್ಲಂಘಿಸುವವರ ವಿರುದ್ಧ ಭಾರತೀಯ ದಂಡ ಸಂಹಿತೆ ಕಲಂ 188ರ ಪ್ರಕಾರ ಕ್ರಮವನ್ನು ಜರುಗಿಸಲಾಗುವುದು ಎಂದು ಜಿಲ್ಲಾ ದಂಡಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ಅಕ್ರಂ ಪಾಷ ಅವರು ನಿಷೇಧಾಜ್ಞೆ ಆದೇಶದಲ್ಲಿ ತಿಳಿಸಿದ್ದಾರೆ.

## ಅಕ್ರಮ ಮರಳು ದಂಧೆ; ಪತ್ರಕರ್ತನಿಗೆ ಸೂಕ್ತ ರಕ್ಷಣೆ, ಘಟನೆ ಬಗ್ಗೆ ತನಿಖೆ

**ಬೆಂಗಳೂರು:** ಅಕ್ರಮ ಮರಳುಗಾರಿಕೆ ಬಗ್ಗೆ ವರದಿ ಮಾಡಿದ್ದ ಸಿಂದಗಿ ಪತ್ರಕರ್ತ ಗುಂಡು ಕುಲಕರ್ಣಿ ಅವರಿಗೆ ಸಿಂದಗಿ ಪೊಲೀಸ್ ಠಾಣೆಯ ಸರ್ಕಲ್ ಇನ್ಸ್ಪೆಕ್ಟರ್ ಮತ್ತು ಸಬ್ ಇನ್ಸ್ಪೆಕ್ಟರ್ ಅವರು ಬೆದರಿಕೆ ಹಾಕಿರುವ ಪ್ರಕರಣದ ಬಗ್ಗೆ ತನಿಖೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಋಷಿಕೇಶ ಭಗವಾನ್ ತಿಳಿಸಿದ್ದಾರೆ.

ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರ ನೇತೃತ್ವದ ನಿಯೋಗವು ಪತ್ರಕರ್ತ ಗುಂಡು ಕುಲಕರ್ಣಿ ಅವರ ಜೊತೆಗೆ ವಿಧಾನಸೌಧದಲ್ಲಿ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರನ್ನು ಭೇಟಿ ಮಾಡಿ ಅಲ್ಲಿ ನಡೆದಿರುವ ಘಟನಾವಳಿಗಳನ್ನು ವಿವರಿಸಿತು. ಕೂಡಲೇ ಕೆ.ವಿ.ಪ್ರಭಾಕರ್ ಅವರು ವಿಜಯಪುರ ಎಸ್ಪಿಗೆ ಫೋನಾಯಿಸಿ, ಪತ್ರಕರ್ತನಿಗೆ ಬೆದರಿಕೆ ಹಾಕಿರುವ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಸೂಕ್ತ ಕ್ರಮಕ್ಕೆ ತಿಳಿಸಿದರು. ಈ ಕೂಡಲೇ ಡಿವೈಎಸ್ಪಿ ಮಟ್ಟದ ಅಧಿಕಾರಿ ನೇತೃತ್ವದಲ್ಲಿ ಪರಿಶೀಲನೆ ಮಾಡಿಸಿ ಕ್ರಮ ತೆಗೆದುಕೊಳ್ಳುವುದಾಗಿ ಭರವಸೆ ಎಸ್ಪಿ ನೀಡಿದರು.

ಭೀಮಾತೀರದ ಮರಳು ಅಕ್ರಮ ದಂಧೆ ಬಗ್ಗೆ ವರದಿ ಮಾಡಿದ ಪತ್ರಕರ್ತ ಗುಂಡು ಕುಲಕರ್ಣಿ ಅವರಿಗೆ ಸಿಂಧಗಿಯ ಪೊಲೀಸ್ ಇನ್ಸ್ಕ್ಟರ್ ಮತ್ತು ಸಬ್ ಇನ್ಸ್ಕ್ಟರ್ ಬೆದರಿಕೆ ಹಾಕುವ ಮೂಲಕ ಮಾಧ್ಯಮ ಸ್ವಾತಂತ್ರವನ್ನು ಹತ್ತಿಕ್ಕುವ ಪ್ರಯತ್ನ ಮಾಡಿರುವುದು ಖಂಡನೀಯ. ಈ ಬಗ್ಗೆ ಕಟ್ಟುನಿಟ್ಟಿನ ಕ್ರಮ ಜರುಗಿಸಿ, ಇಬ್ಬರು ಅಧಿಕಾರಿಗಳನ್ನು ಅಮಾನತ್ತು ಮಾಡಬೇಕು. ಪತ್ರಕರ್ತನಿಗೆ ರಕ್ಷಣೆ ನೀಡಬೇಕು ಎಂದು ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದ್ದರು.

### ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ, ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶ ಆನಂದ ಎಂ ಸಲಹೆ

# ದೇಶವನ್ನು ತಂಬಾಕು ಮುಕ್ತ ವಲಯವನ್ನಾಗಿ ಮಾಡೋಣ

**ಮಂಡ್ಯ:** ತಂಬಾಕು ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಹೆಚ್ಚು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ದೇಶವನ್ನು ತಂಬಾಕು ಮುಕ್ತಗೊಳಿಸೋಣ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶ ಆನಂದ ಎಂ ಅವರು ತಿಳಿಸಿದರು.

ಮಂಡ್ಯ ಜಿಲ್ಲಾ ಆಸ್ಪತ್ರೆ 2ನೇ ಮಹಡಿ ಇ ಎನ್ ಟಿ ಸಭಾಂಗಣದಲ್ಲಿ ವಿಶ್ವ ತಂಬಾಕು ರಹಿತ ದಿನದ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಇಂದಿನ ಮಕ್ಕಳೇ ನಾಳೆ ದೇಶದ ಪ್ರಜೆಗಳಾಗಿ ಅಭಿವೃದ್ಧಿಗೆ ಕೈ ಜೋಡಿಸುತ್ತಾರೆ. ಮಕ್ಕಳು ಉತ್ತಮ ಪ್ರಜೆಗಳೊಂದಿಗೆ ಆರೋಗ್ಯಯುತ ಪ್ರಜೆಗಳಾಗಬೇಕು. ತಂಬಾಕು ದೇಹದಲ್ಲಿ ಶ್ವಾಸಕೋಶ ಸೇರಿದಂತೆ ಬಹಳಷ್ಟು ಅಂಗಗಳಿಗೆ ತೊಂದರೆ ಉಂಟುಮಾಡುತ್ತದೆ ಎಂಬ ವಿಷಯವನ್ನು ಮಕ್ಕಳಿಗೆ ಚಿಕ್ಕ ವಯಸ್ಸಿನಿಂದಲೇ ಮನದಟ್ಟು ಮಾಡಬೇಕು. ಈ ಕೆಲಸದಲ್ಲಿ ವೈದ್ಯರು ಹಾಗೂ ಶಿಕ್ಷಕರ ಕಾರ್ಯ ಮಹತ್ವದಾಗಿದ್ದು, ಪ್ರತಿಯೊಬ್ಬರು ತಮ್ಮ ಸುತ್ತಮುತ್ತಲಿನ ಪ್ರದೇಶವನ್ನು ತಂಬಾಕು ಮುಕ್ತಗೊಳಿಸಲು ಕೈಜೋಡಿಸಬೇಕು ಎಂದರು.

ಈ ವರ್ಷದ ವಿಶ್ವ ತಂಬಾಕು ರಹಿತ ದಿನದ ಘೋಷವಾಕ್ಯವಾದ ತಂಬಾಕು ಉದ್ಯಮದ ಹಸ್ತಕ್ಷೇಪ ದಿಂದ ಮಕ್ಕಳನ್ನು ರಕ್ಷಿಸುವುದು ಎಂಬ ವಾಕ್ಯವನ್ನು ಹೇಳಲಾಗಿದೆ ಕಾರಣ ತಂಬಾಕಿಗೆ ಚಿಕ್ಕ ಮಕ್ಕಳೇ ಹೆಚ್ಚಾಗಿ ಅವಲಂಬಿತರಾಗಿದ್ದಾರೆ, ತಂಬಾಕಿನಿಂದ ಮಕ್ಕಳನ್ನು ರಕ್ಷಿಸಬೇಕು ಎಂಬುದು ಘೋಷ ವಾಕ್ಯದ ಅರ್ಥ ಎಂದರು.




ಜಿಲ್ಲಾ ಕಾರಾಗೃಹ ಅಧೀಕ್ಷಕರಾದ ಲೋಕೇಶ್ ಟಿ ಅವರು ಮಾತನಾಡಿ ತಂಬಾಕು ಎಂಬುವುದು ಮನುಷ್ಯನ ಜೀವನವನ್ನೇ ಹಾಳು ಮಾಡುವ ಮಾರಕವಾದ ವಸ್ತು. ಇದರಿಂದ ಪ್ರತಿಯೊಬ್ಬರು ಜಾಗರೂಕತೆಯಿಂದ ಇರಿ ತಂಬಾಕು ಎಂಬ ಚಟಕ್ಕೆ ಯಾರು ಕೂಡ ದಾಸರಾಗಬೇಡಿ ಎಂದರು.

ಜೈಲಿನಲ್ಲಿ ಇರುವ ಖೈದಿಗಳಿಗೆ ತಂಬಾಕು ಸೇವನೆಯಿಂದ ದೂರವಿಡಲು ಹಲವಾರು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಕಾರಾಗೃಹ ಇಂದು ತಂಬಾಕು ಮುಕ್ತ ವಲಯವಾಗಿದೆ ಎಂದರು.

ತಂಬಾಕು ಸೇವನೆಯಿಂದ ಹೊರ ಬರುವುದಕ್ಕೆಂದೆ ಕೈದಿಗಳಿಗೆ ಚ್ವಿಂಗಮ್ ( ಛಿಜತಿಟಿರ ರಣಾಟ ) ಕೊಟ್ಟು ಅಭ್ಯಾಸ ಮಾಡಿಸಿ ತಂಬಾಕು ಸೇವನೆ ನಿಲ್ಲಿಸಲಾಗಿದೆ ಎಂದರು.

ಸಂಪನ್ಮೂಲ ವ್ಯಕ್ತಿಗಳಾದ ಸಮುದಾಯ ಆರೋಗ್ಯ ಶಾಸ್ತ್ರ ವಿಭಾಗ ಸಹಾಯಕ ಪ್ರಾಧ್ಯಾಪಕರಾದ ಡಾ.ಸಿದ್ದಲಿಂಗಪ್ಪ ಹೂಗರ್ ಅವರು ಮಾತನಾಡಿ ತಂಬಾಕನ್ನು ಮೊದಲಿಗೆ ಯಾರು ಕೂಡ ತಮ್ಮ ಸ್ವಂತ ಹಣದಿಂದ ಸೇವಿಸುವದಿಲ್ಲ ಯಾರೋ ಕೊಟ್ಟಂತಹ ತಂಬಾಕನ್ನು ಸೇವಿಸಿರುವವರೇ ಹೆಚ್ಚು, ತಂಬಾಕು ಸೇವನೆ ಸಹವಾಸದಿಂದ ಬರುತ್ತದೆ. ತಂಬಾಕು ಸೇವನೆ ಮಾಡುವವರ ಸಹವಾಸ ಮಾಡಿ ಬಹಳಷ್ಟು ಜನ ತಂಬಾಕು ಎಂಬ ಚಟಕ್ಕೆ ದಾಸರಾಗಿ ಹೋಗಿದ್ದಾರೆ ಎಂದರು.

ತಂಬಾಕಿನಿಂದ ಕೂದಲು ಮತ್ತೆ ಉಗುರು ಗಳಿಗೆ ಹಾನಿ ಆಗುತ್ತಿರಲಿಲ್ಲ ಆದರೆ ಇತ್ತೀಚೆಗೆ ಬಂದ ವರದಿಯ ಪ್ರಕಾರ ತಂಬಾಕು ಎನ್ನುವುದು ಇಡೀ ದೇಹವನ್ನೆ ಆವರಿಸಿಕೊಳ್ಳುತ್ತಿದೆ ಎಲ್ಲರೂ ತಮ್ಮ ಮನೆಯಲ್ಲಿರುವವರು ತಂಬಾಕು ಸೇವನೆ ಮಾಡುವಂತೆ ನೋಡಿಕೊಳ್ಳಿ, ಸೇವನೆ ಮಾಡುತ್ತಿರುವವರಿಗೂ ಕೂಡ ತಿಳಿಸಿ ಬುದ್ದಿ ಹೇಳಬೇಕು ಎಂದರು.

ಕಾರ್ಯಕ್ರಮದ ಕೊನೆಯಲ್ಲಿ ನಮ್ಮ ದೇಶವನ್ನು ತಂಬಾಕು ಮುಕ್ತ ಮಾಡುತ್ತೇವೆ ಎಂದು ಎಲ್ಲರಿಗೂ ಪ್ರತಿಜ್ಞಾವಿಧಿಯನ್ನು ಬೋಧಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಕೆ ಮೋಹನ್, ಮಂಡ್ಯ ವೈದ್ಯಕೀಯ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಡೀನ್ ಹಾಗೂ ನಿರ್ದೇಶಕರಾದ ನರಸಿಂಹಸ್ವಾಮಿ ಪಿ, ಮಂಡ್ಯ ವೈದ್ಯಕೀಯ ವಿಜ್ಞಾನ ಸಂಸ್ಥೆಯ ವೈದ್ಯಕೀಯ ಅಧೀಕ್ಷಕರು ಶಿವಕುಮಾರ್ ಜಿ, ಜಿಲ್ಲಾ ಶಸ್ತ್ರ ಚಿಕಿತ್ಸಕರು ಡಾ.ಗಾಯಿತ್ರಿ, ಜಿಲ್ಲಾ ತರಬೇತಿ ಕೇಂದ್ರ ಪ್ರಾಂಶುಪಾಲರು ಡಾ.ಮಮತ ಹೆಚ್ ಎಂ, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ ಬೆಟ್ಟಸ್ವಾಮಿ ಜಿ.ಎಸ್, ಐ. ಎಂ. ಎ ಅಧ್ಯಕ್ಷ ಡಾ.ಮರಿಗೌಡ, ಮಿಮ್ಸ್ ಸಮುದಾಯ ಆರೋಗ್ಯ ಶಾಸ್ತ್ರ ವಿಭಾಗದ ಡಾ.ಹರೀಶ್ ಬಿ.ಆರ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಡಾ.ವೇಣುಗೋಪಾಲ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಅತಿಥಿ ಉಪನ್ಯಾಸಕರನ್ನು ನೇಮಿಸಲು ಅರ್ಜಿ ಆಹ್ವಾನ

**ಕೋಲಾರ:** ಪ್ರಸಕ್ತ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಪದವಿ ಪೂರ್ವ ಕಾಲೇಜು ಮತ್ತು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಕನ್ನಡ, ಇಂಗ್ಲೀಷ್, ಉರ್ದು, ಗಣಿತ, ರಸಾಯನಶಾಸ್ತ್ರ, ಜೀವಶಾಸ್ತ್ರ, ಭೌತಶಾಸ್ತ್ರ, ವ್ಯವಹಾರ ಶಾಸ್ತ್ರ, ಕಂಪ್ಯೂಟರ್, ಲೆಕ್ಕಶಾಸ್ತ್ರ, ಅರ್ಥಶಾಸ್ತ್ರ ಹುದ್ದೆಗಳಿಗೆ ಎದುರಾಗಿ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಕಡ್ಡಾಯವಾಗಿ ಸಂಬಂಧಪಟ್ಟ ವಿಷಯಗಳಲ್ಲಿ ಸ್ನಾನಕೊತ್ತರ ಪದವಿಯನ್ನು ಪಡೆದು ಬಿ.ಎಡ್ ಪದವಿಯನ್ನು ಪಡೆದಿರಬೇಕು. ಅರ್ಜಿಗಳನ್ನು ಜೂನ್ 13 ರೊಳಗೆ ಸಲ್ಲಿಸಬಹುದು ಹಾಗೂ ಹೆಚ್ಚಿನ ಮಾಹಿತಿಗಾಗಿ ಕೋಲಾರ ತಾಲ್ಲೂಕಿನ ಗಾಜಲದಿನ್ನೆ ಡಾ. ಎ.ಪಿ.ಜೆ.ಅಬ್ದುಲ್ ಕಲಾಂ ವಸತಿ ಪದವಿ ಪೂರ್ವ ಕಾಲೇಜಿ ಪ್ರಾಂಶುಪಾಲರ ಮೊ.ಸಂ.9686799165/9611077530 ಮತ್ತು ಮುಳಬಾಗಿಲು ತಾಲ್ಲೂಕಿನ ಬಾಳಸಂದ್ರ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರ ಮೊ.ಸಂ.9019440484/7892859599 ರವರನ್ನು ಸಂಪರ್ಕಿಸಬಹುದು ಹಾಗೂ ಟಮಕ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಯವರ ಇ-ಮೇಲ್ ವಿಳಾಸ: domkolar@gmail.com ಇಲ್ಲಿಗೆ ಸಲ್ಲಿಸಬಹುದೆಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದರು.

## ಆಗ್ನೇಯ ಪದವೀಧರರ ಕ್ಷೇತ್ರ ಚುನಾವಣೆ ಜೂ.3ಕ್ಕೆ ಮತದಾನ

**ಕೋಲಾರ:** ಕರ್ನಾಟಕ ಆಗ್ನೇಯ ಪದವೀಧರರ ಕ್ಷೇತ್ರ ಚುನಾವಣೆ-2024ರ ಮತದಾನವು 2024ರ ಜೂನ್ 3 ರಂದು ಬೆಳಿಗ್ಗೆ 8 ಗಂಟೆಯಿಂದ ಸಂಜೆ 4 ಗಂಟೆ ವರೆಗೆ ನಡೆಯಲಿದೆ. ಎಂದು ಕೋಲಾರ ಸಹಾಯಕ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿ ಅಕ್ರಂ ಪಾಷ ಅವರು ತಿಳಿಸಿದ್ದಾರೆ. ಚುನಾವಣೆಗೆ ಸಂಬಂಧಪಟ್ಟಂತೆ ಯಾವುದಾದರೂ ಮಾಹಿತಿ ಬೇಕಾದಲ್ಲಿ ಸಾರ್ವಜನಿಕರು, ಮತದಾರರು ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಸ್ಥಾಪಿಸಲಾಗಿರುವ ಮತದಾರರ ಮಾಹಿತಿ ಕೇಂದ್ರ (ಗಿಂಣಜಡಿ ಜಿಚಿಛಿಟಣಚಿಣಂಟಿ ಅಜಟಿಣಡಿಜ) ದೂರವಾಣಿ ಸಂಖ್ಯೆ 1950 ಹಾಗೂ 08152243507 ಗೆ ಕರೆಮಾಡಿ ಮಾಹಿತಿ ಪಡೆಯಬಹುದಾಗಿದೆ. ಮುಂದುವರೆದು ಭಾರತ ಚುನಾವಣಾ ಆಯೋಗದ ಆದೇಶದಂತೆ ಮತದಾನ ಅಂತ್ಯಗೊಳ್ಳುವ 48 ಗಂಟೆಗಳ ಪೂರ್ವದಿಂದ ಅಂದರೆ ದಿನಾಂಕ: 01-06-2024ರ ಅಪರಾಹ್ನ 4.00 ಗಂಟೆಯಿಂದ ಮತದಾನ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಚುನಾವಣಾ ಕ್ಷೇತ್ರದ ವ್ಯಾಪ್ತಿಯಲ್ಲಿ ಶುಷ್ಕ ದಿನಗಳೆಂದು ಘೋಷಿಸಲಾಗಿದೆ. ಈ ಹಿನ್ನೆಲೆಯಲ್ಲಿ ಈ ಅವಧಿಯಲ್ಲಿ ಮದ್ಯ ಮಾರಾಟವನ್ನು ನಿಷೇಧಿಸಲಾಗಿದೆ. ಚುನಾವಣಾ ವ್ಯಾಪ್ತಿಯ ಎಲ್ಲಾ ಮದ್ಯದಂಗಡಿಗಳು ಮುಚ್ಚಲ್ಪಡುತ್ತವೆ. ಚುನಾವಣಾ ನಿಯಮಾವಳಿಗಳನ್ವಯ ದಿನಾಂಕ: 01-06-2024ರ ಅಪರಾಹ್ನ 4.00 ಗಂಟೆಗೆ ಚುನಾವಣಾ ಬಹಿರಂಗ ಪ್ರಚಾರ ಅಂತ್ಯವಾಗಲಿದ್ದು, ನಂತರದಲ್ಲಿ ಯಾವುದೇ ರಾಜಕೀಯ ಪಕ್ಷಗಳು ಅಥವಾ ಅಭ್ಯರ್ಥಿಗಳು ಬಹಿರಂಗ ಪ್ರಚಾರ ಕೈಗೊಳ್ಳುವುದನ್ನು ನಿಷೇಧಿಸಿದೆ ಎಂದು ತಿಳಿಸಿದ್ದಾರೆ.

## ಮದ್ಯ ಮಾರಾಟ, ಮದ್ಯ ಸಾಗಾಣಿಕೆ, ಮದ್ಯ ಸಂಗ್ರಹಣೆ ನಿಷೇಧಿಸಿ ಜಿಲ್ಲಾಧಿಕಾರಿ ಆದೇಶ

**ಕೋಲಾರ:** ಜೂನ್ 4 ರಂದು ಮತ ಎಣಿಕೆ ಕಾರ್ಯವು ಮುಕ್ತವಾಗಿ ಮತ್ತು ಶಾಂತಿಯುತವಾಗಿ ಜರುಗುವ ಹಿನ್ನಲೆಯಲ್ಲಿ ಶಾಂತಿ, ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಮತದಾನ ಪೂರ್ವ ದಿನ ಮತ್ತು ಮತ ಎಣಿಕೆ ದಿನ ಅಂದರೆ ಜೂನ್ 3, 2024 ರ ಮಧ್ಯರಾತ್ರಿಯಿಂದ ಜೂನ್ 4, 2024 ರ ಮಧ್ಯರಾತ್ರಿವರೆಗೆ ಜಿಲ್ಲೆಯಾದ್ಯಂತ ಮದ್ಯಪಾನ, ಮದ್ಯಮಾರಾಟ, ಮದ್ಯ ಸಾಗಾಣಿಕೆ ಮತ್ತು ಮದ್ಯ ಸಂಗ್ರಹಣೆಯನ್ನು ನಿಷೇಧಿಸಿ, ಜೂನ್ 3 ಮತ್ತು ಜೂನ್ 4 ರಂದು ಶುಷ್ಕ ದಿವಸಗಳೆಂದು ಘೋಷಿಸಿ, ಜಿಲ್ಲಾಧಿಕಾರಿ ಆಗಿರುವ ಜಿಲ್ಲಾ ದಂಡಾಧಿಕಾರಿ ಅಕ್ರಂ ಪಾಷ ಅವರು ಆದೇಶಿಸಿದ್ದಾರೆ. ಕೋಲಾರ ಜಿಲ್ಲೆಯ ಎಲ್ಲ ವಿಧಾನ ಸಭಾ ಮತ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಆದೇಶ ಜಾರಿಗೊಳಿಸಲು ಜಿಲ್ಲಾಧಿಕಾರಿಗಳು ನಿರ್ದೇಶಿಸಿದ್ದಾರೆ. ಆದೇಶ ಜಾರಿ ಸಮಯದಲ್ಲಿ ಯಾವತ್ತೂ ಭಾರತೀಯ ತಯಾರಿಕೆಯ ಮದ್ಯದ ಅಂಗಡಿಗಳು, ಬಿಯರ್, ಬಾರ್‌ಗಳು, ಕ್ಲಬ್‌ಗಳು, ಮತ್ತು ಮದ್ಯದ ಡಿಪೋಗಳನ್ನು ಮುಚ್ಚತಕ್ಕದ್ದು ಇದಲ್ಲದೇ ಪರಿಸ್ಥಿತಿಗೆ ಅನುಗುಣವಾಗಿ ಸಾರ್ವಜನಿಕ ಶಾಂತತೆಯನ್ನು ಕಾಯ್ದುಕೊಳ್ಳುವ ಹಿತದೃಷ್ಟಿಯಿಂದ ವಲಯ ಅಬಕಾರಿ ಇನ್ ಸ್ಪೆಕ್ಟರ್‌ರು, ಉಪವಿಭಾಗದ ಅಬಕಾರಿ ಅಧೀಕ್ಷಕರು ಅವಶ್ಯಕತೆ ಕಂಡು ಬಂದಲ್ಲಿ ಶಾಂತಿ ಪಾಲನೆಗೆ ಸೂಕ್ತ ಕ್ರಮ ಕೈಗೊಳ್ಳಲು ಮತ್ತು ಆದೇಶವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಅವರು ಆದೇಶದಲ್ಲಿ ತಿಳಿಸಿದ್ದಾರೆ.

## ರೇಷ್ಮೆ ಬೆಳೆಗಾರರಿಂದ ಅರ್ಜಿ ಆಹ್ವಾನ

**ಮಂಡ್ಯ:** 2024-25ನೇ ಸಾಲಿನ ಜಿಲ್ಲಾ/ತಾಲ್ಲೂಕು ಪಂಚಾಯತ್ ಕಾರ್ಯಕ್ರಮದಡಿಯಲ್ಲಿ ಹೊಸದಾಗಿ ಹಿಪ್ಪು ನೇರಳೆ ನಾಟಿ ನರ್ಸರಿಗೆ ಸಹಾಯಧನ ಪಡೆಯಲು ಮತ್ತು ಸಿ.ಎಸ್.ಆರ್. ರೇಷ್ಮೆ ಬೆಳೆಗಾರರು ಸಾಕುವ ರೇಷ್ಮೆ ಹುಳುಗಳಿಗೆ ತಗಲುವ ಸೋಂಕು ರೋಗವನ್ನು ತಡೆಗಟ್ಟಲು ಬೇಕಾದ ಸೋಂಕು ನಿವಾರಕವನ್ನು ಉಚಿತವಾಗಿ ಪಡೆಯಲು ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಜೂನ್ ತಿಂಗಳ ಅಂತ್ಯದೊಳಗೆ ಆಯಾ ತಾಲ್ಲೂಕಿನ ತಾಂತ್ರಿಕ ಸೇವಾ ಕೇಂದ್ರಗಳಿಗೆ ಅರ್ಜಿಯನ್ನು ಸಲ್ಲಿಸಬಹುದಾಗಿದೆ ಎಂದು ಮಂಡ್ಯ ಜಿಲ್ಲಾ ಪಂಚಾಯತ್ ನ ರೇಷ್ಮೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುಸಿಯುವ ಹಂತದಲ್ಲಿರುವ ಕುಡಿವ ನೀರಿನ ಟ್ಯಾಂಕ್

**ಚಾಮರಾಜನಗರ:** ತಾಲ್ಲೂಕಿನ ದೊಡ್ಡರಾಯಪೇಟೆ ಗ್ರಾಮದಲ್ಲಿ ಕಳೆದ ಐವತ್ತು ವರ್ಷಗಳ ಹಿಂದೆ ನಿರ್ಮಾಣಗೊಂಡಿರುವ ಕುಡಿಯುವ ನೀರಿನ ಟ್ಯಾಂಕ್ ಕುಸಿಯುವ ಹಂತದಲ್ಲಿದೆ.

ಚಾಮರಾಜನಗರ ತಾಲ್ಲೂಕಿನ ಕೂಡ್ಲೂರು ಗ್ರಾಮ ಪಂಚಾಯ್ತಿಯ ದೊಡ್ಡರಾಯಪೇಟೆ ಗ್ರಾಮದಲ್ಲಿ 1974 ರಲ್ಲಿ ನಿರ್ಮಾಣಗೊಂಡಿರುವ ನೀರಿನ ಟ್ಯಾಂಕ್ ಶಿಥಲಗೊಂಡಿದ್ದು, ಪಿಲ್ಲರ್ ನಲ್ಲಿ ಬಿರುಕು ಕಾಣಿಸಿಕೊಂಡಿದೆ. ಇದೇ ನೀರಿನ ಟ್ಯಾಂಕ್ ಪಕ್ಕದಲ್ಲಿ ಮತ್ತೊಂದು ನೀರಿನ ಟ್ಯಾಂಕ್ ನಿರ್ಮಾಣ ಮಾಡಲಾಗಿದ್ದು, ಜಲ ಜೀವನ್ ಯೋಜನೆಯಡಿ ನೀರು ಭರ್ತಿ ಮಾಡಲಾಗುತ್ತಿದೆ. ಅದೂ ಅಲ್ಲದೆ ಶಿಥಲಗೊಂಡಿರುವ ಟ್ಯಾಂಕ್ ನಲ್ಲೂ ನೀರು ಸಂಗ್ರಹ ಮಾಡಲಾಗುತ್ತಿದೆ.

ಶಿಥಲಗೊಂಡಿರುವ ನೀರಿನ ಟ್ಯಾಂಕ್ ನಲ್ಲಿ ನೀರು ಭರ್ತಿಯಾಗುವ ವೇಳೆ ಏನಾದರೂ ಕುಸಿದು ಬಿದ್ದರೆ ಭಾರಿ ಅನಾಹುತವಾಗಲಿದೆ. ಈ ಬಗ್ಗೆ ಶಾಸಕರು ಮತ್ತು ಪಂಚಾಯತ್ ರಾಜ್ ಇಂಜನೀಯರಿಂಗ್ ಅಧಿಕಾರಿಗಳು ಕ್ರಮ ವಹಿಸಿ ಶಿಥಲವಾಗಿರುವ ನೀರಿನ ಟ್ಯಾಂಕ್ ನ್ನು ತೆರವುಗೊಳಿಸಬೇಕಾಗಿದೆ.

ದೊಡ್ಡರಾಯಪೇಟೆ ಗ್ರಾಮವು ದೊಡ್ಡ ಗ್ರಾಮವಾಗಿ ಬೆಳೆಯುತ್ತಿದ್ದು, ಜನ ಸಂಖ್ಯೆಗೆ ಅನುಗುಣವಾಗಿ ಕುಡಿಯುವ ನೀರು ಸಂಗ್ರಹಕ್ಕಾಗಿ ಶಿಥಲಗೊಂಡ ಟ್ಯಾಂಕನ್ನು ಕೆಡವಿ ಹಾಕಿ ಮತ್ತೊಂದು ನೀರಿನ ಟ್ಯಾಂಕ್ ನಿರ್ಮಾಣ ಮಾಡಬೇಕಾಗಿದೆ. ಈ ಬಗ್ಗೆ ಶಾಸಕ ಸಿ.ಪುಟ್ಟರಂಗಶೆಟ್ಟಿರವರು ಹೊಸದಾಗಿ ನೀರಿನ ಟ್ಯಾಂಕ್ ನಿರ್ಮಾಣಕ್ಕೆ ಮುಂದಾಗಬೇಕಾಗಿದೆ.



### ಹಿರಿಯ ಸಿವಿಲ್ ನ್ಯಾಯಾಧೀಶ ಸುನಿಲ್ ಎಸ್.ಹೊಸಮನಿ ಸಲಹೆ

# ತಂಬಾಕು ನಿಷೇಧಕ್ಕೆ ಸಂಕಲ್ಪ ಮಾಡಿ

**ಕೋಲಾರ:** ಮೇ 31 ದಿನವನ್ನು ವಿಶ್ವತಂಬಾಕು ದಿನ ಎಂದು ಸೀಮಿತಗೊಳಿಸದೇ ಪ್ರತಿದಿನ ಸಹ ತಂಬಾಕು ಉತ್ಪನ್ನಗಳ ಮತ್ತು ಮಾಧಕ ವಸ್ತುಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕೆಂದು ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಸುನಿಲ್ ಎಸ್.ಹೊಸಮನಿ ಅವರು ಅಭಿಪ್ರಾಯ ಪಟ್ಟರು.

ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಘಟಕ, ಸಿ.ಬೈರೇಗೌಡ ತಾಂತ್ರಿಕ ಮಹಾವಿದ್ಯಾಲಯ ವಕೀಲರ ಸಂಘ ಹಾಗೂ ವಿವಿಧ ಕಾಲೇಜುಗಳ ಸಹಯೋಗದೊಂದಿಗೆ ತಂಬಾಕು ಉದ್ಯಮದ ಹಸ್ತಕ್ಷೇಪದಿಂದ ಮಕ್ಕಳನ್ನು ರಕ್ಷಿಸುವುದು ಘೋಷಣೆಯ ಮೂಲಕ ಕಾರ್ಯಾಗಾರವನ್ನು ಪ್ರಾರಂಭಿಸಲಾಯಿತು.

ತಂಬಾಕು ಉತ್ಪನ್ನಗಳ ಉದ್ದಿಮೆದಾರರು, ಮಾರಾಟಗಾರರು, ವ್ಯಾಪಾರಸ್ಥರು ಹಾಗೂ ಸಾರ್ವಜನಿಕರು ಕಡ್ಡಾಯವಾಗಿ ಕೊಟ್ಪಾ ಕಾಯ್ದೆಯನ್ನು 2003ರ ಕಾನೂನುಗಳನ್ನು ಪಾಲಿಸಬೇಕು ಎಂದರು. ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ. ಸಾರ್ವಜನಿಕ ಸ್ಥಳದ ಮಾಲೀಕರು, ಮುಖ್ಯಸ್ಥರು ಕನಿಷ್ಠ 60X45 ಸೆ.ಮೀ ನಾಮಫಲಕವನ್ನು ಕಡ್ಡಾಯವಾಗಿ ಪ್ರದರ್ಶಿಸಬೇಕಾಗಿರುತ್ತದೆ. ತಂಬಾಕು ಉತ್ಪನ್ನಗಳ ಪ್ರತ್ಯಕ್ಷ ಅಥವಾ ಪರೋಕ್ಷ ಜಾಹಿರಾತನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ. ಅಪ್ರಾಪ್ತ ಮಕ್ಕಳಿಂದ ಮತ್ತು ಮಕ್ಕಳಿಗೆ ತಂಬಾಕು ಉತ್ಪನ್ನಗಳ ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ಶೈಕ್ಷಣಿಕ ಸಂಸ್ಥೆಗಳ 100 ಗಜ(ಯಾರ್ಡ್) ಅಂತರದಲ್ಲಿ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ. ತಂಬಾಕು ಉತ್ಪನ್ನಗಳ ಪೊಟ್ಟಣಗಳ ಮೇಲೆ ಕಡ್ಡಾಯವಾಗಿ ಹಿಂಬದಿ ಮತ್ತು ಮುಂಬದಿ ಎರಡು ಬದಿಯಲ್ಲಿ ಶೇ.85ರಷ್ಟು ಆರೋಗ್ಯಕರ ಎಚ್ಚರಿಕೆಯ ಚಿಹ್ನೆಯನ್ನು ಪ್ರದರ್ಶಿಸಬೇಕಾಗುತ್ತದೆ. ವ್ಯಾಪಾರಸ್ಥರು ಆರೋಗ್ಯಕರ ಎಚ್ಚರಿಕೆಯ ಚಿಹ್ನೆಯಿಲ್ಲದೆ ಮಾರಾಟ ಮಾಡುವುದನ್ನು ಮತ್ತು ಮಾಲೀಕರು ಸದರಿ ಆರೋಗ್ಯ ಎಚ್ಚರಿಕೆ ಚಿಹ್ನೆಯಿಲ್ಲದ ಉತ್ಪನ್ನಗಳನ್ನು ತಯಾರು ಮಾಡುವುದನ್ನು ನಿಷೇಧಿಸಲಾಗಿದೆ. ಕರ್ನಾಟಕ ರಾಜ್ಯದಲ್ಲಿ ಬಿಡಿ-ಬಿಡಿಯಾಗಿ ಮಾರಾಟ ಮಾಡುತ್ತಿರುವ ಸಿಗರೇಟ್, ಬೀಡಿ ಹಾಕೂ, ಕಡ್ಡಿಪುಡಿ ಮತ್ತು ಇತರೆ ಜಗಿಯುವ ತಂಬಾಕು ಉತ್ಪನ್ನಗಳನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಉಲ್ಲಂಘಿಸಿದಲ್ಲಿ ಅಔಖಿಕಂ ಕಾಯ್ದೆ ಕಲಂ 20ರ ಅಡಿಯಲ್ಲಿ ದಂಡನೆಗೆ ಒಳಪಡಿಸಲಾಗುವುದು ಎಂದು ಹೇಳಿದರು.



ತಂಬಾಕು ಉತ್ಪನ್ನಗಳ ಸೇವನೆಯಿಂದ ಆರೋಗ್ಯ ಮೇಲೆ ಉಂಟಾಗುವ ದುಷ್ಪರಿಣಾಮಗಳೆಂದರೆ ಬಾಯಿ ಕ್ಯಾನ್ಸರ್, ಶ್ವಾಸಕೋಶದ ಕ್ಯಾನ್ಸರ್, ಧ್ವನಿ ಪೆಟ್ಟಿಗೆ ಕ್ಯಾನ್ಸರ್, ಅನ್ನನಾಳದ ಕ್ಯಾನ್ಸರ್, ಕುರುಡುತನ, ಚರ್ಮವು ವಯಸ್ಸಾದಂತೆ ಕಂಡುಬರುವುದು, ದಂತಕ್ಷಯ ಉಂಟಾಗುತ್ತದೆ. ಧೂಮಪಾನವು ಪುರುಷರಲ್ಲಿ ವೀರ್ಯ ಉತ್ಪತ್ತಿಯನ್ನು ಕಡಿಮೆ ಮತ್ತು ವಿಕೃತಿಗೊಳಿಸುತ್ತದೆ. ಶ್ವಾಸಕೋಶದ ಸಾಮರ್ಥ್ಯ ಕಡಿಮೆಯಾಗುವುದು. ಗ್ಯಾಂಗ್ರಿನ್, ಹೃದಯಾಘಾತ, ಉಂಟಾಗುತ್ತದೆ ಎಂದು ತಾಲ್ಲೂಕು ಆರೋಗ್ಯಾಧಿಕಾರಿಗಳಾದ ಎ.ವಿ. ನಾರಾಯಣಸ್ವಾಮಿ ಅವರು ತಿಳಿಸಿದರು.

ತಂಬಾಕು ವ್ಯಸನ ಮುಕ್ತರಾಗಲು ಆಪ್ತ ಸಮಾಲೋಚನೆ, ಔಷದೋಪಚಾರ, ಮಾನಸಿಕ ಬೆಂಬಲ, ಸಲಹೆ ಮತ್ತು ಸಹಕಾರ, ಅನುಪಾಲನೆ, ಮಾನಸಿಕ ಆರೋಗ್ಯದ ಚಿಕಿತ್ಸೆಗಾಗಿ ರೆಫರಲ್ ಮತ್ತು ಪೋನ್ ಇನ್ ಕೌನ್ಸಲಿಂಗ್‌ಗೆ 9886634248, 8453869365 ಗೆ ಕರೆ ಮಾಡಿ ಮಾಹಿತಿ ತಿಳಿಯಬಹುದೆಂದು ಜಿಲ್ಲಾ ಸರ್ವೇಕ್ಷಣಾಧಿಕಾರಿಗಳಾದ ಡಾ.ಎಂ.ಎ. ಚಾರಣಿ ಅವರು ತಿಳಿಸಿದರು. ಕಾರ್ಯಕ್ರಮದಲ್ಲಿ ವಕೀಲರ ಸಂಘದ ಅಧ್ಯಕ್ಷ ಮುನೇಗೌಡ, ಸಿ.ಬೈರೇಗೌಡ ತಾಂತ್ರಿಕ ಮಹಾವಿದ್ಯಾಲಯದ ಕಾರ್ಯದರ್ಶಿ ಕೃಷ್ಣಾರೆಡ್ಡಿ, ಸಿ.ಬೈರೇಗೌಡ ತಾಂತ್ರಿಕ ಮಹಾವಿದ್ಯಾಲಯದ ಪ್ರಾಂಶುಪಾಲರು ಡಾ.ಎಸ್.ಎನ್. ಚಂದ್ರಶೇಖರ್ ಹಾಗೂ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ರಂಗ ಶಿಕ್ಷಣ ಡಿಪ್ಲೊಮಾಕ್ಕೆ ಅರ್ಜಿ

**ಮಂಡ್ಯ:** ಕರ್ನಾಟಕ ರಾಜ್ಯ ಸರ್ಕಾರದಿಂದ ಮಾನ್ಯತೆ ಪಡೆದಿರುವ ಶ್ರೀ ಶಿವಕುಮಾರ ರಂಗಪ್ರಯೋಗ ಶಾಲೆಯಲ್ಲಿ 2024-25 ನೇ ಸಾಲಿನ ರಂಗ ಶಿಕ್ಷಣಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಪ್ರವೇಶಕ್ಕೆ ಕನಿಷ್ಠ ಎಸ್‌ಎಸ್‌ಎಲ್‌ಸಿಯಲ್ಲಿ ಉತ್ತೀರ್ಣರಾಗಿರಬೇಕು, ಪದವೀಧರರಿಗೆ ಆದ್ಯತೆ ಇರುತ್ತದೆ. ರಂಗಭೂಮಿಯಲ್ಲಿ ಆಸಕ್ತಿ ಇದ್ದು, ಸ್ವಲ್ಪಮಟ್ಟಿನ ಅನುಭವ ಇರಬೇಕಾದ್ದು ಅಗತ್ಯ. ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ಊಟ-ವಸತಿ ವ್ಯವಸ್ಥೆ ದೊರೆಯುತ್ತದೆ ಮತ್ತು ಕರ್ನಾಟಕ ಹಾಗೂ ಭಾರತದ ರಂಗತಜ್ಞರಿಂದ ಮತ್ತು ಅಥಿತಿ ಉಪನ್ಯಾಸಕರಿಂದ ತರಗತಿಗಳು ನಡೆಯುತ್ತವೆ. ಗ್ರಂಥಭಂಡಾರ ಹಾಗೂ ದೃಶ್ಯ ಶ್ರವ್ಯ ಪರಿಕರಗಳ ಅನುಕೂಲತೆ ಇದೆ ರಂಗಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಭಾರತೀಯ ರಂಗಭೂಮಿ, ಕನ್ನಡ ಮತ್ತು ನಾಟಕ ಸಾಹಿತ್ಯ ಪರಂಪರೆ, ಪಾಶ್ಚಾತ್ಯ ರಂಗಭೂಮಿ, ಅಭಿನಯ, ಆಹಾರ್ಯ, ಶಿಕ್ಷಣದಲ್ಲಿ ರಂಗಭೂಮಿ ಕುರಿತಾದ ಸೈದ್ಧಾಂತಿಕ ಮತ್ತು ಪ್ರಾಯೋಗಿಕ ತರಗತಿಗಳು ನಡೆಯುತ್ತವೆ.

ಅರ್ಜಿಯನ್ನು ಚಿತ್ರದುರ್ಗ ಜಿಲ್ಲೆ, ಹೊಸದುರ್ಗ ತಾಲ್ಲೂಕ್, ಸಾಣೇನಹಳ್ಳಿ-577-515 ಶ್ರೀ ಶಿವಕುಮಾರ ರಂಗಪ್ರಯೋಗ ಶಾಲೆ ಅಥವಾ www.theatreschoolsanenhalli.org ವೆಬ್ ಸೈಟ್ ಮೂಲಕ ಡೌನ್ಲೋಡ್ ಮಾಡಿ ಜೂನ್ 25ರೊಳಗೆ ಶ್ರೀ ಶಿವಕುಮಾರ ರಂಗಪ್ರಯೋಗ ಶಾಲೆಗೆ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂ.ಸಂ: 9448398144-8861043553-9482942394-9972007015 ನ್ನು ಸಂಪರ್ಕಿಸಬಹುದು ಎಂದು ಚಿತ್ರದುರ್ಗ ಜಿಲ್ಲೆ ಹೊಸದುರ್ಗ ತಾಲ್ಲೂಕಿನ ಸಾಣೇನಹಳ್ಳಿಯಲ್ಲಿರುವ ಶ್ರೀ ಶಿವಕುಮಾರ ರಂಗಪ್ರಯೋಗ ಶಾಲೆಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿಜೆಪಿ ಜೆಡಿಎಸ್ ಮೈತ್ರಿ ಅಭ್ಯರ್ಥಿ ವಿವೇಕಾನಂದ ಪರ ಮತಯಾಚನೆ

**ತಾಂಡವಪುರ:** ಶಿಕ್ಷಣ ಕ್ಷೇತ್ರದ ಜೆಡಿಎಸ್ ಬಿಜೆಪಿ ಮೈತ್ರಿ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ಕೆ ವಿವೇಕಾನಂದ ಪರವಾಗಿ ವರುಣ ವಿಧಾನಸಭಾ ಕ್ಷೇತ್ರದ ಚತ್ರ ಹೋಬಳಿಯ ಶಿಕ್ಷಕರನ್ನು ಭೇಟಿ ಮಾಡಿ ಬಿಜೆಪಿ ಪಕ್ಷದ ಮುಖಂಡರಾದ ಸಿ ಚಿಕ್ಕರಂಗನಾಯಕ ಹದಿನಾರು ಸತೀಶ್ ಛತ್ರ ಗ್ರಾಮ ಪಂಚಾಯತಿಯ ಸದಸ್ಯ ಸಿಎನ್ ಚಂದ್ರು ಚುನಾವಣಾ ಉಸ್ತುವಾರಿ ಸುರೇಶ್ ಬಾಬು ರವರ ನೇತೃತ್ವದಲ್ಲಿ ಮತಯಾಚನೆ ಮಾಡಿದರು ವರುಣ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ರಾಂಪುರ ಮರಳೂರು ತಾಂಡವಪುರ ಹೊಸಕೋಟೆ ಮಲ್ಲುಪುರ ಸೇರಿದಂತೆ ಮುಂತಾದ ಶಾಲೆಗಳಲ್ಲಿ ಬಿಜೆಪಿ ಮುಖಂಡರು ಮೈತ್ರಿ ಪಕ್ಷದ ಅಭ್ಯರ್ಥಿ ಪರ ಮತಾಯಶ್ರೀ ವಿವೇಕಾನಂದರವರಿಗೆ ತಮ್ಮ ಸೇವೆ ಮಾಡಲು ಅವಕಾಶ ಮಾಡಿಕೊಡಬೇಕೆಂದು ಶಿಕ್ಷಕ ಮತದಾರರಲ್ಲಿ ಮನವಿ ಮಾಡಿದರು. ಈ ಪ್ರಚಾರದಲ್ಲಿ ಸುರೇಶ್ ಬಾಬು ಸತೀಶ್ ಚಿಕ್ಕರಂಗನಾಯಕ ವರುಣ ವಿಧಾನಸಭಾ ಕ್ಷೇತ್ರದ ಬಿಜೆಪಿ ಪಕ್ಷದ ಪರಿಶಿಷ್ಟ ಪಂಗಡದ ಅಧ್ಯಕ್ಷ ಹಾಗೂ ಗ್ರಾಮ ಪಂಚಾಯತ್ ಸದಸ್ಯ ಸಿಎನ್ ಚಂದ್ರು ಬಿದರಗೂಡು ಕುಮಾರ್ ವೆಂಕಟರಮಶೆಟ್ಟಿ ನಾಗರಾಜು ಸೇರಿದಂತೆ ಮುಂತಾದವರು ಈ ಸಂದರ್ಭದಲ್ಲಿ ಹಾಜರಿದ್ದರು.



## ಗ್ರಾಮೀಣ ಮಕ್ಕಳಿಗೆ 'ಕೂಸಿನ ಮನೆ' ಆಸರೆ

**ರಾಮನಗರ:** ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ (ನರೇಗಾ) ಯೋಜನೆಯಡಿ ಗ್ರಾಮೀಣ ಪ್ರದೇಶದ ಮಕ್ಕಳಿಗೆ ಕೂಸಿನ ಮನೆ ಆಸರೆಯಾಗಿದೆ. ಗ್ರಾಮ ಪಂಚಾಯಿತಿಗೆ ಒಂದರಂತೆ ಚನ್ನಪಟ್ಟಣ ತಾಲ್ಲೂಕಿನಲ್ಲಿ ಆರಂಭಿಸಿರುವ 28 ಕೂಸಿನ ಮನೆಗಳು ಗ್ರಾಮ ಪ್ರದೇಶದ ಮಕ್ಕಳಿಗೆ ಅನುಕೂಲ ವಾಗಿದೆ, ಕೂಸಿನ ಮನೆ ದಿನಗಳಲ್ಲಿ ಬೆಳಿಗ್ಗೆ 9.30 ರಿಂದ ಸಂಜೆ 4 ರ ವರೆಗೆ ಕಾರ್ಯನಿರ್ವಹಿಸುತ್ತಿದ್ದು, ಆರು ತಿಂಗಳಿಂದ ಮೂರು ವರ್ಷದ ಒಳಗಿನ ಮಕ್ಕಳ ಆರೈಕೆಯಲ್ಲಿ ಕೂಸಿನ ಮನೆ ತೊಡಗಿಸಿಕೊಂಡಿವೆ. ಅಂಗನವಾಡಿ, ಶಾಲೆ, ಬಳಕೆಯಲ್ಲಿ ಇಲ್ಲದ ಇತರೆ ಸರ್ಕಾರಿ ಕಚೇರಿಗಳಲ್ಲಿ ಎರಡು ತಿಂಗಳ ಹಿಂದೆ ಕೂಸಿನ ಮನೆ ಶುರು ಮಾಡಲಾಗಿದೆ. ಆರಂಭದಲ್ಲಿ ಮಕ್ಕಳು ನಿರೀಕ್ಷಿತ ಪ್ರಮಾಣದಲ್ಲಿ ಕೂಸಿನ ಮನೆಗೆ ಬಂದಿರಲಿಲ್ಲ. ಪಂಚಾಯಿತಿ ಹಾಗೂ ಶಿಶು ಆರೈಕೆದಾರರ ಜಾಗೃತಿಯ ಫಲವಾಗಿ ಮಹಿಳಾ ಕಾರ್ಮಿಕರು ಕೂಸಿನ ಮನೆಯಲ್ಲಿ ಮಕ್ಕಳನ್ನು ಬಿಟ್ಟು ಕೆಲಸಕ್ಕೆ ಹೋಗಲಾರಂಭಿಸಿದ್ದಾರೆ. ಪರಿಣಾಮವಾಗಿ, ಮಕ್ಕಳ ಸಂಖ್ಯೆ ಹೆಚ್ಚುತ್ತಿದೆ. ಚನ್ನಪಟ್ಟಣ ತಾಲ್ಲೂಕಿನ ಸುಳ್ಳೇರಿ ಗ್ರಾಮದ ಕೂಸಿನ ಮನೆಯಲ್ಲಿ ಪ್ರಾರಂಭದಲ್ಲಿ ಕಾರ್ಮಿಕರ ಐದು ಮಕ್ಕಳು ಮಾತ್ರ ಹೆಸರು ನೋಂದಾಯಿಸಿಕೊಂಡಿದ್ದರು. ಈಗ ಸಂಖ್ಯೆ 15 ಕ್ಕೆ ಏರಿದೆ. ಕೋಡಂಬಳ್ಳಿ, ಇಗ್ಗಲೂರು, ರಾಂಪುರ, ಚೆಕ್ಕೆರೆ, ಬಿ.ವಿ ಹಳ್ಳಿ, ಭೂಹಳ್ಳಿ, ಸೋಗಾಲ, ದಶವಾರ, ಬೇವೂರು, ಕೂಡ್ಲೂರು, ಸೇರಿದಂತೆ 28 ಗ್ರಾಮ ಪಂಚಾಯಿತಿಗಲ್ಲಿ ಕೂಸಿನ ಮನೆ ಪ್ರಾರಂಭವಾಗಿದ್ದು ತಾಲ್ಲೂಕಿನ ಬಹುತೇಕ ಕೂಸಿನ ಮನೆಗಳಲ್ಲಿ ಮಕ್ಕಳ ಸಂಖ್ಯೆ ಏರಿಕೆಯಾಗಿದೆ. ಕೆಲಸಕ್ಕೆ ಹೋಗುವ ಮಹಿಳಾ ಕಾರ್ಮಿಕರಿಗೆ (ಪೋಷಕರು) ಕೂಸಿನ ಮನೆ ಅನುಕೂಲವಾಗಲಿದೆ. ಉಳಿದ 4 ಪಂಚಾಯಿತಿಗಳಾದ ಮಳೂರು, ವಂದಾರಗುಪ್ಪೆ, ಮತ್ತಿಕೆರೆ, ಮಾಕಳಿ ಗಳಲ್ಲಿ ಮುಂದಿನ ಮೂರು -ನಾಲ್ಕು ತಿಂಗಳಲ್ಲಿ ಪ್ರಾರಂಭವಾಗಲಿವೆ. ಅಭಿವ್ಯಕ್ತ ಕುಟುಂಬದಿಂದ ವಿಭಕ್ತ ಕುಟುಂಬಗಳಾಗಿ ಬದಲಾಗಿರುವ ಸಮಾಜದಲ್ಲಿ ಕೆಲಸದ ಅವಶ್ಯಕತೆ ಹೆಚ್ಚಿದ್ದು ಅಂತಹ ಪೋಷಕರಿಗೆ ಕೂಸಿನ ಮನೆ ಅನುಕೂಲವಾಗಿದೆ. ತಾಯಂದಿರು ಏನೆ ಊಟ ಸಿಕ್ಕರು ಮಕ್ಕಳಿಗೆ ಕೊಡುತ್ತಾರೆ. ಇದರಿಂದ ತಾಯಂದಿರು ಅಪೌಷ್ಠಿಕತೆಗೆ ಒಳಗಾಗುತ್ತಿದ್ದರು. ಈಗ ಮಕ್ಕಳಿಗೆ ಕೂಸಿನ ಮನೆಯಲ್ಲೆ ಪೌಷ್ಠಿಕ ಆಹಾರ ನೀಡುವುದರಿಂದ ಮಕ್ಕಳಿಗೆ ನೀಡುತ್ತಿದ್ದ ಆಹಾರ ತಾಯಂದರಿಗೆ ಸಿಗುತ್ತಿದೆ.



# ಜಿಲ್ಲೆಯಾದ್ಯಂತ 4, 5ರಂದು ಪ್ರತಿಬಂಧಕಾಜ್ಞೆ ಜಾರಿ

**ಮಂಡ್ಯ:** ಲೋಕಸಭಾ ಸಾರ್ವತ್ರಿಕ ಚುನಾವಣೆ-2024 ರ ಮತ ಎಣಿಕೆಯು ಜೂನ್ 4 ರಂದು ಮಂಡ್ಯ ನಗರದಲ್ಲಿ ನಡೆಯಲಿರುವುದರಿಂದ ಮತ ಎಣಿಕೆ ದಿನದಂದು ಮತ್ತು ಮತ ಎಣಿಕೆ ಕಾರ್ಯವು ಮುಗಿಯುತ್ತಿದ್ದಂತೆ ಗೆದ್ದ ಅಭ್ಯರ್ಥಿಗಳು ಅವರ ಬೆಂಬಲಿಗರೊಡನೆ ಪಟಾಕಿ ಸಿಡಿಸಿಕೊಂಡು ಮೆರವಣಿಗೆಯ ಮೂಲಕ ವಿಜಯೋತ್ಸವವನ್ನು ಚುನಾವಣಾ ಮತ ಎಣಿಕೆ ಕಾರ್ಯ ನಡೆಯುತ್ತಿರುವ ಕೇಂದ್ರದ ಬಳಿ ಹಾಗೂ ಅವರವರ ಕ್ಷೇತ್ರ ವ್ಯಾಪ್ತಿಯ ಪಟ್ಟಣಗಳಲ್ಲಿ ಮತ್ತು ಗ್ರಾಮಗಳಿಗೆ ತೆರಳಿ ಅಲ್ಲಿಯೂ ಸಹ ಮೆರವಣಿಗೆ ಹಾಗೂ ವಿಜಯೋತ್ಸವವನ್ನು ಆಚರಿಸುವ ಸಂಭವವಿರುತ್ತದೆ. ಈ ಸಮಯದಲ್ಲಿ ಪರಾಭವಗೊಂಡ ಅಭ್ಯರ್ಥಿಗಳ ಹಾಗೂ ಅವರ ಬೆಂಬಲಿಗರ ನಡುವೆ ಘರ್ಷಣೆ ಉಂಟಾಗಿ ಗ್ರಾಮಗಳಲ್ಲಿ ಹಲ್ಲೆಗಳು ನಡೆದು ಒಬ್ಬರು ಮತ್ತೊಬ್ಬರ ಮನೆಗಳಿಗೆ ಕಲ್ಲುಗಳನ್ನು ಹೊಡೆದು ಬೆಂಕಿ ಹಚ್ಚಿ ದುಷ್ಕೃತ್ಯಗಳನ್ನು ಮಾಡುವ ಸಾಧ್ಯತೆ ಇದ್ದು ಕಾನೂನು ಮತ್ತು ಸುವ್ಯವಸ್ಥೆಗೆ ಬಂದ ಉಂಟಾಗುವ ಸಾಧ್ಯತೆಗಳು ಇರುತ್ತದೆ. ಆದ್ದರಿಂದ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಸಲುವಾಗಿ ಜೂನ್ 4 ಬೆಳಿಗ್ಗೆ 6 ಗಂಟೆಯಿಂದ ಜೂನ್ 5 ಬೆಳಿಗ್ಗೆ 6 ಗಂಟೆಯವರೆಗೆ ಮಂಡ್ಯ ಜಿಲ್ಲೆಯಾದ್ಯಂತ ನಿಷೇಧಾಜ್ಞೆ ಜಾರಿಗೊಳಿಸಿ ಮಂಡ್ಯ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ. ಕುಮಾರ ಅವರು ಆದೇಶ ಹೊರಡಿಸಿದ್ದಾರೆ.

ಆದೇಶದಲ್ಲಿ ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ 05 ಕ್ಕಿಂತ ಹೆಚ್ಚು ಜನರು ಗುಂಪು ಸೇರುವುದು, ಮೆರವಣಿಗೆ ಅಥವಾ ಸಭೆ ಸಮಾರಂಭ ಜರುಗಿಸುವುದನ್ನು ನಿಷೇದಿಸಿದೆ.

ಮತ ಎಣಿಕೆ ಕೇಂದ್ರದ ಅವರಣದ ಸುತ್ತಲಿನ 100 ಮೀಟರ್ ವ್ಯಾಪ್ತಿಯನ್ನು ಕಜಜಜಣಡಿಚಿಟಿ ಚಿಟಿಜ (ಪಾದಚಾರಿ ವಲಯ) ಎಂದು ಗುರುತಿಸಲಾಗಿರುತ್ತದೆ. ಈ ಸಂದರ್ಭದಲ್ಲಿ ಯಾವುದೇ ವಾಹನಗಳಿಗೆ ಪ್ರವೇಶ ಮತ್ತು ಪಾರ್ಕಿಂಗ್ ಮಾಡಲು ಅವಕಾಶ ಇರುವುದಿಲ್ಲ.

ಮತ ಎಣಿಕೆ ಕೇಂದ್ರದ 100 ಮೀಟರ್ ಅಂತರದಲ್ಲಿ ಮೊಬೈಲ್ ಫೋನ್, ಕಾರ್ಡಲೆಸ್ ಫೋನ್ ಅಥವಾ ಇನ್ನಿತರೆ ಎಲೆಕ್ಟ್ರಾನಿಕ್ ಉಪಕರಣಗಳನ್ನು ತೆಗೆದುಕೊಂಡು ಹೋಗುವುದನ್ನು ನಿಷೇಧಿಸಲಾಗಿದೆ. (ಜಿಲ್ಲಾಧಿಕಾರಿ/ಜಿಲ್ಲಾ ಚುನಾವಣಾಧಿಕಾರಿಗಳಿಂದ ಅನುಮತಿ ಪಡೆದ ಚುನಾವಣಾ ಕಾರ್ಯನಿರತ ಅಧಿಕಾರಿಗಳು/ಸಿಬ್ಬಂದಿಗಳನ್ನು ಹೊರತುಪಡಿಸಿ).

ಈ ನಿಷೇದಾಜ್ಞೆ ಇರುವ ಯಾವ ಪ್ರದೇಶದಲ್ಲೂ ದೊಣ್ಣೆ, ಮಚ್ಚು, ಬಂದೂಕು, ಕಲ್ಲುಗಳು, ಸ್ಫೋಟಕ ವಸ್ತುಗಳನ್ನು ಹಾಗೂ ಇನ್ನಿತರ ಮಾರಕಾಸ್ತ್ರ ಗಳನ್ನು ಹಿಡಿದು ತಿರುಗಾಡುವುದನ್ನು ಪ್ರತಿಬಂಧಿಸಲಾಗಿದೆ. ಈ ನಿಷೇದಾಜ್ಞೆ ಇರುವ ಯಾವ ಪ್ರದೇಶದಲ್ಲಿ ವಿಜೇತ ಅಭ್ಯರ್ಥಿಗಳು ಯಾವುದೇ ರೀತಿಯ ವಿಜಯೋತ್ಸವವನ್ನು ಮೆರವಣಿಗೆ ಮೂಲಕ ಆಚರಿಸದಂತೆ ಹಾಗೂ ಪಟಾಕಿ ಮತ್ತು ಇತರೆ ಸಿಡಿ ಮದ್ದುಗಳನ್ನು ಸಿಡಿಸುವುದು ಹಾಗೂ ಸಾರ್ವಜನಿಕ ಸಭೆ ಸಮಾರಂಭಗಳನ್ನು ನಡೆಸುವುದನ್ನು ನಿಷೇಧಿಸಿದೆ.

ಯಾವುದೇ ಸಾರ್ವಜನಿಕರ ಪ್ರದೇಶದಲ್ಲಿ ಕಲ್ಲುಗಳನ್ನು ಒಟ್ಟುಗೂಡಿಸುವುದು, ಯಾ ಕ್ಷಿಪಣಿಗಳ ಅಥವಾ ಕ್ಷಿಪಣಿಯಾಗಿ ಉಪಯೋಗಿಸಲ್ಪಡುವ ಇತರ ಆಯುಧಗಳು ಮತ್ತು ಸಾಧನ ಸಾಮಾಗ್ರಿಗಳನ್ನು ಧರಿಸುವುದನ್ನು ನಿಷೇಧಿಸಿದೆ.

ಈ ನಿಷೇಧಾಜ್ಞೆ ಇರುವ ಪ್ರದೇಶದಲ್ಲಿ ಬಹಿರಂಗವಾಗಿ ಘೋಷಣೆ ಕೂಗುವುದು, ಪ್ರಚೋದನಾತ್ಮಕ ಮತ್ತು ಉದ್ರೇಕಕಾರಿ ಹಾಡುಗಳು, ಕೂಗಾಟ ಮಾಡುವುದನ್ನು ಹಾಗೂ ವ್ಯಕ್ತಿಗಳ ತೇಜೋವಧೆ ಮಾಡುವಂತಹ ಚಿತ್ರಗಳು, ಚಿಹ್ನೆಗಳು, ಪ್ರತಿಕೃತಿಗಳು ಮುಂತಾದವುಗಳನ್ನು ಪ್ರದರ್ಶಿಸುವುದಾಗಲಿ ಹಾಗೂ ಸಾರ್ವಜನಿಕ ಗಾಂಭೀರ್ಯ ಹಾಗೂ ನೈತಿಕತೆಗೆ ಭಂಗ ತರುವಂತಹ ಅಥವಾ ಕಾನೂನು ಸುವ್ಯಸ್ಥೆಗೆ ಭಂಗ ತರುವಂತಹ ಯಾವುದೇ ಕೃತ್ಯಗಳಲ್ಲಿ ತೊಡಗುವುದನ್ನು ನಿಷೇಧಿಸಲಾಗಿದೆ. ಪರಾಜಿತ ಅಭ್ಯರ್ಥಿಗಳ/ಬೆಂಬಲಿತರ ಮನೆಗಳ ಮುಂದೆ ಯಾವುದೇ ಘೋಷಣೆ ಕೂಗುವಂತಿಲ್ಲ. ಪಟಾಕಿ ಹಾಗೂ ಇತರೆ ಸಿಡಿಮದ್ದುಗಳನ್ನು ಸಿಡಿಸುವಂತಿಲ್ಲ. ಯಾವುದೇ ಧ್ವನಿವರ್ಧಕಗಳ ಮೂಲಕ ಪ್ರಚೋದನಾತ್ಮಕ ಹೇಳಿಕೆ ನೀಡುವುದನ್ನು, ಹಾಡುಗಳನ್ನು ಹಾಡುವುದನ್ನು ನಿರ್ಬಂಧಿಸಲಾಗಿದೆ.

ಮನುಷ್ಯ ಶವಗಳ ಅಥವಾ ಪ್ರತಿಕೃತಿ ಅಣಕು ಪ್ರದರ್ಶನ ಮಾಡುವುದನ್ನು ಪ್ರತಿಬಂಧಿಸಲಾಗಿದೆ. ಈ ನಿಷೇದಾಜ್ಞೆಯು ಮದುವೆ, ಶವಸಂಸ್ಕಾರ ಕಾರ್ಯಗಳಿಗೆ, ಧಾರ್ಮಿಕ ಕಾರ್ಯಗಳಿಗೆ ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡಲು ನೇಮಿಸಲ್ಪಟ್ಟಿರುವ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ಹಾಗೂ ಚುನಾವಣಾ ಕಾರ್ಯನಿರತ ಅಧಿಕಾರಿ/ಸಿಬ್ಬಂದಿಗಳಿಗೆ ಅನ್ವಯಿಸುವುದಿಲ್ಲ. ಯಾವುದೇ ವ್ಯಕ್ತಿ ಬಹಿರಂಗವಾಗಿ ಮಾರಕಾಸ್ತ್ರಗಳು, ಸ್ಫೋಟಕ ವಸ್ತುಗಳು ವಿನಾಶಕಾರಿ ವಸ್ತುಗಳು ಹಾಗೂ ಇತರ ಆಕ್ಷೇಪಾರ್ಹ ವಸ್ತುಗಳನ್ನು ಹೊಂದಿರುವುದು ಕಂಡುಬಂದಲ್ಲಿ ಕೂಡಲೇ ಅವುಗಳನ್ನು ವಶಪಡಿಸಿಕೊಳ್ಳಲು ಪೊಲೀಸ್ ಅಧಿಕಾರಿಗಳಿಗೆ ಅಧಿಕಾರ ಇರುತ್ತದೆ. ಅಂತಹ ಮಾರಕಾಸ್ತ್ರಗಳನ್ನು ಸರಕಾರಕ್ಕೆ ಮುಟ್ಟುಗೋಲು ಮಾಡಿಕೊಳ್ಳಲಾಗುವುದು. ಅಲ್ಲದೆ ಸಂಬಂಧಿಸಿದ ವ್ಯಕ್ತಿಗಳ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸಲಾಗುವುದು ಎಂದು ಆದೇಶದಲ್ಲಿ ಅವರು ತಿಳಿಸಿದ್ದಾರೆ.

## 12 ರಂದು ಬಾಲ ಕಾರ್ಮಿಕ ವಿರೋಧಿ ದಿನಾಚರಣೆ



**ಮಂಡ್ಯ:** ಜಿಲ್ಲೆಯಲ್ಲಿ ಬಾಲ ಕಾರ್ಮಿಕ ಪದ್ಧತಿಯ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಲು ಜೂನ್ 12 ರಂದು ಜಾಥಾ ಮತ್ತು ವೇದಿಕೆ ಕಾರ್ಯಕ್ರಮವನ್ನು ವ್ಯವಸ್ಥಿತ ಹಾಗೂ ಅರ್ಥಪೂರ್ಣವಾಗಿ ನಡೆಸಿ ಎಂದು ಜಿಲ್ಲಾಧಿಕಾರಿ ಡಾ. ಕುಮಾರ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಛೇರಿಯ ಸಭಾಂಗಣದಲ್ಲಿ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನದ ಆಯೋಜಿಸುವ ಸಂಬಂಧ ಪೂರ್ವಭಾವಿ ಸಭೆ ನಡೆಸಿ ಮಾತನಾಡಿದರು.

ಹೋಟೆಲ್, ಕಟ್ಟಡ ನಿರ್ಮಾಣ, ಗಣಿಗಾರಿಕೆ ಹಾಗೂ ಮುಂತಾದ ಸ್ಥಳಗಳಲ್ಲಿ ಹೆಚ್ಚಿನ ದಾಳಿಗಳನ್ನು ನಡೆಸಿ ಬಾಲ ಕಾರ್ಮಿಕರನ್ನು ಪತ್ತೆಹಚ್ಚಿ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರುವ ಕೆಲಸವಾಗಬೇಕಿದೆ ಎಂದರು.

ಶಾಲೆಯಿಂದ ಹೊರಗುಳಿಯುವ ಮಕ್ಕಳು ಹೆಚ್ಚಾಗಿ ಬಾಲ ಕಾರ್ಮಿಕರಾಗುತ್ತಾರೆ. ಈ ಹಿನ್ನೆಲೆಯಲ್ಲಿ ಶಿಕ್ಷಣ ಇಲಾಖೆಯೊಂದಿಗೆ ಸಮನ್ವಯದಿಂದ ಕಾರ್ಯ ನಿರ್ವಹಿಸಿ ಶಾಲೆಗೆ ದೀರ್ಘಾವಧಿ ಗೈರು ಹಾಜರಾಗುವ ವಿದ್ಯಾರ್ಥಿಗಳ ಬಗ್ಗೆ ಹೆಚ್ಚಿನ ನಿಗಾ ವಹಿಸಿ ಎಂದರು.

ಶಾಲೆಗಳಲ್ಲಿ ವಿದ್ಯಾರ್ಥಿಗಳು ಹಾಗೂ ಪೋಷಕರಿಗೆ ಬಾಲ ಕಾರ್ಮಿಕ ಪದ್ಧತಿಯಿಂದ ಉಂಟಾಗುವ ತೊಂದರೆಗಳ ಬಗ್ಗೆ ಜಾಗೃತಿ ಕಾರ್ಯಕ್ರಮಗಳನ್ನು ಹೆಚ್ಚು ಆಯೋಜಿಸಿ ಎಂದರು.

2023-24 ನೇ ಸಾಲಿನ ಜಿಲ್ಲೆಯಲ್ಲಿ ಒಟ್ಟು 22 ಬಾಲ ಕಾರ್ಮಿಕರನ್ನು ಗುರುತಿಸಲಾಗಿದ್ದು, ಅವರನ್ನು ಶಾಲೆಗೆ ಸೇರ್ಪಡಿಸಲಾಗಿದೆ. ಅವರ ಪೋಷಕರೊಂದಿಗೆ ನಿರಂತರವಾಗಿ ಸಂಪರ್ಕದಲ್ಲಿದ್ದು ಮತ್ತೆ ಆ ಮಕ್ಕಳು ಬಾಲ ಕಾರ್ಮಿಕರಾಗದಂತೆ ನೋಡಿಕೊಳ್ಳಬೇಕು ಎಂದರು. ಅಪರ ಜಿಲ್ಲಾಧಿಕಾರಿ ಡಾ. ಹೆಚ್. ಎಲ್. ನಾಗರಾಜು, ಉಪವಿಭಾಗಾಧಿಕಾರಿ ಮಹೇಶ್, ಕಾರ್ಮಿಕ ಇಲಾಖೆಯ ಅಧಿಕಾರಿ ಚೇತನ್ ಕುಮಾರ್, ನಗರಸಭೆ ಪೌರಾಯುಕ್ತ ಆರ್ ಮಂಜುನಾಥ್, ಆರ್. ಸಿ. ಎಚ್. ಅಧಿಕಾರಿ ಡಾ. ಅನಿಲ್ ಕುಮಾರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಸಂಜೆ ಟಿಪ್ಸ್



## ಮುತ್ತೂಟ್ ಪಾಪಚ್ಚನ್ ಗ್ರೂಪ್ ಬ್ರ್ಯಾಂಡ್ ಅಂಬಾಸಿಡರ್ ಆಗಿ ಶಾರುಖ್ ಖಾನ್ ನೇಮಕ

ಭಾರತದಲ್ಲಿ 137 ವರ್ಷಗಳಷ್ಟು ಹಳೆಯದಾದ ಪ್ರಮುಖ ಬಿಸಿನೆಸ್ ಗ್ರೂಪ್ ಆಗಿರುವ ಮುತ್ತೂಟ್ ಬ್ಲೂ ಎಂದು ಜನಪ್ರಿಯವಾಗಿ ಕರೆಯಲ್ಪಡುವ ಮುತ್ತೂಟ್ ಪಾಪಚ್ಚನ್ ಗ್ರೂಪ್ (ಎಂಪಿಜಿ) ತನ್ನ ಬ್ರ್ಯಾಂಡ್ ಅಂಬಾಸಿಡರ್ ಆಗಿ ಶಾರುಖ್ ಖಾನ್ ಅವರನ್ನು ನೇಮಿಸಿದೆ. ಈ ಪಾಲುದಾರಿಕೆಯು ಎಂಪಿಜಿಯ ಮಹತ್ವದ ಮೈಲಿಗಲ್ಲು ಆಗಿದ್ದು, ಈ ಸಹಯೋಗ ಬ್ರ್ಯಾಂಡ್‌ನ ಉಪಸ್ಥಿತಿಯನ್ನು ಗಟ್ಟಿಗೊಳಿಸಲಿದೆ ಮತ್ತು ಭಾರತದಾದ್ಯಂತ ಇರುವ ವೈವಿಧ್ಯಮಯ ಪ್ರೇಕ್ಷಕ ವರ್ಗದ ಜೊತೆ ಸಂಪರ್ಕ ಸಾಧಿಸುವುದಕ್ಕೂ ಬಳಕೆ ಆಗಲಿದೆ. ಮುತ್ತೂಟ್ ಪಾಪಚ್ಚನ್ ಗ್ರೂಪ್ ಸಮೂಹವು ಮುತ್ತೂಟ್ ಫಿನ್‌ಕಾರ್ಪ್ ಲಿಮಿಟೆಡ್ (ಗ್ರೂಪ್‌ನ ಪ್ರಮುಖ ಕಂಪನಿ), ಮುತ್ತೂಟ್ ಮೈಕ್ರೋಫಿನ್ ಲಿಮಿಟೆಡ್, ಮುತ್ತೂಟ್ ಕ್ಯಾಪಿಟಲ್ ಸರ್ವಿಸಸ್ ಲಿಮಿಟೆಡ್ ಮತ್ತು ಮುತ್ತೂಟ್ ಹೌಸಿಂಗ್ ಫೈನಾನ್ಸ್ ಕಂಪನಿ ಲಿಮಿಟೆಡ್ ಸೇರಿದಂತೆ ಭಾರತದ ಹಲವು ಪ್ರಮುಖ ಎನ್‌ಬಿಎಫ್‌ಸಿಗಳ ಮಾತೃಸಂಸ್ಥೆ ಆಗಿದೆ. ಶಾರುಖ್ ಖಾನ್ ಜೊತೆಗಿನ ಸಹಯೋಗವು ಎಂಪಿಜಿಯ ದೃಷ್ಟಿಕೋನ ಮತ್ತು ದೇಶದ ಆರ್ಥಿಕ ಬೆಳವಣಿಗೆ ಹಾಗೂ ಆಕಾಂಕ್ಷೆಗಳನ್ನು ಉತ್ತೇಜಿಸಲು ಹೊಂದಿರುವ ದೃಢವಾದ ಬದ್ಧತೆಯನ್ನು ಪ್ರದರ್ಶಿಸುತ್ತದೆ. ಶಾರುಖ್ ಖಾನ್ ಅವರ ಜನಪ್ರಿಯತೆ, ಮನ್ನಣೆ ಸಂಸ್ಥೆಯ ಬದ್ಧತೆಯನ್ನು ಮತ್ತಷ್ಟು ವಿಸ್ತರಿಸಲಿದ್ದು, ಎಲ್ಲಾ ವಯೋಮಾನದ ಗ್ರಾಹಕರನ್ನು ತಲುಪಲು ಮತ್ತು ಅವರು ದೊಡ್ಡ ಕನಸು ಕಾಣುವಂತೆ ಪ್ರೇರೇಪಿಸಲು ನೆರವಾಗಲಿದೆ.ಮುತ್ತೂಟ್ ಪಾಪಚ್ಚನ್ ಗ್ರೂಪ್‌ನ ಅಧ್ಯಕ್ಷರಾದ ಶ್ರೀ ಥಾಮಸ್ ಜಾನ್ ಮುತ್ತೂಟ್ ಅವರು ಶಾರುಖ್ ಖಾನ್ ತಮ್ಮ ತಂಡವನ್ನು ಸೇರುತ್ತಿರುವ ಕುರಿತು ಅಪಾರ ಉತ್ಸಾಹವನ್ನು ವ್ಯಕ್ತಪಡಿಸುತ್ತಾ ಮಾತನಾಡಿ, ಇದು ನಮಗೆ ಮಹತ್ವದ ಮೈಲಿಗಲ್ಲು. ಶಾರುಖ್ ಮಾನವೀಯತೆ ಮತ್ತು ಸ್ವಯಂ- ನಿರ್ಮಿತ ಯಶಸ್ಸಿನ ಪ್ರತೀಕವಾಗಿದ್ದಾರೆ. ಆ ಗುಣಗಳು ನಮ್ಮ ಸಂಸ್ಥೆಯ ಮೌಲ್ಯಗಳ ಜೊತೆ ಸೂಕ್ತವಾಗಿ ಹೊಂದಿಕೊಳ್ಳುತ್ತದೆ ಎಂದು ಹೇಳಿದರು.

## ಹಲಸಿನಕಾಯಿಯ ಉಪ್ಪಿನಕಾಯಿ ರೆಸಿಪಿ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಗುಜ್ಜೆ ಹೋಳು- ಒಂದು ಕಪ್, ಹರಳುಪ್ಪು- ಕಾಲು ಕಪ್, ಮೆಣಸಿನ ಹುಡಿ- ನಾಲ್ಕು ಚಮಚ, ಸಾಸಿವೆ- ಒಂದು ಚಮಚ, ಜೀರಿಗೆ- ಒಂದು ಚಮಚ, ಅರಸಿನ ಹುಡಿ- ಒಂದೂವರೆ ಚಮಚ, ಬೆಲ್ಲ- ಸಣ್ಣ ತುಂಡು, ಲಿಂಬೆ ರಸ- ಎರಡು ಚಮಚ.

### ಮಾಡುವ ವಿಧಾನ

ಎಳೆ ಗುಜ್ಜೆಯನ್ನು ಹೊರಗಿನ ಸಿಪ್ಪೆ , ಗೂಂಜು ತೆಗೆದು ಸಣ್ಣ ತುಂಡುಗಳಾಗಿ ಮಾಡಿಕೊಳ್ಳಿ. ಎರಡು ಗ್ಲಾಸು ನೀರಿಗೆ ಹರಳುಪ್ಪು ಹಾಕಿ ಕದಡಿಕೊಂಡು ಚೆನ್ನಾಗಿ ಕುದಿಸಿಕೊಳ್ಳಿ. ಇದಕ್ಕೆ ಗುಜ್ಜೆ ಹೋಳುಗಳನ್ನು ಹಾಕಿ ಮೆತ್ತಗೆ ಬೇಯಿಸಿಕೊಳ್ಳಿ. ಸಾಸಿವೆ-ಜೀರಿಗೆಯನ್ನು ಎಣ್ಣೆ ಹಾಕದೆ ಹುರಿದು ಹುಡಿಮಾಡಿಟ್ಟುಕೊಳ್ಳಿ. ಕಾದ ಬಾಣಲೆಗೆ ಮೆಣಸಿನ ಹುಡಿ, ಅರಸಿನ ಹುಡಿ ಹಾಕಿ ಪರಿಮಳ ಬರುವವರೆಗೆ ಹುರಿದು ಗುಜ್ಜೆಯ ಹೋಳುಗಳನ್ನು ಹಾಕಿ ಚೆನ್ನಾಗಿ ಮಿಶ್ರಣ ಮಾಡಿ, ಬೇಯಿಸಿದ ನೀರನ್ನು ಸೇರಿಸಿ ಹದಗೊಳಿಸಿ ಕುದಿಸುತ್ತ ಇರಿ. ಬೆಲ್ಲ, ಸಾಸಿವೆ, ಜೀರಿಗೆ ಹುಡಿ, ಸ್ವಲ್ಪ ಉಪ್ಪು ಸೇರಿಸಿ ದಪ್ಪಗಾಗುವವರೆಗೆ ಕುದಿಸಿ ಇಳಿಸಿರಿ. ಕೊನೆಗೆ ಲಿಂಬೆರಸ ಹಾಕಿ ಮುಚ್ಚಿಡಿ. ಆರಿದ ನಂತರ ಚೆನ್ನಾಗಿ ಕಲಸಿಕೊಂಡು ಜಾಡಿಯಲ್ಲಿ ಹಾಕಿಡಿ.

## ಹೊಸ ಅನುಭವ ಪಡೆಯಲು ಹಿಮಾಲಯಕ್ಕೆ ಹೊರಟ ಸೂಪರ್ ಸ್ಟಾರ್ ರಜನಿಕಾಂತ್



ಸೂಪರ್ ಸ್ಟಾರ್ ರಜನಿಕಾಂತ್ ತಮ್ಮ 73ನೇ ವಯಸ್ಸಿನಲ್ಲೂ ಸಖತ್ ಆಕ್ಟೀವ್ ಆಗಿದ್ದಾರೆ. ಬ್ಯಾಕ್ ಟು ಬ್ಯಾಕ್ ಸಿನಿಮಾಗಳಿಗೆ ಬಣ್ಣ ಹಚ್ಚುತ್ತಿರೋ ನಟ ಪ್ರತಿಭಾರಿಯೂ ಹೊಸದೇನೋ ಕಲಿಯಬೇಕು ಎಂದು ಉತ್ಸಾಹದಿಂದಿರುತ್ತಾರೆ. ಅಂತೆಯೇ ಈ ಬಾರಿಯೂ ಹೊಸ ಅನುಭವ ಪಡೆಯಬೇಕು ಎಂದು ಹಿಮಾಲಯದ ಗುಹೆಗಳತ್ತ ಹೆಜ್ಜೆ ಹಾಕಿದ್ದಾರೆ.

ರಜನಿಕಾಂತ್ ನಟನೆಯ 'ಕೂಲಿ' ಸಿನಿಮಾದ ಶೂಟಿಂಗ್ ಆರಂಭಿಸಬೇಕಿದೆ. ಅದಕ್ಕೂ ಮುನ್ನ ಅಧ್ಯಾತ್ಮದ ಅನುಭವ ಪಡೆಯಲು ಅವರು ಕೆಲವು ಸ್ಥಳಗಳಿಗೆ ತೆರಳಲಿದ್ದಾರೆ. ಈಗಾಗಲೇ ಕೇದರನಾಥಕ್ಕೆ ಹೋಗಿರುವ ತಲೈವ ಹಿಮಾಲಯಕ್ಕೂ ಭೇಟಿ ನೀಡಲಿದ್ದಾರೆ. ಅಲ್ಲಿನ ಗುಹೆಗಳಲ್ಲಿ ಅಧ್ಯಾತ್ಮದ ಹೊಸ ಅನುಭವ ಪಡೆಯಲಿದ್ದಾರೆ. ಅಲ್ಲಿಂದ ವಾಪಸ್ ಬಂದ ನಂತರ 'ಕೂಲಿ' ಸಿನಿಮಾದ ಚಿತ್ರೀಕರಣದಲ್ಲಿ ಭಾಗಿ ಆಗಲಿದ್ದಾರೆ. ರಜನಿಕಾಂತ್ ಗುರುವಾರ ಮುಂಜಾನೆಯೇ ಚೆನ್ನೈನಿಂದ ಡೆಹರಾಡೂನ್ ತಲುಪಿದ್ದಾರೆ. ಡೆಹರಾಡೂನ್ ವಿಮಾನ ನಿಲ್ದಾಣದಲ್ಲಿ ಅವರು ಮಾಧ್ಯಮಗಳ ಜೊತೆ ಮಾತನಾಡಿ, 'ಪ್ರತಿ ವರ್ಷ ನಾನು ಹೊಸ ಅನುಭವ ಪಡೆಯುತ್ತೇನೆ. ಅದರಿಂದ ನನ್ನ ಅಧ್ಯಾತ್ಮದ ಪಯಣ ಮುಂದುವರಿಯುತ್ತದೆ. ಈ ಬಾರಿ ಕೂಡ ನನಗೆ ಹೊಸ ಅನುಭವ ಆಗಲಿದೆ ಅಂತ ನಾನು ನಂಬಿದ್ದೇನೆ' ಎಂದಿದ್ದಾರೆ. 'ಇಡೀ ಜಗತ್ತಿಗೆ ಅಧ್ಯಾತ್ಮ ಬೇಕು. ಪ್ರತಿಯೊಬ್ಬ ಮನುಷ್ಯರಿಗೂ ಅದು ಮುಖ್ಯ. ಆಧ್ಯಾತ್ಮಿಕವಾಗಿ ಇರುವುದು ಎಂದರೆ ಶಾಂತಿ, ನೆಮ್ಮದಿಯಿಂದ ಇರುವುದು ಮತ್ತು ದೇವರಲ್ಲಿ ನಂಬಿಕೆ ಇಡುವುದು' ಎಂದಿದ್ದಾರೆ ರಜನಿಕಾಂತ್. ಬದ್ರಿನಾಥ್, ಕೇದಾರನಾಥ್ ಮುಂತಾದ ಸ್ಥಳಗಳಿಗೆ ತೆರಳುವುದಾಗಿ ಅವರು ಮಾಹಿತಿ ನೀಡಿದ್ದಾರೆ. ಈ ಹಿಂದೆಯೂ ರಜನಿಕಾಂತ್ ಹಿಮಾಲಯಕ್ಕೆ ತೆರಳಿದ್ದರು.



## ಕೊಲೆಸ್ಟ್ರಾಲ್ ತಡೆಯುವ ಶಕ್ತಿ ಕುಂಬಳಕಾಯಿಗೆ ಇದೆ



ಕುಂಬಳಕಾಯಿ ಸಾಮಾನ್ಯವಾಗಿ ಹ್ಯಾಲೋವೀನ್ ಮತ್ತು ಥ್ಯಾಂಕ್ಸ್‌ಗಿವಿಂಗ್‌ನಿಂದ ಕೂಡಿದ ತರಕಾರಿ. ಇದು ಹೆಚ್ಚಿನ ಪೌಷ್ಟಿಕಾಂಶ ಹೊಂದಿದ್ದು ಆರೋಗ್ಯಕ್ಕೆ ಅನೇಕ ಉಪಯುಕ್ತತೆಯನ್ನು ನೀಡುತ್ತದೆ. ಹೀಗಾಗಿಯೇ ಪ್ರತಿ ಮನೆಯಲ್ಲೂ ಈ ಕುಂಬಕಾಯಿ ಸ್ಥಾನ ಪಡೆದಿದೆ.

ಕುಂಬಳಕಾಯಿಯಲ್ಲಿ ಅಧಿಕ ಮಟ್ಟದಲ್ಲಿ ವಿಟಮಿನ್ ಎ, ಇ, ಸಿ ಮತ್ತು ಕಬ್ಬಿಣದ ಅಂಶಗಳಿವೆ.

ಹೀಗಾಗಿ ರೋಗ ನಿರೋಧಕ ಶಕ್ತಿ ಹೆಚ್ಚುವುದರಿಂದ ದೇಹದಲ್ಲಿ ಸೋಂಕುಗಳು ಹರಡುವುದನ್ನು ತಡೆಯುತ್ತದೆ. ತರಕಾರಿಯ ಒಂದು ವಿಧವಾದ ಕುಂಬಳಕಾಯಿಯಲ್ಲಿ ಫೈಬರ್ ಇರುತ್ತದೆ. ಇದರಿಂದ ನಾವು ತಿಂದಂತಹ ಆಹಾರ ಬೇಗ ಜೀರ್ಣಗೊಳ್ಳುವಂತೆ ಮಾಡುತ್ತದೆ. ಹೀಗಾಗಿ ಜೀರ್ಣಾಂಗ ವ್ಯವಸ್ಥೆಯನ್ನು ಉತ್ತಮವಾಗಿಡಲು ಸಹಾಯವಾಗುತ್ತದೆ.

ವಿಟಮಿನ್- ಎ ಅಂಶ ಹೊಂದಿದ್ದರಿಂದ ಕಣ್ಣಿಗೆ ಹೆಚ್ಚು ಉಪಕಾರಿಯಾಗಿದೆ. ಇದನ್ನು ಆಹಾರದಲ್ಲಿ ಸೇವಿಸುವುದರಿಂದ ಕಣ್ಣಿನಪೊರೆ ಮತ್ತು ವಯಸ್ಸಿಗೆ ಸಂಬಂಧಿಸಿದ ಮ್ಯಾಕ್ಯುಲರ್ ಡಿಜೆನರೇಶನ್ ಅನ್ನು ತಡೆದು ದೃಷ್ಟಿ ಬರುವಂತೆ ಮಾಡುತ್ತದೆ. ತೂಕವನ್ನು ಕಳೆದುಕೊಳ್ಳಲು ಕುಂಬಳಕಾಯಿ ಸಹಾಯ ಮಾಡುತ್ತದೆ. ಅತ್ಯಂತ ಕಡಿಮೆ ಕ್ಯಾಲೋರಿಗಳನ್ನು ಹೊಂದಿರುವುದೇ ದೇಹವನ್ನು ದಪ್ಪ ಆಗದಂತೆ ತಡೆಯುತ್ತದೆ.

ಕೊಲೆಸ್ಟ್ರಾಲ್ನಿಂದ ಕೆಲವೊಮ್ಮೆ ಹೃದಯಾಘಾತ ಆಗುವ ಸಂಭವವಿರುತ್ತದೆ. ನಾವು ಆಹಾರದಲ್ಲಿ ಕುಂಬಳಕಾಯಿಯನ್ನು ತಿನ್ನುವುದರಿಂದ ಫೈಬರ್ ಅಂಶವು ಕೊಲೆಸ್ಟ್ರಾಲ್ ಹೋಗಲಾಡಿಸಿ ಹೃದಯ ಸಂಬಂಧಿ ಕಾಯಿಲೆಗಳನ್ನು ತಡೆಯುತ್ತದೆ. ಮಧುಮೇಹಿಗಳಿಗೆ ಉತ್ತಮ ಆಹಾರವಾಗಿರುವ ಕುಂಬಳಕಾಯಿ, ಮೇದೋಜೀರಕ ಗ್ರಂಥಿಯ ಕೋಶಗಳ ಪುನರುತ್ಪಾದನೆ ಹೆಚ್ಚಿಸುತ್ತವೆ.

ಇದು ಮಧುಮೇಹಿಗಳಲ್ಲಿ ಮಾತ್ರವಲ್ಲದೆ ಸಕ್ಕರೆ ಕಾಯಿಲೆ ಬರುತ್ತಿದ್ರೆ, ಅಥವಾ ಕಾಯಿಲೆ ಹೆಚ್ಚಾಗಿದ್ದರೆ ದೇಹದಲ್ಲಿ ಸಕ್ಕರೆ ಮಟ್ಟವನ್ನು ನಿಯಂತ್ರಣ ಮಾಡುವ ಸಾಮರ್ಥ್ಯ ಕುಂಬಳಕಾಯಿ ಹೊಂದಿದೆ ಎಂದು ಅಧ್ಯಯನದಿಂದ ತಿಳಿದು ಬಂದಿದೆ. ಕುಂಬಳಕಾಯಿ ಜೊತೆಗೆ ಇದರ ಬೀಜಗಳು ಕೂಡ ಆರೋಗ್ಯಕ್ಕೆ ಒಳ್ಳೆಯದು. ಈ ಬೀಜಗಳು ಅಧಿಕ ರಕ್ತದೊತ್ತಡ, ಕ್ಯಾನ್ಸರ್ ರೋಗಗಳನ್ನು ನಿಯಂತ್ರಣ ಮಾಡುತ್ತವೆ.

### ಹೆಲ್ತ್ ಟಿಪ್ಸ್

ದೈಹಿಕ ಸಮಸ್ಯೆ ಇರುವವರು ಬೀಜಗಳ ಸೇವನೆ ತಪ್ಪಿಸಬೇಕು. ಆದ್ರೆ, ಬೀಜಗಳನ್ನು ಹೇಗೆ ಸೇವಿಸಬೇಕು ಅಂತಾ ವೈದ್ಯರ ಸಲಹೆ ಪಡೆಯಲೇಬೇಕು. ಚರ್ಮ ಮತ್ತು ಕೂದಲಿಗೆ ವಿಟಮಿನ್- ಇ ಸೇವನೆ ಅತ್ಯಂತ ಅಗತ್ಯವಾಗಿದೆ. ಫೈಬರ್ ಅಂಶ ಹೊಟ್ಟೆಯ ಜೀರ್ಣಕ್ರಿಯೆ ವ್ಯವಸ್ಥೆ ಆರೋಗ್ಯಕರವಾಗಿ ಉಳಿಸುತ್ತದೆ. ಈ ಕಾರಣದಿಂದ ಮಲಬದ್ಧತೆಯ ಸಮಸ್ಯೆ ನಿವಾರಣೆಯಾಗುತ್ತದೆ.

ಕುಂಬಳಕಾಯಿಯಲ್ಲಿ ಕಾರ್ಬೋಹೈಡ್ರೇಟ್ಸ್, ಕ್ಯಾಲ್ಸಿಯಂ, ಪೊಟ್ಯಾಷಿಯಮ್, ಮೆಗ್ನೀಷಿಯಮ್, ನಿಯಾಸಿನ್, ರಿಬೋಫ್ಲಾವಿನ್, ಸತು, ಫೋಲೇಟ್ ಇತ್ಯಾದಿ ಅಂಶಗಳು ಹೇರಳವಾಗಿವೆ. ಸೌತೆಕಾಯಿಯಲ್ಲಿರುವಂತೆ ಕುಂಬಳಕಾಯಿಯಲ್ಲೂ ನೀರಿನಾಂಶ ಸಮೃದ್ಧವಾಗಿದೆ. ಶೇಕಡಾ 90 ರಷ್ಟು ನೀರು ಈ ತರಕಾರಿಯಲ್ಲಿ ಇರುತ್ತದೆ.

## ಇಂದಿರಾನಗರ ಮತ್ತು ಸರ್ಜಾಪುರದಲ್ಲಿ ಓಪನ್ ಹೌಸ್ ಪ್ರಿಸ್ಕೂಲ್ ಪರಿಚಯ

ಶಿಕ್ಷಣದ ಸಮಗ್ರ ವಿಧಾನಕ್ಕೆ ಹೆಸರುವಾಸಿಯಾದ ಓಪನ್ ಹೌಸ್, ಬೆಂಗಳೂರಿನ ಇಂದಿರಾನಗರ ಮತ್ತು ಸರ್ಜಾಪುರದ ನೆರೆಹೊರೆಯಲ್ಲಿ ಪ್ರಿಸ್ಕೂಲ್ಗಳನ್ನು ಪ್ರಾರಂಭಿಸುವುದರೊಂದಿಗೆ ತನ್ನ ಕೊಡುಗೆಗಳ ವಿಸ್ತರಣೆಯನ್ನು ಘೋಷಿಸಲು ಹೆಮ್ಮೆಪಡುತ್ತದೆ. ಇದು ಬಾಲ್ಯದ ಶಿಕ್ಷಣದ ಕ್ಷೇತ್ರದಲ್ಲಿ ಮಹತ್ವದ ಮೈಲಿಗಲ್ಲನ್ನು ಗುರುತಿಸುತ್ತದೆ. 1 ರಿಂದ 6 ವರ್ಷ ವಯಸ್ಸಿನ ಮಕ್ಕಳಿಗೆ ಉಪಚರಿಸುವ ಈ ಪ್ರಿಸ್ಕೂಲ್ಗಳು ಸಾಂಪ್ರದಾಯಿಕ ಶೈಕ್ಷಣಿಕ ಕಲಿಕೆಯ ಮೇಲೆ ಅನ್ವೇಷಣೆ ಮತ್ತು ಕುತೂಹಲವನ್ನು ಕೇಂದ್ರೀಕರಿಸುವ ಸಕ್ರಿಯ ಶಿಶುಪಾಲನೆಯ ಹೊಸ ಅಲೆಯನ್ನು ತರಲು ವಿನ್ಯಾಸಗೊಳಿಸಲಾಗಿದೆ.

ಶಿಕ್ಷಣಕ್ಕೆ ತಮ್ಮ ನವೀನ ಕೊಡುಗೆಗಳಿಗಾಗಿ ಫೋರ್ಬ್ಸ್ 30 ರ ಒಳಗೆ 30 ರಲ್ಲಿ ಗುರುತಿಸಲ್ಪಟ್ಟಿರುವ ಅಕ್ಷಯ್ ರಾಂಪುರಿಯಾ ಮತ್ತು ಯಶೋವರ್ಧನ್ ಪೊದ್ದಾರ್ ಅವರಿಂದ ಸ್ಥಾಪನೆಗೊಂಡ ಓಪನ್ ಹೌಸ್ ಪ್ರಿಸ್ಕೂಲ್, ಆಧುನಿಕ ಪೋಷಕರು ಮತ್ತು ಅವರ ಮಕ್ಕಳ ವಿಕಸನಗೊಳ್ಳುತ್ತಿರುವ ಅಗತ್ಯಗಳನ್ನು ಪೂರೈಸಲು ಅನುಗುಣವಾಗಿರುತ್ತದೆ, ಬಾಲ್ಯದ ಶಿಕ್ಷಣದಲ್ಲಿ ಜಾಗತಿಕ ಗುಣಮಟ್ಟವನ್ನು ಭಾರತಕ್ಕೆ ತರುತ್ತಿದೆ. ಐಬಿ, ಮಾಂಟೆಸ್ಸರಿ, ರೆಗ್ಗಿಯೊ ಮತ್ತು ವಾಲ್ಡೋರ್ಫ್ ವಿಧಾನಗಳಿಂದ ಉತ್ತಮ ಕಲಿಕಾ ಅಭ್ಯಾಸಗಳನ್ನು ಸಂಯೋಜಿಸುವುದು, ಓಪನ್ ಹೌಸ್ ಪ್ರತಿ ಮಗುವಿನ ಬೆಳವಣಿಗೆಯ ಅಗತ್ಯಗಳಿಗೆ ಅನುಗುಣವಾಗಿ ಸಮಗ್ರ ಆಟದ ಆಧಾರಿತ ಪಠ್ಯಕ್ರಮವನ್ನು ರಚಿಸುತ್ತದೆ. ಭಾರತದಲ್ಲಿನ ಹೆಚ್ಚಿನ ಪ್ರಿಸ್ಕೂಲ್ಗಳು ಪರಿಸರಕ್ಕೆ ಒತ್ತು ನೀಡದಿದ್ದರೂ, ಓಪನ್ಹೌಸ್ನಲ್ಲಿ, ಹೋಮ್ರೂಮ್, ಪ್ಲೇ ಏರಿಯಾ, ಸ್ಯಾಂಡ್ಪಿಟ್, ಮೇಕರ್ಸ್ಪೇಸ್, ಅಟೆಲಿಯರ್, ರೋಲ್ಪ್ಲೇ ರೂಮ್ ಮತ್ತು ಮೂವ್ಮೆಂಟ್ ಸ್ಟುಡಿಯೊದಂತಹ ವಿವಿಧ ಚಟುವಟಿಕೆ ಕೊಠಡಿಗಳಲ್ಲಿ ಮಕ್ಕಳು ದಿನವಿಡೀ ತೊಡಗಿಸಿಕೊಂಡಿದ್ದಾರೆ ಮತ್ತು ಉತ್ತೇಜಿಸುತ್ತಾರೆ.

ಇಂದಿನ ಮಕ್ಕಳು ಮತ್ತು ಕುಟುಂಬಗಳಿಗೆ ಉತ್ತಮ ಸೇವೆ ನೀಡಲು ಶಿಶುಪಾಲನಾ ಮತ್ತು ಆರಂಭಿಕ ವರ್ಷದ ಶಿಕ್ಷಣವನ್ನು ಹೊಸ ಆಯಾಮದ ಮೂಲಕ ನೋಡಬೇಕಾಗಿದೆ ಎಂದು ಯಶ್ ಪೊದ್ದಾರ್ ಹೇಳಿದರು. ಪಾಶ್ಚಿಮಾತ್ಯ ದೇಶಗಳಿಗಿಂತ ಭಿನ್ನವಾಗಿ, ಬಲವಾದ ನಿಯಮಗಳು ಉನ್ನತ ಗುಣಮಟ್ಟದ ಶಿಕ್ಷಣವನ್ನು ಖಚಿತಪಡಿಸುತ್ತವೆ, ಇಲ್ಲಿ ನಿಯಂತ್ರಣದ ಕೊರತೆಯು ಪ್ರಿಸ್ಕೂಲ್ಗಳಿಗೆ ಅರ್ಥವಾಗಿದೆ. ಕಡಿಮೆ ವಿದ್ಯಾರ್ಥಿ-ಶಿಕ್ಷಕ ಅನುಪಾತಗಳನ್ನು ಅನುಸರಿಸುವುದು ಮತ್ತು ಶಾಲೆಯನ್ನು ಪ್ರಾರಂಭಿಸುವ ಮೊದಲು ಸಾಕಷ್ಟು ಶಿಕ್ಷಕರ ತರಬೇತಿಯನ್ನು ಖಚಿತಪಡಿಸಿಕೊಳ್ಳುವುದು ಮುಂತಾದ ಗುಣಮಟ್ಟದ ಮಾನದಂಡಗಳನ್ನು ಸಾಮಾನ್ಯವಾಗಿ ಇತರರು ನಿರ್ವಹಿಸುವುದಿಲ್ಲ, ಇದಲ್ಲದೆ, ಸಾಂಪ್ರದಾಯಿಕ ಶಾಲೆಗಳು ಕೆಲಸ ಮತ್ತು ಶಿಶುಪಾಲನೆಯ ಅಗಾಧವಾದ ಜವಾಬ್ದಾರಿಗಳನ್ನು ನಿಭಾಯಿಸುವ ಕೆಲಸ ಮಾಡುವ ಪೋಷಕರನ್ನು ಬೆಂಬಲಿಸಲು ವಿಫಲವಾಗಿವೆ, ಏಕೆಂದರೆ ಅವರು ಕೇವಲ ಅರ್ಧ-ದಿನದ ಕಾರ್ಯಕ್ರಮಗಳನ್ನು ನೀಡುತ್ತಾರೆ ಅಥವಾ ಮಗುವಿಗೆ ಪೂರಕವಾಗಿ ತೊಡಗಿಸಿಕೊಳ್ಳುವ ವಾತಾವರಣವನ್ನು ಹೊಂದಿರದ ಡೇಕೇರ್ ಅನ್ನು ಒದಗಿಸುತ್ತಾರೆ.

ಮುಂದುವರೆದ ಪೊದ್ದಾರ್ ಅವರು ಓಪನ್ ಹೌಸ್ ನಲ್ಲಿ, ಸಾಂಪ್ರದಾಯಿಕ ಶೈಕ್ಷಣಿಕ ಬೋಧನೆಗಿಂತ ಆಟ ಆಧಾರಿತ ಕಲಿಕೆಯ ಪ್ರಾಮುಖ್ಯತೆಯನ್ನು ನಾವು ಒತ್ತಿಹೇಳುತ್ತೇವೆ. ನಾವು ಶಿಕ್ಷಕ-ಕೇಂದ್ರಿತ ತರಗತಿಗಳಿಂದ ಮಕ್ಕಳ-ಕೇಂದ್ರಿತ ತರಗತಿಗಳಿಗೆ ಬದಲಾಯಿಸಲು ಬಯಸುತ್ತೇವೆ. ಈ ವಿಸ್ತರಣೆಯು ಭವಿಷ್ಯವನ್ನು ಮರುರೂಪಿಸುವ ನಮ್ಮ ದೃಷ್ಟಿಯನ್ನು ಪೂರೈಸುವ ಮಹತ್ವದ ಹೆಜ್ಜೆಯಾಗಿದೆ. ಭಾರತದಲ್ಲಿ ಶಿಶುಪಾಲನೆ, ಆಧುನಿಕ, ಚಿಂತನಶೀಲ ಪೋಷಕರನ್ನು ಬೆಂಬಲಿಸುವುದು ಮತ್ತು ಪ್ರತಿ ಮಗುವನ್ನು ಅವರ ಸ್ವಂತ ಕಥೆಯ ನಾಯಕನನ್ನಾಗಿ ಮಾಡುವುದು. ಓಪನ್ ಹೌಸ್ ಪ್ರಿಸ್ಕೂಲ್ ನಲ್ಲಿರುವ ಪ್ರತಿ ಮಗುವು ವೈಯಕ್ತಿಕ ಗಮನವನ್ನು ಪಡೆಯುತ್ತದೆ, ಇದು 1:6 ಶಿಕ್ಷಕರಿಂದ ಮಕ್ಕಳ ಅನುಪಾತದಿಂದ ಸಾಧ್ಯವಾಗಿದೆ. ಆಧುನಿಕ ಕೌಟುಂಬಿಕ ಜೀವನದ ಬೇಡಿಕೆಗಳನ್ನು ಅಂಗೀಕರಿಸಿ, ಓಪನ್ ಹೌಸ್ ಹೊಂದಿಕೊಳ್ಳುವ ವೇಳಾಪಟ್ಟಿ, ಪೂರ್ಣ ದಿನದ ಕಾರ್ಯಕ್ರಮಗಳು, ಸಾರಿಗೆ ಬೆಂಬಲ ಮತ್ತು ಪೌಷ್ಟಿಕಾಂಶದ ಊಟವನ್ನು ವಿಸ್ತರಿಸುತ್ತದೆ, ಇದು ಪೋಷಕರ ಜೀವನವನ್ನು ಸುಲಭಗೊಳಿಸುತ್ತದೆ. ಈ ಕುಟುಂಬ-ಮೊದಲ ವಿಧಾನವು ಕೆಲಸ ಮಾಡುವ ಪೋಷಕರನ್ನು ಕಾರ್ಯಪಡೆಯಲ್ಲಿ ಮುಂದುವರಿಸಲು ಅನುವು ಮಾಡಿಕೊಡುತ್ತದೆ ಮತ್ತು ಅವರ ಮಕ್ಕಳು ಗುಣಮಟ್ಟದ ಆರೈಕೆ ಮತ್ತು ಕಲಿಕೆಯನ್ನು ಪಡೆಯುವುದನ್ನು ಖಚಿತಪಡಿಸುತ್ತದೆ.



2018 ರಲ್ಲಿ ಪ್ರಾರಂಭವಾದಾಗಿನಿಂದ, ಓಪನ್ ಹೌಸ್ ವೇಗವಾಗಿ ವಿಸ್ತರಿಸಿದೆ, ಒಟ್ಟು ಎಂಟು ಕೇಂದ್ರಗಳನ್ನು ಸ್ಥಾಪಿಸಿದೆ. ಬೆಂಗಳೂರಿನಲ್ಲಿ ಆರು ಮತ್ತು ಕೋಲ್ಕತ್ತಾದಲ್ಲಿ ಎರಡು-ಮತ್ತು 7,000 ಕ್ಕೂ ಹೆಚ್ಚು ವಿದ್ಯಾರ್ಥಿಗಳ ಮೇಲೆ ಧನಾತ್ಮಕ ಪರಿಣಾಮ ಬೀರಿದೆ. ಭಾರತದಾದ್ಯಂತದ ಕುಟುಂಬಗಳಿಗೆ ಗುಣಮಟ್ಟದ ಶಿಕ್ಷಣವನ್ನು ಹೆಚ್ಚು ಸುಲಭವಾಗಿಸುವುದು ಅವರ ಗುರಿಯಾಗಿದೆ, ಅಂತಿಮವಾಗಿ 2030 ರ ವೇಳೆಗೆ ಕಲಿಕಾ ಕೇಂದ್ರಗಳನ್ನು ಮುನ್ನೂರಕ್ಕೆ ಹೆಚ್ಚಿಸುವುದು. ಹೊಸದಾಗಿ ತೆರೆಯಲಾದ ಪ್ರಿಸ್ಕೂಲ್ ಗಳ ಜೊತೆಗೆ, ಕಲೆ, ರೊಬೊಟಿಕ್ಸ್ ಸೇರಿದಂತೆ 3 ರಿಂದ 10 ವರ್ಷ ವಯಸ್ಸಿನ ಮಕ್ಕಳಿಗಾಗಿ ಓಪನ್ ಹೌಸ್ ವೈವಿಧ್ಯಮಯ ಸಹಪಠ್ಯ ಚಟುವಟಿಕೆಗಳನ್ನು ನೀಡುತ್ತದೆ. , ರಂಗಭೂಮಿ, ಸಾರ್ವಜನಿಕ ಭಾಷಣ, ಚೆಸ್, ಕರಾಟೆ ಮತ್ತು ನೃತ್ಯ. ಈ ಕಾರ್ಯಕ್ರಮಗಳು ಸಾಂಪ್ರದಾಯಿಕ ಶೈಕ್ಷಣಿಕ ಪಠ್ಯಕ್ರಮವನ್ನು ಸಮಗ್ರ ಅಭಿವೃದ್ಧಿಯನ್ನು ಉತ್ತೇಜಿಸುವ ಮೂಲಕ ಪೂರಕವಾಗಿರುತ್ತವೆ, ಮಕ್ಕಳು ತಮ್ಮ ಆಸಕ್ತಿಗಳನ್ನು ಅನ್ವೇಷಿಸಲು ಮತ್ತು ನಿಯಮಿತ ಶಾಲಾ ಸಮಯದ ಹೊರಗೆ ಹೊಸ ಭಾವೋದ್ರೇಕಗಳನ್ನು ಪ್ರಚೋದಿಸಲು ಅನುವು ಮಾಡಿಕೊಡುತ್ತದೆ.ಓಪನ್ ಹೌಸ್ ಪ್ರಿಸ್ಕೂಲ್ ಗೆ ಪ್ರವೇಶಗಳು ಈಗ ತೆರೆದಿವೆ, ಮುಂದಿನ ಬ್ಯಾಚ್ ಜೂನ್ 15, 2024 ರಂದು ಪ್ರಾರಂಭವಾಗಲಿದೆ.

## ದಾಸವಾಳದ ಸೌಂದರ್ಯ ಗುಣ

### ಬ್ಯೂಟಿ ಟಿಪ್ಸ್



ಸಾಮಾನ್ಯವಾಗಿ ಫೇಸ್ ಪ್ಯಾಕ್ ಗೆ ರೋಸ್ ವಾಟರ್ ಬಳಸ್ತಾರೆ. ಇದು ಸೌಂದರ್ಯವನ್ನು ವೃದ್ಧಿಸುತ್ತದೆ. ಆದ್ರೆ, ರೋಸ್ ವಾಟರ್ ಮಾತ್ರವಲ್ಲ ದಾಸವಾಳ ಕೂಡ ಸೌಂದರ್ಯ ವೃದ್ಧಿಸುವ ಕೆಲಸ ಮಾಡುತ್ತದೆ. ದಾಸವಾಳದ ಎಲೆಗಳಲ್ಲಿ ಸುಕ್ಕನ್ನು ಕಡಿಮೆ ಮಾಡುವ ಗುಣವಿದೆ. ವಯಸ್ಸು ಕಡಿಮೆಯಾಗಿ, ಯಂಗ್ ಆಗಿ ಕಾಣಬೇಕೆನ್ನುವವರು ದಾಸವಾಳದ ಎಲೆಗಳ ಫೇಸ್ ಪ್ಯಾಕ್ ಬಳಸಬೇಕು. ಎಲೆಗಳನ್ನು ನೀರಿನಲ್ಲಿ ಕುದಿಸಿ ಚೆನ್ನಾಗಿ ರುಬ್ಬಿಕೊಳ್ಳಿ. ಅದಕ್ಕೆ ಜೇನುತುಪ್ಪವನ್ನು ಬೆರೆಸಿ ಪೇಸ್ಟ್ ತಯಾರಿಸಿ ಪೇಸ್ಟನ್ನು ಮುಖದ ಮೇಲೆ ನಿಧಾನವಾಗಿ ಹಚ್ಚಿ, ಹದಿನೈದು ಇಪ್ಪತ್ತು ನಿಮಿಷಗಳ ನಂತರ, ಮುಖವನ್ನು ತಣ್ಣೀರಿನಿಂದ ತೊಳೆದು ಸ್ವಚ್ಛಗೊಳಿಸಿ. ಕೆಲವೇ ದಿನಗಳಲ್ಲಿ ಮುಖದ ಮೇಲಾಗುವ ಬದಲಾವಣೆ ಗಮನಿಸಬಹುದು.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಆರ್ಥಿಕ ಬೆಳವಣಿಗೆ, ಉದ್ಯೋಗ ಲಾಭ, ದೂರ ಪ್ರಯಾಣ, ಉತ್ತಮ ಹೆಸರು ಕೀರ್ತಿ.

**ವೃಷಭ:** ಆರ್ಥಿಕ ನಷ್ಟ, ಕೆಲಸ ಕಾರ್ಯಗಳಲ್ಲಿ ಅಡೆತಡೆ, ಉದ್ಯೋಗ ಒತ್ತಡ, ಅಧಿಕ ಖರ್ಚು.

**ಮಿಥುನ:** ಸಾಲದ ಚಿಂತೆ, ಉದ್ಯೋಗ ಪ್ರಾಪ್ತಿ, ಕುಟುಂಬದ ಸಹಕಾರ, ಪ್ರಯಾಣದಲ್ಲಿ ಒತ್ತಡ.

**ಕಟಕ:** ವ್ಯವಹಾರದಲ್ಲಿ ಮಂದತ್ವ, ಕೆಲಸ ಕಾರ್ಯಗಳಲ್ಲಿ ಎಳೆದಾಟ, ಮಾಟ ಮಂತ್ರ ತಂತ್ರದ ಆತಂಕ, ಉದ್ಯೋಗ ಲಾಭ.

**ಸಿಂಹ:** ದಾಂಪತ್ಯ ಕಲಹ, ಆರ್ಥಿಕವಾಗಿ ಚೇತರಿಕೆ, ವಿದ್ಯಾಭ್ಯಾಸದಲ್ಲಿ ಪ್ರಗತಿ, ಅಧಿಕ ನಿದ್ರೆ, ಸೋಮಾರಿತನ.

**ಕನ್ಯಾ:** ಶತ್ರು ಕಾಟ, ಅಧಿಕಾರಿಗಳಿಂದ ಕಿರಿಕಿರಿ, ಅವಕಾಶ ವಂಚಿತರಾಗುವಿರಿ, ಪಾಲುದಾರಿಕೆಯಲ್ಲಿ ಲಾಭ.

**ತುಲಾ:** ವ್ಯಾಪಾರ ವ್ಯವಹಾರದಲ್ಲಿ ಅನುಕೂಲ, ಅನಿರೀಕ್ಷಿತ ಲಾಭ, ವಿದ್ಯಾಭ್ಯಾಸದಲ್ಲಿ ಪ್ರಗತಿ, ಮಕ್ಕಳಿಂದ ಸಹಕಾರ.

**ವೃಶ್ಚಿಕ:** ಪಾಲುದಾರಿಕೆಯಲ್ಲಿ ಅನುಕೂಲ, ಶುಭ ಕಾರ್ಯಗಳ ಆಲೋಚನೆ, ತಂದೆಯಿಂದ ಸಹಕಾರ, ಉದ್ಯೋಗ ಪ್ರಗತಿ.

**ಧನಸ್ಸು:** ಸಾಲದ ಚಿಂತೆ, ಶತ್ರು ಉಪಟಳ, ಅಧಿಕ ಧೈರ್ಯ, ಆರೋಗ್ಯದಲ್ಲಿ ವ್ಯತ್ಯಾಸ.

**ಮಕರ:** ಆರ್ಥಿಕವಾಗಿ ಚೇತರಿಕೆ, ಉದ್ಯೋಗದಲ್ಲಿ ಅನುಕೂಲ, ಯತ್ನ ಕಾರ್ಯಗಳಲ್ಲಿ ಹಿನ್ನಡೆ, ಮಕ್ಕಳಿಂದ ಅನುಕೂಲ.

**ಕುಂಭ:** ಅಧಿಕ ಒತ್ತಡ ಕೋಪ, ಆರೋಗ್ಯದಲ್ಲಿ ವ್ಯತ್ಯಾಸ, ಆರ್ಥಿಕ ನಷ್ಟ, ಕುಟುಂಬ ಸಹಕಾರದಲ್ಲಿ ಹಿನ್ನಡೆ.

**ಮೀನ:** ಆರ್ಥಿಕವಾಗಿ ಬೆಳವಣಿಗೆ, ತಂದೆಯಿಂದ ಸಹಕಾರ, ಪ್ರಯಾಣದಲ್ಲಿ ಅನುಕೂಲ, ಭೂ ವ್ಯವಹಾರದಲ್ಲಿ ಲಾಭ.

## ವಿಶ್ವ ಹಾಲು ದಿನ




ತಂಪಾದ ಲೋಟ ಹಾಲು, ಬಿಸಿ ಬೆಣ್ಣೆಯನ್ನು ಟೋಸ್ಟ್ನಾದ್ಯಂತ ಮನಬಂದಂತೆ ಹರಡುವುದರಿಂದ ಅಥವಾ ಐಸ್ ಕ್ರೀಮ್ನ ರಾಶಿಯ ಬಟ್ಟಲಿನಿಂದ, ವಿಶ್ವ ಹಾಲು ದಿನವು ಎಲ್ಲವನ್ನೂ ಆಚರಿಸುತ್ತದೆ! ವಿಶ್ವಸಂಸ್ಥೆಯ ಆಹಾರ ಮತ್ತು ಕೃಷಿ ಸಂಸ್ಥೆಯು ಡೈರಿ ಉದ್ಯಮವನ್ನು ಆಚರಿಸಲು ಮತ್ತು ಹಾಲನ್ನು ಜಾಗತಿಕವಾಗಿ ಪ್ರಮುಖ ಆಹಾರವೆಂದು ಗುರುತಿಸಲು ಈ ದಿನವನ್ನು ಆಯೋಜಿಸಿದೆ. ವಿಶ್ವ ಹಾಲು ದಿನವು ಪ್ರಪಂಚದಾದ್ಯಂತ ಎಷ್ಟು ಪೌಷ್ಟಿಕ, ಕೈಗೆಟುಕುವ ಮತ್ತು ಪ್ರವೇಶಿಸಬಹುದಾದ ಹಾಲು ಎಂಬುದರ ಕುರಿತು ಸಂಭಾಷಣೆಯನ್ನು ಪ್ರಾರಂಭಿಸಲು ಪ್ರಯತ್ನಿಸುತ್ತದೆ.

ಹಾಲು ಕುಡಿದ ಮೊದಲ ವ್ಯಕ್ತಿ ಯಾರು ಎಂದು ಯೋಚಿಸಿ, ಅವರ ಆಲೋಚನೆಗಳು ಸಮಯದ ಈಥರ್ಗೆ ಕಳೆದುಹೋಗಿದ್ದರೂ, ಆರಂಭಿಕ ಮಾನವರಿಗೆ ಹಾಲು ಹೇಗೆ ಜನಪ್ರಿಯ ಮತ್ತು ಸ್ಥಿರವಾದ ಪೋಷಣೆಯ ಮೂಲವಾಗಿದೆ ಎಂಬುದರ ಕುರಿತು ನಮಗೆ ಸ್ವಲ್ಪ ಜ್ಞಾನವಿದೆ. ಸುಮಾರು 9000-7000 ಃ.ಅ. ಯಲ್ಲಿ ನವಶಿಲಾಯುಗದ ಯುಗದಲ್ಲಿ ಪ್ರಾಣಿಗಳನ್ನು ಸಾಕಿದಾಗ ಮಾನವರು ಹಾಲನ್ನು ಕುಡಿಯಲು ಪ್ರಾರಂಭಿಸಿದರೂ, ಈ ವಯಸ್ಸಿನ ಮೊದಲು ಮಾನವಕುಲದ ಎಲ್ಲಾ ಇತಿಹಾಸದಲ್ಲಿ ಲ್ಯಾಕ್ಟೋಸ್ ಸಹಿಷ್ಣುತೆಯು ವಯಸ್ಕರಲ್ಲಿ ಕಳೆದುಹೋಯಿತು. ನಂತರದ ಆನುವಂಶಿಕ ರೂಪಾಂತರವು ಹಾಲು ಕುಡಿಯಲು ನಮಗೆ ಅವಕಾಶ ನೀಡುವವರೆಗೆ, ಆರಂಭಿಕ ಮಾನವರು ಹೆಚ್ಚಾಗಿ ಹುದುಗಿಸಿದ ಡೈರಿ ಉತ್ಪನ್ನಗಳನ್ನು ತಿನ್ನುತ್ತಿದ್ದರು, ಅದು ಸುಲಭವಾಗಿ ಜೀರ್ಣವಾಗುತ್ತದೆ.

ಹಾಲಿನ ಇತಿಹಾಸದಲ್ಲಿ ಮುಂದಿನ ಅಧ್ಯಾಯವು ಕೈಗಾರಿಕೀಕರಣದೊಂದಿಗೆ ಬರುತ್ತದೆ. ಹೆಚ್ಚಿನ ದೇಶಗಳು ಮತ್ತು ಸಂಸ್ಕೃತಿಗಳು ಹಾಲನ್ನು ಅಳವಡಿಸಿಕೊಂಡಿದ್ದರೂ, ಅನೇಕ ಸ್ಥಳಗಳು ಅದನ್ನು ಆನಂದಿಸಲು ಹಾಲನ್ನು ಹೊಂದಿರುವ ಫಾರ್ಮ್ಗಳಿಗೆ ಸಾಕಷ್ಟು ಹತ್ತಿರವಿರಲಿಲ್ಲ. ರೈಲ್ವೆಗಳನ್ನು ನಮೂದಿಸಿ. ಇದ್ದಕ್ಕಿದ್ದಂತೆ, ಲಂಡನ್ ಮತ್ತು ಪ್ಯಾರಿಸ್ನಂತಹ ಸ್ಥಳಗಳಲ್ಲಿ ಹಾಲಿಗೆ ನಗರ ಬೇಡಿಕೆಯು ಗಗನಕ್ಕೇರಿತು. ಗ್ರಾಮೀಣ ಆಮದುಗಳು ಹಾಲನ್ನು ದೊಡ್ಡ ಸಮಯದ ಮಾರುಕಟ್ಟೆಯಾಗಿ ಪರಿವರ್ತಿಸಿದವು. 1800 ರ ದಶಕದ ಉದ್ದಕ್ಕೂ, ಹಾಲಿನ ಸುತ್ತ ಹೆಚ್ಚಿನ ನಾವೀನ್ಯತೆ ಇತ್ತು, ಬ್ರೂವರಿಗಳು ತಮ್ಮ ಖರ್ಚು ಮಾಡಿದ ಧಾನ್ಯಗಳನ್ನು ಹಸುಗಳಿಗೆ ತಿನ್ನಲು ಡೈರಿಗಳನ್ನು ತೆರೆಯುವುದರಿಂದ ಹಿಡಿದು, ಹಾಲುಣಿಸುವವರು ಸಿಡುಬು ರೋಗವನ್ನು ಹೇಗೆ ತಪ್ಪಿಸುತ್ತಾರೆ ಎಂಬುದನ್ನು ವೀಕ್ಷಿಸುವ ಮೂಲಕ ಲಸಿಕೆಗಳನ್ನು ಕಂಡುಹಿಡಿಯಲಾಯಿತು.

## ಪ್ರಧಾನಿ ಧ್ಯಾನ ವಿಚಾರ: ಖರ್ಗೆ ಟೀಕೆ



**ನವದೆಹಲಿ:** ಮೋದಿ ಅವರು 45 ಗಂಟೆಗಳ ಕಾಲ ಮನೆಯಲ್ಲಿ ಧ್ಯಾನ ಮಾಡಬಹುದಿತ್ತು ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಟೀಕಿಸಿದರು.

ತಮಿಳುನಾಡಿನ ಕನ್ಯಾಕುಮಾರಿಯಲ್ಲಿರುವ ವಿವೇಕಾನಂದ ರಾಕ್ ಮೆಮೋರಿಯಲ್ನಲ್ಲಿ ನರೇಂದ್ರ ಮೋದಿ ಅವರ 45 ಗಂಟೆಗಳ ಕಾಲ ಧ್ಯಾನದ ಬಗ್ಗೆ ಪ್ರತಿಕ್ರಿಯಿಸಿದ ಅವರು, ಮೋದಿ ಅವರು 45 ಗಂಟೆಗಳ ಕಾಲ ಮನೆಯಲ್ಲಿ ಧ್ಯಾನ ಮಾಡಬಹುದಿತ್ತು, ಅಲ್ಲಿಗೆ ಹೋಗುವ ಅಗತ್ಯ ಏನಿತ್ತು, ಹತ್ತು ಸಾವಿರ ಪೊಲೀಸ್ ಸಿಬ್ಬಂದಿ ಅವರನ್ನು ರಕ್ಷಿಸುತ್ತಿದ್ದಾರೆ, ಏಕೆ ಈ ನಾಟಕ?

ನೀವು ಮನೆಯಲ್ಲಿಯೇ ಪೂಜೆ ಮತ್ತು ಧ್ಯಾನ ಮಾಡಬಹುದು. ಭದ್ರತೆಗಾಗಿ ನೂರಾರು ಜನರನ್ನು ಅಲ್ಲಿಗೆ ಕರೆದುಕೊಂಡು ಹೋಗುತ್ತಿದ್ದೀರಿ. ಇದೇನು ಪ್ರದರ್ಶನ? ಇದು ಒಳ್ಳೆಯದಲ್ಲ ಎಂದು ಕಿಡಿಕಾರಿದರು.

ಲೋಕಸಭೆಯಲ್ಲಿ ಸರ್ಕಾರ ರಚನೆಗೆ ಸಂಪೂರ್ಣ ಬಹುಮತ ಪಡೆಯಲು ಪಕ್ಷ ಅಥವಾ ಮೈತ್ರಿಕೂಟಕ್ಕೆ 272 ಸ್ಥಾನಗಳ ಅಗತ್ಯವಿದೆ. ನಮ್ಮ ಮೈತ್ರಿಯ ಅಡಿಯಲ್ಲಿ, ಎಲ್ಲಾ ಪಕ್ಷಗಳು ಒಟ್ಟಾಗಿ ಚುನಾವಣೆ ಎದುರಿಸುತ್ತಿವೆ. ನಮ್ಮ ಅಂದಾಜಿನ ಪ್ರಕಾರ ನಾವು ಬಿಜೆಪಿಗಿಂತ ಹೆಚ್ಚು ಮುಂದಿದ್ದೇವೆ. ಬಿಜೆಪಿ ಮತ್ತು ಪ್ರಧಾನಿ ಮೋದಿ ಆತಂಕದಲ್ಲಿದ್ದಾರೆ. ನಾವು 273 ಸ್ಥಾನಗಳನ್ನು ಸ್ಥಾನಗಳನ್ನು ಪಡೆಯುತ್ತೇವೆ ಬಿಜೆಪಿ ಗೆಲ್ಲುವುದಿಲ್ಲ ಎಂದು ಟೀಕಿಸಿದರು.

ಪ್ರಧಾನಿ ಮೋದಿಯವರು ದ್ವೇಷ ಭಾಷಣಗಳನ್ನು ನೀಡುತ್ತಿದ್ದಾರೆ. ಜನರು ಆ ಭಾಷಣ ಕೇಳಲು ಆಸಕ್ತಿ ಹೊಂದಿಲ್ಲ, ಜನರು ಬದಲಾವಣೆಗೆ ಮನಸ್ಸು ಮಾಡಿದ್ದಾರೆ ಎಂದು ಹೇಳಿದರು.

## ಭಾನುವಾರ 3 ಗಂಟೆಗೆ ಶರಣಾಗಲಿದ್ದೇನೆ: ಕೇಜ್ರಿವಾಲ್



**ನವದೆಹಲಿ:** ದೆಹಲಿ ಮದ್ಯ ನೀತಿ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ನೀಡಿದ್ದ ಮಧ್ಯಂತರ ಜಾಮೀನು ಅಂತ್ಯಗೊಳ್ಳುತ್ತಿರುವ ಹಿನ್ನೆಲೆ ದೆಹಲಿ ಸಿಎಂ ಅರವಿಂದ್ ಕೇಜ್ರಿವಾಲ್ ಭಾನುವಾರ ಮಧ್ಯಾಹ್ನ 3 ಗಂಟೆಗೆ ತಮ್ಮ ಮನೆಯಿಂದ ಹೊರಟು ತಾವೇ ಶರಣಾಗುವುದಾಗಿ ತಿಳಿಸಿದ್ದಾರೆ.

ಈ ಬಗ್ಗೆ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಕೇಜ್ರಿವಾಲ್, ಭಾನುವಾರ ಮಧ್ಯಾಹ್ನ 3 ಗಂಟೆಗೆ ಶರಣಾಗಲು ನಾನು ಮನೆಯಿಂದ ಹೊರಡಲಿದ್ದೇನೆ. ನಾವು ದೌರ್ಜನ್ಯದ ವಿರುದ್ಧ ಹೋರಾಡುತ್ತಿದ್ದೇವೆ. ನಾನು ದೇಶಕ್ಕಾಗಿ ಪ್ರಾಣವನ್ನು ತ್ಯಾಗ ಮಾಡಬೇಕಾಗಿ ಬಂದರೆ ಯಾರು ಕೂಡಾ ದುಃಖಿಸಬೇಡಿ ಎಂದು ಅವರು ಹೇಳಿದ್ದಾರೆ.

50 ದಿನಗಳ ಸೆರೆವಾಸದಲ್ಲಿ ನನ್ನ ಆರೋಗ್ಯ ಗಮನಾರ್ಹವಾಗಿ ಹದಗೆಟ್ಟಿದ್ದು, 6 ಕೆಜಿ ತೂಕವನ್ನು ಇಳಿಸಿಕೊಂಡಿದ್ದೇನೆ. ಬಿಡುಗಡೆಯಾದ ನಂತರವೂ ತೂಕ ಹೆಚ್ಚಿಲ್ಲ. ಜೈಲಿನಲ್ಲಿ ಮಧುಮೇಹಕ್ಕೆ ಸರಿಯಾಗಿ ಔಷಧಿಯನ್ನೂ ಒದಗಿಸುತ್ತಿಲ್ಲ ಎಂದು ಆರೋಪಿಸಿದ್ದಾರೆ.

ಈ ಸವಾಲುಗಳ ಹೊರತಾಗಿಯೂ, ದೆಹಲಿಯ ಜನರ ಕಲ್ಯಾಣವೇ ತನ್ನ ಪ್ರಮುಖ ಆದ್ಯತೆ. ಉಚಿತ ವಿದ್ಯುತ್, ಚಿಕಿತ್ಸಾಲಯಗಳು, ಆಸ್ಪತ್ರೆಗಳು, ಉಚಿತ ಔಷಧಗಳು ಮತ್ತು ಮಹಿಳೆಯರಿಗೆ ಉಚಿತ ಬಸ್ ಪ್ರಯಾಣದಂತಹ ಅಗತ್ಯ ಸೇವೆಗಳು ಮತ್ತು ಉಪಕ್ರಮಗಳು ಅಡೆತಡೆಯಿಲ್ಲದೆ ಮುಂದುವರಿಯುತ್ತದೆ. ನಾನು ನಿಮ್ಮ ನಡುವೆ ಇಲ್ಲದಿದ್ದರೂ ಯಾರೂ ಚಿಂತಿಸುವ ಅಗತ್ಯವಿಲ್ಲ. ನಿಮ್ಮ ಎಲ್ಲಾ ಕೆಲಸಗಳು ಮುಂದುವರಿಯುತ್ತದೆ ಎಂದು ಭರವಸೆ ನೀಡಿದರು.

## ಅಮೆರಿಕ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ದೋಷಿ



**ನ್ಯೂಯಾರ್ಕ್:** ಹಷ್ ಮನಿ ಪ್ರಕರಣಕ್ಕೆ ಸಂಬಂಧಿಸಿದಂತೆ ಅಮೆರಿಕ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ದೋಷಿ ಎಂದು ನ್ಯೂಯಾರ್ಕ್ ನ್ಯಾಯಾಲಯ ಘೋಷಿಸಿದೆ. ಅಪರಾಧ ಪ್ರಕರಣವೊಂದರಲ್ಲಿ ಶಿಕ್ಷೆಗೊಳಗಾದ ಮೊದಲ ಯುಎಸ್ ಮಾಜಿ ಅಧ್ಯಕ್ಷ ಎಂಬ ಅಪಖ್ಯಾತಿಗೆ ಟ್ರಂಪ್ ಒಳಗಾಗಿದ್ದಾರೆ. ಹಾಲಿ ಅಥವಾ ಮಾಜಿ ಅಧ್ಯಕ್ಷರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಿರುವುದು ಅಮೆರಿಕದ ಇತಿಹಾಸದಲ್ಲಿ ಇದೇ ಮೊದಲು. ಪ್ರಕರಣದಲ್ಲಿ ಎಲ್ಲಾ 34 ಆರೋಪಗಳಲ್ಲಿಯೂ ಟ್ರಂಪ್ ದೋಷಿ ಎಂದು ನ್ಯೂಯಾರ್ಕ್ ನ್ಯಾಯಾಧೀಶರು ಆದೇಶ ಹೊರಡಿಸಿದ್ದಾರೆ. ಜಾಮೀನು ಇಲ್ಲದೇ ಬಿಡುಗಡೆಯಾಗಿದ್ದ ಟ್ರಂಪ್ ಈಗ ಅಪರಾಧಿಯಾಗಿದ್ದಾರೆ. 2016ರ ಅಧ್ಯಕ್ಷೀಯ ಚುನಾವಣೆಗೂ ಮುನ್ನ ಪೋರ್ನ್ ಸ್ಟಾರ್ ಸ್ಟೋಮಿ ಡೇನಿಯಲ್ಸ್ ಜೊತೆ ಸಂಬಂಧವನ್ನು ಹೊಂದಿದ್ದರು ಎಂದು ತಿಳಿದುಬಂದಿದೆ ಮತ್ತು ಅದನ್ನು ಮರೆಮಾಡಲು ಅವರು ಹಣವನ್ನು ಸ್ಟೋರ್ಮಿಗೆ ಪಾವತಿಸಿದ್ದರು ಎಂದು ಆರೋಪಿಸಲಾಗಿದೆ. ಎಲ್ಲಾ 34 ಆರೋಪಗಳಲ್ಲಿ ಅವರು ತಪ್ಪಿತಸ್ಥರೆಂಬುದು ಸಾಬೀತಾಗಿದೆ. ದಾಖಲೆಗಳನ್ನು ತಿದ್ದಿದ ಎಲ್ಲಾ ಆರೋಪಗಳನ್ನು ಟ್ರಂಪ್ ನಿರಾಕರಿಸಿದ್ದಾರೆ. ಅವರು ಸ್ಟಾರ್ಮಿ ಡೇನಿಯಲ್ಸ್ ಜತೆಗಿನ ಸಂಬಂಧವನ್ನು ಕೂಡ ನಿರಾಕರಿಸಿದ್ದಾರೆ. ನ್ಯಾ. ಜುವಾನ್ ಮಾರ್ಚೆನ್ ಜುಲೈ 11ರಂದು ಶಿಕ್ಷೆ ಪ್ರಕಟಿಸಲಿದ್ದಾರೆ. ಜುಲೈ 15ರಂದು ರಿಪಬ್ಲಿಕನ್ ಪಕ್ಷದ ರಾಷ್ಟ್ರೀಯ ಸಮಾವೇಶ ಪ್ರಾರಂಭವಾಗಲಿರುವ ಸಮಯದಲ್ಲಿ ಟ್ರಂಪ್ ವಿರುದ್ಧ ನಿರ್ಧಾರ ಪ್ರಕಟವಾಗುತ್ತದೆ. ಇದರಲ್ಲಿ ಟ್ರಂಪ್ ಹೆಸರನ್ನು ಪಕ್ಷವು ಅಧ್ಯಕ್ಷೀಯ ಅಭ್ಯರ್ಥಿಯಾಗಿ ಔಪಚಾರಿಕವಾಗಿ ಘೋಷಿಸುತ್ತದೆ.

## ಗಾಝಾದಲ್ಲಿ ಆಹಾರ ಮಾರಾಟ ಮರು ಆರಂಭಿಸಿದ ಇಸ್ರೇಲ್



**ರಮಲ್ಲಾ:** ಗಾಝಾದಲ್ಲಿ ಇಸ್ರೇಲ್ ಹಾಗೂ ಆಕ್ರಮಿತ ಪಶ್ಚಿಮದಂಡೆ ಪ್ರದೇಶದಿಂದ ಆಹಾರ ಮಾರಾಟ ಮಾಡದಂತೆ ವಿಧಿಸಿದ್ದ ನಿಷೇಧವನ್ನು ಇಸ್ರೇಲಿ ಸೇನೆ ತೆರವುಗೊಳಿಸಿದೆ. ರಫಾ ಪಟ್ಟಣದ ಮೇಲಿನ ದಾಳಿಯಿಂದಾಗಿ ಅಂತಾರಾಷ್ಟ್ರೀಯ ನೆರವಿಗೆ ತಡೆಯಾಗಿರುವ ಹಿನ್ನೆಲೆಯಲ್ಲಿ ಈ ಕ್ರಮ ಆರಂಭಿಸಿದೆ ಎಂದು ಫೆಲಸ್ತೀನಿ ಅಧಿಕಾರಿಗಳು, ವ್ಯಾಪಾರಿಗಳು ಮತ್ತು ಅಂತಾರಾಷ್ಟ್ರೀಯ ನೆರವು ಕಾರ್ಯಕರ್ತರು ಹೇಳಿದ್ದಾರೆ.

ತಾಜಾ ಹಣ್ಣು, ತರಕಾರಿ ಮತ್ತು ಡೈರಿ ಉತ್ಪನ್ನಗಳನ್ನು ಇಸ್ರೇಲಿ ಮತ್ತು ಫೆಲಸ್ತೀನಿ ಪೂರೈಕೆದಾರರಿಂದ ಖರೀದಿ ಮಾಡಲು ಗಾಜಾ ವ್ಯಾಪಾರಿಗಳಿಗೆ ಸೇನೆಯ ಅಧಿಕಾರಿಗಳು ಅನುಮತಿ ನೀಡಿದ್ದಾರೆ. ಗಾಝಾದ ರಫಾ ಪಟ್ಟಣದ ಮೇಲೆ ಭೀಕರ ದಾಳಿ ನಡೆಸಿದ ಕೆಲ ದಿನಗಳ ಬಳಿಕ ಇಸ್ರೇಲ್ ಈ ಅನುಮತಿ ನೀಡಿದೆ. ರಫಾ ಪಟ್ಟಣದ ಮೇಲೆ ಆಕ್ರಮಣ ಮಾಡಿದ ಕಾರಣದಿಂದ ಗಾಝಾ ಪ್ರದೇಶಕ್ಕೆ ಈಜಿಪ್ಟ್‌ನಿಂದ ಬರುವ ದಾರಿ ಮುಚ್ಚಿದ್ದು, ದಾಳಿಯಿಂದ ಸಂತ್ರಸ್ತವಾಗಿರುವ ಫೆಲಸ್ತೀನ್ ಪ್ರದೇಶಕ್ಕೆ ವಿಶ್ವಸಂಸ್ಥೆಯ ನೆರವಿಗೆ ಇದು ತಡೆಯಾಗಿ ಪರಿಣಮಿಸಿದೆ. ದೇಶದಲ್ಲಿ ಕ್ಷಾಮ ಪರಿಸ್ಥಿತಿ ಎದುರಾಗುವ ಬಗ್ಗೆ ಮಾನವೀಯ ಸಂಸ್ಥೆಗಳು ಎಚ್ಚರಿಕೆ ನೀಡಿದ್ದು, ಸಂಘರ್ಷವನ್ನು ಸ್ಥಗಿತಗೊಳಿಸುವಂತೆ ಇಸ್ರೇಲ್ ಮೇಲೆ ಜಾಗತಿಕ ಒತ್ತಡ ಹೆಚ್ಚುತ್ತಿದೆ. ಇಸ್ರೇಲ್ ಅಧಿಕಾರಿಗಳು, ಪಶ್ಚಿಮ ದಂಡೆ ಮತ್ತು ಇಸ್ರೇಲ್ ನಿಂದ ಯುದ್ಧಕ್ಕೆ ಮುನ್ನ ಸರಕುಗಳನ್ನು ಖರೀದಿ ಮಾಡುತ್ತಿದ್ದ ಗಾಝಾದ ವಿತರಕರಿಗೆ ದೂರವಾಣಿ ಕರೆ ಮಾಡಿದ್ದಾರೆ ಎಂದು ಗಾಝಾ ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಆಯಿದ್ ಅಬು ರಮದಾನ್ ಹೇಳಿದ್ದಾರೆ.

## ತಂಬಾಕುಮುಕ್ತ ಭವಿಷ್ಯದತ್ತ ಭಾರತದ ಮುನ್ನಡೆ





**ದೆಹಲಿ:** ವಿಶ್ವ ತಂಬಾಕು ರಹಿತ ದಿನದ ಹಿನ್ನೆಲೆಯಲ್ಲಿ, ನಾವು ಹದಿಹರೆಯದವರಲ್ಲಿ ಧೂಮಪಾನ ತಡೆ ಕುರಿತು ನಡೆಯುತ್ತಿರುವ ಹೋರಾಟಕ್ಕೆ ಹೆಚ್ಚಿನ ಪ್ರಾಧಾನ್ಯತೆ ನೀಡುತ್ತಿದ್ದೇವೆ. ಧೂಮಪಾನ ಮಾಡುವುದನ್ನು ತಡೆಯಲು ಅನೇಕ ಪ್ರಯತ್ನಗಳನ್ನು ಮಾಡಿದ ನಂತರವೂ, ನಮ್ಮ ದೇಶದಲ್ಲಿ ಯುವಕರಲ್ಲಿ, ವಿಶೇಷವಾಗಿ ಹದಿಹರೆಯದವರಲ್ಲಿ ತಂಬಾಕು ಸೇವನೆಯು ತುಲನಾತ್ಮಕವಾಗಿ ಹೆಚ್ಚಾಗಿದೆ ಎಂದು ಡೇಟಾ ತೋರಿಸುತ್ತದೆ. ಶ್ವಾಸಕೋಶದ ಸಂಘಟನೆದ ಪ್ರಕಾರ, ತಂಬಾಕು–ಸಂಬಂಧಿತ ಸಾವುಗಳು ಜಾಗತಿಕವಾಗಿ ತಡೆಗಟ್ಟಬಹುದಾದ ಸಾವುಗಳಿಗೆ ಪ್ರಮುಖ ಕಾರಣವಾಗಿದೆ. ಭಾರತದಲ್ಲಿ, ಸರಿಸುಮಾರು 267 ಮಿಲಿಯನ್ ಜನರು ತಂಬಾಕು ಬಳಕೆದಾರರಾಗಿದ್ದಾರೆ, 15 ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ 28.6% ಜನರು ತಂಬಾಕು ಉತ್ಪನ್ನಗಳನ್ನು ಸೇವಿಸುತ್ತಿದ್ದಾರೆ. ಇದರಲ್ಲಿ, 8.5% ಜನರು 13 ರಿಂದ 15 ವರ್ಷ ವಯಸ್ಸಿನ ಹದಿಹರೆಯದವರಾಗಿದ್ದಾರೆ.

ರುಸಾನ್ ಫಾರ್ಮಾದ ಮುಖ್ಯ ಮಾರ್ಕೆಟಿಂಗ್ ಅಧಿಕಾರಿ ಮಾಳವಿಕಾ ಕೌರಾ ಸಕ್ಸೇನಾ ಅವರು ತಂಬಾಕು ತ್ಯಜಿಸುವತ್ತ ತಮ್ಮ ಪ್ರಯಾಣದಲ್ಲಿ ನಮ್ಮ ಸಮಾಜದ ದುರ್ಬಲ ವರ್ಗಗಳನ್ನು, ವಿಶೇಷವಾಗಿ ಯುವಕರನ್ನು ರಕ್ಷಿಸಲು ದೃಢವಾದ ನಿಯಮಗಳ ಪ್ರಾಮುಖ್ಯತೆಯನ್ನು ಒತ್ತಿಹೇಳುತ್ತಾರೆ. ಅವರು ಹೇಳುವಂತೆ, ತಂಬಾಕು ನಿಲುಗಡೆಯನ್ನು ಗೆಲ್ಲಲು, ನಾವು ಎಲ್ಲಾ ಮಧ್ಯಸ್ಥಗಾರರ ನಡುವೆ ಪಾಲುದಾರಿಕೆಯನ್ನು ರೂಪಿಸಬೇಕು, ನಮ್ಮ ಪ್ರಯತ್ನಗಳ ಮುಂಚೂಣಿಯಲ್ಲಿ ಯುವಕರ ಯೋಗಕ್ಷೇಮವನ್ನು ಇರಿಸಬೇಕು. ತಂಬಾಕು ನಿಲುಗಡೆ ರಂಗದಲ್ಲಿ ಪ್ರಮುಖ ಆಟಗಾರರಾಗಿ, ಎರಡೂ ಪರಿಣಾಮಕಾರಿ ಕ್ರಮಗಳನ್ನು ತೆಗೆದುಕೊಳ್ಳುವ ಜವಾಬ್ದಾರಿ ನಮ್ಮ ಮೇಲಿದೆ. ಮತ್ತು ಸಾಮಾಜಿಕ ಪರಿಣಾಮಗಳನ್ನು ಗಮನದಲ್ಲಿಟ್ಟುಕೊಂಡು, ತಂಬಾಕು ಮುಕ್ತ ಭವಿಷ್ಯದತ್ತ ಭಾರತವನ್ನು ಮುನ್ನಡೆಸುತ್ತದೆ.

ಬೆಂಗಳೂರಿನ ಇಎಸ್ಐ ಆಸ್ಪತ್ರೆಯ ಮನೋವೈದ್ಯಶಾಸ್ತ್ರದ ಪ್ರಾಧ್ಯಾಪಕ ಮತ್ತು ಎಚ್ಒಡಿ ಡಾ. ಎಚ್. ಚಂದ್ರಶೇಖರ್ ಹೇಳುವಂತೆ, ಧೂಮಪಾನಕ್ಕೆ ಪ್ರಚೋದಕಗಳನ್ನು ಗುರುತಿಸುವುದು ಮತ್ತು ಸಮಗ್ರ ವಿಧಾನವನ್ನು ಅಳವಡಿಸಿಕೊಳ್ಳುವ ಮೂಲಕ ನಡವಳಿಕೆಗಳನ್ನು ಬಿಡುಗಡೆ ಮಾಡುವುದು ಧೂಮಪಾನವನ್ನು ತೊರೆಯಲು ಸಾಬೀತಾಗಿರುವ ಕೆಲವು ವಿಧಾನಗಳಾಗಿವೆ. ನಾವು ಜನರಿಗೆ, ವಿಶೇಷವಾಗಿ ಹದಿಹರೆಯದವರು ಮತ್ತು ಯುವಕರಿಗೆ ಸಹಾಯ ಮಾಡಲು ಸಮಗ್ರ ಬೆಂಬಲ ವ್ಯವಸ್ಥೆಯನ್ನು ಒದಗಿಸಬೇಕು. ತಂಬಾಕು–ಮುಕ್ತ ಜೀವನವನ್ನು ಅಳವಡಿಸಿಕೊಳ್ಳುವ ನಿಟ್ಟಿನಲ್ಲಿ ವೈಯಕ್ತೀಕರಿಸಿದ ಮಾರ್ಗದರ್ಶನ ಮತ್ತು ಸಹಾಯಕ್ಕಾಗಿ ಆರೋಗ್ಯ ಪೂರೈಕೆದಾರರೊಂದಿಗೆ ಕೆಲಸ ಮಾಡುವುದು ಮುಖ್ಯವಾಗಿದೆ.''

## ಮೋದಿ ಸೋಲುವುದು ಆವಶ್ಯಕ: ಪಾಕ್ ಮಾಜಿ ಸಚಿವ



**ಇಸ್ಲಾಮಾಬಾದ್ (ಪಾಕಿಸ್ತಾನ):** ನರೇಂದ್ರ ಮೋದಿಯವರ ಸಿದ್ಧಾಂತವು ಮೂಲಭೂತವಾದವಾಗಿದೆ ಅವರು ಸೋಲುವುದು ಬಹಳ ಆವಶ್ಯಕವಾಗಿದೆ. ಪಾಕಿಸ್ತಾನದಲ್ಲಿರುವ ಪ್ರತಿಯೊಬ್ಬರೂ ನರೇಂದ್ರ ಮೋದಿಯನ್ನು ಸೋಲಿಸಲು ಬಯಸುತ್ತಾರೆ. ಅವರನ್ನು ಸೋಲಿಸುವವರು, ರಾಹುಲ್ ಗಾಂಧಿಯಾಗಿರಲಿ, ಕೇಜ್ರಿವಾಲ್ ಅಥವಾ ಮಮತಾ ಬ್ಯಾನರ್ಜಿ ಆಗಿರಲಿ, ನಮ್ಮ ಶುಭಾಶಯಗಳು ಅವರೊಂದಿಗಿದೆ ಎಂದು ಪಾಕಿಸ್ತಾನದ ಮಾಜಿ ಸಚಿವ ಫವಾದ್ ಚೌಧರಿ ಹೇಳಿದ್ದಾರೆ. ಫವಾದ್ ಚೌಧರಿ ತಮ್ಮ ಮಾತು ಮುಂದುವರೆಸಿ, ಎರಡೂ ದೇಶಗಳಲ್ಲಿ ಭಯೋತ್ಪಾದಕತೆ ಕಡಿಮೆಯಾದಾಗ ಮಾತ್ರ ಭಾರತ–ಪಾಕಿಸ್ತಾನ ಸಂಬಂಧಗಳು ಸುಧಾರಿಸುತ್ತದೆ ಎಂದರು. ಪಾಕಿಸ್ತಾನದ ಸಾಮಾನ್ಯ ಜನರಲ್ಲಿ ಭಾರತದ ಬಗ್ಗೆ ದ್ವೇಷವಿಲ್ಲ; ಆದರೆ ಭಾರತದಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘ ಮತ್ತು ಭಾಜಪ ನಿರಂತರವಾಗಿ ಜನರ ಮನಸ್ಸಿನಲ್ಲಿ ಪಾಕಿಸ್ತಾನದ ಬಗ್ಗೆ ದ್ವೇಷವನ್ನು ಹುಟ್ಟುಹಾಕುತ್ತಿವೆ. ಇದು ಎರಡೂ ದೇಶಗಳ ಸಾಮಾನ್ಯ ಜನರಿಗೆ ಒಳ್ಳೆಯದಲ್ಲ ಎಂದರು.

## ತಿರುಪತಿಗೆ ತೆರಳಿ ಪ್ರಾರ್ಥನೆ ಸಲ್ಲಿಸಿದ ಅಮಿತ್ ಶಾ



**ತಿರುಪತಿ:** ಲೋಕಸಭಾ ಚುನಾವಣೆಯ ಬಹಿರಂಗ ಪ್ರಚಾರ ಮುಗಿದ ಬೆನ್ನಲ್ಲೇ ಗೃಹ ಸಚಿವ ಅಮಿತ್ ಶಾ ಪತ್ನಿ ಸೋನಲ್ ಶಾ ಜೊತೆಗೆ ತಿರುಪತಿ ದೇವಸ್ಥಾನಕ್ಕೆ ಭೇಟಿ ನೀಡಿದ್ದಾರೆ. ಆಂಧ್ರಪ್ರದೇಶದ ತಿರುಮಲದಲ್ಲಿರುವ ತಿರುಪತಿ ವೆಂಕಟರಮಣ ದೇವಸ್ಥಾನದಲ್ಲಿ ಅಮಿತ್ ಶಾ ಸಾಷ್ಟಾಂಗ ನಮಸ್ಕಾರ ಮಾಡಿ ಪ್ರಾರ್ಥನೆ ಸಲ್ಲಿಸಿದ್ದಾರೆ. ಭೇಟಿ ಬಳಿಕ ಸಾಮಾಜಿಕ ಜಾಲತಾಣದಲ್ಲಿ ಶ್ರೀ ವೆಂಕಟೇಶ್ವರ ಸ್ವಾಮಿಯ ಕೃಪೆಯು ಪ್ರತಿಯೊಬ್ಬರ ಜೀವನದಲ್ಲಿ ಮೇಲಿರಲಿ. ಎಲ್ಲರಿಗೂ ಉತ್ತಮ ಆರೋಗ್ಯ ಮತ್ತು ಸಮೃದ್ಧಿಯನ್ನು ತರಲಿ ಎಂದು ಬರೆದುಕೊಂಡಿದ್ದಾರೆ.

## ಏರ್ ಇಂಡಿಯಾ ವಿಮಾನ ವಿಳಂಬ- ಪ್ರಯಾಣಿಕರ ಪರದಾಟ



**ದೆಹಲಿ:** ಗುರುವಾರ ಮಧ್ಯಾಹ್ನ ನವದೆಹಲಿಯಿಂದ ಸ್ಯಾನ್ ಫ್ರಾನ್ಸಿಸ್ಕೋಗೆ ಟೇಕ್ ಆಫ್ ಆಗಬೇಕಿದ್ದ ಏರ್ ಇಂಡಿಯಾ ವಿಮಾನ ಬರೋಬ್ಬರಿ 20 ಗಂಟೆಗಳ ಕಾಲ ವಿಳಂಬವಾಗಿದ್ದು, ಪ್ರಯಾಣಿಕರು ಪರದಾಡುವಂತಾಗಿದೆ. ಹವಾ ನಿಯಂತ್ರಣ ವ್ಯವಸ್ಥೆ ಇಲ್ಲದೆ ವಿಮಾನದೊಳಗೆ ಕೆಲವು ಪ್ರಯಾಣಿಕರು ಪ್ರಜ್ಞೆ ತಪ್ಪಿ ಬಿದ್ದಿದ್ದಾರೆ. ನಂತರ ಪ್ರಯಾಣಿಕರಿಗೆ ವಿಮಾನದಿಂದ ನಿರ್ಗಮಿಸಲು ತಿಳಿಸಲಾಗಿದೆ. ನಿನ್ನೆ ಮಧ್ಯಾಹ್ನ ಸ್ಯಾನ್ ಫ್ರಾನ್ಸಿಸ್ಕೋಗೆ ತೆರಳಬೇಕಿದ್ದ ವಿಮಾನ, ಇಂದು ಬೆಳಗ್ಗೆ 11 ಗಂಟೆಗೆ ಟೇಕ್ ಆಫ್ ಆಗಲಿದೆ ಎಂದು ವರದಿಯಾಗಿದೆ. ಏರ್ ಇಂಡಿಯಾ ವಿಮಾನ ವಿಳಂಬದ ಕುರಿತು ಪತ್ರಕರ್ತೆ ಶ್ವೇತಾ ಪುಂಜ್ ಅವರು ಟ್ವೀಟ್ ಮಾಡಿದ್ದಾರೆ. ಹವಾ ನಿಯಂತ್ರಣವಿಲ್ಲದೆ ಪ್ರಯಾಣಿಕರು ಪರದಾಡುತ್ತಿರುವ ಫೋಟೋವನ್ನು ಪೋಸ್ಟ್ ಮಾಡಿರುವ ಅವರು, ಫ್ಲೈಟ್ ನಂ.ಎಐ183 ವಿಮಾನಕ್ಕೆ ಪ್ರಯಾಣಿಕರನ್ನು ಹತ್ತಿಸಲಾಯಿತು. ಎಸಿ ಇಲ್ಲದೆ ಹಲವು ಪ್ರಯಾಣಿಕರು ಪರದಾಡಿದ್ದರು. ಈ ವೇಳೆ ಕೆಲವರು ಪ್ರಜ್ಞೆ ತಪ್ಪಿ ಬಿದ್ದಿದ್ದರು. ನಂತರ ಪ್ರಯಾಣಿಕರಿಗೆ ವಿಮಾನದಿಂದ ನಿರ್ಗಮಿಸಲು ತಿಳಿಸಲಾಯಿತು ಎಂದು ಬರೆದುಕೊಂಡಿದ್ದಾರೆ.

## ಬಿಸಿಲಿಗೆ 16 ಮಂದಿ ಸಾವು

**ಪಾಟ್ನಾ:** ಉತ್ತರ ಭಾರತ ಬಿರು ಬಿಸಿಲಿಂದ ತತ್ತರಿಸಿ ಹೋಗಿದೆ. ಬಿಹಾರದಲ್ಲಿ ಬಿಸಿಲಿನಿಂದ ಅಸ್ವಸ್ಥರಾದ 16 ಮಂದಿ ಎರಡು ಗಂಟೆ ಅವಧಿಯಲ್ಲಿ ಜೀವ ಕಳೆದುಕೊಂಡಿದ್ದಾರೆ. ಬಿಹಾರ ಔರಂಗಾಬಾದ್ ಸರ್ಕಾರಿ ಆಸ್ಪತ್ರೆಯಲ್ಲಿ ಗುರುವಾರ ರಾತ್ರಿ ದುರ್ಘಟನೆ ನಡೆದಿದೆ. ಬಿಹಾರದಲ್ಲಿ ಎರಡು ಮೂರು ದಿನದಿಂದ ಭಾರೀ ಬಿಸಿಲು ಇದೆ. ಗುರುವಾರ 48.2 ಡಿಗ್ರಿ ಸೆಲ್ಸಿಯಸ್ ನಷ್ಟು ಉಷ್ಣಾಂಶ ದಾಖಲಾಗಿದೆ. ಬಿಸಿಲಿನಿಂದ ಬಳಲಿ ಆಸ್ಪತ್ರೆಗೆ ದಾಖಲಾಗಿದ್ದ ವಿವಿಧ ವಯೋಮಾನದವರು ಮೃತಪಟ್ಟಿದಾರೆ. ಆಸ್ಪತ್ರೆ ಎದುರು ಕುಟುಂಬದವರ ಆಕ್ರಂದನ ಮುಗಿಲು ಮುಟ್ಟಿತ್ತು. ಬಿಹಾರದ ಹಲವು ಭಾಗಗಳಲ್ಲಿ ಬುಧವಾರವೂ 44 ಡಿಗ್ರಿ ಸೆಲ್ಸಿಯಸ್ನಷ್ಟಿತ್ತು. ಔರಂಗಾಬಾದ್ನಲ್ಲೂ ಇಷ್ಟೇ ಪ್ರಮಾಣದಲ್ಲಿ ಉಷ್ಣಾಂಶ ಕಂಡು ಬಂದಿತ್ತು. ಗುರುವಾರ ಏಕಾಏಕಿ 4 ಡಿಗ್ರಿ ಸೆಲ್ಸಿಯಸ್ ನಷ್ಟು ಉಷ್ಣಾಂಶ ಏರಿಕೆ ಕಂಡಿದ್ದು ಜನ ನಿರ್ಜಲೀಕರಣ, ತಲೆ ಸುತ್ತುವಿಕೆಯಿಂದ ಆಸ್ಪತ್ರೆಗೆ ದಾಖಲಾಗಿದ್ದರು. ಒಂದೇ ದಿನದಲ್ಲಿ 35 ಮಂದಿ ಬಿಸಿಲಿನಿಂದ ಅಸ್ವಸ್ಥರಾಗಿಯೇ ಆಸ್ಪತ್ರೆಗೆ ಬಂದಿದ್ದರು. ಇವರಲ್ಲಿ ಕೆಲವರು ತೀವ್ರವಾಗಿ ಅಸ್ವಸ್ಥಗೊಂಡಿದ್ದರು. ಬಿಸಿಲ ಹೊಡೆತದಿಂದ ಅವರು ಬಳಲಿರುವುದು ಕಂಡು ಬಂದಿತ್ತು. ಕೂಡಲೇ ಬಂದವರಿಗೆ ಚಿಕಿತ್ಸೆ ನೀಡಿದರೂ ಎರಡೇ ಗಂಟೆ ಅವಧಿಯಲ್ಲಿ 16 ಮಂದಿ ಜೀವ ಕಳೆದುಕೊಂಡರು. ಒಬ್ಬೊಬ್ಬರಾಗಿ ಮೃತಪಟ್ಟಿರುವುದನ್ನು ಔರಂಗಾಬಾದ್ ಸರ್ಕಾರಿ ಆಸ್ಪತ್ರೆ ಸಿಬ್ಬಂದಿ ಪ್ರಕಟಿಸಿದರು. ಈ ವೇಳೆ ಅಲ್ಲಿ ಸೇರಿದ್ದ ಕುಟುಂಬಸ್ಥರು ಆತಂಕದಲ್ಲಿಯೇ ಇದ್ದರು. ಸಾವಿನ ಮಾಹಿತಿ ದೊರೆಯುತ್ತಿದ್ದಂತೆ ಕುಟುಂಬದವರ ಆಕ್ರಂದನ ಮನ ಕಲಕುವಂತೆ ಇತ್ತು. ಬಿಸಿಲಿನ ಕಾರಣಕ್ಕೆ ಹೆಚ್ಚಿನ ಮಂದಿ ಆಸ್ಪತ್ರೆಗೆ ಬರುತ್ತಿದ್ದು. ಚಿಕಿತ್ಸೆ ನೀಡಲಾಗುತ್ತಿದೆ.

## ವಿಶ್ವಸಂಸ್ಥೆಯಿಂದ ಮೇಜರ್ ರಾಧಿಕಾ ಸೇನ್‌ಗೆ ಸೇನಾ ಪ್ರಶಸ್ತಿ




**ನವದೆಹಲಿ:** ಕಾಂಗೋದಲ್ಲಿ ವಿಶ್ವಸಂಸ್ಥೆಯ ಮಿಷನ್ನಲ್ಲಿ ಸೇವೆ ಸಲ್ಲಿಸಿದ ಭಾರತೀಯ ಮಹಿಳೆ ಮೇಜರ್ ರಾಧಿಕಾ ಸೇನ್ ಅವರಿಗೆ ಮಿಲಿಟರಿ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುವುದು. ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಅವರ ಹಸ್ತದಿಂದ ಈ ಪ್ರಶಸ್ತಿ ಕೊಡಲಾಗುವುದು.

ಮೇ 30 ರಂದು 'ಅಂತರರಾಷ್ಟ್ರೀಯ ವಿಶ್ವಸಂಸ್ಥೆಯ ಶಾಂತಿರಕ್ಷಕ ದಿನ'ದ ನಿಮಿತ್ತ ಮೇಜರ್ ರಾಧಿಕಾ ಸೇನ್ ಅವರಿಗೆ '2023 ವಿಶ್ವಸಂಸ್ಥೆಯ ಮಿಲಿಟರಿ ಜೆಂಡರ್ ಅಡ್ವೊಕೇಟ್ ಆಫ್ ದಿ ಇಯರ್ ಪುರಸ್ಕಾರ್' ಪ್ರಶಸ್ತಿ ಪ್ರಧಾನ ಮಾಡಲಾಗುವುದು. ಈ ಕುರಿತು ಪ್ರತಿಕ್ರಿಯಿಸಿರುವ ರಾಧಿಕಾ ಸೇನ್ ಇವರು, ಅಂತಾರಾಷ್ಟ್ರೀಯ ವೇದಿಕೆಯಲ್ಲಿ ಭಾರತವನ್ನು ಪ್ರತಿನಿಧಿಸುತ್ತಿರುವುದು, ನನಗೆ ಸಂದ ಗೌರವ ಎಂದು ಹೇಳಿದ್ದಾರೆ.

ಮೇಜರ್ ರಾಧಿಕಾ ಸೇನ್ ಅವರನ್ನು ಮಾರ್ಚ್ 2023 ರಿಂದ ಏಪ್ರಿಲ್ 2024 ರವರೆಗೆ 'ಇಂಡಿಯನ್ ರಾಪಿಡ್ ಡಿಪ್ಲೋಯ್ಮೆಂಟ್ ಬೆಟಾಲಿಯನ್' ಕಮಾಂಡರ್ ಆಗಿ ಕಾಂಗೋ ಗಣರಾಜ್ಯದ ಪೂರ್ವ ಭಾಗದಲ್ಲಿ ನಿಯೋಜಿಸಲಾಗಿತ್ತು. ರಾಧಿಕಾ ಸೇನ್ ಮೂಲತಃ ಹಿಮಾಚಲ ಪ್ರದೇಶದವರಿದ್ದಾರೆ. ಅವರು 1993 ರಲ್ಲಿ ಜನಿಸಿದರು. ಅವರು ಬಯೋಟೆಕ್ ಎಂಜಿನಿಯರಿಂಗ್ನಲ್ಲಿ ಪದವಿ ಪಡೆದ ನಂತರ ಭಾರತೀಯ ಸೇನೆಗೆ ಸೇರಿದರು.

## ಶ್ರೀಲಂಕಾದಲ್ಲಿ ಐಟಿ ವ್ಯವಹಾರ ನಡೆಸುತ್ತಿದ್ದ ಭಾರತೀಯರ ಬಂಧನ



**ಶ್ರೀಲಂಕಾ:** ಪ್ರವಾಸಿ ವೀಸಾವನ್ನು ದುರುಪಯೋಗ ಪಡಿಸಿಕೊಂಡು ದ್ವೀಪ ರಾಷ್ಟ್ರದಲ್ಲಿ ಐಟಿ ವ್ಯವಹಾರ ನಡೆಸುತ್ತಿದ್ದದ್ದಕ್ಕಾಗಿ ಶ್ರೀಲಂಕಾದ ವಲಸೆ ಅಧಿಕಾರಿಗಳು ಓರ್ವ ಮಹಿಳೆ ಸೇರಿದಂತೆ ಎಂಟು ಭಾರತೀಯರನ್ನು ಬಂಧಿಸಿದ್ದಾರೆ.

ಇತ್ತೀಚೆಗೆ ಶ್ರೀಲಂಕಾದ ಸಿನ್ನಮನ್ ಗಾರ್ಡನ್ಸ್ ನ ವಸತಿ ಪ್ರದೇಶದಲ್ಲಿ ಐಟಿ ವ್ಯವಹಾರ ನಡೆಸುತ್ತಿರುವ ಮನೆಯ ಮೇಲೆ ದಾಳಿ ನಡೆಸಿದ ಸಂದರ್ಭದಲ್ಲಿ ವಲಸೆ ಅಧಿಕಾರಿಗಳು ಎಂಟು ಮಂದಿ ಭಾರತೀಯ ವ್ಯಕ್ತಿಗಳನ್ನು ಅರೆಸ್ಟ್ ಮಾಡಿದ್ದಾರೆ.

ಬಂಧಿತ ವ್ಯಕ್ತಿಗಳೆಲ್ಲರೂ ಪ್ರವಾಸಿ ವೀಸಾಗಳನ್ನು ಹೊಂದಿದ್ದು, ಈ ಪೈಕಿ ಒಬ್ಬಾತನ ವೀಸಾ ಅವಧಿ ಮುಕ್ತಾಯಗೊಂಡಿದೆ. ಶ್ರೀಲಂಕಾದಲ್ಲಿ ಪ್ರವಾಸಿ ವೀಸಾಗಳ ಅಡಿಯಲ್ಲಿ ಉದ್ಯೋಗವನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ.

ಬಂಧಿತ ಮಹಿಳೆ ಸೇರಿದಂತೆ ಎಂಟು ವ್ಯಕ್ತಿಗಳನ್ನು ಅಗತ್ಯ ಪ್ರಕ್ರಿಯೆಗಳು ಪೂರ್ಣಗೊಂಡ ನಂತರ ಗಡೀಪಾರು ಮಾಡಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಇದೇ ರೀತಿಯ ಘಟನೆ ಕಳೆದ ಮಾರ್ಚ್ ನಲ್ಲೂ ವರದಿಯಾಗಿತ್ತು. ಪ್ರವಾಸಿ ವೀಸಾಗಳನ್ನು ದುರುಪಯೋಗಪಡಿಸಿಕೊಂಡಿದ್ದಕ್ಕಾಗಿ ವೆಸ್ಟ್ ಕೋಸ್ಟ್ ರೆಸಾರ್ಟ್ ಪಟ್ಟಣವಾದ ನೆಗೊಂಬೊದಲ್ಲಿ 21 ಭಾರತೀಯರನ್ನು ಬಂಧಿಸಲಾಗಿತ್ತು.

ಭಾರತವು ಶ್ರೀಲಂಕಾದ ಅತಿ ದೊಡ್ಡ ಒಳಬರುವ ಪ್ರವಾಸೋದ್ಯಮ ಮಾರುಕಟ್ಟೆಯಾಗಿದೆ. ಸದ್ಯ, ಶ್ರೀಲಂಕಾವು ಭಾರತ, ಚೀನಾ, ಇಂಡೋನೇಷ್ಯಾ, ರಷ್ಯಾ, ಥೈಲ್ಯಾಂಡ್, ಮಲೇಷಿಯಾ ಮತ್ತು ಜಪಾನ್ನ ಪ್ರವಾಸಿಗರಿಗೆ ಉಚಿತ ವೀಸಾವನ್ನು ನೀಡುತ್ತಿದೆ.

## 100 ಮಿಲಿ 500 ರೂ.ಗೆ ಸೇಲ್ ತಾಯಿ ಹಾಲು ಮಾರಾಟ ಮಾಡ್ತಿದ್ದ ಮಳಿಗೆಗೆ ಸೀಲ್!



**ಚೆನ್ನೈ:** ವಾಣಿಜ್ಯ ಉದ್ದೇಶಗಳಿಗಾಗಿ ತಾಯಿಯ ಎದೆಹಾಲು ಮಾರಾಟ ಮಾಡುವುದು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ 2006ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವಾಗಿದೆ. ಹೀಗಿದ್ದೂ ಚೆನ್ನೈನಲ್ಲಿ ತಾಯಿಯ ಎದೆಹಾಲು ಮಾರಾಟ ಮಾಡುತ್ತಿದ್ದ ಜಾಲವೊಂದು ಪತ್ತೆಯಾಗಿದೆ.

ಪ್ರತಿ 100 ಮಿಲಿ ತಾಯಿಯ ಎದೆಹಾಲನ್ನು 500 ರೂ.ಗೆ ಮಾರಾಟ ಮಾಡುತ್ತಿದ್ದ ಮಳಿಗೆಯೊಂದನ್ನು ಚೆನ್ನೈನಲ್ಲಿ ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ಅಧಿಕಾರಿಗಳು ಸೀಲ್ ಮಾಡಿದ್ದು, ವೈಜ್ಞಾನಿಕ ತನಿಖೆಗಾಗಿ ಮಾದರಿಗಳನ್ನು ವಶಪಡಿಸಿಕೊಂಡಿದ್ದಾರೆ.

ತಾಯಂದಿರ ಎದೆಹಾಲನ್ನು ಮಾರಾಟ ಮಾಡಲಾಗುತ್ತಿದೆ ಎಂಬ ದೂರುಗಳು ಕೇಳಿಬಂದ ಹಿನ್ನೆಲೆಯಲ್ಲಿ 10 ದಿನಗಳಿಂದ ತೀವ್ರ ನಿಗಾ ವಹಿಸಿದ್ದ ಅಧಿಕಾರಿಗಳು ಶುಕ್ರವಾರ ಮಳಿಗೆ ಮೇಲೆ ದಾಳಿ ನಡೆಸಿದ್ದಾರೆ. ತಿರುವಳ್ಳೂರಿನ ಆಹಾರ ಸುರಕ್ಷತಾ ಇಲಾಖೆಯ ನಿಯೋಜಿತ ಅಧಿಕಾರಿ ಡಾ ಎಂ ಜಗದೀಶ್ ಚಂದ್ರ ಬೋಸ್ ಅವರ ನೇತೃತ್ವದಲ್ಲಿ ದಾಳಿ ನಡೆಸಲಾಗಿದೆ. ಈ ವೇಳೆ 100 ಮಿಲಿ ಬಾಟಲಿಗಳಲ್ಲಿ ಸಂಗ್ರಹಿಸಿದ್ದ ಮಾನವರ ಎದೆಹಾಲು ಹಾಗೂ ದಾನಿ ತಾಯಂದಿರಿಂದ ಪಡೆದ ಹಾಲನ್ನು ವಶಕ್ಕೆ ಪಡೆದುಕೊಳ್ಳಲಾಗಿದೆ.ಹಾಲನ್ನು ಪ್ಯಾಕಿಂಗ್ ಮಾಡುವುದಕ್ಕೆ ಅವರು ಯಾವ ವಿಧಾನಗಳನ್ನು ಅನುಸರಿಸಿದ್ದಾರೋ ನಮಗೆ ತಿಳಿದಿಲ್ಲ. ಈ ಬಗ್ಗೆ ವೈಜ್ಞಾನಿಕವಾಗಿ ತನಿಖೆ ನಡೆಸಿ, ವರದಿ ಬಂದ ಬಳಿಕ ಮುಂದಿನ ಕ್ರಮ ತೆಗೆದುಕೊಳ್ಳುತ್ತೇವೆ.

ಹಾಲನ್ನು ಪಾಶ್ಚ್ಯಾತ್ಯೀಕರಿಸಲು ಅವರು ಯಾವ ವಿಧಾನವನ್ನು ಅನುಸರಿಸಿದ್ದಾರೆ ಎಂಬುದು ನಮಗೆ ತಿಳಿದಿಲ್ಲ, ತನಿಖೆಯ ನಂತರ ನಾವು ಮುಂದಿನ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಅವರು ಹೇಳಿದ್ದಾರೆ.

ಸದ್ಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ–2006ರ ಅಡಿಯಲ್ಲಿ ತಾಯಿಯ ಎದೆಹಾಲು ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ಒಂದು ವೇಳೆ ನವಜಾತ ಶಿಶುಗಳಿಗೆ ತಾಯಿಯ ಎದೆಹಾಲು ಅಗತ್ಯವಿದ್ದರೆ, ಅದನ್ನು ಸಂಗ್ರಹಿಸಿ ವೈದ್ಯರ ಸಲಹೆ ಮತ್ತು ಮೇಲ್ವಿಚಾರಣೆ ಮೇರೆಗೆ ಶಿಶುಗಳಿಗೆ ನೀಡಬೇಕು ಎಂದು ಎಚ್ಚರಿಕೆ ನೀಡಿದ್ದಾರೆ.

## ಇಸ್ರೇಲ್ ಯುದ್ಧವನ್ನು ನಿಲ್ಲಿಸಿದರೆ ಸಂಪೂರ್ಣ ಒಪ್ಪಂದಕ್ಕೆ ಸಿದ್ಧ ಎಂದ ಹಮಾಸ್



**ಗಾಝಾ:** ಗಾಝಾದಲ್ಲಿನ ಜನರ ವಿರುದ್ಧದ ಯುದ್ಧವನ್ನು ಇಸ್ರೇಲ್ ನಿಲ್ಲಿಸಿದರೆ ಒತ್ತೆಯಾಳುಗಳ ವಿನಿಮಯ ಒಪ್ಪಂದ ಸೇರಿದಂತೆ ಸಂಪೂರ್ಣ ಒಪ್ಪಂದಕ್ಕೆ ಬರಲು ಸಿದ್ಧರಿದ್ದೇವೆ ಎಂದು ಹಮಾಸ್ ಗುರುವಾರ ಹೇಳಿದೆ.

ಗಾಝಾ ಜನರ ವಿರುದ್ಧದ ಯುದ್ಧ ಮತ್ತು ಆಕ್ರಮಣವನ್ನು ಇಸ್ರೇಲ್ ನಿಲ್ಲಿಸಿದರೆ ಸಂಪೂರ್ಣ ಒಪ್ಪಂದಕ್ಕೆ ಬರಲು ಸಿದ್ಧರಿದ್ದೇವೆ ಎಂದು ಅವರು ಸುದ್ದಿ ಸಂಸ್ಥೆ ರಾಯಿಟರ್ಸ್ಗೆ ಹೇಳಿಕೆಯಲ್ಲಿ ತಿಳಿಸಿದ್ದಾರೆ. ದಾಳಿಯನ್ನು ನಿಲ್ಲಿಸುವಂತೆ ವಿಶ್ವಸಂಸ್ಥೆಯ ಉನ್ನತ ನ್ಯಾಯಾಲಯವಾದ ಅಂತರರಾಷ್ಟ್ರೀಯ ನ್ಯಾಯಾಲಯ (ಐಸಿಜೆ) ಆದೇಶದ ಹೊರತಾಗಿಯೂ, ದಕ್ಷಿಣ ಗಾಝಾ ನಗರ ರಾಫಾ ಮೇಲೆ ಇಸ್ರೇಲ್ ಆಕ್ರಮಣವನ್ನು ಮುಂದುವರಿಸಿದ ಬೆನ್ನಲ್ಲೇ ಹಮಾಸ್ ಇತ್ತೀಚಿನ ಹೇಳಿಕೆ ಬಂದಿದೆ.

ನಮ್ಮ ಜನರ ಆಕ್ರಮಣ, ಮುತ್ತಿಗೆ, ಹಸಿವು ಮತ್ತು ನರಮೇಧದ ಬೆಳಕಿನಲ್ಲಿ (ಕದನ ವಿರಾಮ) ಮಾತುಕತೆಗಳನ್ನು ಮುಂದುವರಿಸುವ ಮೂಲಕ ಹಮಾಸ್ ಮತ್ತು ಪ್ಯಾಲೆಸ್ಟೈನ್ ಬಣಗಳು ಈ ನೀತಿಯ ಭಾಗವಾಗಲು ಒಪ್ಪುವುದಿಲ್ಲ ಎಂದು ಹಮಾಸ್ ಹೇಳಿಕೆಯಲ್ಲಿ ತಿಳಿಸಿದೆ.

ಇಂದು, ಗಾಝಾದಲ್ಲಿನ ನಮ್ಮ ಜನರ ವಿರುದ್ಧದ ಆಕ್ರಮಣ ಮತ್ತು ಆಕ್ರಮಣವನ್ನು ಆಕ್ರಮಣವು ನಿಲ್ಲಿಸಿದರೆ, ಸಮಗ್ರ ವಿನಿಮಯ ಒಪ್ಪಂದವನ್ನು ಒಳಗೊಂಡ ಸಂಪೂರ್ಣ ಒಪ್ಪಂದವನ್ನು ತಲುಪಲು ನಾವು ಸಿದ್ಧರಿದ್ದೇವೆ ಎಂಬ ನಮ್ಮ ಸ್ಪಷ್ಟ ನಿಲುವನ್ನು ನಾವು ಮಧ್ಯವರ್ತಿಗಳಿಗೆ ತಿಳಿಸಿದ್ದೇವೆ ಎಂದು ಅದು ಹೇಳಿದೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಡಾಲಿಯ 'ಕೋಟಿ' ಮನರಂಜನೆಗೆ ಕಿಚ್ಚ ಸುದೀಪ್ ಎಂಟ್ರಿ

ಕೋಟಿ ಸಿನಿಮಾದ ಪ್ರೀರಿಲೀಸ್ ವಿಶೇಷ ಟೀವಿ ಕಾರ್ಯಕ್ರಮ ಇತ್ತೀಚೆಗೆ ಅದ್ದೂರಿಯಾಗಿ ನಡೆಯಿತು. ಈ ಕಾರ್ಯಕ್ರಮವನ್ನು 'ಕೋಟಿ ಮನರಂಜನೆ' ಎಂದು ಕರೆಯಲಾಗಿದ್ದು, ಕಾರ್ಯಕ್ರಮದಲ್ಲಿ ಸಿನಿಮಾದ ತಾರಾಬಳಗವೇ ತುಂಬಿತ್ತು. ಕೋಟಿಯ ನಾಯಕ ಡಾಲಿ ಧನಂಜಯ ಸೇರಿದಂತೆ ನಾಯಕಿ ಮೋಕ್ಷಾ ಕುಶಾಲ್ ಮತ್ತು ಹಿರಿಯ ತಾರೆಗಳಾದ ತಾರಾ ಅನುರಾಧ, ರಂಗಾಯಣ ರಘು, ರಮೇಶ್ ಇಂದಿರಾ, ಸರ್ದಾರ್ ಸತ್ಯ ಕಾರ್ಯಕ್ರಮದಲ್ಲಿ ಪಾಲ್ಗೊಂಡರು.

ಈ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ತಂದದ್ದು ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್. ಅದ್ಭುತ ಲೈಟಿಂಗ್ ಮತ್ತು ಕೋರಿಯಾಗ್ರಫಿಯ ಮೂಲಕ ಆದ ಕಿಚ್ಚನ ಎಂಟ್ರಿಯ ನೋಡಿ ಜನರ ಕೇಕೆ ಮತ್ತು ಶಿಳ್ಳೆಗಳ ಸದ್ದು ಮುಗಿಲ ಮುಟ್ಟಿತ್ತು. ಸುದೀಪ್ ಅವರು ಸುಮಾರು ಒಂದು ತಾಸಿಗೂ ಹೆಚ್ಚಿನ ಕಾಲ ವೇದಿಕೆಯ ಮೇಲಿದ್ದು ನೆರೆದಿದ್ದ ಜನರನ್ನು ಹಾಸ್ಯಭರಿತ ಮಾತುಗಳಿಂದ ರಂಜಿಸಿದರು. ನಿರೂಪಕ ಅಕುಲ್ ಬಾಲಾಜಿ ಮತ್ತು ಸುದೀಪ್ ಮಾತುಕತೆ ಪ್ರೇಕ್ಷಕರಿಗೆ ನಗುವಿನ ಕಚಗುಳಿ ಇಡುವಂತಿತ್ತು. ಸುದೀಪ್ ಕೋಟಿ ಚಿತ್ರದ ಹೊಸ



ಪೋಸ್ಟರನ್ನು ಅನಾವರಣಗೊಳಿಸಿ ತಂಡಕ್ಕೆ ಶುಭ ಕೋರಿದರು.

ಕೋಟಿಯ ನಾಯಕಿ 'ಮೋಕ್ಷಾ' ಅವರ ಡಾನ್ಸ್ ಕಾರ್ಯಕ್ರಮಕ್ಕೆ ಪ್ರೇಕ್ಷಕರಿಂದ ಭರ್ಜರಿ ಪ್ರತಿಕ್ರಿಯೆ ದೊರೆಯಿತು. ಕೋಟಿಯ ಇತರ ನಟ ನಟಿಯರಿಂದ ವಿಶೇಷ ಡಾನ್ಸ್ ಕಾರ್ಯಕ್ರಮಗಳು ಮತ್ತು ಗಿಚ್ಚಿ ಗಿಲಿಗಿಲಿ ತಂಡದಿಂದ ಹೊಟ್ಟೆ ಹುಣ್ಣಾಗಿಸುವ ಹಾಸ್ಯ ಕಾರ್ಯಕ್ರಮ ನಡೆದವು. ಧನಂಜಯ ಅವರಿಗಾಗಿ ಮಕ್ಕಳು ಮಾಡಿದ ವಿಶೇಷ ಡಾನ್ಸ್ ಕಾರ್ಯಕ್ರಮ 'ಕೋಟಿ ಮನರಂಜನೆ'ಯ ಪ್ರಮುಖ ಆಕರ್ಷಣೆಗಳಲ್ಲೊಂದಾಗಿತ್ತು. ಧನಂಜಯ ಅವರು ಮಕ್ಕಳ ನೃತ್ಯವನ್ನು ಮೆಚ್ಚಿ ವೇದಿಕೆಯ ಮೇಲೆ ಬಂದು ಮಕ್ಕಳ ಜತೆ ಸೆಲ್ಫಿ ತೆಗೆದುಕೊಂಡರು.

ಈ ಚಿತ್ರದ ರಾಗ ಸಂಯೋಜಕರಾದ ವಾಸುಕಿ ವೈಭವ್ 'ಕೋಟಿ' ಸಿನಿಮಾದ ಹಾಡುಗಳನ್ನು ಹಾಡಿದರು. ಕೋಟಿಯ ಹಾಡುಗಳಿಗೆ ಸಾಹಿತ್ಯ ರಚಿಸಿರುವ ಯೋಗರಾಜ್ ಭಟ್ ''ಕನ್ನಡದ ಜನತೆಗಾಗಿ ಯಾರೇ ಕಷ್ಟಪಟ್ಟರೂ ನಾಡಿನ ಜನತೆ ಅವರ ಕೆಲಸವನ್ನು ಗೆಲ್ಲಿಸುತ್ತಾರೆ'' ಎಂದು ಹೇಳಿದರು.

ದಶಕಗಳ ಕಾಲ ಕಲರ್ಸ್ ಕನ್ನಡ ಚಾನೆಲನ್ನು ಮುನ್ನಡೆಸಿದ್ದ ಪರಮ್ ಅವರಿಗೆ ಚಾನೆಲ್ಲಿನ ಸಿಬ್ಬಂದಿ ವಿಶೇಷ ವಿಡಿಯೋ ಮೂಲಕ ಶುಭ ಕೋರಿದರು. ವಿಡಿಯೋದಲ್ಲಿ ತಮ್ಮ ಹಳ್ಳಿಮನೆಯ ಚಿತ್ರ ನೋಡಿದ ಪರಮ್ ಭಾವುಕರಾದರು. ಕಲರ್ಸ್ ಕನ್ನಡ ಮೂಲಕ ಯಶಸ್ಸು ಪಡೆದ ಚಂದನ್ ಶೆಟ್ಟಿ, ನಿವೇದಿತಾ ಗೌಡ, ವಿಜಯ್ ಸೂರ್ಯ, ರಕ್ಷಿತ್, ಶೈನ್ ಶೆಟ್ಟಿ, ಮಯೂರಿ, ಅಂಕಿತಾ ಅಮರ್, ನೇಹಾ ಗೌಡ ಹಾಗೂ ಅಕುಲ್ ಬಾಲಾಜಿ ತಮ್ಮ ಮೆಂಟರ್ 'ಪರಮ್' ಅವರ ಹೊಸ ಪಯಣಕ್ಕೆ ಶುಭ ಹಾರೈಸಿದರು.





# 'ಕಾಗದ' ಸಿನಿಮಾದೊಳಗೆ ಮೊಬೈಲ್ ಪೂರ್ವದ ಲವ್ ಸ್ಟೋರಿ

ಕನ್ನಡದಲ್ಲಿ ಸಾಕಷ್ಟು ಪ್ರೇಮಕಥೆಗಳು ಬಂದಿದೆ. ಆದರೆ ಒಂದಕ್ಕಿಂತ ಒಂದು ಭಿನ್ನ. ಅಂತಹ ಮತ್ತೊಂದು ವಿಭಿನ್ನ ಪ್ರೇಮ ಕಥಾನಕ '' ಕಾಗದ''. ಅರುಣ್ ಕುಮಾರ್ ಆಂಜನೇಯ ಅವರ ನಿರ್ಮಾಣದಲ್ಲಿ ರಂಜಿತ್ ಅವರು ನಿರ್ದೇಶಿಸಿರುವ ''ಕಾಗದ'' ಚಿತ್ರದ ಟೀಸರ್ ಇತ್ತೀಚೆಗೆ ಜಂಕಾರ್ ಮ್ಯೂಸಿಕ್ ಮೂಲಕ ಬಿಡುಗಡೆಯಾಗಿದೆ. ಟೀಸರ್ ಗೆ ಮೆಚ್ಚುಗೆಯ ಮಹಾಪೂರವೇ ಹರಿದು ಬರುತ್ತಿದೆ.

''ಕಾಗದ'' ಮೊಬೈಲ್ ಬರುವ ಮುಂಚೆ ನಡೆದ ಪ್ರೇಮಕಥೆ. ಹಳ್ಳಿಹಳ್ಳಿಗಳ ನಡುವಿನ ವೈಷಮ್ಯದ ನಡುವೆಯೂ ಅರಳಿದ ಪ್ರೇಮಕಥೆಯೂ ಹೌದು. ಪ್ರಸ್ತುತ ಈ ಚಿತ್ರದ ಚಿತ್ರೀಕರಣ ಹಾಗೂ ನಂತರದ ಚಟುವಟಿಕೆಗಳು ಮುಕ್ತಾಯವಾಗಿದೆ. ತೆರೆಗೆ ಬರಲು ಸಿದ್ದತೆ ನಡೆಯುತ್ತಿದೆ. ಇತ್ತೀಚಿಗೆ ಬಿಡುಗಡೆಯಾಗಿರುವ ಟೀಸರ್ ಗೆ ಮೆಚ್ಚುಗೆ ದೊರಕುತ್ತಿದೆ. ಈ ಹಿಂದೆ ''ಆಪಲ್ ಕೇಕ್'' ಎಂಬ ಚಿತ್ರ ನಿರ್ದೇಶಿಸಿದ್ದ ನನಗೆ ಇದು ಎರಡನೇ ಚಿತ್ರ ಎನ್ನುತ್ತಾರೆ ನಿರ್ದೇಶಕ ರಂಜಿತ್.

ಆದಿತ್ಯ ಎಂಬ ನೂತನ ಪ್ರತಿಭೆ ಈ ಚಿತ್ರದ ಮೂಲಕ ನಾಯಕನಾಗಿ ಚಿತ್ರರಂಗ ಪ್ರವೇಶಿಸುತ್ತಿದ್ದಾರೆ. ಬಾಲನಟಿಯಾಗಿ



ಜನಪ್ರಿಯರಾಗಿರುವ ಅಂಕಿತ ಜಯರಾಂ ''ಕಾಗದ''ದ ಮೂಲಕ ನಾಯಕಿಯಾಗಿದ್ದಾರೆ. ನೇಹಾ ಪಾಟೀಲ್ ವಿಶೇಷಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಬಲ ರಾಜ್ವಾಡಿ, ನೀನಾಸಂ ಅಶ್ವಥ್, ಮಠ ಕೊಪ್ಪಳ, ಶಿವಮಂಜು ಮುಂತಾದವರು ತಾರಾಬಳಗದಲ್ಲಿದ್ದಾರೆ. ನಾಲ್ಕು ಹಾಡುಗಳಿರುವ ಚಿತ್ರಕ್ಕೆ ಪ್ರದೀಪ್ ವರ್ಮ ಸಂಗೀತ ನೀಡಿದ್ದಾರೆ. ವೀನಸ್ ನಾಗರಾಜ್ ಮೂರ್ತಿ ಛಾಯಾಗ್ರಹಣ ಹಾಗೂ ಪವನ್ ಗೌಡ ಸಂಕಲನ ''ಕಾಗದ'' ಚಿತ್ರಕ್ಕಿದೆ.

## 'ಕೆಡಿ' ಶೂಟಿಂಗ್ ಮುಗಿಸಿ ಜೋಗಿ ಪ್ರೇಮ್

# ಚಿಲ್ ಮಾಡಿದ ಶಿಲ್ಪಾ ಶೆಟ್ಟಿ

ಬಾಲಿವುಡ್ ನಟಿ ಶಿಲ್ಪಾ ಶೆಟ್ಟಿ ಕೆಡಿ ಸಿನಿಮಾದ ಶೂಟಿಂಗ್ ಗಾಗಿ ಮೈಸೂರಿನಲ್ಲಿ ಉಳಿದುಕೊಂಡಿದ್ದರು. ಇದೀಗ ತಮ್ಮ ಭಾಗದ ಬಹುತೇಕ ಚಿತ್ರೀಕರಣವನ್ನು ಮುಗಿಸಿಕೊಟ್ಟಿದ್ದಾರೆ ಶಿಲ್ಪಾ. ಆನಂತರ ಸೆಟ್ ನಲ್ಲಿ ನಿರ್ದೇಶಕ ಜೋಗಿ ಪ್ರೇಮ್ ಜೊತೆ ತಮಾಷೆ ಮಾಡಿದ್ದಾರೆ. ಜೊತೆಗೆ ಈವರೆಗಿನ ಚಿತ್ರೀಕರಣದ ನೆನಪುಗಳನ್ನೂ ಅವರು ಹಂಚಿಕೊಂಡಿದ್ದಾರೆ. ಆ ವಿಡಿಯೋವನ್ನು ಸೋಷಿಯಲ್ ಮೀಡಿಯಾದಲ್ಲಿ ಶೇರ್ ಮಾಡಿದ್ದಾರೆ.

ಧ್ರುವ ಸರ್ಜಾ ನಟನೆಯ 'ಕೆಡಿ' ಸಿನಿಮಾ ಇದೇ ಡಿಸೆಂಬರ್‌ಗೆ ತೆರೆಗೆ ಅಪ್ಪಳಿಸಲಿದೆ. ಇದರ ನಡುವೆ ಸಿನಿಮಾದ ಬಗ್ಗೆ ಬಿಗ್ ಅಪ್ ಡೇಟ್‌ವೊಂದು ಚಿತ್ರತಂಡ ಹಂಚಿಕೊಂಡಿದೆ. ಸಿನಿಮಾ ರಿಲೀಸ್ ಮುನ್ನವೇ ದುಬಾರಿ ಮೊತ್ತಕ್ಕೆ 'ಕೆಡಿ' ಚಿತ್ರದ ಆಡಿಯೋ ರೈಟ್ಸ್ ರಿಲೀಸ್ ಆಗಿದೆ.

'ಕೆಡಿ' ಚಿತ್ರವು ಪ್ಯಾನ್ ಇಂಡಿಯಾ ಮಟ್ಟದಲ್ಲಿ ಸಿನಿಮಾ ರಿಲೀಸ್ ಆಗಲಿದೆ. ಅದ್ದೂರಿಯಾಗಿ ಈ ಚಿತ್ರವನ್ನು ಕೆವಿಎನ್ ಸಂಸ್ಥೆ ನಿರ್ಮಾಣ ಮಾಡಿದೆ. ಈ ಸಿನಿಮಾ ಬಹುತೇಕ ಚಿತ್ರೀಕರಣ ಮುಗಿಸಿದೆ. 'ಕೆಡಿ' ರೆಟ್ರೋ ಸ್ಟೈಲ್ ಸಿನಿಮಾ. ಹಾಗಾಗಿ ಚಿತ್ರತಂಡ ಕೂಡ ಅದೇ



ಲುಕ್‌ನಲ್ಲಿ ಸುದ್ದಿಗೋಷ್ಠಿಗೆ ಆಗಮಿಸಿದ್ದರು. ಕನ್ನಡ ಚಿತ್ರರಂಗದಲ್ಲೇ ದಾಖಲೆ ಮೊತ್ತಕ್ಕೆ 'ಕೆಡಿ' ಆಡಿಯೋ ರೈಟ್ಸ್ ಮಾರಾಟವಾಗಿದೆ ಎಂದು ಚಿತ್ರತಂಡ ಹೇಳಿದೆ. ಆನಂದ್ ಆಡಿಯೋ ಸಂಸ್ಥೆ ರೈಟ್ಸ್ ಕೊಂಡುಕೊಂಡಿದೆ. 17.70 ಕೋಟಿ ರೂ.ಗೆ ಆಡಿಯೋ ರೈಟ್ಸ್ ಸೇಲ್ ಆಗಿದೆ ಎಂದು ತಿಳಿಸಿದ್ದಾರೆ.

ಈ ವೇಳೆ ನಟ ಧ್ರುವ ಸರ್ಜಾ ಮಾತನಾಡಿ, 'ಕೆಡಿ' ಅಂದ್ರೆ ಕಾಳಿದಾಸ. ಈ ಸಿನಿಮಾದಲ್ಲಿ ಕಾಳಿದಾಸ ನಾನೇ. ನಿರ್ದೇಶಕ ಪ್ರೇಮ್ ಜೊತೆಗೆ ಸಿನಿಮಾ ಮಾಡಬೇಕು ಅಂತ ನಿರ್ಧಾರ ಮಾಡಿದ್ದೆ. ಅದು ಕೆವಿಎನ್ ಸಂಸ್ಥೆಯಿಂದ ಆರಂಭ ಆಯ್ತು. ಚಿತ್ರದ ಆಡಿಯೋ ಹಕ್ಕು ದೊಡ್ಡ ಮೊತ್ತಕ್ಕೆ ಮಾರಾಟ ಆಗಿದ್ದು, ತುಂಬಾ ಖುಷಿ ಆಗಿದೆ. ನನ್ನ 'ಅದ್ದೂರಿ' ಸಿನಿಮಾ 4 ಕೋಟಿ ರೂ. ಖರ್ಚಿನಲ್ಲಿ ನಿರ್ಮಾಣವಾಗಿತ್ತು. ಆದರೆ ಈಗ ಕೆಡಿ ಸಿನಿಮಾದ ಆಡಿಯೋ ಹಕ್ಕು ಮಾತ್ರ 17.70 ಕೋಟಿ ರೂ. ಸೇಲ್ ಆಗಿದೆ. ಸಿನಿಮಾ ಕೂಡ ತುಂಬಾ ರಿಚ್ ಆಗಿ ಮೂಡಿ ಬಂದಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

ಅಂದಹಾಗೆ, ಶಾರುಖ್ ನಟನೆಯ 'ಪಠಾಣ್' ಚಿತ್ರಕ್ಕೆ 180 ಜನರನ್ನು ಬಳಸಿ, ಆರ್ಕೆಸ್ಟ್ರಾ ಮಾಡಿಸಲಾಗಿತ್ತು. ಆದರೆ 'ಕೆಡಿ' ಸಿನಿಮಾ ಅದನ್ನು ಮೀರಿಸಿದೆ. ಆ ಮೂಲಕ ಮೇಕಿಂಗ್ ಹಂತದಲ್ಲೇ ಸಿನಿಮಾ ಹೊಸ ದಾಖಲೆ ಬರೆದಿದೆ ಎಂದು ಮಾಹಿತಿ ನೀಡಿದ್ದಾರೆ.

## ಭಾರತದ ವಿರುದ್ಧ ಪಾಕಿಸ್ತಾನ್ ಗೆಲ್ಲಲ್ಲ

# ಪಾಕ್ ಕ್ರಿಕೆಟಿಗನ ಭವಿಷ್ಯ

ಟಿ20 ವಿಶ್ವಕಪ್ ಆರಂಭಕ್ಕೆ ಕೌಂಟ್ ಡೌನ್ ಶುರುವಾಗಿದೆ. ನಾಳೆಯಿಂದ 9ನೇ ಆವೃತ್ತಿಯ ಚುಟುಕು ಕ್ರಿಕೆಟ್ ಕದನಕ್ಕೆ ಚಾಲನೆ ದೊರೆಯಲಿದೆ. ಟೂರ್ನಿ ಆರಂಭದ ಮೊದಲ ವಾರದಲ್ಲೇ ಭಾರತ ಮತ್ತು ಪಾಕಿಸ್ತಾನ್ ನಡುವಣ ಹೈವೋಲ್ಟ್ ಕದನ ನಡೆಯಲಿರುವುದು ವಿಶೇಷ. ಅಂದರೆ ಮುಂದಿನ ಭಾನುವಾರ ನ್ಯೂಯಾರ್ಕ್‌ನಲ್ಲಿ ಇಂಡೊ-ಪಾಕ್ ಕಾದಾಟ ಜರುಗಲಿದೆ.

ಈ ಮದಗಜಗಳ ಕಾಳಗದಲ್ಲಿ ಗೆಲ್ಲೋರು ಯಾರು ಎಂಬ ಚರ್ಚೆಗಳು ಈಗಾಗಲೇ ಶುರುವಾಗಿದ್ದು, ಈ ನಡುವೆ ಪಾಕಿಸ್ತಾನ್ ತಂಡದ ಮಾಜಿ ವಿಕೆಟ್ ಕೀಪರ್ ಬ್ಯಾಟರ್ ಕಮ್ರಾನ್ ಅಕ್ಮಲ್ ನೀಡಿದ ಹೇಳಿಕೆ ಇದೀಗ ಭಾರೀ ಚರ್ಚೆಗೆ ಕಾರಣವಾಗಿದೆ.

ಭಾರತ ಮತ್ತು ಪಾಕಿಸ್ತಾನ್ ನಡುವಣ ಮಹತ್ವದ ಪಂದ್ಯದಲ್ಲಿ ಯಾರು ಗೆಲ್ತಾರೆ? ಎಂದು ಪಾಕ್ ಅಭಿಮಾನಿಯೊಬ್ಬರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಕಮ್ರಾನ್ ಅಕ್ಮಲ್, ಖಂಡಿತವಾಗಿಯೂ ಭಾರತ. ಅದರಲ್ಲಿ ಡೌಟೇ ಬೇಡ. ಪಾಕಿಸ್ತಾನ್ ತಂಡಕ್ಕೆ ಟೀಮ್ ಇಂಡಿಯಾವನ್ನು ಸೋಲಿಸಲಾಗುವುದಿಲ್ಲ ಎಂದು ಭವಿಷ್ಯ ನುಡಿದಿದ್ದಾರೆ.

ಇದಕ್ಕೆ ಕಾರಣವನ್ನು ನೀಡಿರುವ ಕಮ್ರಾನ್, ಪಾಕಿಸ್ತಾನ್ ಕ್ರಿಕೆಟ್‌ನ ಮಟ್ಟ ಎಲ್ಲರಿಗೂ ತಿಳಿದಿದೆ. ನಾವು ಐರ್ಲೆಂಡ್‌ನಂತಹ ಸಣ್ಣ ತಂಡಗಳ ವಿರುದ್ಧ ಸೋಲುತ್ತಿದ್ದೇವೆ. ನ್ಯೂಝಿಲೆಂಡ್, ಸೌತ್ ಆಫ್ರಿಕಾ ಮತ್ತು ಇತರ ಯಾವುದೇ ತಂಡವಾಗಿದ್ದರೆ ಪರವಾಗಿಲ್ಲ ಎನ್ನಬಹುದು. ಆದರೆ ಸಣ್ಣ ಪುಟ್ಟ ತಂಡಗಳ ವಿರುದ್ಧ ಮುಗ್ಗರಿಸುತ್ತಿರುವ ಪಾಕಿಸ್ತಾನ್



ಭಾರತದ ವಿರುದ್ಧದ ಗೆಲ್ಲುತ್ತದೆ ಎಂದು ನಿರೀಕ್ಷಿಸಲು ಸಾಧ್ಯವೇ ಎಂದು ಕಮ್ರಾನ್ ಅಕ್ಮಲ್ ಪ್ರಶ್ನಿಸಿದ್ದಾರೆ.

ಇದೀಗ ಭಾರತೀಯ ಆಟಗಾರರು ಐಪಿಎಲ್ ಮುಗಿಸಿ ಬಂದಿದ್ದಾರೆ. ಐಪಿಎಲ್‌ನಲ್ಲಿ ಅತ್ಯುತ್ತಮ ಬೌಲರ್‌ಗಳು ಮತ್ತು ಬ್ಯಾಟರ್‌ಗಳು 40 ರಿಂದ 50,000 ಪ್ರೇಕ್ಷಕರ ಮುಂದೆ ಪ್ರದರ್ಶನ ನೀಡಿ ಬಂದಿದ್ದಾರೆ ಎಂಬುದನ್ನು ನಾವು ಅರ್ಥಮಾಡಿಕೊಳ್ಳಬೇಕು. ಅಂದರೆ ಅಲ್ಲಿ ಆಡುವುದು ಕಠಿಣ ಕ್ರಿಕೆಟ್ ಮತ್ತು ಗುಣಮಟ್ಟದ ಕ್ರಿಕೆಟ್. ಇಂತಹ ಎಲ್ಲಾ ತಯಾರಿಗಳೊಂದಿಗೆ ಬಂದಿರುವ ಭಾರತ ತಂಡವು ಪಾಕಿಸ್ತಾನವನ್ನು ಸೋಲಿಸುವುದರಲ್ಲಿ ಅನುಮಾನವೇ ಬೇಡ ಎಂದಿದ್ದಾರೆ.

ಇದೀಗ ಪಾಕ್ ತಂಡದ ಮಾಜಿ ಆಟಗಾರ ಕಮ್ರಾನ್ ಅಕ್ಮಲ್ ನೀಡಿರುವ ಹೇಳಿಕೆ, ಪರ - ವಿರೋಧ ಚರ್ಚೆಗೆ ಕಾರಣವಾಗಿದೆ. ಕೆಲ ಪಾಕ್ ಅಭಿಮಾನಿಗಳು ಮಾಜಿ ಕ್ರಿಕೆಟಿಗನ ಹೇಳಿಕೆಗೆ ಭಾರೀ ವಿರೋಧ ವ್ಯಕ್ತಪಡಿಸಿದರೆ, ಮತ್ತೆ ಕೆಲವರು ಪ್ರಸ್ತುತ ಪಾಕಿಸ್ತಾನ್ ತಂಡದ ಪ್ರದರ್ಶನ ಗಮನಿಸಿದರೆ ಅಕ್ಮಲ್ ಅವರ ಮಾತು ನಿಜವಾಗಲಿದೆ ಎಂದಿದ್ದಾರೆ.

# ಕಿಂಗ್ ಕೊಹ್ಲಿಯ ದಾಖಲೆ ಮುರಿದ ಬಾಬರ್ ಆಝಂ

ಲಂಡನ್‌ನ ಕೆನ್ನಿಂಗ್ಟನ್ ಓವಲ್ ಮೈದಾನದಲ್ಲಿ ನಡೆದ ಇಂಗ್ಲೆಂಡ್ ವಿರುದ್ಧ 4ನೇ ಟಿ20 ಪಂದ್ಯದಲ್ಲಿ ಬಾಬರ್ ಆಝಂ 22 ಎಸೆತಗಳಲ್ಲಿ 36 ರನ್ ಬಾರಿಸಿದ್ದರು. ಈ 36 ರನ್‌ಗಳೊಂದಿಗೆ ಪಾಕ್ ತಂಡದ ನಾಯಕ ಟಿ20 ಕ್ರಿಕೆಟ್‌ನಲ್ಲಿ ಹಲವು ದಾಖಲೆಗಳನ್ನು ನಿರ್ಮಿಸಿದ್ದಾರೆ.

ಈ ಪಂದ್ಯದಲ್ಲಿ 36 ರನ್ ಕಲೆಹಾಕುವುದರೊಂದಿಗೆ ಟಿ20 ಕ್ರಿಕೆಟ್‌ನಲ್ಲಿ ಇಂಗ್ಲೆಂಡ್ ವಿರುದ್ಧ ಅತೀ ಹೆಚ್ಚು ರನ್ ಬಾರಿಸಿದ ಬ್ಯಾಟರ್ ಎನಿಸಿಕೊಂಡರು. ಇದಕ್ಕೂ ಮುನ್ನ ಈ ದಾಖಲೆ ವಿರಾಟ್ ಕೊಹ್ಲಿ ಹೆಸರಿನಲ್ಲಿತ್ತು. ಕಿಂಗ್ ಕೊಹ್ಲಿ ಇಂಗ್ಲೆಂಡ್ ವಿರುದ್ಧ ಟಿ20 ಕ್ರಿಕೆಟ್‌ನಲ್ಲಿ 639 ರನ್ ಬಾರಿಸಿ ದಾಖಲೆ ನಿರ್ಮಿಸಿದ್ದರು. ಇದೀಗ 641 ರನ್‌ಗಳೊಂದಿಗೆ ಬಾಬರ್ ಆಝಂ ಈ ಪಟ್ಟಿಯಲ್ಲಿ ಅಗ್ರಸ್ಥಾನಕ್ಕೇರಿದ್ದಾರೆ.

ಇನ್ನು ಈ ಪಂದ್ಯದಲ್ಲಿ ಎರಡಂಕಿ ಮೊತ್ತ ಕಲೆಹಾಕುವುದರೊಂದಿಗೆ ಟಿ20 ಕ್ರಿಕೆಟ್‌ನಲ್ಲಿ 4 ಸಾವಿರ



ರನ್ ಪೂರೈಸಿದ ವಿಶ್ವದ 2ನೇ ಬ್ಯಾಟರ್ ಎಂಬ ಹೆಗ್ಗಳಿಕೆಗೂ ಪಾತ್ರರಾದರು. ಇದಕ್ಕೂ ಮುನ್ನ ಈ ದಾಖಲೆ ವಿರಾಟ್ ಕೊಹ್ಲಿ ನಿರ್ಮಿಸಿದ್ದರು.

ವಿರಾಟ್ ಕೊಹ್ಲಿ ಕೇವಲ 107 ಟಿ20 ಇನಿಂಗ್ಸ್‌ಗಳ ಮೂಲಕ ಈ ಸಾಧನೆ ಮಾಡಿದರೆ, ಬಾಬರ್ ಆಝಂ ಈ ದಾಖಲೆ ಬರೆಯಲು 112 ಇನಿಂಗ್ಸ್‌ಗಳನ್ನು ತೆಗೆದುಕೊಂಡಿದ್ದಾರೆ. ಈ ಮೂಲಕ ಟಿ20 ಕ್ರಿಕೆಟ್‌ನಲ್ಲಿ 4 ಸಾವಿರಕ್ಕೂ ಅಧಿಕ ರನ್ ಕಲೆಹಾಕಿದ ವಿಶ್ವದ 2ನೇ ಬ್ಯಾಟರ್ ಎನಿಸಿಕೊಂಡಿದ್ದಾರೆ. ಹಾಗೆಯೇ ಟಿ20 ಕ್ರಿಕೆಟ್‌ನಲ್ಲಿ ನಾಯಕನಾಗಿ ಅತೀ ಹೆಚ್ಚು ರನ್ ಕಲೆಹಾಕಿದ ದಾಖಲೆ ಕೂಡ ಬಾಬರ್ ಆಝಂ ತಮ್ಮದಾಗಿಸಿಕೊಂಡಿದ್ದಾರೆ. ಪಾಕ್ ಪರ 81 ಪಂದ್ಯಗಳಲ್ಲಿ ನಾಯಕನಾಗಿ ಬ್ಯಾಟ್ ಬೀಸಿರುವ ಬಾಬರ್ ಒಟ್ಟು 2520 ರನ್ ಕಲೆಹಾಕಿದ್ದಾರೆ. ಈ ಮೂಲಕ ಟಿ20 ಕ್ರಿಕೆಟ್‌ನಲ್ಲಿ 2500+ ರನ್ ಕಲೆಹಾಕಿದ ಮೊದಲ ನಾಯಕನೆಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಇನ್ನು ಈ ಎಲ್ಲಾ ದಾಖಲೆಗಳು ನಿರ್ಮಾಣವಾದ ಈ ಪಂದ್ಯದಲ್ಲಿ ಪಾಕಿಸ್ತಾನ್ ತಂಡ ಸೋಲನುಭವಿಸಿತ್ತು. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಪಾಕ್ ತಂಡವು 19.5 ಓವರ್‌ಗಳಲ್ಲಿ 157 ರನ್‌ಗಳಿಸಿ ಆಲೌಟ್ ಆಯಿತು. ಈ ಗುರಿಯನ್ನು ಇಂಗ್ಲೆಂಡ್ ತಂಡ 15.3 ಓವರ್‌ಗಳಲ್ಲಿ ಚೇಸ್ ಮಾಡುವ ಮೂಲಕ 7 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ.

# ವಾಲ್ಮೀಕಿ ನಿಗಮದಲ್ಲಿ 94 ಕೋಟಿ ಹಗರಣ ಅಕ್ರಮದ ತನಿಖೆಗೆ ಇಳಿಯುತ್ತಾ ಸಿಬಿಐ?

**ಬೆಂಗಳೂರು:** ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಖಾತೆಯಲ್ಲಿ ನಡೆದ ಅವ್ಯವಹಾರ ಪ್ರಕರಣದ ತನಿಖೆ ಸಿಬಿಐಗೆ ವರ್ಗಾವಣೆಯಾಗುವ ಸಾಧ್ಯತೆ ಹೆಚ್ಚಿದೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಯೂನಿಯನ್ ಬ್ಯಾಂಕ್ ತನ್ನ ಮೂವರು ಸಿಬ್ಬಂದಿಯನ್ನು ಅಮಾನತುಗೊಳಿಸಿ ಸಿಬಿಐಗೆ ದೂರು ನೀಡಿದೆ. ಇತ್ತ ಕರ್ನಾಟಕ ಸರ್ಕಾರ ಈ ಪ್ರಕರಣದ ತನಿಖೆ ನಡೆಸುವಂತೆ ಸಿಐಡಿಗೆ ಆದೇಶಿಸಿದೆ.

ಸಿಐಡಿ ತನಿಖೆ ನಡೆಸಿದರೂ ಇದು ಆರ್ಥಿಕ ಅಪರಾಧವಾಗಿರುವ ಕಾರಣ ಈ ಪ್ರಕರಣದ ತನಿಖೆ ಸಿಬಿಐಗೆ ವರ್ಗಾವಣೆಯಾಗಲಿದೆ.



ಬ್ಯಾಂಕ್‌ನಲ್ಲಿ 10 ಕೋಟಿ ರೂ.ಗೂ ಅಧಿಕ ಅಕ್ರಮ ಪ್ರಕರಣ ದಾಖಲಾದರೆ ಅದರ ತನಿಖೆ ಸಿಬಿಐ ನಡೆಸಬೇಕು ಎಂದು ಆರ್ ಬಿಐ ನಿಯಮ ಹೇಳುತ್ತದೆ. ಈ ಪ್ರಕರಣದಲ್ಲಿ 94 ಕೋಟಿ ರೂ. ಅಕ್ರಮ ನಡೆದಿರುವ ಹಿನ್ನೆಲೆಯಲ್ಲಿ ಸಿಬಿಐ ಕೇಸ್ ದಾಖಲಿಸಿ ತನಿಖೆ ನಡೆಸುವ ಸಾಧ್ಯತೆ ಹೆಚ್ಚಿದ್ದು ಹೊಸ ಸರ್ಕಾರ ಬಂದ ನಂತರ ಈ ವಿಚಾರ ಸ್ಪಷ್ಟವಾಗಲಿದೆ.

**ಯಾವೆಲ್ಲ ತನಿಖೆಯನ್ನು ಸಿಬಿಐ ಮಾಡುತ್ತೆ?:** ಉನ್ನತ ಸ್ಥಾನಗಳಲ್ಲಿ ಭ್ರಷ್ಟಾಚಾರ, ಗಂಭೀರ ವಂಚನೆ, ಸಾಮಾಜಿಕ ಅಪರಾಧ ಮತ್ತು ಲಾಭಕೋರತನಕ್ಕೆ ಸಂಬಂಧಿಸಿದ ಗಂಭೀರ ಅಪರಾಧಗಳು, ಹತ್ಯೆಗಳು, ಅಪಹರಣಗಳು ಮುಂತಾದ ಸಾಂಪ್ರದಾಯಿಕ ಅಪರಾಧಗಳ ತನಿಖೆಯನ್ನು ಸಿಬಿಐ ಮಾಡುತ್ತದೆ.

ನಕಲಿ ಭಾರತೀಯ ಕರೆನ್ಸಿ ನೋಟುಗಳಿಗೆ ಸಂಬಂಧಿಸಿದ ಅಪರಾಧ, ಬ್ಯಾಂಕ್ ವಂಚನೆಗಳು ಮತ್ತು ಸೈಬರ್ ಅಪರಾಧ, ಮಾದಕವಸ್ತುಗಳು, ಪ್ರಾಚೀನ ವಸ್ತುಗಳು ಸಾಂಸ್ಕೃತಿಕ ಆಸ್ತಿಗಳ ದೊಡ್ಡ ಪ್ರಮಾಣದ ಕಳ್ಳಸಾಗಣೆ ಸೇರಿದಂತೆ ಪ್ರಮುಖ ಹಣಕಾಸು ಹಗರಣಗಳ ತನಿಖೆಯನ್ನು ಸಿಬಿಐ ಮಾಡುತ್ತದೆ.

ಒಂದು ವೇಳೆ ಪ್ರಕರಣದ ತನಿಖೆ ನಡೆಸುವಾಗ ವಿದೇಶದಲ್ಲಿ ಅಕ್ರಮ ಹಣ ವರ್ಗಾವಣೆ, ವಿದೇಶದಿಂದ ಅಕ್ರಮ ದೇಣಿಗೆ ಸ್ವೀಕರಿಸಿದ್ದಕ್ಕೆ ದಾಖಲೆಗಳು ಸಿಕ್ಕಿದರೆ ಆಗ ಪ್ರಕರಣಕ್ಕೆ ಜಾರಿ ನಿರ್ದೇಶನಾಲಯ ಪ್ರವೇಶ ಮಾಡುತ್ತದೆ.

# ಒಂದು ಕುಟುಂಬ ತಂತ್ರ, ಕುತಂತ್ರ, ಮಂತ್ರ ಮಾಡಿಕೊಂಡು ಬರ್ತಿದೆ

**ಬೆಂಗಳೂರು:** ತಮ್ಮ ರಾಜಕೀಯ ವಿರೋಧಿಗಳು ಬೆಳೆಯಬಾರದು ಅಂತಾ ಒಂದು ಕುಟುಂಬ ಮಂತ್ರ, ತಂತ್ರ ಎಲ್ಲಾ ಮಾಡಿಕೊಂಡು ಬರ್ತಿದೆ ಎಂದು ಪರೋಕ್ಷವಾಗಿ ದೇವೇಗೌಡರ ಕುಟುಂಬದ ವಿರುದ್ಧ ಸಂಸದ ಡಿ.ಕೆ.ಸುರೇಶ್ ಆರೋಪಿಸಿದರು.



ನನ್ನ ಮತ್ತು ಸಿಎಂ ವಿರುದ್ಧ ಶತ್ರು ಭೈರವಿ ಯಾಗ ಮಾಡ್ತಿದ್ದಾರೆ ಎಂಬ ಡಿಸಿಎಂ ಡಿ.ಕೆ. ಶಿವಕುಮಾರ್ ಆರೋಪದ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ಮೊದಲಿಂದಲೂ ರಾಜಕೀಯ ಕುಟುಂಬ, ಒಂದು ಪಕ್ಷ ಇಂತಹದ್ದಕ್ಕೆ ಹೆಸರುವಾಸಿ. ಯಾರು ಅಂತಾ ನನಗೆ ಗೊತ್ತಿಲ್ಲ. ಒಂದು ಕುಟುಂಬ ಯಾವಾಗಲೂ ಇಂತಹ ಮಂತ್ರ, ತಂತ್ರ, ಕುತಂತ್ರ ಮಾಡಿಕೊಂಡು ಬಂದಿದೆ. ಅದನ್ನ ಮುಂದುವರೆಸಿಕೊಂಡು ಬಂದಿರಬಹುದು ಎಂದು ಪರೋಕ್ಷವಾಗಿ ದೇವೇಗೌಡರ ಕುಟುಂಬದ ವಿರುದ್ಧ ಆರೋಪ ಮಾಡಿದರು.

ಕೆಲವರಿಗೆ ಡಿಸಿಎಂ ಡಿ.ಕೆ.ಶಿವಕುಮಾರ್ ಬಿಟ್ಟರೆ ಬೇರೆ ಅವರಿಗೆ ಯಾರು ಇಲ್ಲ. ಡಿಸಿಎಂ ಹೆಸರು ಹೇಳಿದ್ರೆ ಪಕ್ಷ ಸಂಘಟನೆ ಮಾಡಬಹುದು. ಕಾರ್ಯಕರ್ತರನ್ನ ಎತ್ತಿಕಟ್ಟಲು ಡಿ.ಕೆ.ಶಿವಕುಮಾರ್ ಹೆಸರು ಬಳಸ್ತಾರೆ. ನಾನು ಇದರ ಬಗ್ಗೆ ಜಾಸ್ತಿ ಮಾತಾಡೊಲ್ಲ. ದೇಶದ ಬೆಳವಣಿಗೆ ಜನ ಗಮನಿಸುತ್ತಿದ್ದಾರೆ. ಕರ್ನಾಟಕದ ಪೆನ್ ಡ್ರೈವ್ ಪ್ರಕರಣ ವಿಶ್ವದ ಗಮನ ಸೆಳೆದಿದೆ. ಅದನ್ನ ಸಮರ್ಥನೆ ಮಾಡಿ ರಾಜಕಾರಣ ಮಾಡ್ತಿದ್ದಾರೆ. ಯಾವ ಮಟ್ಟದ ವ್ಯವಸ್ಥೆ ರೂಪಿಸಲು ಆ ಪಕ್ಷ ಹೋಗಿದೆ ಅಂದರೆ ಅರ್ಥ ಮಾಡಿಕೊಳ್ಳಿ ಎಂದು ಪರೋಕ್ಷವಾಗಿ ದೇವೇಗೌಡ ಕುಟುಂಬದ ವಿರುದ್ಧ ವಾಗ್ದಾಳಿ ನಡೆಸಿದರು.

ಬೇರೆಯವರು ಯಾರೂ ಚೆನ್ನಾಗಿ ಇರಬಾರದು ಅಂತಾ ಆ ಕುಟುಂಬ ಮಾಡಿಕೊಂಡು ಬಂದಿದೆ. ಆ ಕುಟುಂಬ ಅವತ್ತಿಂದ ಅದನ್ನೇ ಮಾಡಿಕೊಂಡು ಬಂದಿದೆ. ಅದರಿಂದ ಫಲ ಸಿಗುತ್ತಾ ನನಗೆ ಗೊತ್ತಿಲ್ಲ. ಅವರು ಯಾಕೆ ಹೀಗೆ ಮಾಡ್ತಾರೆ ಗೊತ್ತಿಲ್ಲ. ಕುಮಾರಸ್ವಾಮಿ, ರೇವಣ್ಣ, ದೇವೇಗೌಡ ಏನ್ ಮಾಡ್ತಾರೋ ಗೊತ್ತಿಲ್ಲ. ಅವರು ಎಲ್ಲಿ ಏನ್ ಮಾಡ್ತಾರೋ ಗೊತ್ತಿಲ್ಲ ಎಂದು ಪ್ರತಿಕ್ರಿಯಿಸಿದರು.

# ಸ್ವಪಕ್ಷದ ವಿರುದ್ಧ ಸಂಸದ ಜಿಗಜಿಣಗಿ ಅಸಮಾಧಾನ

**ವಿಜಯಪುರ:** ನನ್ನ ಅನುಭವವನ್ನ ಪಕ್ಷ ಸಮರ್ಪಕವಾಗಿ ಬಳಸಿಕೊಳ್ಳಲಿಲ್ಲ ಎಂದು ಸಂಸದ ರಮೇಶ್ ಜಿಗಜಿಣಗಿ ಅಸಮಧಾನ ವ್ಯಕ್ತಪಡಿಸಿದರು.



ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಸಂಸದರು, ಲೋಕಸಭಾ ಚುನಾವಣೆಯಲ್ಲಿ ಪಕ್ಷದವರು ನನ್ನ ಅನುಭವವನ್ನು ಹಂಚಿಕೊಳ್ಳಲಿಲ್ಲ, ಪಕ್ಷದಿಂದ ನಡೆಯಿಂದ ನೋವಾಗಿದೆ. 45 ವರ್ಷದ ರಾಜಕಾರಣದಲ್ಲಿ 20 ವರ್ಷ ಮಂತ್ರಿ ಆಗಿದ್ದೆ. ನಾನು ರಾಜಕಾರಣದಲ್ಲಿಯೇ ಹಿರಿಯನಾಗಿದ್ದೇನೆ. ನನ್ನಂತಹ ಹಿರಿಯ ಮನುಷ್ಯ ಪಕ್ಷದಲ್ಲಿ ಯಾರೂ ಇಲ್ಲ. ನನ್ನ ಹಿರಿತನ, ನನ್ನ ಅನುಭವ ಪಕ್ಷ ಬಳಸಿಕೊಳ್ಳಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ವಿಧಾನಸಭಾ ಚುನಾವಣೆ ವೇಳೆಯೂ ಅಸಮಾಧಾನ ಹೊರಹಾಕಿದ್ದ ಸಂಸದ ರಮೇಶ್ ಜಿಗಜಿಣಗಿ. ಇದೀಗ ಲೋಕಸಭಾ ಚುನಾವಣೆ ಬಳಿಕ ಮತ್ತೆ ಅಸಮಾಧಾನ ಹೊರಹಾಕಿದ್ದಾರೆ.

**ಮಂತ್ರಿ ಸ್ಥಾನ ಕೊಟ್ಟರೆ ಬೇಡ ಅನ್ನಲ್ಲ:** ನಾನು ಈ ಬಾರಿ ಕೇಂದ್ರದಲ್ಲಿ ಮಂತ್ರಿ ಸ್ಥಾನ ಬೇಕು ಅನ್ನೊಲ್ಲ, ಅವರು ಕೊಟ್ಟರೆ ಬೇಡ ಅನ್ನೊಲ್ಲ. ನನ್ನನ್ನು ಮಂತ್ರಿ ಮಾಡಿ ಎಂದು ಯಾರ ಮನೆಗೂ ಹೋಗಿ ಕೇಳೊಲ್ಲ ಅವರಾಗೇ ಮಾಡಿದ್ರೆ ಮಾಡಲಿ. ಅದು ಆಗು, ಇದು ಆಗು ಅಂದ್ರೆ ಆಗೊಲ್ಲ. ನನ್ನ ವಯಸಿಗೆ ತಕ್ಕಂತೆ ಏನಾದರೂ ಕೊಡಬೇಕು ಸಣ್ಣ ಹುಡುಗರಂತೆ ಏನೋ ಒಂದು ಕೊಡಬಾರದು. ಹಿಂದೆ ಮಂತ್ರಿ ಮಾಡಿದಾಗ ಪ್ರಾಮಾಣಿಕವಾಗಿ ಕೆಲಸ ಮಾಡಿದ್ದೇನೆ. ಅದನ್ನಾದರೂ ಪರಿಗಣಿಸಿ ಸಚಿವ ಸ್ಥಾನ ಕೊಡುವುದಿದ್ರೆ ಕೊಡಲಿ. ನಾನು ಯಾರ ಬಳಿಯೂ ಒತ್ತಾಯ ಮಾಡುವುದಿಲ್ಲ ಎಂದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com